ಪದ್ಯಪಾಠ-೧

# ಸಂಕಲ್ಪಗೀತೆ

**ಕವಿ-ಕೃತಿ ಪರಿಚಯ : ಜಿ.ಎಸ್.ಶಿವರುದ್ರಪ್ಪ**

* ಇವರು ಕ್ರಿ.ಶ.೧೯೨೬ ರಲ್ಲಿ ಶಿವಮೊಗ್ಗ ಜಿಲ್ಲೆಯ ಶಿಕಾರಿಪುರದಲ್ಲಿ ಜನಿಸಿದರು. **ನಿಧನ:** ೨೩-೧೨-೨೦೧೩

* **ಇವರ ಪೂರ್ಣ ಹೆಸರು:** ಗುಗ್ಗರಿ ಶಾಂತವೀರಪ್ಪ ಶಿವರುದ್ರಪ್ಪ.

* **ಇವರ ಪ್ರಮುಖ ಕೃತಿಗಳೆಂದರೆ; 'ಸಾಮಗಾನ', 'ಚೆಲುವು-ಒಲವು', 'ದೇವಶಿಲ್ಪಿ', 'ದೀಪದ ಹೆಜ್ಜೆ', 'ಅನಾವರಣ', 'ವಿಮರ್ಶೆಯ ಪೂರ್ವ ಪಶ್ಚಿಮ', 'ಮಾಸ್ಕೋದಲ್ಲಿ ಇಪ್ಪತ್ತೆರಡು ದಿನಗಳು', 'ಸೌಂದರ್ಯ ಸಮೀಕ್ಷೆ'.**

* **ಇವರಿಗೆ ದೊರೆತಿರುವ ಪ್ರಮುಖ ಪ್ರಶಸ್ತಿಗಳೆಂದರೆ;**

೧) **'ಕಾವ್ಯಾರ್ಥ ಚಿಂತನ'** ಕೃತಿಗೆ ಕೇಂದ್ರಸಾಹಿತ್ಯ ಅಕಾಡೆಮಿ ಪ್ರಶಸ್ತಿ.
೨) ಕನ್ನಡ ವಿಶ್ವವಿದ್ಯಾನಿಲಯದ **'ನಾಡೋಜ'** ಪ್ರಶಸ್ತಿ.
೩) ಬೆಂಗಳೂರು ಮತ್ತು ಕುವೆಂಪು ವಿಶ್ವವಿದ್ಯಾನಿಲಯಗಳ **'ಗೌರವ ಡಿ.ಲಿಟ್'** ಪ್ರಶಸ್ತಿ.
೪) **'ರಾಷ್ಟ್ರಕವಿ'** ಪ್ರಶಸ್ತಿ.
೫) ೧೯೯೨ ರಲ್ಲಿ ದಾವಣಗೆರೆಯಲ್ಲಿ ನಡೆದ ೬೧ನೆಯ ಅಖಿಲಭಾರತ ಕನ್ನಡ ಸಾಹಿತ್ಯಸಮ್ಮೇಳನದ ಅಧ್ಯಕ್ಷರಾಗಿದ್ದರು.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಯಾವುದನ್ನು ಎಚ್ಚರದಲಿ ಮುನ್ನಡೆಸಬೇಕು?**
ಬಿರುಗಾಳಿಗೆ ಹೊಯ್ದಾಡುವ ಹಡಗನ್ನು ಎಚ್ಚರದಲ್ಲಿ ಮನ್ನಡೆಸಬೇಕು.

**೨. ನದೀಜಲಗಳು ಏನಾಗಿವೆ?**
ನದೀಜಲಗಳು ಕಲುಷಿತವಾಗಿವೆ.

**೩. ಯಾವುದಕ್ಕೆ ಮುಂಗಾರಿನ ಮಳೆಯಾಗಬೇಕು?**
ಕಲುಷಿತವಾಗಿರುವ ನದೀಜಲಗಳಿಗೆ ಮುಂಗಾರಿನ ಮಳೆಯಾಗಬೇಕು.

**೪. ಕಾಡುಮೇಡುಗಳ ಸ್ಥಿತಿ ಹೇಗಿದೆ?**
ಕಾಡುಮೇಡುಗಳು ಬರಡಾಗಿವೆ.

**೫. ಯಾವ ಎಚ್ಚರದೊಳು ಬದುಕಬೇಕಿದೆ?**
ಮತಗಳೆಲ್ಲವೂ ಪಥಗಳು ಎನ್ನುವ ಎಚ್ಚರದೊಳು ಬದುಕಬೇಕಿದೆ.

**ಆ] ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಹಡಗನ್ನು ಯಾವುದರ ಬೆಳಕಿನಲ್ಲಿ ಮುನ್ನಡೆಸಬೇಕಿದೆ?**
ನಮ್ಮ ಬದುಕಿನ ಸುತ್ತಮುತ್ತಲು ಕವಿದಿರುವ ಕತ್ತಲೆಯನ್ನು ಕಳೆಯಲು ಪ್ರೀತಿಯೆಂಬ ಹಣತೆಯನ್ನು ಹಚ್ಚಬೇಕು.ಸಂಸಾರ ಸಾಗರದಲ್ಲಿ ಬಿರುಗಾಳಿಗೆ ಸಿಲುಕಿ ಹೊಯ್ದಾಡುತ್ತಿರುವ ಬದುಕೆಂಬ ಹಡಗನ್ನು ಜ್ಞಾನದೀವಿಗೆಯ ಮೂಲಕ ಎಚ್ಚರಿಕೆಯಿಂದ ಮುನ್ನಡೆಸಬೇಕಿದೆ.

**೨. ಕಾಡುಗಳಿಗೆ ಹೇಗೆ ಮುಟ್ಟಬೇಕಿದೆ?**
ಋತುಗಳ ರಾಜನಾದ ವಸಂತನು ಬರಡಾಗಿರುವ ಕಾಡುಗಳು ಹಚ್ಚಹಸಿರಿನಿಂದ ಕಂಗೊಳಿಸುವಂತೆ ಮುಟ್ಟಬೇಕಿದೆ.ವಸಂತನ ಆಗಮನದಿಂದ ಬರಡಾಗಿರುವ ಕಾಡಿನಲ್ಲಿ ಮರಗಿಡಗಳು ಚಿಗುರಿ ಪ್ರಕೃತಿಗೆ ನವಚೈತನ್ಯ ಮೂಡಬೇಕಿದೆ ಎಂಬುದು ಕವಿಯ ಆಶಯವಾಗಿದೆ.

**೩. ಹೊಸ ಭರವಸೆಗಳನ್ನು ಮೂಡಿಸಿ ಯಾವುದರ ನಡುವೆ ಸೇತುವೆಯಾಗಬೇಕಿದೆ?**
ಭಾಷೆ, ಜಾತಿ, ಮತಧರ್ಮಗಳ ಭೇದಭಾವದಿಂದ ಮನುಜರ ನಡುವೆ ಅಡ್ಡಗೋಡೆಗಳು ನಿರ್ಮಾಣವಾಗಿವೆ. ಸ್ನೇಹ, ಪ್ರೀತಿ, ನಂಬಿಕೆಯ ಮೂಲಕ ಮನುಜರ ನಡುವಿನ ಈ ಅಡ್ಡಗೋಡೆಗಳನ್ನು ಕೆಡವಬೇಕು.ಬದುಕಿನಲ್ಲಿ ಹೊಸ ಭರವಸೆಗಳನ್ನು ಮೂಡಿಸಿ ಮನುಜ ಮನುಜರ ನಡುವೆ ಸೇತುವೆಯಾಗಬೇಕಿದೆ.

**೪. ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕಬೇಕು?**
ಎಲ್ಲ ಮತಧರ್ಮಗಳು ದಾರಿ ತೋರಿಸುವ ದೀಪಗಳಾಗಿರುವುದರಿಂದ ಎಲ್ಲಾ ಮತಗಳನ್ನು ಪುರಸ್ಕರಿಸುವ ಎಚ್ಚರಿಕೆಯಲ್ಲಿ ನಾವು ಬದುಕಬೇಕು.ಭಯ ಮತ್ತು ಸಂಶಯಗಳಿಂದ ಮಸುಕಾಗಿರುವ ಮನದ ಕಣ್ಣಿನಲ್ಲಿ ಭವಿಷ್ಯದ ಕನಸ್ಸನ್ನು ಬಿತ್ತುತ್ತ ಬದುಕು ನಡೆಸಬೇಕು.

**ಇ] ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯ?**
"ನಮ್ಮ ಸುತ್ತಲೂ ಹಬ್ಬಿರುವ ದ್ವೇಷದ ಕತ್ತಲೆಯನ್ನು ಕಳೆಯಲು, ಪ್ರೀತಿಯ ದೀಪವನ್ನು ಹಚ್ಚುವ, ಸಂಸಾರ ಸಾಗರದಲ್ಲಿ ಬಿರುಗಾಳಿಗೆ ಸಿಲುಕಿ ಹೊಯ್ದಾಡುತ್ತಿರುವ ಬದುಕೆಂಬ ಹಡಗನ್ನು ಎಚ್ಚರದಲ್ಲಿ ಮುನ್ನಡೆಸುವ, ಪರಿಸರ ಮಾಲಿನ್ಯದಿಂದ ಕಲುಷಿತವಾಗಿರುವ ನದೀಜಲಗಳಿಗೆ ಶುದ್ಧೀಕರಿಸುವ ಮುಂಗಾರಿನ ಮಳೆಯಂತಹ ಪರಿಸರ ಪ್ರೇಮಿಯಾಗುವ, ಬರಡಾಗಿರುವ ಕಾಡುಮೇಡುಗಳು ಹಚ್ಚಹಸಿರಿನಿಂದ ಕಂಗೊಳಿಸಿ, ಸಮೃದ್ಧವಾಗುವಂತಹ ವಸಂತಕಾಲವಾಗುವ, ಅತ್ಯಾಚಾರ, ಅನಾಚಾರ, ಭ್ರಷ್ಟಾಚಾರ, ಅಸ್ಪೃಶ್ಯತೆ, ಅಸಮಾನತೆಗಳಿಂದ ಅಧಃಪತನಗೊಂಡಿರುವ ಸಮಾಜವನ್ನು ಹೊಸ ಭರವಸೆಗಳ ಮೂಲಕ ಮೇಲೆತ್ತುವ, ಭಾಷೆ, ಜಾತಿ, ಮತ, ಧರ್ಮಗಳ ಭೇದಭಾವದಿಂದ ಮನುಜ ಮನುಜರ ನಡುವೆ ಉಂಟಾಗಿರುವ ಅಸಮಾನತೆಯ ಅಡ್ಡಗೋಡೆಗಳನ್ನು ಕೆಡಹಿ, ಸಮಾನತೆಯ ಮನೋಭಾವನೆಯನ್ನು ಮೂಡಿಸುವ ಸೇತುವೆಯಾಗುವ, ಎಲ್ಲ ಮತಗಳು ಸಾಧನೆಯ ದಾರಿಗಳು ಎಂಬ ಎಚ್ಚರದಲ್ಲಿ ಬದುಕುವ, ಭಯ ಹಾಗೂ ಸಂಶಯಗಳಿಂದ ಮಸುಕಾದ ಕಣ್ಣುಗಳಲ್ಲಿ ಭವಿಷ್ಯದ ಹೊಂಗನಸು ಕಾಣುವಂತೆ ಮಾಡುವ ದೃಢಸಂಕಲ್ಪವನ್ನು ಕೈಗೊಳ್ಳಬೇಕು" ಎಂಬುದು ಕವಿ ಜಿ.ಎಸ್. ಶಿವರುದ್ರಪ್ಪ ಅವರ ಆಶಯವಾಗಿದೆ.

೨. ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

ನಾವು ಜೀವನದಲ್ಲಿ ಪ್ರೀತಿಯ ದೀಪವನ್ನು ಹಚ್ಚುವ ಸಂಕಲ್ಪ ಕೈಗೊಳ್ಳುವುದರಿಂದ ದ್ವೇಷರಹಿತ ಸಮಾಜ ನಿರ್ಮಾಣ ಮಾಡಬಹುದು.ನಾವು ಬದುಕಿನಲ್ಲಿ ಎಚ್ಚರಿಕೆಯಿಂದ ಮುನ್ನಡೆಯುವ ಸಂಕಲ್ಪ ಕೈಗೊಳ್ಳುವುದರಿಂದ ಎಂತಹ ಸವಾಲುಗಳನ್ನು ಧೈರ್ಯವಾಗಿ ಎದುರಿಸಬಹುದು.ನಾವು ಮುಂಗಾರಿನ ಮಳೆಯಂತೆ ಪರಿಸರ ಸಂರಕ್ಷಿಸುವ ಸಂಕಲ್ಪ ಕೈಗೊಳ್ಳುವುದರಿಂದ ನದೀಜಲಗಳನ್ನು ಶುದ್ಧವಾಗಿ ಇಟ್ಟುಕೊಳ್ಳಬಹುದು.ನಾವು ವನಸಂರಕ್ಷಣೆಯ ಸಂಕಲ್ಪ ಕೈಗೊಳ್ಳುವುದರಿಂದ ಕಾಡುಗಳು ಹಚ್ಚಹಸುರಿನಿಂದ ಸಂವೃದ್ಧವಾಗುವಂತೆ ಮಾಡಬಹುದು.ನಾವು ಹೊಸ ಭರವಸೆಯನ್ನು ಮೂಡಿಸುವ ಸಂಕಲ್ಪ ಕೈಗೊಳ್ಳುವುದರಿಂದ ಸಮಾಜದ ನೈತಿಕ ಅಧಃಪತನವನ್ನು ತಡೆಯಬಹುದು.ನಾವು ಸಮಾನತೆ ಮನೋಭಾವನೆಯುಳ್ಳವರಾಗುವ ಸಂಕಲ್ಪ ಕೈಗೊಳ್ಳುವುದರಿಂದ ಮನುಜ ಮನುಜರ ನಡುವಿನ ಅಸಮಾನತೆಯ ಅಡ್ಡಗೋಡೆಗಳನ್ನು ಕೆಡುಹಬಹುದು.ಎಲ್ಲ ಮತಗಳು ಸಾಧನೆಯ ದಾರಿಗಳು ಎಂಬ ಎಚ್ಚರದಲ್ಲಿ ಬದುಕುವ ಸಂಕಲ್ಪ ಕೈಗೊಳ್ಳುವುದರಿಂದ ದೇಶದಲ್ಲಿ ಶಾಂತಿಯು ನೆಲೆಸುವಂತೆ ಮಾಡಬಹುದು.ಭಯ ಹಾಗೂ ಸಂಶಯಗಳಿಂದ ಮುಕ್ತರಾಗುವ ಸಂಕಲ್ಪ ಕೈಗೊಳ್ಳುವುದರಿಂದ ಭವಿಷ್ಯದ ಹೊಂಗನಸನ್ನು ಕಾಣಬಹುದು. ಹೀಗೆ ಕವಿ ಶ್ರೀ ಜಿ.ಎಸ್.ಶಿವರುದ್ರಪ್ಪನವರು ಸಂಕಲ್ಪ ಮತ್ತು ಅನುಷ್ಠಾನವನ್ನು ಕುರಿತು ತಮ್ಮ ಅಭಿಪ್ರಾಯವನ್ನುವ್ಯಕ್ತಪಡಿಸುತ್ತಾರೆ.

**ಈ] ಸಂದರ್ಭಾನುಸಾರ ಸ್ವಾರಸ್ಯ ಬರೆಯಿರಿ.**

೧. **"ಪ್ರೀತಿಯ ಹಣತೆಯ ಹಚ್ಚೋಣ"**

**ಆಯ್ಕೆ :-**ಈ ವಾಕ್ಯವನ್ನು ಕವಿ **ಶ್ರೀ ಜಿ. ಎಸ್. ಶಿವರುದ್ರಪ್ಪ** ಅವರು ರಚಿಸಿರುವ **'ಎದೆತುಂಬಿ ಹಾಡಿದೆನು'** ಕವನ ಸಂಕಲನದಿಂದ ಆಯ್ದ **'ಸಂಕಲ್ಪಗೀತೆ'** ಎಂಬ ಕವಿತೆಯಿಂದ ಆರಿಸಲಾಗಿದೆ.

**ಸಂದರ್ಭ :-** ಕವಿಗಳು "ಜೀವನದಲ್ಲಿ ಧನಾತ್ಮಕ ಮನೋಭಾವನೆಯ ಧೃಡಸಂಕಲ್ಪವನ್ನು ಹೊಂದಿರಬೇಕು" ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :-** "ನಾವು ಜೀವನದಲ್ಲಿ ಪ್ರೀತಿಯ ದೀಪವನ್ನು ಹಚ್ಚುವ ಸಂಕಲ್ಪ ಕೈಗೊಳ್ಳುವುದರಿಂದ ದ್ವೇಷರಹಿತ ಸಮಾಜ ನಿರ್ಮಾಣ ಮಾಡಬಹುದು" ಎಂದು ಕವಿಗಳು ಸ್ವಾರಸ್ಯಪೂರ್ಣವಾಗಿ ತಮ್ಮ ಭಾವನೆಯನ್ನು ಅಭಿವ್ಯಕ್ತಪಡಿಸುತ್ತಾರೆ.

೨. **"ಮುಂಗಾರಿನ ಮಳೆಯಾಗೋಣ"**

**ಸಂದರ್ಭ :-** ಕವಿಗಳು "ಜೀವನದಲ್ಲಿ ಧನಾತ್ಮಕ ಮನೋಭಾವನೆಯ ಧೃಡಸಂಕಲ್ಪವನ್ನು ಹೊಂದಿರಬೇಕು" ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :-** "ನಾವು ಮುಂಗಾರಿನ ಮಳೆಯಂತೆ ಪರಿಸರ ಸಂರಕ್ಷಿಸುವ ಸಂಕಲ್ಪ ಕೈಗೊಳ್ಳುವುದರಿಂದ ನದೀಜಲಗಳನ್ನು ಶುದ್ಧವಾಗಿ ಇಟ್ಟುಕೊಳ್ಳಬಹುದು" ಎಂದು ಕವಿಗಳು ಸ್ವಾರಸ್ಯಪೂರ್ಣವಾಗಿ ತಮ್ಮ ಭಾವನೆಯನ್ನು ಅಭಿವ್ಯಕ್ತಪಡಿಸುತ್ತಾರೆ.

೩. **"ಹೊಸ ಭರವಸೆಗಳ ಕಟ್ಟೋಣ"**

**ಸಂದರ್ಭ :-** ಕವಿಗಳು "ಜೀವನದಲ್ಲಿ ಧನಾತ್ಮಕ ಮನೋಭಾವನೆಯ ಧೃಡಸಂಕಲ್ಪವನ್ನು ಹೊಂದಿರಬೇಕು" ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :-** "ನಾವು ಹೊಸ ಭರವಸೆಯನ್ನು ಮೂಡಿಸುವ ಸಂಕಲ್ಪ ಕೈಗೊಳ್ಳುವುದರಿಂದ ಸಮಾಜದ ನೈತಿಕ ಅಧಃಪತನವನ್ನು ತಡೆಯಬಹುದು" ಎಂದು ಕವಿಗಳು ಸ್ವಾರಸ್ಯಪೂರ್ಣವಾಗಿ ತಮ್ಮ ಭಾವನೆಯನ್ನು ಅಭಿವ್ಯಕ್ತಪಡಿಸುತ್ತಾರೆ.

೪. **"ಹೊಸ ಎಚ್ಚರದೊಳು ಬದುಕೋಣ"**

**ಸಂದರ್ಭ :-** ಕವಿಗಳು "ಜೀವನದಲ್ಲಿ ಧನಾತ್ಮಕ ಮನೋಭಾವನೆಯ ಧೃಡಸಂಕಲ್ಪವನ್ನು ಹೊಂದಿರಬೇಕು" ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :-** "ಎಲ್ಲ ಮತಗಳು ಸಾಧನೆಯ ದಾರಿಗಳು ಎಂಬ ಎಚ್ಚರದಲ್ಲಿ ಬದುಕುವ ಸಂಕಲ್ಪ ಕೈಗೊಳ್ಳುವುದರಿಂದ ದೇಶದಲ್ಲಿ ಶಾಂತಿಯು ನೆಲೆಸುವಂತೆ ಮಾಡಬಹುದು" ಎಂದು ಕವಿಗಳು ಸ್ವಾರಸ್ಯಪೂರ್ಣವಾಗಿ ತಮ್ಮ ಭಾವನೆಯನ್ನು ಅಭಿವ್ಯಕ್ತಪಡಿಸುತ್ತಾರೆ.

**ಈ] ಬಿಟ್ಟಸ್ಥಳವನ್ನು ಸೂಕ್ತ ಉತ್ತರದಿಂದ ತುಂಬಿರಿ.**

೧) **'ಸಂಕಲ್ಪಗೀತೆ'** ಪದ್ಯವನ್ನು **'ಎದೆತುಂಬಿ ಹಾಡಿದೆನು'** ಕವನಸಂಕಲನದಿಂದ ಆರಿಸಿಕೊಳ್ಳಲಾಗಿದೆ.
೨) ಕತ್ತಲೆಯೊಳಗೆ **ಪ್ರೀತಿಯ** ಹಣತೆಯ ಹಚ್ಚೋಣ.
೩) ಬಿದ್ದುದನ್ನು ಮೇಲೆಬ್ಬಿಸಿ ನಿಲ್ಲಿಸಿ ಹೊಸ **ಭರವಸೆಗಳ** ಕಟ್ಟೋಣ.
೪) ನಾಳಿನ ಕನಸನು **ಭಯ-ಸಂಶಯದೊಳು ಕಂಡಿದ ಕಣ್ಣಿನಲ್ಲಿ** ಬಿತ್ತೋಣ.
೫) ಜಿ.ಎಸ್.ಶಿವರುದ್ರಪ್ಪನವರು **ದಾವಣಗೆರೆಯಲ್ಲಿ** ಸಮಾವೇಶಗೊಂಡಿದ್ದ ಅಖಿಲಭಾರತ ಕನ್ನಡ ಸಾಹಿತ್ಯಸಮ್ಮೇಳನದ ಅಧ್ಯಕ್ಷರಾಗಿದ್ದರು.

**ಭಾಷಾಚಟುವಟಿಕೆ**

**೧) ನೀಡಿರುವ ಪದಗಳ ಧಾತುಗಳನ್ನು ಗುರುತಿಸಿ ಬರೆಯಿರಿ.**

ನಿಲ್ಲಿಸು-**ನಿಲ್ಲು;** ನಡೆಸು-**ನಡೆ;** ಹಚ್ಚುವುದು-**ಹಚ್ಚು;** ಮುಟ್ಟೋಣ-**ಮುಟ್ಟು;** ಕಟ್ಟುವುದು-**ಕಟ್ಟು;** ಆಗೋಣ-**ಆಗು**

**೨) ವಿಭಕ್ತಿ ಪ್ರತ್ಯಯಗಳನ್ನು ಪ್ರತ್ಯೇಕಿಸಿ ಬರೆಯಿರಿ.**

ಪ್ರೀತಿಯ – ಪ್ರೀತಿ + ಅ
ಬಿರುಗಾಳಿಗೆ – ಬಿರುಗಾಳಿ + ಗೆ
ಲಕ್ಕೆ – ಜಲ _ ಕ್ಕೆ
ಬಿದ್ದುದನ್ನು – ಬಿದ್ದುದು + ಅನ್ನು

೩. ಕೊಟ್ಟಿರುವ ಪದಗಳಲ್ಲಿರುವ ವಿಭಕ್ತಿಯನ್ನು ಹೆಸರಿಸಿ.

ಸಂಶಯದೊಳ್ – ಒಳ್ – ಸಪ್ತಮೀ ವಿಭಕ್ತಿ ಪ್ರತ್ಯಯ,
ಜಲದಿಂ – ಇಂ – ತೃತೀಯ ವಿಭಕ್ತಿ ಪ್ರತ್ಯಯ
ಮರದತ್ತಣಿಂ – ಅತ್ತಣಿಂ – ಪಂಚಮೀ ವಿಭಕ್ತಿ ಪ್ರತ್ಯಯ
ರಾಯಂಗೆ – ಗೆ – ಚತುರ್ಥಿ ವಿಭಕ್ತಿ ಪ್ರತ್ಯಯ

೪. ಕೊಟ್ಟಿರುವ ಧಾತುಗಳಿಗೆ ವಿಧ್ಯರ್ಥಕ, ನಿಷೇಧಾರ್ಥಕ ಮತ್ತು ಸಂಭಾವನಾರ್ಥಕ ರೂಪಗಳನ್ನು ಬರೆಯಿರಿ.

| ಧಾತು | ವಿಧ್ಯರ್ಥಕ | ನಿಷೇಧಾರ್ಥಕ | ಸಂಭಾವನಾರ್ಥಕ |
|---|---|---|---|
| ಹಾಡು | ಹಾಡಲಿ | ಹಾಡನು | ಹಾಡಿಯಾನು |
| ನೋಡು | ನೋಡಲಿ | ನೋಡಳು | ನೋಡಿಯಾಳು |
| ಕಟ್ಟು | ಕಟ್ಟಲಿ | ಕಟ್ಟರು | ಕಟ್ಟಿಯಾರು |
| ಕೇಳು | ಕೇಳಲಿ | ಕೇಳಿಯಾನು | ಕೇಳನು |
| ಓಡು | ಓಡಲಿ | ಓಡಳು | ಓಡಿಯಾಳು |
| ಓದು | ಓದಲಿ | ಓದರು | ಓದಿಯಾರು |
| ಬರೆ | ಬರೆಯಲಿ | ಬರೆಯನು | ಬರೆದಾನು |

## ಭಾಗ – ಬಿ

ಕೆಳಗೆ ಕೊಟ್ಟಿರುವ ಹೇಳಿಕೆಗಳಿಗೆ ನಾಲ್ಕು ಉತ್ತರಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸೂಕ್ತವಾದುದನ್ನು ಆರಿಸಿ ಬರೆ:

೧. ಸಕರ್ಮಕ ಧಾತುಗಳು ಮೇಲೆ 'ಅಲ್ಪಡು' ಪ್ರತ್ಯಯ ಸೇರಿ ಆಗುವ ಕ್ರಿಯಾಪದದ ಪ್ರಯೋಗ :
ಎ) ಕರ್ತರಿ ಬಿ) ಕರ್ಮಣಿ ಸಿ) ವಿಧ್ಯರ್ಥಕ ಡಿ) ನಿಷೇಧಾರ್ಥಕ

೨. ಈ ಕೆಳಗಿನವುಗಳಲ್ಲಿ ವಿಧ್ಯರ್ಥಕ ಕ್ರಿಯಾಪದಕ್ಕೆ ಉದಾಹರಣೆ :
ಎ) ಮಾಡನು ಬಿ) ಓದರು ಸಿ) ಮಾಡಿಯಾನು ಡಿ) ಮಾಡಲಿ

೩. ಇಲ್ಲಿರುವ ಕ್ರಿಯಾರೂಪಗಳಲ್ಲಿ ಸಂಭವನಾರ್ಥಕ ಕ್ರಿಯಾಪದ :
ಎ) ತಿಂದಾರು ಬಿ) ಓದನು ಸಿ) ಮಾಡನು ಡಿ) ಕೇಳಲಿ

೪. ' ಬಿರುಗಾಳಿಗೆ ಹೊಯ್ದಾಡುವ ಹಡಗನು ಎಚ್ಚರಲಿ ಮುನ್ನಡೆಸೋಣ' ಇಲ್ಲಿ ಗೆರೆ ಎಳೆದ ಪದದ ವಿಭಕ್ತಿ ಪ್ರತ್ಯಯ :
ಎ) ಪ್ರಥಮಾ ಬಿ) ದ್ವಿತೀಯಾ ಸಿ) ತೃತೀಯಾ ಡಿ) ಚತುರ್ಥಿ

೫. 'ಕಲುಷಿತವಾದೀ ನದೀಜಲಗಳಿಗೆ ಮುಂಗಾರಿನ ಮಳೆಯಾಗೋಣ' ಈ ವಾಕ್ಯದಲ್ಲಿ ಷಷ್ಠೀ ವಿಭಕ್ತಿ ಪ್ರತ್ಯಯ ಹೊಂದಿರುವ ಪದ :
ಎ) ಕಲುಷಿತವಾದೀ ಬಿ) ನದೀಜಲಗಳಿಗೆ ಸಿ) ಮುಂಗಾರಿನ ಡಿ) ಮಳೆಯಾಗೋಣ

೬. 'ಹೊಸ ಎಚ್ಚರದೊಳು ಬದುಕೋಣ' ಈ ವಾಕ್ಯದಲ್ಲಿ ಗೆರೆ ಎಳೆದ ಪದದ ವಿಭಕ್ತಿ ಪ್ರತ್ಯಯ :
ಎ) ಪಂಚಮೀ ಬಿ) ಷಷ್ಠಿ ಸಿ) ಸಪ್ತಮಿ ಡಿ) ತೃತೀಯ

೭. ಒಂದು ವಿಭಕ್ತಿ ಪ್ರತ್ಯಯಕ್ಕೆ ಬದಲಾಗಿ ಬೇರೊಂದು ವಿಭಕ್ತಿ ಪ್ರತ್ಯಯವನ್ನು ಬಳಸುವುದನ್ನು ಹೀಗೆನ್ನುತ್ತಾರೆ:
ಎ) ವಚನ ಪಲ್ಲಟ ಬಿ) ವಿಭಕ್ತಿ ಪಲ್ಲಟ ಸಿ) ವಿಭಕ್ತಿ ಪ್ರಸಾರ ಡಿ) ಅಧ್ಯಾಹಾರ

೮. ದ್ವಿತೀಯಾ ವಿಭಕ್ತಿ ಪ್ರತ್ಯಯದಲ್ಲಿರುವ ಕಾರಕಾರ್ಥ :
ಎ) ಕರ್ತೃರ್ಥ ಬಿ) ಕರಣಾರ್ಥ ಸಿ) ಕರ್ಮಾರ್ಥ ಡಿ) ಸಂಪ್ರದಾನ

೯. ದೆಸೆಯಿಂದ, ಅತ್ತಣಿಂ– ಈ ಪ್ರತ್ಯಯಗಳನ್ನು ಹೊಂದಿರುವ ವಿಭಕ್ತಿ :
ಎ) ಪಂಚಮೀ ಬಿ) ಷಷ್ಠಿ ಸಿ) ಸಪ್ತಮಿ ಡಿ) ತೃತೀಯ

೧೦. 'ನಿಲ್ಲಿಸು' ಪದದಲ್ಲಿರುವ ಧಾತು : ಎ) ನಿಲ್ಲಿ ಬಿ) ಇಸು ಸಿ) ನಿಲ್ ಡಿ) ನಿಲ್ಲು

೧೧. 'ಕಲುಷಿತ' ಪದದ ಸಮಾನಾರ್ಥಕ ಪದ :
ಎ) ಮಲಿನ ಬಿ) ಕಲಕಿದ ಸಿ) ಕಲಸಿದ ಡಿ) ಸ್ವಚ್ಚವಾದ

೧೨. 'ಕಾಡುಮೇಡು' ಪದವು ಈ ವ್ಯಾಕರಣಾಂಶಕ್ಕೆ ಉದಾಹರಣೆಯಾಗಿದೆ.
ಎ) ದ್ವಿರುಕ್ತಿ ಬಿ) ಜೋಡುನುಡಿ ಸಿ) ಅನುಕರಣಾವ್ಯಯ ಡಿ) ನುಡಿಗಟ್ಟು

೧೩. ಮನುಜರ ನಡುವಣ ಅಡ್ಡಗೋಡೆಗಳ ಕೆಡವುತ ಸೇತುವೆಯಾಗೋಣ– ಇಲ್ಲಿ ಗೆರೆ ಎಳೆದ ಪದವು ಈ ವ್ಯಾಕರಣಾಂಶವಾಗಿದೆ :
ಎ) ದ್ವಿರುಕ್ತಿ ಬಿ) ಜೋಡುನುಡಿ ಸಿ) ಅನುಕರಣಾವ್ಯಯ ಡಿ) ನುಡಿಗಟ್ಟು

೧೪. 'ಸುತ್ತಲು ಕವಿಯುವ ಕತ್ತಲೆಯೊಳಗೆ ಪ್ರೀತಿಯ ಹಣತೆಯ ಹಚ್ಚೋಣ' ಈ ವಾಕ್ಯದಲ್ಲಿರುವ ಅಲಂಕಾರ :
ಎ) ಉಪಮಾ ಬಿ) ರೂಪಕ ಸಿ) ಉತ್ಪ್ರೇಕ್ಷೆ ಡಿ) ದೃಷ್ಟಾಂತ

೧೫. ಅಡ್ಡಗೋಡೆ ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ.
ಎ) ಅಂಶಿ ಬಿ) ಕರ್ಮಧಾರಯ ಸಿ) ಕ್ರಿಯಾ ಡಿ) ತತ್ಪುರುಷ

೧೬. 'ಮುಂಗಾರು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ.

ಎ) ಅಂಶಿ ಬಿ) ಕರ್ಮಧಾರಯ ಸಿ) ಕ್ರಿಯಾ ಡಿ) ತತ್ಪುರುಷ

[**ಉತ್ತರಗಳು :** ೧. ಬಿ) ಕರ್ಮಣಿ ೨. ಡಿ) ಮಾಡಲಿ ೩. ಎ) ತಿಂದಾರು. ೪. ಡಿ) ಚತುರ್ಥಿ ೫. ಸಿ) ಮುಂಗಾರಿನ ೬. ಸಿ) ಸಪ್ತಮಿ ೭. ಬಿ) ವಿಭಕ್ತಿ ಪಲ್ಲಟ ೮. ಸಿ) ಕರ್ಮಾರ್ಥ ೯. ಎ) ಪಂಚಮೀ ೧೦. ಡಿ) ನಿಲ್ಲು ೧೧. ಎ) ಮಲಿನ ೧೨. ಬಿ) ಜೋಡುನುಡಿ ೧೩. ಡಿ) ನುಡಿಗಟ್ಟು ೧೪. ಬಿ) ರೂಪಕ ೧೫. ಎ)ಕರ್ಮಧಾರೆಯಸಮಾಸ ೧೬. ಅಂಶಿಸಮಾಸ ]

**ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ಪದ ಬರೆಯಿರಿ :**

| | | | | |
|---|---|---|---|---|
| ೧. | ಮಾಡಲಿ | : ವಿಧ್ಯರ್ಥಕ | : : ಮಾಡನು | : ________ |
| ೨. | ಓದರು | : ನಿಷೇಧಾರ್ಥಕ | : : ಓದಿಯಾರು | : ________ |
| ೩. | ಹಡಗನು | : ಪ್ರಥಮಾ ವಿಭಕ್ತಿ | : : ಮನುಜರ | : ________ |
| ೪. | ಭಯದಿಂದ | : ತೃತೀಯಾ ವಿಭಕ್ತಿ | : : ಎಚ್ಚರದೊಳು | : ________ |
| ೫. | ಷಷ್ಠಿ ವಿಭಕ್ತಿ | : ಸಂಬಂಧಕಾರಕ | : : ಚತುರ್ಥಿ ವಿಭಕ್ತಿ | : ________ |
| ೬. | ಪ್ರಥಮಾ ವಿಭಕ್ತಿ | : ಕರ್ತೃಕಾರಕ | : : ಸಪ್ತಮಿ ವಿಭಕ್ತಿ | : ________ |
| ೭. | ಅವನು ಮಲಗಿದನು | : ಅಕರ್ಮಕ | : : ಮನೆಯನ್ನು ಕಟ್ಟು | : ________ |

[ಉತ್ತರಗಳು : ೧. ನಿಷೇಧಾರ್ಥಕ ೨. ಸಂಭವನಾರ್ಥಕ ೩. ಷಷ್ಠಿ ವಿಭಕ್ತಿ ೪. ಸಪ್ತಮಿ ವಿಭಕ್ತಿ ೫. ಸಂಪ್ರದಾನ ೬. ಅಧಿಕರಣ ೭. ಸಕರ್ಮಕ

## ಪದ್ಯದ ವ್ಯಾಕರಣಾಂಶಗಳು :

**ಸಮಾಸಪದಗಳು :**

೧. ಬಿರುಗಾಳಿ – ಬಿರುಸಾದ + ಗಾಳಿ = ಕರ್ಮಧಾರಯಸಮಾಸ

೨. ಮುಂಗಾರು – ಕಾರಿನ + ಮುಂದು = ಅಂಶಿಸಮಾಸ

೩. ಮುನ್ನಡೆ – ನಡೆಯ + ಮುಂದು = ಅಂಶಿಸಮಾಸ

೪. ಕಾಡುಮೇಡು – ಕಾಡೂ + ಮೇಡೂ = ದ್ವಂದ್ವಸಮಾಸ

**ನೀಡಿರುವ ಪದಗಳ ಧಾತುಗಳನ್ನು ಗುರುತಿಸಿ ಬರೆಯಿರಿ. ವಿಭಕ್ತಿ ಪ್ರತ್ಯಯಗಳನ್ನು ಪ್ರತ್ಯೇಕಿಸಿ ಬರೆಯಿರಿ**

| ಕ್ರಿಯಾಪದ | ಧಾತು | ನಾಮಪದಗಳು | ಪ್ರತ್ಯಯಗಳು | ವಿಭಕ್ತಿಗಳು |
|---|---|---|---|---|
| ೧. ನಿಲ್ಲಿಸು | ನಿಲ್ಲು. | ಪ್ರೀತಿಯ | ಅ | ಷಷ್ಠಿವಿಭಕ್ತಿ |
| ೨. ನಡೆಸು | ನಡೆ | ಬಿರುಗಾಳಿಗೆ | ಇಗೆ | ಚತುರ್ಥಿವಿಭಕ್ತಿ |
| ೩. ಹಚ್ಚುವುದು | ಹಚ್ಚು. | ಜಲಕ್ಕೆ | ಇಕ್ಕೆ | ಚತುರ್ಥಿವಿಭಕ್ತಿ |
| ೪. ಮುಟ್ಟೋಣ | ಮುಟ್ಟು | ಬಿದ್ದುದನ್ನು | ಅನ್ನು | ದ್ವಿತೀಯವಿಭಕ್ತಿ |
| ೫. ಕಟ್ಟುವುದು | ಕಟ್ಟು | ಭರವಸೆಗಳ | ಅ | ಷಷ್ಠಿವಿಭಕ್ತಿ |
| ೬. ಆಗೋಣ | ಆಗು | ಹಡಗನು | ಉ | ಪ್ರಥಮವಿಭಕ್ತಿ |

**ವಿಧ್ಯರ್ಥಕ ಕ್ರಿಯಾಪದಗಳು :** ೧. ಹಚ್ಚೋಣ, ೨. ನಡೆಸೋಣ, ೩.ಆಗೋಣ, ೪.ಮುಟ್ಟೋಣ ೫. ಕಟ್ಟೋಣ ೬. ಬದುಕೋಣ, ೭. ಬಿತ್ತೋಣ

## : ಕ್ರಿಯಾಪದಗಳು :

ಕ್ರಿಯೆ ಪೂರ್ಣಗೊಂಡಿದೆ ಎಂಬ ಅರ್ಥವನ್ನು ಸೂಚಿಸ ಬಲ್ಲ ಪದವೇ ಕ್ರಿಯಾಪದಗಳು. ಕ್ರಿಯಾರ್ಥವನ್ನು ಸೂಚಿಸುವ ಪ್ರತ್ಯವನ್ನು ಹೊಂದಿರುವ ಪದವೇ ಕ್ರಿಯಾಪ್ರಕೃತಿ ಅಥವಾ ಧಾತು. ಅಂದರೆ ಕ್ರಿಯಾಪದದ ಮೂಲ ರೂಪವೇ ಧಾತು.

ಧಾತುವಿನಲ್ಲಿ ಸಕರ್ಮಕ ಧಾತು ಮತ್ತು ಅಕರ್ಮಕಧಾತು ಎಂದು ಎರಡು ವಿಧಗಳಿವೆ.

**ಸಕರ್ಮಕಧಾತು :** ಅರ್ಥಪೂರ್ಣತೆಗೆ ಕರ್ಮಪದವನ್ನು ಬಯಸುವ ಧಾತುಗಳೇ ಸಕರ್ಮಕ ಧಾತುಗಳು.

**ಉದಾ :** ಕೊಡು, ಬಿಡು, ಉಣ್ಣು, ತಿದ್ದು, ಉಜ್ಜು, ತಿದ್ದು, ಮುಚ್ಚು ನೆಡು, ಕಟ್ಟು, ಓದು ? ಇತ್ಯಾದಿ

**ಅಕರ್ಮಕಧಾತು :** ಅರ್ಥಪೂರ್ಣತೆಗೆ ಕರ್ಮಪದವನ್ನು ಬಯಸದೇ ಇರುವ ಧಾತುಗಳೇ ಸಕರ್ಮಕ ಧಾತುಗಳು.

**ಉದಾ :** ಮಲಗು, ಓಡು, ಬದುಕು, ಹೊಳೆ, ಹೋಗು, ನಾಚು ? ಇತ್ಯಾದಿ

**ಕರ್ತರಿ ಪ್ರಯೋಗ :** ಧಾತು ಗಳಿಗೆ ಲಿಂಗವಾಚಕ ಮತ್ತು ವಸ್ತುವಾಚಕಗಳು ಸೇರಿ ಒಂದು ಪೂರ್ಣವಾಕ್ಯವಾದಾಗ ಅದು ಕರ್ತರಿಪ್ರಯೋಗವಾಗುತ್ತದೆ.

**ಉದಾ :** ೧. ಭೀಮನು ಅನ್ನವನ್ನು ಉಂಡನು. ೨. ಅಕ್ಕ ತಂಗಿಯನ್ನು ಕರೆದಳು. – ಇತ್ಯಾದಿ

**ಕರ್ಮಣಿ ಪ್ರಯೋಗ :** ಸಕರ್ಮಕ ಧಾತುಗಳ ಮೇಲೆ ಅಲ್ಪಡು ಪ್ರತ್ಯಯ ಸೇರಿ ಕಾಲಸೂಚಕ ಮತ್ತು ಆಖ್ಯಾತ ಪ್ರತ್ಯಯಗಳು ಸೇರಿದಾಗ ಕರ್ಮಣಿ ಪ್ರಯೋಗವಾಗುತ್ತದೆ.

**ಉದಾ :** ೧. ಅನ್ನವು ಭೀಮನಿಂದ ಉಣ್ಣಲ್ಪಟ್ಟಿತು. ೨. ತಂಗಿಯು ಅಕ್ಕನಿಂದ ಕರೆಯಲ್ಪಟ್ಟಳು ? ಇತ್ಯಾದಿ.

# ಗದ್ಯ-೧. ಯುದ್ಧ

**ಲೇಖಕರ ಪರಿಚಯ:** **ಸಾರಾ ಅಬೂಬಕ್ಕರ್** ಅವರು ೩೦ ಜೂನ್ ೧೯೩೬ರಂದು **ಕಾಸರಗೋಡಿನಲ್ಲಿ** ಜನಿಸಿದರು. **ಚಂದ್ರಗಿರಿಯ ತೀರದಲ್ಲಿ, ಸಹನಾ, ಕದನ ವಿರಾಮ, ವಜ್ರಗಳು, ಸುಳಿಯಲ್ಲಿ ಸಿಕ್ಕವರು, ತಳ ಒಡೆದ ದೋಣಿಯಲಿ** ಮೊದಲಾದುವು ಇವರ ಪ್ರಮುಖ **ಕಾದಂಬರಿಗಳು. ಚಪ್ಪಲಿಗಳು, ಖೆಡ್ಡಾ, ಅರ್ಧರಾತ್ರಿಯಲ್ಲಿ ಹುಟ್ಟಿದ ಕೂಸು, ಪಯಣ** ಇವು ಕಥಾ **ಸಂಕಲನಗಳು.** ಇವರ ಸಾಹಿತ್ಯ ಕೃಷಿಗಾಗಿ ಅನೇಕ ಪ್ರಶಸ್ತಿಗಳು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ **ನೃಪತುಂಗ ಪ್ರಶಸ್ತಿ** ಲಭಿಸಿವೆ.

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ.**

೧. ರಾಹಿಲನು ಯಾರು?

**ಉ:** ರಾಹಿಲ ಸೈನ್ಯದಲ್ಲಿದ್ದ ಒಬ್ಬ ಡಾಕ್ಟರ್.

೨. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು?

**ಉ:** ರಾಹಿಲನು ತುರ್ತು ಪರಿಸ್ಥಿತಿಗೆ ಬೇಕಾದ ಶಸ್ತ್ರ ಚಿಕಿತ್ಸಾ ಸಾಮಾನುಗಳ ಪೆಟ್ಟಿಗೆಯನ್ನು ಭದ್ರವಾಗಿ ಹಿಡಿದುಕೊಂಡನು.

೩. ಗಡಿ ಪ್ರದೇಶಗಳಲ್ಲಿ 'ಬ್ಲಾಕ್ ಔಟ್' ನಿಯಮವನ್ನು ಏತಕ್ಕಾಗಿ ಪಾಲಿಸಲಾಗುತ್ತದೆ?

**ಉ:** ಗಡಿ ಪ್ರದೇಶದಲ್ಲಿ ವಿಮಾನ ದಾಳಿಯಿಂದ ರಕ್ಷಿಸಿಕೊಳ್ಳಲು **'ಬ್ಲಾಕ್ ಔಟ್'** ನಿಯಮ ಪಾಲಿಸಲಾಗುತ್ತಿದೆ.

೪. ರಾಹಿಲನು ಮುದುಕಿಯ ಎದುರಿಗೆ ನುಡಿದ ಗಂಭೀರವಾದ ಮಾತು ಯಾವುದು?

**ಉ:** ರಾಹಿಲನು, "ನಾನು ಯುದ್ಧ ಮಾಡುವ ಮೂರ್ಖರ ಕಡೆಯವನಲ್ಲ. ಸಂಕಷ್ಟಕ್ಕೀಡಾದ ಮನುಷ್ಯರ ಕಡೆಯವನು" ಎಂದು ಗಂಭೀರವಾಗಿ ನುಡಿದನು.

೫. ಯುದ್ಧದ ಬಗೆಗೆ ಮುದುಕಿಯ ಅಭಿಪ್ರಾಯವೇನು?

**ಉ:** "ಎಲ್ಲರಿಗೂ ದೇಹಕ್ಕೂ ಮನಸ್ಸಿಗೂ ಗಾಯ ಮಾಡುವುದೇ ಯುದ್ಧದ ಪರಿ" ಎಂಬುದು ಯುದ್ಧದ ಬಗೆಗೆ ಮುದುಕಿಯ ಅಭಿಪ್ರಾಯವಾಗಿದೆ.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಡಾಕ್ಟರ್‌ಗೆ ವಿಮಾನದ ಪೈಲಟ್ ಏನು ಹೇಳಿದನು?**

ಉ: "ಡಾಕ್ಟರ್! ರೇಡಿಯೋ ಸಮನಾಗಿ ಕಾರ್ಯನಿರ್ವಹಿಸುತ್ತಿಲ್ಲ. ಗ್ರೌಂಡಿನೊಡನೆ ಸಂಪರ್ಕ ಬೆಳೆಸಲು ಸಾಧ್ಯವಾಗುತ್ತಿಲ್ಲ. ಎಲ್ಲಾದರೂ ಹೇಗಾದರೂ ಇಳಿಯೋಣವೆಂದರೆ ಈ ಕತ್ತಲೆಯಲ್ಲಿ ಏನೂ ಕಾಣಿಸ್ತಾ ಇಲ್ಲವಲ್ಲ?" ಎಮದು ವಿಮಾನದ ಪೈಲಟ್ ನುಡಿದನು.

**೨. ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ ಮೂಡಿದ ಪ್ರಶ್ನೆಗಳಾವುವು?**

ಉ: ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ: ಆ ಮಹಿಳೆ ಯಾವ ರೀತಿಯ ಅಪಾಯದಲ್ಲಿ ಸಿಲುಕಿದ್ದಾಳೆ? ಆ ಮನೆಯೊಳಗೆ ಏನು ಸಂಭವಿಸುತ್ತಿದೆ? ತಾನೀಗ ಈ ಕದವನ್ನು ತಟ್ಟಿದರೆ ಪರಿಣಾಮವೇನಾಗ ಬಹುದು? ಆ ಮನೆಯಿಂದ ಒಂದೇ ಒಂದು ಬೆಳಕಿನ ಕಿರಣವೂ ಹೊರಗಡೆಗೆ ಹಾಯುತ್ತಿರಲಿಲ್ಲ. ಗಡಿ ಪ್ರದೇಶದಲ್ಲಿ ವಿಮಾನ ದಾಳಿಯಿಂದ ರಕ್ಷಿಸಿಕೊಳ್ಳಲು 'ಬ್ಲಾಕ್ ಔಟ್' ನಿಯಮ ಪಾಲಿಸಲಾಗುತ್ತಿದೆ. ಇಂತಹ ಈ ಸಮಯದಲ್ಲಿ ಆ ಮನೆಯೊಳಗೆ ಯಾವ ರೀತಿಯ ಕ್ರೌರ್ಯ ನಡೆಯುತ್ತಿದೆ? ಎಂಬ ಪ್ರಶ್ನೆಗಳು ಮೂಡಿದವು.

**೩. ಮುದುಕಿಯು ರಾಹಿಲನ ಬಳಿ ಯುದ್ಧದ ಬಗ್ಗೆ ತಿರಸ್ಕಾರದಿಂದ ನುಡಿದ ಮಾತುಗಳೇನು?**

ಉ: "ನೋಡಪ್ಪಾ, ನಾನು ಈ ಊರಿಗೆ ಬಂದು ಐವತ್ತು ವರ್ಷಗಳಾದರೂ ಆಗಿರಬಹುದು. ಮದುವೆಯಾಗಿ ನವ ವಧುವಾಗಿ ಈ ಊರನ್ನು ಪ್ರವೇಶಿಸಿದೆ. ಕೆಲವು ಕಾಲ ನೆಮ್ಮದಿಯಿಂದಲೇ ಇದ್ದೆವು. ಜಮೀನು ಆಸ್ತಿ ನಮಗೆ ಸಾಕಾಗುವಷ್ಟಿತ್ತು. ಈಗಲೂ ಇದೆಯೆನ್ನು. ಆದರೆ ನೆಮ್ಮದಿಯಿಂದ ಬದುಕಲು ಈ ಜನ ಬಿಡಬೇಕಲ್ಲ? ಯುದ್ಧವಂತೆ, ಯುದ್ಧ!" ತಿರಸ್ಕಾರದಿಂದ ನುಡಿದಳು ಮುದುಕಿ.

**೪. ನಿರ್ಜೀವಾಗಿರುವ ಮಗುವನ್ನು ನೋಡಿ ಮುದುಕಿ ನಿರಾಶೆಯಿಂದ ಹೇಳಿದ್ದೇನು?**

ಉ: ನಿರ್ಜೀವಾಗಿರುವ ಮಗುವನ್ನು ನೋಡಿ ಮುದುಕಿಯು "ಇಷ್ಟು ವರ್ಷಗಳಿಂದಲೂ ಹಂಬಲಿಸಿ ಹುಟ್ಟಿದ ಮಗು ಕೊನೆಗೂ ದಕ್ಕಲಿಲ್ಲವಲ್ಲ? ಈ ಯುದ್ಧವಲ್ಲದೆ ಹೋಗಿದ್ದರೆ ನನ್ನ ಮಗುವನ್ನು ಹೇಗಾದರೂ ಬದುಕಿಸಿಕೊಳ್ಳುತ್ತಿದ್ದೆವಲ್ಲ ದೇವರೇ? ಈ ಮನುಷ್ಯರಿಗೆ ಎಂತಹ ಬುದ್ಧಿ ಕೊಡುತ್ತೀಯಾ?" ಎಂದು ನಿರಾಶೆಯಿಂದ ಹೇಳಿದಳು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಮುದುಕಿಯು ತನ್ನ ಮಗನು ಯುದ್ಧಕ್ಕೆ ಹೋದ ಸಂದರ್ಭವನ್ನು ಹೇಗೆ ವಿವರಿಸಿದಳು?**

ಉ: "ಯುದ್ಧಕ್ಕೆ ಹೋಗಿದ್ದಾನೆ! ನನ್ನ ಮಗನಿನ್ನೂ ಚಿಕ್ಕ ಹುಡುಗನಾಗಿದ್ದಾಗ ಯುದ್ಧಕ್ಕೆ ಹೋದ ಅವನ ತಂದೆ ಹಿಂತಿರುಗಲಿಲ್ಲ. ಎದೆ ತುಂಬ ಬೂದಿ ಮುಚ್ಚಿದ ಕೆಂಡ, ಎದೆಯ ಗಾಯ ಇಂದಿಗೂ ಇದೆ, ನೋಡು. ಎಲ್ಲ ದುಃಖ ನುಂಗಿಕೊಂಡು ಮಗನನ್ನು ಸಾಕಿ ಸಲಹಿದೆ. ಮದುವೆಯನ್ನೂ ಮಾಡಿದೆ. ಈಗ ಐದಾರು ವರ್ಷಗಳ ಬಳಿಕ ಸೊಸೆ ಗರ್ಭಿಣಿಯಾದಳು. ಮನೆಯಲ್ಲೊಂದು ಪುಟ್ಟ ಮಗುವಿನ ಅಳು ಕೇಳಲು ನನ್ನ ಮಗನು ತುದಿಗಾಲಲ್ಲಿ ನಿಂತು ಕಾಯುತ್ತಿದ್ದನು. ಅಷ್ಟರಲ್ಲಿ ಬಂತು ಯುದ್ಧ! ಅವನೊಮ್ಮೆ ಹಿಂತಿರುಗಿ ಬಂದಿದ್ದರೆ ಸಾಕಾಗಿತ್ತು. ಈ ವಿಷಯ ತಿಳಿದು ಅವನೆಷ್ಟು ಸಂಕಟ ಪಡುತ್ತಾನೋ..." ಎಂದು ಮುದುಕಿಯು ತನ್ನ ಮಗನು ಯುದ್ಧಕ್ಕೆ

ಹೋದ ಸಂದರ್ಭವನ್ನು ವಿವರಿಸಿದಳು.

**೨. ರಾಹಿಲನು ಮುದುಕಿಯ ಕುಟುಂಬಕ್ಕೂ, ಮುದುಕಿಯು ರಾಹಿಲನಿಗೂ ಮಾಡಿದ ಸಹಾಯವನ್ನು ಸಂಕ್ಷಿಪ್ತವಾಗಿ ವಿವರಿಸಿ.**

ಉ: ಸೈನ್ಯದಲ್ಲಿ ವೈದ್ಯನಾಗಿದ್ದ ರಾಹಿಲನು ಯುದ್ಧದಲ್ಲಿ ಗಾಯಗೊಂಡು ಶತ್ರು ಸೈನಿಕರಿಂದ ತಪ್ಪಿಸಿಕೊಂಡು ಮುದುಕಿ ಮನೆಗೆ ಬಂದಾಗ ಅವಳ ಸೊಸೆ ಹೆರಿಗೆ ನೋವಿನಿಂದ ನರಳುತ್ತಿದ್ದಳು. ಆ ಸಮಯದಲ್ಲಿ ಮುದುಕಿಯ ಮಗ ಯುದ್ಧಕ್ಕೆ ಹೋಗಿದ್ದನು. ಯುದ್ಧದ ವಾತಾವರಣ ಇದ್ದುದರಿಂದ ಡಾಕ್ಟರ್ ಅಥವಾ ಸೂಲಗಿತ್ತಿಯನ್ನು ಕರೆಯಲು ಸಾಧ್ಯವಾಗದೆ ಮುದುಕಿ ಸಂಕಟಪಡುತ್ತಿದ್ದಳು. ಈ ವಿಷಯವನ್ನು ಮುದುಕಿಯಿಂದ ತಿಳಿದ ರಾಹಿಲನು "ತಾನು ಒಬ್ಬ ವೈದ್ಯನಾಗಿದ್ದು ಆಕೆಯನ್ನು ಪರೀಕ್ಷಿಸುವುದಾಗಿ ತಿಳಿಸಿದನು. ತನ್ನ ಕಾಲಿಗೆ ಪೆಟ್ಟಾಗಿದ್ದರೂ ನೋವನ್ನು ಸಹಿಸಿಕೊಂಡು ಬಹಳ ಹೊತ್ತು ಪ್ರಯತ್ನಿಸಿ ಮಗುವನ್ನು ಹೊರ ತೆಗೆದನು. ಆದರೆ ಅದು ನಿರ್ಜೀವವಾಗಿತ್ತು. ಅದರ ತಾಯಿ ಬದುಕಿದಳು.

ರಾಹಿಲನನ್ನು ನೋಡಿದ ಮುದುಕಿಗೆ ಅವನು 'ತಮ್ಮವನೇ? ಅಥವಾ ಶತ್ರುಗಳ ಕಡೆಯವನೇ? ಎಂದು ಸಂದೇಹ ಉಂಟಾಯಿತು. ಅದೇ ಸಮಯಕ್ಕೆ ಅವನನ್ನು ಹುಡುಕಿಕೊಂಡು ಶತ್ರು ಸೈನಿಕರು ಮುದುಕಿ ಮನೆಯ ಬಾಗಿಲು ಬಡಿದರು. ಅವನು ತಮ್ಮ ವಿರೋಧಿ ಸೈನಿಕನೆಂಬ ಅವಳ ಅನುಮಾನ ನಿಜವಾಗಿತ್ತು. ಅವಳು ಅವನ ಕಡೆ ಕೋಪದಿಂದ ನೋಡಿದಳು. ಆದರೆ ರಾಹಿಲ ದಯನೀಯ ನೋಟದಿಂದ "ಬಾಗಿಲು ತೆರೆಯಬೇಡಿ" ಎಂದು ಕೈ ಸನ್ನೆ ಮಾಡಿದನು. ಅವನು ಸಂಕಷ್ಟದಲ್ಲಿ ತನ್ನ ಸೊಸೆಯ ಪ್ರಾಣ ಉಳಿಸಿದ್ದರಿಂದ ಮುದುಕಿಯು ಅವನನ್ನು ಸೊಸೆ ಮಲಗಿದ್ದ ಕೋಣೆಯಲ್ಲಿ ಮಂಚದಡಿಯಲ್ಲಿ ಬಚ್ಚಿಟ್ಟು ಅಲ್ಲಿಗೆ ಬಂದಿದ್ದ ಸೈನಿಕರಿಗೆ "ಈ ಕಡೆ ಯಾರೂ ಬಂದಿಲ್ಲ" ಎಂದು ಸುಳ್ಳು ಹೇಳಿ ರಾಹಿಲನನ್ನು ರಕ್ಷಿಸಿದಳು.

**೩. ಯುದ್ಧದಿಂದ ಆಗುವ ಅನಾಹುತಗಳ ಬಗ್ಗೆ ನಿಮ್ಮ ಅಭಿಪ್ರಾಯವನ್ನು ಬರೆಯಿರಿ.**

ಉ: ಯುದ್ಧದ ಭೀಕರತೆಯು ಮೊದಲನೆಯದಾಗಿ ಧರ್ಮ, ದೇಶಗಳ ಭೇದವಿಲ್ಲದೆ ಭಾಗಿಯಾದ ಸೈನಿಕರಿಗೂ ಅವರ ಕುಟುಂಬ ವರ್ಗದವರಿಗೂ ಹಾಗೂ ದೇಶಕ್ಕೂ ನಾನಾ ರೀತಿಯ ಸಂಕಷ್ಟಗಳನ್ನು ತಂದೊಡ್ಡುತ್ತದೆ. ಯುದ್ಧದಿಂದಾಗಿ ಸಾವಿರಾರು ಜನ ಸೈನಿಕರು ಬಲಿಯಾಗುತ್ತಾರೆ. ಅದರಿಂದ ಅವರ ಕುಟುಂಬ ವರ್ಗ ಬೀದಿಪಾಲಾಗುತ್ತದೆ. ಆಸ್ತಿ–ಪಾಸ್ತಿ, ಮನೆ–ಮಠಗಳು ಹಾಳಾಗುತ್ತವೆ. ಯುದ್ಧದ ಸಂದರ್ಭದಲ್ಲಿ ಹಾಕಲಾಗುವ ಬಾಂಬ್ ಗಳಿಂದ ಆ ಪ್ರದೇಶವೇ ಸುಟ್ಟು ಹೋಗುವುದಲ್ಲದೆ ಹಲವಾರು ವರ್ಷಗಳವರೆಗೆ ಆ ಪ್ರದೇಶದ ಸುತ್ತಲೂ ವಾಸಿಸುವ ಜನ–ಜಾನುವಾರು–ಸಸ್ಯವರ್ಗ–ಜೀವ ಸಂಕುಲದ ವಂಶವಾಹಿಯ ಮೇಲೆ ಪರಿಣಾಮ ಬೀರುವುದಲ್ಲದೆ ಅಲ್ಲಿ ಜನಿಸುವ ಮಕ್ಕಳು ಅಂಗಹೀನರಾಗಿ ಹುಟ್ಟುತ್ತಾರೆ. ಇದಕ್ಕೆ ಹಿರೋಶಿಮಾ ಮತ್ತು ನಾಗಸಾಕಿಗಳೇ ಸಾಕ್ಷಿ. ಯುದ್ಧದಲ್ಲಿ ಭಾಗವಹಿಸುವ ಎರಡೂ ದೇಶಗಳು ನಷ್ಟಕ್ಕೀಡಾಗುತ್ತವೆ. ಆ ಮೂಲಕ ಆರ್ಥಿಕ ಸಂಕಷ್ಟ ತಲೆದೋರುತ್ತದೆ. ಯುದ್ಧದಿಂದ ಲಾಭವಾಗುವುದಕ್ಕಿಂತ ನಷ್ಟವೇ ಹೆಚ್ಚು. ಅದನ್ನರಿತು ಎಲ್ಲಾ ರಾಷ್ಟ್ರಗಳು ಶಾಂತಿಪಾಲನೆ ಮಾಡುವುದು ಅತ್ಯವಶ್ಯಕವಾಗಿದೆ.

**ಈ) ಸಂದರ್ಭ ಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ದಯವಿಟ್ಟು ಬಾಗಿಲು ತೆಗೆಯಿರಿ ನಾನು ಗಾಯಗೊಂಡಿದ್ದೇನೆ"**

ಉ: **ಆಯ್ಕೆ:** ಈ ವಾಕ್ಯವನ್ನು ಸಾರಾ ಅಬೂಬಕ್ಕರ್ ಅವರು ರಚಿಸಿರುವ 'ಚಪ್ಪಲಿಗಳು' ಕವನ ಸಂಕಲನದಿಂದ ಆರಿಸಲಾಗಿರುವ 'ಯುದ್ಧ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಡಾಕ್ಟರ್ ರಾಹಿಲನು ಶತ್ರು ಸೈನಿಕರ ಧಾಳಿಯಿಂದ ಗಾಯಗೊಂಡು ತಪ್ಪಿಸಿಕೊಂಡು ಬರುವಾಗ ಧಾರಾಕಾರವಾದ ಮಳೆ ಸುರಿಯುತ್ತಿತ್ತು. ರಕ್ಷಣೆ ಪಡೆಯಲೆಂದು ಹುಡುಕುತ್ತಿದ್ದಾಗ ಒಂಟಿ ಮನೆಯೊಂದು ಕಾಣಿಸಿತು. ಹೇಗೋ ತೆವಳಿಕೊಂಡು ಆ ಮನೆಯ ಬಳಿ ಹೋಗಿ ಬಾಗಿಲು ತಟ್ಟುವ ಸಂದರ್ಭದಲ್ಲಿ "ದಯವಿಟ್ಟು ಬಾಗಿಲು ತೆಗೆಯಿರಿ ನಾನು ಗಾಯಗೊಂಡಿದ್ದೇನೆ" ಎಂದು ಹೇಳುತ್ತಾನೆ.

**ಸ್ವಾರಸ್ಯ:** ರಾಹಿಲನು ಶತ್ರುಗಳಿಂದ ತಪ್ಪಿಸಿಕೊಂಡು ಶತ್ರುದೇಶದ ಮನೆಗೇ ಬಂದು ರಕ್ಷಣೆಗಾಗಿ ಬೇಡುವುದು ಕಥೆಯಲ್ಲಿ ಸ್ವಾರಸ್ಯ ಪೂರ್ಣವಾಗಿ ಮೂಡಿಬಂದಿದೆ.

**೨. "ನಾನಾಕೆಯನ್ನು ಪರೀಕ್ಷಿಸುವೆ, ನೀವು ಬಿಸಿ ನೀರು ಸಿದ್ಧಪಡಿಸಿ"**

ಉ: **ಆಯ್ಕೆ:** ಈ ವಾಕ್ಯವನ್ನು ಸಾರಾ ಅಬೂಬಕ್ಕರ್ ಅವರು ರಚಿಸಿರುವ 'ಚಪ್ಪಲಿಗಳು' ಕವನ ಸಂಕಲನದಿಂದ ಆರಿಸಲಾಗಿರುವ 'ಯುದ್ಧ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಮುದುಕಿಯು "ನನ್ನ ಸೊಸೆ ಹೆರಿಗೆಯ ಬೇನೆ ತಿನ್ನುತ್ತಿದ್ದಾಳೆ. ಸಂಜೆಯಿಂದಲೇ ನೋವು ಪ್ರಾರಂಭವಾಗಿದೆ. ಡಾಕ್ಟರನ್ನು ಅಥವಾ ಸೂಲಗಿತ್ತಿಯನ್ನಾದರೂ ಕರೆಯೋಣವೆಂದರೆ ಈ ಬಾಂಬುಗಳು, ಬ್ಲಾಕ್ ಔಟ್" ಎಂದು ಹೇಳಿದ ಸಂದರ್ಭದಲ್ಲಿ ಕಾಲಿಗೆ ಪೆಟ್ಟಾಗಿದ್ದ ಡಾಕ್ಟರ್ ರಾಹಿಲನು "ನಾನಾಕೆಯನ್ನು ಪರೀಕ್ಷಿಸುವೆ, ನೀವು ಬಿಸಿ ನೀರು ಸಿದ್ಧಪಡಿಸಿ" ಎಂದು ಹೇಳುತ್ತಾನೆ.

**ಸ್ವಾರಸ್ಯ:** ತನ್ನ ಕಾಲಿಗೆ ಪೆಟ್ಟಾಗಿದ್ದರೂ ಅದನ್ನು ಲೆಕ್ಕಿಸದೆ ಮುದುಕಿಯ ಸೊಸೆಗೆ ಹೆರಿಗೆ ಮಾಡಿಸಲು ಮುಂದಾಗುವ ರಾಹಿಲನ ವೃತ್ತಿ ಧರ್ಮ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೩. "ಯುದ್ಧಕ್ಕೆ ಹೋದ ತನ್ನ ಮಗನ ಕಣ್ಣುಗಳಂತೆಯೇ ಇವೆಯಲ್ಲ?"**

ಉ: **ಆಯ್ಕೆ:** ಈ ವಾಕ್ಯವನ್ನು ಸಾರಾ ಅಬೂಬಕ್ಕರ್ ಅವರು ರಚಿಸಿರುವ 'ಚಪ್ಪಲಿಗಳು' ಕವನ ಸಂಕಲನದಿಂದ ಆರಿಸಲಾಗಿರುವ 'ಯುದ್ಧ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** "ಬಂದಿದ್ದಾತ ತಮ್ಮವನಲ್ಲ" ಎಂಬ ಮುದುಕಿಯ ಸಂದೇಹ ನಿಜವಾಗಿತ್ತು. ತಮಗೆ, ತಮ್ಮ ದೇಶಕ್ಕೆ ದ್ರೋಹ ಬಗೆಯುವವನು. ಎಂದು ಕ್ಷಣಕಾಲ ಆಕೆಯ ಕಣ್ಣುಗಳು ರೋಷದಿಂದ ಕೆರಳಿ ಬಾಗಿಲ ಬಳಿ ಸಮೀಪಿಸುತ್ತಾ ಆತನ ಮುಖ ನೋಡಿದ ಸಂದರ್ಭದಲ್ಲಿ "ಯುದ್ಧಕ್ಕೆ ಹೋದ ತನ್ನ ಮಗನ ಕಣ್ಣುಗಳಂತೆಯೇ ಇವೆಯಲ್ಲ?" ಎಂದು ಕೊಳ್ಳುತ್ತಾಳೆ.

**ಸ್ವಾರಸ್ಯ:** ಕಷ್ಟದಲ್ಲಿದ್ದರೂ ತನ್ನ ಸೊಸೆಯ ಪ್ರಾಣ ಉಳಿಸಿದ ರಾಹಿಲನಲ್ಲಿ ತನ್ನ ಮಗನನ್ನು ಕಾಣುವ ಮುದುಕಿಯ ಪುತ್ರವಾತ್ಸಲ್ಯ ಇಲ್ಲಿ

ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೪. "ನನ್ನ ಮೊಮ್ಮಗುವಿನ ಹೆಣವಿದೆ ಅಲ್ಲಿ; ಅದನ್ನೂ ನೋಡಿ!"**

ಉ: **ಆಯ್ಕೆ:** ಈ ವಾಕ್ಯವನ್ನು ಸಾರಾ ಅಬೂಬಕ್ಕರ್ ಅವರು ರಚಿಸಿರುವ 'ಚಪ್ಪಲಿಗಳು' ಕವನ ಸಂಕಲನದಿಂದ ಆರಿಸಲಾಗಿರುವ 'ಯುದ್ಧ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಸೈನಿಕರ ಉಡುಪಿನಲ್ಲಿದ್ದ ನಾಲ್ಕೈದು ಜನರು, **"**ಯಾರಾದರೂ ಗಾಯಗೊಂಡ ಸೈನಿಕರು ಈ ಕಡೆ ಬಂದಿದ್ದಾರೆಯೇ?**"** ಎಂದು ಕೇಳುತ್ತಾ ಮುದುಕಿಯ ಮನೆಗೆ ನುಗ್ಗಿದಾಗ ಮುದುಕಿಯು **"**ಇಲ್ಲವಲ್ಲಾ**"** ಎನ್ನುತ್ತಾಳೆ. ಆಗ ಅಧಿಕಾರಿ **"**ಆದರೂ ಈ ಮನೆಯಲ್ಲೊಮ್ಮೆ ನೋಡಿ ಬಿಡಿ**"** ಎಂದು ಸೈನಿಕರಿಗೆ ಅಪ್ಪಣೆ ಮಾಡಿದ ಸಂದರ್ಭದಲ್ಲಿ ರಾಹಿಲನನ್ನು ರಕ್ಷಿಸುವ ಸಲುವಾಗಿ ಮುದುಕಿ, **"**ಹೂಂ...ನೋಡಿ; ನನ್ನ ಮೊಮ್ಮಗುವಿನ ಹೆಣವಿದೆ ಅಲ್ಲಿ; ಅದನ್ನೂ ನೋಡಿ! ಈ ಯುದ್ಧ ನನ್ನ ಮೊಮ್ಮಗುವನ್ನೂ ಉಳಿಸಲಿಲ್ಲವಲ್ಲ? ಯಾರಿಗಾಗಿ, ಯಾತಕ್ಕಾಗಿ ಈ ಯುದ್ಧ?..**"** ಎಂದು ನಿರ್ಜೀವ ಮಗುವಿನ ಬಳಿ ಕುಳಿತು ಎದೆ ಬಡಿದುಕೊಂಡು ಅಳುತ್ತಾಳೆ. ಆಗ ಅವರೆಲ್ಲಾ ಹೊರಟು ಹೋಗುತ್ತಾರೆ.

**ಸ್ವಾರಸ್ಯ:** ಶತ್ರು ದೇಶದವನಾದರೂ ತನ್ನ ಗಾಯವನ್ನು ಸಹಿಸಿಕೊಂಡು ಸೊಸೆಯ ಪ್ರಾಣ ಉಳಿಸಿದ ರಾಹಿಲನನ್ನು ರಕ್ಷಿಸಲು ಮುದುಕಿಯ ಉಪಾಯ ಮತ್ತು ಮಾನವೀಯತಾ ಗುಣ ಇಲ್ಲಿ ವ್ಯಕ್ತವಾಗಿದೆ.

**ಉ) ಕೊಟ್ಟಿರುವ ನಾಲ್ಕು ಉತ್ತರಗಳಲ್ಲಿ ಸರಿಯಾದ ಉತ್ತರವನ್ನು ಆರಿಸಿ ಬರೆಯಿರಿ.**

೧. ರಾಹಿಲನ ದೇಹದಲ್ಲಿ ________ ಸಂಚಾರವಾದಂತಾಯಿತು. **ಉತ್ತರ: ಇ) ಹೊಸರಕ್ತ**

೨. ನರಳಾಟದ ಬೆನ್ನಲ್ಲೇ ಹಿರಿಯ ಹೆಂಗಸೊಬ್ಬಳ__________ಕೇಳಿ ಬಂತು. **ಉತ್ತರ: ಈ) ಸಾಂತ್ವನ**

೩. ಮುದುಕಿ ಮತ್ತು ಸೊಸೆಯ ಮನೆಯ ಮೂಲೆ ಮೂಲೆಗಳಲ್ಲೂ ಪ್ರತಿಧ್ವನಿಸಿತು. **ಉತ್ತರ: ಇ) ರೋದನ**

೪. ಯಾರಾದರೂ ಗಾಯಗೊಂಡ_________ಈ ಕಡೆ ಬಂದಿದ್ದಾರೆಯೇ? **ಉತ್ತರ: ಆ) ಸೈನಿಕರು**

೫. ಮನೆಯಲ್ಲೊಂದು ಪುಟ್ಟ ಮಗುವಿನ ಅಳು ಕೇಳಲು ನನ್ನ_________ತುದಿಗಾಲಲ್ಲಿ ನಿಂತು ಕಾಯುತ್ತಿದ್ದನು. **ಉತ್ತರ: ಈ) ಮಗನು**

## ಭಾಷಾ ಚಟುವಟಿಕೆ

**೧. ಕೊಟ್ಟಿರುವ ಪದಗಳಲ್ಲಿ ವಿಜಾತೀಯ ಸಂಯುಕ್ತಾಕ್ಷರಗಳನ್ನು ಆರಿಸಿ ಬರೆಯಿರಿ.**

**ಉತ್ತರ:** ವಿಜಾತೀಯ ಸಂಯುಕ್ತಾಕ್ಷರಗಳು: ಕಾರ್ಯ, ಶಸ್ತ್ರ, ಸ್ಫೋಟಿಸು, ಅದ್ಭುತ, ಡಾಕ್ಟರ್ (ರ್ಯ, ಸ್ತ್ರ, ಸ್ಫೋ, ದ್ಭು, ಕ್ಟ)

**೨. ನೀಡಿರುವ ಪದಗಳಲ್ಲಿ ಅವರ್ಗೀಯ ವ್ಯಂಜನಾಕ್ಷರಗಳನ್ನು ಆರಿಸಿ ಬರೆಯಿರಿ.**

**ಉತ್ತರ: ಅವರ್ಗೀಯ ವ್ಯಂಜನಾಕ್ಷರಗಳು:** ಸ, ಶ, ಯ, ರೊ, ಳಿ, ಲ, ವೆ, ಷ, ಹೊ, ಳ

**೩. ಈ ಪಾಠದಲ್ಲಿ ಬರುವ ಇಂಗ್ಲಿಷ್ ಪದಗಳನ್ನು ಪಟ್ಟಿ ಮಾಡಿ.**

**ಇಂಗ್ಲಿಷ್ ಪದಗಳು:** ಡಾಕ್ಟರ್, ರೇಡಿಯೋ, ಗ್ರೌಂಡಿ, ಪೈಲಟ್, ಬ್ಲಾಕ್ ಔಟ್, ಪ್ಲೀಸ್

**೪. ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ನಾಲ್ಕನೆಯ ಪದವನ್ನು ಬರೆಯಿರಿ.**

ಅ) ಕ್, ಗ್ : ಅಲ್ಪಪ್ರಾಣಾಕ್ಷರಗಳು : : ಛ್, ಝ್ : **ಮಹಾಪ್ರಾಣಾಕ್ಷರಗಳು**

ಆ) ವರ್ಗೀಯ ವ್ಯಂಜನಾಕ್ಷರಗಳು : ೨೫ : : ಅವರ್ಗೀಯ ವ್ಯಂಜನಾಕ್ಷರಗಳು : **೩೪**

ಇ) ಆ, ಈ, ಊ : ದೀರ್ಘಸ್ವರಗಳು : : ಅ, ಇ, ಉ, ಋ : **ಹ್ರಸ್ವಸ್ವರ**

ಈ) ಸ್ವರಗಳು : ೧೩ : : ಯೋಗವಾಹಗಳು : **೨**

# ಪದ್ಯ – ೨ ಹಕ್ಕಿ ಹಾರುತಿದೆ ನೋಡಿದಿರಾ

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಹಕ್ಕಿ ಯಾವ ವೇಗದಲ್ಲಿ ಹಾರುತ್ತಿದೆ?**

ಉ: ಹಕ್ಕಿಯು **ಎವೆ ತೆರೆದಿಕ್ಕುವ ಹೊತ್ತಿನೊಳಗೆ ಅಂದರೆ ಕಣ್ಣು ರೆಪ್ಪೆ ಮಿಟಕಿಸುವಷ್ಟು ಸಮಯದಲ್ಲಿ (ನಿಮಿಷದಲ್ಲಿ) ಗಾವುದ ಗಾವುದ ಗಾವುದ ಮುಂದೆ** ಹಾರುತ್ತಿದೆ.

**೨. ಹಕ್ಕಿಯ ಗರಿಯಲ್ಲಿ ಯಾವ ಬಣ್ಣಗಳಿವೆ?** ಉ: ಹಕ್ಕಿಯ **ಗರಿಯಲ್ಲಿ ಕರಿ, ಬಿಳಿ ಕೆಂಪು, ಹೊನ್ನಿನ ಹೊಳೆಯುವ** ಬಣ್ಣಗಳಿವೆ.

**೩. ಹಕ್ಕಿಯು ಕಣ್ಣುಗಳು ಯಾವುವು?** ಉ: **ಸೂರ್ಯ ಚಂದ್ರರು** ಹಕ್ಕಿಯ ಕಣ್ಣುಗಳು.

**೪. ಹಕ್ಕಿಯು ಯಾರ ನೆತ್ತಿಯನ್ನು ಕುಕ್ಕಿದೆ?** ಉ: ಹಕ್ಕಿಯು **ಸಾರ್ವಭೌಮರ** ನೆತ್ತಿಯನ್ನು ಕುಕ್ಕಿದೆ.

**೫. ಹಕ್ಕಿ ಯಾರನ್ನು ಹರಸಿದೆ?** ಉ: ಹಕ್ಕಿಯು **ಹೊಸಗಾಲದ ಹಸುಮಕ್ಕಳನ್ನು** ಹರಸಿದೆ.

**೬. ಹಕ್ಕಿಯು ಯಾವುದರ ಸಂಕೇತವಾಗಿದೆ?** ಉ: ಹಕ್ಕಿಯು **ಕಾಲಪಕ್ಷಿಯ** ಸಂಕೇತವಾಗಿದೆ.

**೭. ಹಕ್ಕಿಯ ಚುಂಚಗಳು ಎಲ್ಲಿಯ ವರೆಗೂ ಚಾಚಿವೆ?** ಉ: ಹಕ್ಕಿಯ ಚುಂಚಗಳು ದಿಗ್ಮಂಡಲಗಳ ಅಂಚಿನ ಆಚೆಗೂ ಚಾಚಿದೆ.

**ಆ] ಮೂರು ನಾಲ್ಕು ವಾಕ್ಯಗಳಲ್ಲಿ ಉತ್ತರಿ.**

**೧. ಹಕ್ಕಿಯ ಹಾರಾಟವನ್ನು ಆಕಾಶಕ್ಕೆ ಹೇಗೆ ಹೋಲಿಸಿದ್ದಾರೆ?**

ತರತಮರಹಿತ ಸಮದೃಷ್ಟಿಯಿಂದ ಕೂಡಿದ ನೀಲಮೇಘಮಂಡಲ – ಸಮಬಣ್ಣ ಎಂದು ಹೇಳಿ ಕಾಲದ ದೈತ್ಯತೆಯನ್ನು ಸಂಕೇತಿಸುವ ಕವಿ ಮುಗಿಲಿಗೆ ರೆಕ್ಕೆಗಳು ಮೂಡಿ ಇಡೀ ಆಕಾಶವೇ ಹಾರಿದಂತೆ ಆಗುತ್ತದೆ ಎನ್ನುತ್ತಾರೆ. ನಕ್ಷತ್ರ ಮಾಲೆಯನ್ನು ಧರಿಸಿಕೊಂಡು, ಸೂರ್ಯ ಚಂದ್ರರನ್ನು ಕಣ್ಣಾಗಿಸಿಕೊಂಡು ಹಕ್ಕಿಯು ಹಾರಾಡುತ್ತಿರುವ ನೋಟ ಅದ್ಭುತವಾದುದು ಎಂದು ಕವಿ ಬೇಂದ್ರೆ ವರ್ಣಿಸುತ್ತಾರೆ.

**೨. ಹೊಸಗಾಲದ ಹಸುಮಕ್ಕಳನ್ನು ಹಕ್ಕಿ ಹೇಗೆ ಹರಸಿದೆ?**

ಹಕ್ಕಿಯು (ಕಾಲಪಕ್ಷಿಯು) ಯುಗಯುಗಗಳ ಆಗುಹೋಗುಗಳನ್ನು ಹಿಂದಕ್ಕೆ ತಳ್ಳುತ್ತ, ಹೊಸ ಮನ್ವಂತರದ ಪರಿವರ್ತನೆಗೆ/ ಪ್ರಗತಿಗೆ ಕಾರಣವಾಗಿದೆ. ಹಕ್ಕಿಯು (ಕಾಲಪಕ್ಷಿಯು) ತನ್ನ ರೆಕ್ಕೆಗಳನ್ನು ಬೀಸುವ ಮೂಲಕ ಭೂಮಂಡಲದ ಜೀವಿಗಳಿಗೆ ಚೈತನ್ಯ ನೀಡಿ, ಹೊಸಗಾಲದ ಹಸುಮಕ್ಕಳನ್ನು ಹರಸಿ, ಉತ್ತಮ ಭವಿಷ್ಯಕ್ಕಾಗಿ ಶುಭ ಹಾರೈಸುತ್ತಿದೆ ಎಂದು ಕವಿಗಳು ವರ್ಣಿಸುತ್ತಾರೆ.

**೩. ಹಕ್ಕಿಯು ಯಾವ ಮೇರೆ ಮೀರಿ, ನೀರನು ಹೀರಿದೆ?**

ಹಕ್ಕಿಯು ಬೆಳ್ಳಿಯ ಹಳ್ಳಿಯ ಮೇರೆಯನ್ನು ಅಂದರೆ ನಕ್ಷತ್ರಗಳ ಗಡಿಯನ್ನು ಮೀರಿ ತಿಂಗಳಿನೂರಿನ (ಚಂದ್ರ ಲೋಕದ) ನೀರನ್ನು ಹೀರಿದೆ. ಕವಿ ಇಲ್ಲಿ ಕಾಲವು ಬಹು ವೇಗವಾಗಿ ಮುಂದುವರೆಯುತ್ತಿದ್ದು ವಿಜ್ಞಾನ ಬೆಳೆದು ಭೂಮಂಡಲದ ಆಚೆಗೆ ಚಂದ್ರಲೋಕಕ್ಕೂ ಹೋಗಿರುವುದನ್ನು 'ತಿಂಗಳೊನೂರಿನ ನೀರನ್ನು ಹೀರಿ' ಎಂದಿದ್ದಾರೆ.

**ಇ] ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಹಕ್ಕಿಯನ್ನು ಕಾಲಗತಿಗೆ ಹೋಲಿಸುತ್ತಾ ಕವಿ ಹೇಳಿರುವ ಮಾತುಗಳಾವುವು?**

ದ.ರಾ.ಬೇಂದ್ರೆ ಅವರು 'ಹಕ್ಕಿ ಹಾರುತ್ತಿದೆ ನೋಡಿದಿರಾ' ಕವನದಲ್ಲಿ ಚಲನಶೀಲವಾದ ಕಾಲವನ್ನು ಹಾರುತ್ತಿರುವ ಹಕ್ಕಿಗೆ ಹೋಲಿಸಿ ವರ್ಣಿಸಿದ್ದಾರೆ.

ಹಲವು ಇರುಳುಗಳು ಅಳಿದು ದಿನ ದಿನಗಳು ಬೆಳಗಿ ಸುತ್ತಮುತ್ತಲೂ ಮೇಲೆ ಕೆಳಗೆ ಕಣ್ಣು ರೆಪ್ಪೆ ಮಿಟುಕಿಸುವಷ್ಟು ವೇಗದಲ್ಲಿ ಕಾಲಪಕ್ಷಿಯು ದೂರದೂರ ಮುಂದೆ ಸಾಗುತ್ತಿದೆ. ಕಾಲಪಕ್ಷಿಗೆ ಕರಿನರೆ ಬಣ್ಣದ ಪುಚ್ಚಗಳು (ಬಾಲ) ಉಂಟು, ಬಿಳಿಹೊಳೆ ಬಣ್ಣದ ಗರಿ ಉಂಟು, ಕೆನ್ನನ ಹೊನ್ನನ ಬಣ್ಣಗಳ ರೆಕ್ಕೆಗಳು ಎರಡೂ ಪಕ್ಕದಲ್ಲಿ ಉಂಟು ಅಂದರೆ ಇಲ್ಲಿ ಕವಿಗಳು ಕಾಲದ ಮೂರು ಅವಸ್ಥೆಗಳನ್ನು ಬಣ್ಣಗಳ ಹೋಲಿಕೆಯ ಮುಖಾಂತರ ಬಹುಸ್ವಾರಸ್ಯವಾಗಿ ವರ್ಣಿಸುತ್ತಾರೆ.

ತರತಮರಹಿತ ಸಮದೃಷ್ಟಿಯಿಂದ ಕೂಡಿದ ನೀಲಮೇಘಮಂಡಲ – ಸಮಬಣ್ಣದಂತೆ, ಅನಂತ ಆಕಾಶದಲ್ಲಿರುವ ಮುಗಿಲಿಗೆ ರೆಕ್ಕೆಗಳು ಮೂಡಿದಂತೆ, ನಕ್ಷತ್ರ ಮಾಲೆಯನ್ನು ಧರಿಸಿಕೊಂಡು, ಸೂರ್ಯ ಚಂದ್ರರನ್ನು ಕಣ್ಣಾಗಿಸಿಕೊಂಡು ಹಕ್ಕಿಯು ಹಾರಾಡುತ್ತಿರುವ ನೋಟ ಅದ್ಭುತವಾದುದು ಎಂದು ಕವಿಗಳು ವರ್ಣಿಸುತ್ತಾರೆ.

ಕಾಲಪಕ್ಷಿಯು ತನ್ನ ಪಯಣದಲ್ಲಿ ಅನೇಕ ರಾಜಮನೆತನಗಳನ್ನು, ಸಾಮ್ರಾಜ್ಯಗಳನ್ನು ಬೆಳೆಯಿಸಿದೆ, ಅನೇಕ ರಾಜ್ಯ–ಸಾಮ್ರಾಜ್ಯ, ಕೋಟೆ–ಕೊತ್ತಲಗಳನ್ನು ನಾಶಗೊಳಿಸಿದೆ. ತನ್ನ ಪಯಣದಲ್ಲಿ ಭೂಮಂಡಲದ ಮೇಲಿರುವ ಖಂಡಗಳನ್ನು ತೇಲಿಸಿ, ಮುಳುಗಿ ಪ್ರಾಕೃತಿಕ ಬದಲಾವಣೆಗಳಿಗೂ ಕಾರಣವಾಗಿದೆ. ಕಾಲಪಕ್ಷಿಯು ಸಾರ್ವಭೌಮರೆಂದು ಮೆರೆಯುತ್ತಿದ್ದ ಸಾಮ್ರಾಟರ ನೆತ್ತಿಯನ್ನು ಕುಕ್ಕಿ ಅವರ ಅಹಂಕಾರವನ್ನು ಮೆಟ್ಟಿ ನಿಂತಿದೆ. ಅದು ಯುಗಯುಗಗಳ ಆಗುಹೋಗುಗಳನ್ನು ಹಿಂದಕ್ಕೆ ತಳ್ಳುತ್ತ, ಹೊಸ ಮನ್ವಂತರದ ಪರಿವರ್ತನೆಗೆ/ಪ್ರಗತಿಗೆ ಕಾರಣವಾಗಿದೆ. ತನ್ನ ರೆಕ್ಕೆಗಳನ್ನು ಬೀಸುವ ಮೂಲಕ ಭೂಮಂಡಲದ ಜೀವಿಗಳಿಗೆ ಚೈತನ್ಯ ನೀಡಿ, ಮುಂದಿನ ಜನಾಂಗದ ಮಕ್ಕಳನ್ನು ಹರಸಿ, ಉತ್ತಮ ಭವಿಷ್ಯಕ್ಕಾಗಿ ಶುಭ ಹಾರೈಸುತ್ತಿದೆ ಎಂದು ಕವಿಗಳು ವರ್ಣಿಸುತ್ತಾರೆ.

**ಈ] ಸಂದರ್ಭದೊಂದಿಗೆ ಸ್ವಾರಸ್ಯವನ್ನು ವಿವರಿಸಿ.**

**೧. "ರೆಕ್ಕೆಗಳೆರಡೂ ಪಕ್ಕದಲುಂಟು"**

**ಆಯ್ಕೆ:–** ಈ ವಾಕ್ಯವನ್ನು **'ಅಂಬಿಕಾತನಯದತ್ತ'** ಎಂಬ ಕಾವ್ಯನಾಮದಿಂದ ಪ್ರಸಿದ್ಧರಾದ **ದ.ರಾ.ಬೇಂದ್ರೆ** ಅವರು ರಚಿಸಿರುವ **'ಗರಿ'** ಕವನ ಸಂಕಲನದಿಂದ ಆಯ್ದ **'ಹಕ್ಕಿ ಹಾರುತಿದೆ ನೋಡಿದಿರಾ'** ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ಕವಿ ದ.ರಾ.ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಗೆ ಸಮೀಕರಿಸಿ ವರ್ಣಿಸುವ ಸಂದರ್ಭದಲ್ಲಿ ಕಾಲಪಕ್ಷಿಯ ರೂಪವನ್ನು ತಿಳಿಸುತ್ತಾ ಅದರ ಎರಡೂ ಕಡೆ ಕೆನ್ನನೆ ಮತ್ತು ಹೊನ್ನನೆ ಬಣ್ಣದ ಎರಡು ರೆಕ್ಕೆಗಳಿವೆ ಎಂದು ವಣಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳಿದ್ದಾರೆ.

**ಸ್ವಾರಸ್ಯ:–** ಕಾಲದ ಹಕ್ಕಿಗೆ ಸುರ್ಯೋದಯ (ಹೊನ್ನನೆ) ಮತ್ತು ಸೂರ್ಯಾಸ್ತ (ಕೆನ್ನನೆ) ಎಂಬ ಎರಡು ರೆಕ್ಕೆಗಳಿವೆ ಎಂಬುದು ಕಾಲದ ಚಲನೆಗೆ ಸೂಕ್ತವಾದ ಕಲ್ಪನೆಯಾಗಿದ್ದು ಸ್ವಾರಸ್ಯಪೂರ್ಣವಾಗಿದೆ.

೨. **"ಸಾರ್ವಭೌಮರ ನೆತ್ತಿಯ ಕುಕ್ಕಿ"**

**ಆಯ್ಕೆ:–** ಈ ವಾಕ್ಯವನ್ನು **'ಅಂಬಿಕಾತನಯದತ್ತ'** ಎಂಬ ಕಾವ್ಯನಾಮದಿಂದ ಪ್ರಸಿದ್ಧರಾದ **ದ.ರಾ.ಬೇಂದ್ರೆ** ಅವರು ರಚಿಸಿರುವ **'ಗರಿ'** ಕವನ ಸಂಕಲನದಿಂದ ಆಯ್ದ **'ಹಕ್ಕಿ ಹಾರುತಿದೆ ನೋಡಿದಿರಾ'** ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ಕವಿ ದ.ರಾ.ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಗೆ ಸಮೀಕರಿಸಿ ವರ್ಣಿಸುವ ಸಂದರ್ಭದಲ್ಲಿ ಕಾಲಪಕ್ಷಿಯು ಸಾರ್ವಭೌಮರೆಂದು ಮೆರೆಯುತ್ತಿದ್ದ ಸಾಮ್ರಾಟರ ನೆತ್ತಿಯನ್ನು ಕುಕ್ಕಿ ಅವರ ಅಹಂಕಾರವನ್ನು ಮೆಟ್ಟಿ ನಿಂತಿದೆ ಎಂಬ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ಕಾಲದ ಗತಿಯಲ್ಲಿ ವೈಭವದಿಂದ, ಅಹಂಕಾರದಿಂದ ಮೆರೆದ ಸಾರ್ವಭೌಮರೆಲ್ಲರೂ ನಾಮಾವಶೇಷವಾಗಿದ್ದಾರೆ ಎಂಬುದನ್ನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

೩. **"ಬಲ್ಲರು ಯಾರಾ ಹಾಕಿದ ಹೊಂಚ"**

**ಆಯ್ಕೆ:–** ಈ ವಾಕ್ಯವನ್ನು **'ಅಂಬಿಕಾತನಯದತ್ತ'** ಎಂಬ ಕಾವ್ಯನಾಮದಿಂದ ಪ್ರಸಿದ್ಧರಾದ **ದ.ರಾ.ಬೇಂದ್ರೆ** ಅವರು ರಚಿಸಿರುವ **'ಗರಿ'** ಕವನ ಸಂಕಲನದಿಂದ ಆಯ್ದ **'ಹಕ್ಕಿ ಹಾರುತಿದೆ ನೋಡಿದಿರಾ'** ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ :–** ಕವಿ ದ.ರಾ.ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಗೆ ಸಮೀಕರಿಸಿ ವರ್ಣಿಸುವ ಸಂದರ್ಭದಲ್ಲಿ ಕಾಲಪಕ್ಷಿಯು ಹಾರುತ್ತಾ ದಿಗ್ಮಂಡಲಗಳ ಅಂಚಿನ ಆಚೆಗೂ ತನ್ನ ಕೊಕ್ಕನ್ನು ಚಾಚಿ ಇಡೀ ಬ್ರಹ್ಮಾಂಡಗಳನ್ನು ಒಡೆಯುವುದಕ್ಕೆಂಬಂತೆ ಹಾರುತ್ತಿದೆ. ಅದರ ಸಂಚನ್ನು ಬಲ್ಲವರಾರು! ಎಂದು ವಿಸ್ಮಯದಿಂದ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ಕಾಲದ ವೇಗ ವಿಸ್ತಾರವನ್ನೂ ಅದು ಉಂಟುಮಾಡಬಹುದಾದ ಪರಿಣಾಮವನ್ನೂ ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

೪. **"ಹೊಸಗಾಲದ ಹಸುಮಕ್ಕಳ ಹರಸಿ"**

**ಆಯ್ಕೆ:–** ಈ ವಾಕ್ಯವನ್ನು **'ಅಂಬಿಕಾತನಯದತ್ತ'** ಎಂಬ ಕಾವ್ಯನಾಮದಿಂದ ಪ್ರಸಿದ್ಧರಾದ **ದ.ರಾ.ಬೇಂದ್ರೆ** ಅವರು ರಚಿಸಿರುವ **'ಗರಿ'** ಕವನ ಸಂಕಲನದಿಂದ ಆಯ್ದ **'ಹಕ್ಕಿ ಹಾರುತಿದೆ ನೋಡಿದಿರಾ'** ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ :–** ಕವಿ ದ.ರಾ.ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಗೆ ಸಮೀಕರಿಸಿ ವರ್ಣಿಸುವ ಸಂದರ್ಭದಲ್ಲಿ ಕಾಲಪಕ್ಷಿಯು ತನ್ನ ರೆಕ್ಕೆಗಳನ್ನು ಬೀಸುವ ಮೂಲಕ ಭೂಮಂಡಲದ ಜೀವಿಗಳಿಗೆ ಚೈತನ್ಯ ನೀಡಿ, ಮುಂದಿನ ಜನಾಂಗದ ಮಕ್ಕಳನ್ನು ಹರಸಿ, ಉತ್ತಮ ಭವಿಷ್ಯಕ್ಕಾಗಿ ಶುಭ ಹಾರೈಸುತ್ತಿದೆ ಎಂಬ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ಕಾಲಪಕ್ಷಿಯು ಯುಗಯುಗದಲ್ಲೂ ಜನರಿಗೆ ಚೈತನ್ಯವನ್ನು ತುಂಬಿ ಮುಂದಿನ ಜನಾಂಗವನ್ನು ಹರಸುತ್ತಿದೆ ಎಂಬುದನ್ನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

೫. **"ಮಂಗಳ ಲೋಕದ ಅಂಗಳಕೇರಿ"**

**ಆಯ್ಕೆ:–** ಈ ವಾಕ್ಯವನ್ನು **'ಅಂಬಿಕಾತನಯದತ್ತ'** ಎಂಬ ಕಾವ್ಯನಾಮದಿಂದ ಪ್ರಸಿದ್ಧರಾದ **ದ.ರಾ.ಬೇಂದ್ರೆ** ಅವರು ರಚಿಸಿರುವ **'ಗರಿ'** ಕವನ ಸಂಕಲನದಿಂದ ಆಯ್ದ **'ಹಕ್ಕಿ ಹಾರುತಿದೆ ನೋಡಿದಿರಾ'** ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ:–** ಕವಿ ದ.ರಾ.ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಗೆ ಸಮೀಕರಿಸಿ ವರ್ಣಿಸುತ್ತಾ ; ಕಾಲಪಕ್ಷಿಯು 'ನಕ್ಷತ್ರಗಳನ್ನು ಮೀರಿ; ಚಂದ್ರಲೋಕದ ನೀರನ್ನು ಹೀರಿ; ಆಟವಾಡಲು ಹಾರಾಡಲು ಮಂಗಳ ಲೋಕದ ಅಂಗಳಕ್ಕೇರಿದೆ' ಎಂದು ವರ್ಣಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ವೇಗದ ಕಾಲಗತಿಯಲ್ಲಿ ಮಾನವನು ವೈಜ್ಞಾನಿಕವಾಗಿ ಮುಂದುವರೆಯುತ್ತಾ ಚಂದ್ರ, ಮಂಗಳ ಗ್ರಹ ಮುಂತಾದ ಆಕಾಶ ಕಾಯಗಳೆಡೆಗೆ ಹಾರುತ್ತಿರುವುದನ್ನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

## ಭಾಷಾ ಚಟುವಟಿಕೆ

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರಿಸಿ.**

**೧. ಕೊಟ್ಟಿರುವ ಪದಗಳ ಸಮಾನಾರ್ಥಕ ಪದ ಬರೆಯಿರಿ.**

**ಸೂರ್ಯ** = ರವಿ, ಭಾನು, ಭಾಸ್ಕರ, ಅರ್ಕ  **ಎದೆ** = ಹೃದಯ, ಗುಂಡಿಗೆ, ಉರ  **ಮೇಘ** = ಮೋಡ, ಮುಗಿಲು

**ಗಡ** = ಸಣ್ಣ ಕೋಟೆ  **ಹರಸು** = ಶುಭಕೋರು, ಹಾರೈಸು

**ಒಕ್ಕಿ** = ಒಕ್ಕಣೆ ಮಾಡಿ, ತೆನೆಯಿಂದ ಕಾಳನ್ನು ಬೇರ್ಪಡಿಸಿ  **ಕೆನ್ನ** = ಕೆಂಪು

**೨. ಕೊಟ್ಟಿರುವ ಪದಗಳಿಗೆ ತತ್ಸಮ–ತದ್ಭವ ಬರೆಯಿರಿ.**

ಬಣ್ಣ – ವರ್ಣ, ಬ್ರಹ್ಮ – ಬೊಮ್ಮ, ಚಂದ್ರ – ಚಂದಿರ, ಯುಗ – ಜುಗ, ಅಂಗಳ – ಅಂಕಣ

**೩. ಕೊಟ್ಟಿರುವ ಪದಗಳನ್ನು ಸಂಧಿ ಬಿಡಿಸಿ, ಹೆಸರಿಸಿ.**

ಇರುಳಳಿದು = ಇರುಳು + ಅಳಿದು – ಲೋಪಸಂಧಿ  ತೆರೆದಿಕ್ಕುವ = ತೆರೆದು + ಇಕ್ಕುವ – ಲೋಪಸಂಧಿ

ಹೊಸಗಾಲ = ಹೊಸ + ಕಾಲ – ಆದೇಶ ಸಂಧಿ (ಗದಬಾದೇಶ)  ದಿಗ್ಮಂಡಲ = ದಿಕ್ + ಮಂಡಲ – ಜಶ್ತ್ವ ಸಂಧಿ

ತಿಂಗಳಿನೂರು = ತಿಂಗಳಿನ + ಊರು – ಲೋಪಸಂಧಿ

ಆ) ಕೊಟ್ಟಿರುವ ಅವ್ಯಯ ಪದಗಳು ಯಾವ ಯಾವ ಅವ್ಯಯಕ್ಕೆ ಸೇರಿವೆ ಎಂಬುದನ್ನು ಗುರುತಿಸಿ.

**ಸಾಮಾನ್ಯಾರ್ಥಕಾವ್ಯಯ:** ಬೇಗನೆ, ಮೆಲ್ಲಗೆ,
**ಅನುಕರಣಾವ್ಯಯ:** ಧಗಧಗ, ರೊಯ್ಯನೆ,
**ಭಾವಸೂಚಕಾವ್ಯಯ:** ಅಯ್ಯೋ, ಓಹೋ
**ಕ್ರಿಯಾರ್ಥಕಾವ್ಯಯ:** ಸಾಕು, ಹೌದು,
**ಸಂಬಂಧಾರ್ಥಕಾವ್ಯಯ:** ಆದ್ದರಿಂದ, ಅಲ್ಲದೆ.
**ಅವಧಾರಣಾರ್ಥಕಾವ್ಯಯ:** ಅದುವೇ, ನೀನೇ

## ಭಾಗ–ಬಿ

**ಅ] ಬಹು ಆಯ್ಕೆ ಪ್ರಶ್ನೆಗಳು;–**

**೧. 'ಸೂರ್ಯ' ಇದರ ಸಮಾನಾರ್ಥಕ ಪದ :**
ಅ) ಚಂದ್ರ ಆ) ಆಕಾಶ ಇ) ನೇಸರ ಈ) ಭೂಮಿ

**೨. 'ಕೆನ್ನ' ಇದರ ಸಮಾನಾರ್ಥಕ ರೂಪ :**
ಅ) ಚಿನ್ನ ಆ) ಚೆನ್ನ ಇ) ಹಳದಿ ಈ) ಕೆಂಪು

**೩. 'ಹಕ್ಕಿ' ಇದರ ತತ್ಸಮ ರೂಪ :**
ಅ) ಪ್ರಾಣಿ ಆ) ಪಕ್ಷಿ ಇ) ಗಿಳಿ ಈ) ಪಂಜರ

**೪. 'ಹೊಸಗಾಲ' ಪದದಲ್ಲಿರುವ ಸಂಧಿ :**
ಅ) ಲೋಪಸಂಧಿ ಆ) ಆದೇಶಸಂಧಿ ಇ) ಆಗಮಸಂಧಿ ಈ) ಗುಣಸಂಧಿ

**೫. 'ತೆರೆದಿಕ್ಕುವ' ಪದದಲ್ಲಿರುವ ಸಂಧಿ :**
ಅ) ಯಣ್‌ಸಂಧಿ ಆ) ಗುಣಸಂಧಿ ಇ) ಲೋಪಸಂಧಿ ಈ) ಆದೇಶಸಂಧಿ

**೬. 'ಇರುಳಿರುಳಳಿದು' ಪದದಲ್ಲಿರುವ ವ್ಯಾಕರಣಾಂಶ :**
ಅ) ಜೋಡಿಪದ ಆ) ಅನುಕರಣಾವ್ಯಯ ಇ) ದ್ವಿರುಕ್ತಿ ಈ) ಸಮಾರ್ಥಕಪದ

**೭. ನಾಮಪದ ಕ್ರಿಯಾಪದಗಳಂತೆ ಲಿಂಗ, ವಚನ, ವಿಭಕ್ತಿಗಳಿಂದ ರೂಪ ಭೇದ ಹೊಂದದೆ ಏಕರೂಪವಾಗಿರುವ ಪದಗಳೇ**
ಅ) ಕ್ರಿಯಾಪದಗಳು ಆ) ಕೃದಂತಗಳು ಇ) ದ್ವಿರುಕ್ತಿಗಳು ಈ) ಅವ್ಯಯಗಳು

**೮. ' ಮೆಲ್ಲಗೆ ' ಇದು ಈ ಅವ್ಯಯ ಪದವಾಗಿದೆ :**
ಅ) ಸಾಮಾನ್ಯ ಆ) ಅನುಕರಣ ಇ) ಭಾವಸೂಚಕ ಈ) ಸಂಬಂಧಾರ್ಥಕ

**೯. ಧಗಧಗ, ಕರಕರ, ರೊಯ್ಯನೆ , ದಡದಡ ಇವು ಈ ಅವ್ಯಯಕ್ಕೆ ಉದಾಹರಣೆಗಳು :**
ಅ) ಭಾವಸೂಚಕ ಆ) ಸಾಮಾನ್ಯ ಇ) ಅನುಕರಣ ಈ) ಸಂಬಂಧಾರ್ಥಕ

**೧೦. ಆಹಾ! ಅಯ್ಯೋ! ಓಹೋ! ಭಲರೆ! – ಇವು ಈ ಅವ್ಯಯಕ್ಕೆ ಉದಾಹರಣೆಗಳು :**
ಅ) ಸಾಮಾನ್ಯ ಆ) ಸಂಬಂಧಾರ್ಥಕ ಇ) ಭಾವಸೂಚಕ ಈ) ಅನುಕರಣ

**೧೧. ಮುಗಿಲಿಗೆ ರೆಕ್ಕೆಗಳೊಡೆದವೊ ಅಣ್ಣಾ – ಇಲ್ಲಿರುವ ಅಲಂಕಾರ :**
ಅ) ಉಪಮ ಆ) ಉತ್ಪ್ರೇಕ್ಷೆ ಇ) ರೂಪಕ ಈ) ದೃಷ್ಟಾಂತ

**೧೨. 'ಸೂರ್ಯಚಂದ್ರರು' – ಇಲ್ಲಿರುವ ಸಮಾಸ :**
ಅ) ತತ್ಪುರುಷಸಮಾಸ ಆ) ದ್ವಂದ್ವಸಮಾಸ ಇ) ದ್ವಿಗುಸಮಾಸ ಈ) ಗಮಕಸಮಾಸ

[ಉತ್ತರಗಳು : **೧. ಇ) ನೇಸರ ೨. ಈ) ಕೆಂಪು ೩. ಆ) ಪಕ್ಷಿ ೪. ಆ) ಆದೇಶಸಂಧಿ ೫. ಇ)ಲೋಪಸಂಧಿ**
**೬. ಇ) ದ್ವಿರುಕ್ತಿ ೭. ಈ) ಅವ್ಯಯಗಳು ೮. ಅ)ಸಾಮಾನ್ಯಾವ್ಯಯ ೯. ಇ) ಅನುಕರಣಾವ್ಯಯ**
**೧೦. ಇ) ಭಾವಸೂಚಕಾವ್ಯಯ ೧೧. ಆ) ಉತ್ಪ್ರೇಕ್ಷೆ ೧೨. ಆ) ದ್ವಂದ್ವಸಮಾಸ.**]

**ಆ] ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ಪದವನ್ನು ಬರೆಯಿರಿ.**

| | | | | |
|---|---|---|---|---|
| ೧. ಧಗಧಗ | : ಅನುಕರಣಾವ್ಯಯ | : : ನೆರೆಹೊರೆ | : | ____________ |
| ೨. ಗಡ | : ಸಣ್ಣಕೋಟೆ | : : ಎವೆ | : | ____________ |
| ೩. ಹೊಸಗಾಲ | : ಆದೇಶ ಸಂಧಿ | : : ಮನ್ವಂತರ | : | ____________ |
| ೪. ಖಂಡಖಂಡ | : ದ್ವಿರುಕ್ತಿ | : : ಸುತ್ತಮುತ್ತ | : | ____________ |
| ೫. ಸಾಕು | : ಕ್ರಿಯಾರ್ಥಕ ಅವ್ಯಯ | : : ಅವನೇ | : | ____________ |
| ೬. ಅವನು | : ಏಕವಚನ | : : ಅವರು | : | ____________ |
| ೭. ರೆಕ್ಕೆಯ | : ಷಷ್ಠಿವಿಭಕ್ತಿ | : : ಮಕ್ಕಳನ್ನು | : | ____________ |

**ಉತ್ತರಗಳು : ೧) ಜೋಡಿಪದ ೨) ಕಣ್ಣರೆಪ್ಪೆ ೩) ಯಣ್‌ಸಂಧಿ ೪) ಜೋಡಿಪದ ೫) ಅವಧಾರಣಾರ್ಥಕಾವ್ಯಯ**
**೬) ಬಹುವಚನ ೭) ದ್ವಿತೀಯ ವಿಭಕ್ತಿ**

# 'ಹಕ್ಕಿಹಾರುತಿದೆ ನೋಡಿದಿರಾ' – ಪದ್ಯದ ವ್ಯಾಕರಣಾಂಶಗಳು :

**ಪದಗಳ ಅರ್ಥ :** **ನರೆ** – ಬಿಳಿಬಣ್ಣ , **ಹೊನ್ನ**– ಹಳದಿ, **ಮಂಡಲ** – ಭೂಮಂಡಲ , **ಪುಚ್ಚ** – ರೆಕ್ಕೆ, ಪುಕ್ಕ.
**ಮನ್ವಂತರ** –ಪರಿವರ್ತನೆಯ ಕಾಲ. **ಎವೆ** – ಕಣ್ಣ ರೆಪ್ಪೆ

**ಸಮಾನಾರ್ಥಕ ಪದಗಳು :** **ಸೂರ್ಯ** – ರವಿ, ಭಾನು, ಬಾಸ್ಕರ. **ಎದೆ** – ಹೃದಯ, **ಮೇಘ** – ಮೋಡ **ಗಡ** – ಸಣ್ಣಕೋಟೆ.
**ಹರಸು** – ಆಶೀರ್ವದಿಸು. **ಒಕ್ಕಿ** – ತೆನೆಯಿಂದ ಕಸಕಡ್ಡಿ ಬೇರ್ಪಡಿಸು. **ಕೆನ್ನ** – ಕೆಂಪು

**ತತ್ಸಮ –ತದ್ಭವಗಳು :**
**ಪಕ್ಷಿ(ನ್)** – ಪಕ್ಕಿ/ಹಕ್ಕಿ, **ಬ್ರಹ್ಮ** – ಬೊಮ್ಮ, **ಚಂದ್ರ** – ಚಂದಿರ, **ವರ್ಣ** – ಬಣ್ಣ,
**ಮಂಡಲ** – ಮಂಡಳ, **ಯುಗ** – ಜುಗ, **ಕಾವ್ಯ** – ಕಬ್ಬ, **ಧ್ವನಿ** – ದನಿ, **ಮಾಲಾ** – ಮಾಲೆ.

**ಸಂಧಿ ಪದಗಳು :**

| | | | |
|---|---|---|---|
| **ಇರುಳಳಿದು** | – | ಇರುಳು+ ಅಳಿದು | = ಲೋಪಸಂಧಿ ('ಉ'ಕಾರ ಲೋಪ) |
| **ತೆರೆದಿಕ್ಕುವ** | – | ತೆರೆದು+ ಇಕ್ಕುವ | = ಲೋಪಸಂಧಿ, ('ಉ'ಕಾರ ಲೋಪ) |
| **ಹೊಸಗಾಲ** | – | ಹೊಸ+ ಕಾಲ | = ಆದೇಶಸಂಧಿ |
| **ಗರಿಯುಂಟು** | – | ಗರಿ +ಉಂಟು | = ಆಗಮಸಂಧಿ ('ಯ' ಕಾರಾಗಮ) |
| **ಮನ್ವಂತರ** | – | ಮನು +ಅಂತರ | = ಯಣ್ ಸಂಧಿ |
| **ಇರುಳಿರುಳು** | – | ಇರುಳು+ಇರುಳು | = ಲೋಪಸಂಧಿ, ('ಉ'ಕಾರ ಲೋಪ) |

**ದ್ವಿರುಕ್ತಿಗಳು:** ದಿನದಿನ, ಇರುಳಿರುಳು, ಗಾವುದ ಗಾವುದ, ಬಣ್ಣಬಣ್ಣ , ಯುಗಯುಗ

**ಅವ್ಯಯಗಳು**

**ಸಾಮಾನ್ಯಾವ್ಯಯಗಳು** :– ಬೇಗನೆ, ಮೆಲ್ಲಗೆ, ಸೊಗಸಾಗಿ, ಸುಮ್ಮನೆ, ತಟ್ಟನೆ, ತರುವಾಯ, ಹಾಗೆ, ಅಂತು, ಬೇರೆ, ಬಳಿಕ, ಕೂಡಲೆ, ಚೆನ್ನಾಗಿ.
**ಅನುಕರಣಾವ್ಯಯ** :– ಚಟಚಟ, ಕರಕರ, ಚುರುಚುರು, ಧಗಧಗ, ರೊಯ್ಯನೆ, ಸುಯ್ಯನೆ, ಘುಳುಘುಳು, ದಡದಡ.
**ಭಾವಸೂಚಕಾವ್ಯಯ** :– ಆಹಾ! ಭಳಿರೆ! ಅಯ್ಯೋ! ಹೋ,! ಆಃ!, ಓ!
**ಸಂಬಂಧಾರ್ಥಕಾವ್ಯಯ** :– ಮತ್ತು, ಅಥವಾ, ಆದ್ದರಿಂದ, ಊ,ಊಂ, ಅಲ್ಲದೆ.
**ಕ್ರಿಯಾರ್ಥಕಾವ್ಯಯ** :– ಅಹುದು, ಸಾಕು, ಅಲ್ಲ, ಹೌದು, ಬೇಡ, ಉಂಟು.
**ಅವಧಾರಣಾರ್ಥಕಾವ್ಯಯ** :– ಅವನೇ, ಅದುವೇ, ನೀನೇ, ಅವಳೇ, ಅವರೇ

**ಗದ್ಯಪಾಠ–೨**
**ಶಬರಿ**

**ಲೇಖಕರ ಪರಿಚಯ:– ಪು. ತಿ. ನರಸಿಂಹಾಚಾರ್**

**ಪುರೋಹಿತ ತಿರುನಾರಾಯಣಯ್ಯಂಗಾರ್ಯ ನರಸಿಂಹಾಚಾರ್ಯ** ಅವರುಕ್ರಿ. ಶ. ೧೯೦೫ ರಲ್ಲಿ ಮಂಡ್ಯಜಿಲ್ಲೆಯ **ಮೇಲುಕೋಟೆ**ಯಲ್ಲಿ ಜನಿಸಿದರು. ಇವರು **ಶಬರಿ,** ಅಹಲ್ಯೆ, ಮೊದಲಾದ ಲಲಿತಪ್ರಬಂಧ ಕೃತಿಗಳನ್ನೂ ರಚಿಸಿದ್ದಾರೆ. ಶ್ರೀಯುತರ **'ಶ್ರೀ ಹರಿಚರಿತೆ'** ಕೃತಿಗೆ ಕರ್ನಾಟಕ ಸರ್ಕಾರದಿಂದ **'ಪಂಪ ಪ್ರಶಸ್ತಿ'** ನೀಡಿಗೌರವಿಸಲಾಗಿದೆ. ಶ್ರೀಯುತರಿಗೆ **'ಪಂಪ ಪ್ರಶಸ್ತಿ'** ಮತ್ತುಕೇಂದ್ರ ಹಾಗೂ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗಿದೆ.

**ಅ] ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

**೧. ಶ್ರೀ ರಾಮನತಂದೆಯ ಹೆಸರೇನು?**

ಶ್ರೀ ರಾಮನತಂದೆಯ ಹೆಸರು **ದಶರಥ.**

**೨. ಶ್ರೀರಾಮನಿಗೆ ಸಮರ್ಪಿಸಲು ಶಬರಿಏನನ್ನು ಸಂಗ್ರಹಿಸಿದ್ದಳು?**

ಶ್ರೀರಾಮನಿಗೆ ಸಮರ್ಪಿಸಲು ಶಬರಿ **ಪರಿಮಳದ ಹೂವು, ಮಧುಪರ್ಕ ಮತ್ತುರುಚಿಕರ ಹಣ್ಣುಹಂಪಲುಗಳನ್ನು** ಸಂಗ್ರಹಿಸಿದ್ದಳು.

**೩. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು?**

ಮತಂಗಾಶ್ರಮದಲ್ಲಿ ವಾಸವಿದ್ದ **ತಪಸ್ವಿನಿ ಶಬರಿ.**

**೪. ರಾಮಲಕ್ಷ್ಮಣರಿಗೆ ಮತಂಗಾಶ್ರಮಕ್ಕೆ ಹೋಗಲು ಸೂಚಿಸಿದವರು ಯಾರು?**

ರಾಮಲಕ್ಷ್ಮಣರಿಗೆ ಮತಂಗಾಶ್ರಮಕ್ಕೆ ಹೋಗಲು ಸೂಚಿಸಿದವರು **ದಂಡಕಾರಣ್ಯದಲ್ಲಿ ವಾಸಮಾಡುತ್ತಿದ್ದ ಕಬಂಧ ಎಂಬ ಹೆಸರಿನ ರಾಕ್ಷಸ. (ದನು ಎಂಬ ಋಷಿ)**

**೫. ಶಬರಿಗೀತನಾಟಕದಕರ್ತೃಯಾರು?**

ಶಬರಿಗೀತನಾಟಕದ ಕರ್ತೃ **ಪು.ತಿ.ನರಸಿಂಹಾಚಾರ್ಯ.**

**ಆ] ಮೂರು–ನಾಲ್ಕು ವಾಕ್ಯದಲ್ಲಿ ಉತ್ತರಿಸಿ.**

**೧. ರಾಮನು ಗಿರಿವನವನ್ನು ಏನೆಂದು ಪ್ರಾರ್ಥಿಸಿದನು?**

ರಾಮನು ಗಿರಿವನಗಳನ್ನು ಕುರಿತು "ಗಿರಿವನಗಳೇ ನಾನು ನಿಮ್ಮನ್ನು ಬೇಡಿಕೊಳ್ಳುವೆನು. ಹೇಳಿರಿ ಪ್ರೀತಿಯರಾಣಿ ಸೀತೆಯು ನನಗೆ ದೊರೆಯುವಳೇ? ಅವಳು ಇರುವ ಸ್ಥಳವನ್ನು ನೀವು ತಿಳಿದಿರುವಿರೇ? ನನ್ನ ಹೃದಯದ ಈ ದುಃಖವು ನಾಶವಾಗುತ್ತಿಲ್ಲವಲ್ಲ" ಎಂದು ಪ್ರಾರ್ಥಿಸಿದನು.

**೨. ಲಕ್ಷ್ಮಣನು ಅಣ್ಣನನ್ನು ಹೇಗೆ ಸಂತೈಸಿದನು ತಿಳಿಸಿ.**

ಲಕ್ಷ್ಮಣನು ಸೀತೆಗಾಗಿ ಪರಿತಪಿಸುತ್ತಿದ್ದ ಅಣ್ಣನಾದ ರಾಮನನ್ನು ಕುರಿತು "ತಾಳಿಕೋ ಅಣ್ಣ ತಾಳಿಕೋ, ಸೂರ್ಯನೇ ತೇಜಗೆಡಲು ಕಾಂತಿಯನ್ನು ನೀಡುವವರು ಯಾರು? ರಾಮನೇ ಧೈರ್ಯಗೆಡಲು ಲೋಕಕ್ಕೆ ಸ್ಥೈರ್ಯ ನೀಡುವವರು ಯಾರು?" ಎಂದು ಹೇಳಿ ಸಂತೈಸಿದನು.

**೩. ರಾಮನ ಸ್ವಾಗತಕ್ಕಾಗಿ ಶಬರಿ ಮಾಡಿಕೊಂಡಿದ್ದ ಸಿದ್ಧತೆಗಳೇನು?**

ರಾಮನ ಸ್ವಾಗತಕ್ಕಾಗಿ ಶಬರಿಯು ಸವಿಯಾದ ಬಗೆಬಗೆಯ ಹಣ್ಣುಗಳನ್ನು, ಜೇನುತುಪ್ಪ ಅಧಿಕವಾಗಿರುವ ಮಧುಪರ್ಕವೆಂಬ ಪಾನೀಯವನ್ನು, ಸುವಾಸನೆಯಿಂದ ಕೂಡಿದ ಬಾಡದ ಹೂವುಗಳನ್ನು ಸಂಗ್ರಹಿಸಿ ಸಿದ್ಧಮಾಡಿಕೊಂಡಿದ್ದಳು.

**೪. ಶಬರಿಯು ರಾಮಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ವಿವರಿಸಿ.**

ಶಬರಿಯು ರಾಮಲಕ್ಷ್ಮಣರನ್ನು ಕಂಡು ಬೆರಗಾಗಿ, ಹತ್ತಿರಕ್ಕೆ ಬಂದು, ಮೈಯನ್ನು ಮುಟ್ಟಿ, ಕಾಲಿಗೆ ಬಿದ್ದು ನಮಸ್ಕರಿಸಿ, ಕೈ ಕಣ್ಣಿಗೊತ್ತಿಕೊಂಡಳು. ಬಗೆಬಗೆಯ ಸುವಾಸನೆಯುಳ್ಳ ಹೂಮಾಲೆಯನ್ನು ಕೊರಳಿಗೆ ಹಾಕಿ ಸಂತಸಪಟ್ಟಳು. "ಜಗದಲ್ಲಿ ಇದರಂತ ರುಚಿಯಾದ ಹಣ್ಣೇ ಇಲ್ಲ. ನಿಮಗೆಂದೆ ತಂದೆನು" ಎಂದು ಹೇಳುತ ಸವಿಯಾದ ಹಣ್ಣುಗಳನ್ನು ನೀಡಿ ಉಪಚರಿಸಿದಳು.

**೫. ಆತಿಥ್ಯ ಸ್ವೀಕರಿಸಿದ ರಾಮಲಕ್ಷ್ಮಣರು ಶಬರಿಗೆ ಏನು ಹೇಳಿದಳು?**

ಆತಿಥ್ಯ ಸ್ವೀಕರಿಸಿದ ರಾಮಲಕ್ಷ್ಮಣರು ಶಬರಿಗೆ "ನಾವು ನಿನ್ನ ಪ್ರೀತಿಯ ಸ್ವಾಗತದಿಂದ ಸಂತಸಗೊಂಡೆವು. ನಿನ್ನ ಸುಖದಲ್ಲಿ ನಮ್ಮ ಸುಖ ಕಂಡೆವು. ಕಣ್ಣಿಗೆಕಾಣದ ಆನಂದವನ್ನು ಅನುಭವಿಸುವ ಪುಣ್ಯ ನಮ್ಮದಾಯಿತು. ನಾವು ನಿನಗೆ ಎಂದೆಂದಿಗೂ ಋಣಿಗಳು" ಎಂದು ಹೇಳಿದರು.

**ಇ] ಎಂಟು ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಶಬರಿಯಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ವಿವರಿಸಿ.**

ರಾಮಲಕ್ಷ್ಮಣರನ್ನು ಕಂಡು ಶಬರಿ ಹಿಗ್ಗಿ, ಸಂತಸವನ್ನು ತುಂಬಿಕೊಳ್ಳುತ್ತಾಳೆ. ರಾಮಲಕ್ಷ್ಮಣರಿಗೆ ರುಚಿಕರ ಹಣ್ಣುಗಳನ್ನು ನೀಡಿ ಸತ್ಕರಿಸುತ್ತಾಳೆ. ರಾಮನನ್ನು ಕಂಡ ತಾನು ಪರಮಸುಖಿಯೆಂದು ನರ್ತಿಸುತ್ತಾಳೆ. ರಾಮನೂ ಕೂಡ "ನಿನ್ನ ಆದರದಿಂದ ನಾವು ಸುಖಿ, ನಿನಗೆ ನಾವು ಋಣಿ" ಎನ್ನುತ್ತಾನೆ. ಶಬರಿಯು ಕಣ್ಣೀರು ತುಂಬಿಕೊಂಡು "ನನ್ನ ಜಾಡನ್ನು ಹಿಡಿದು ಬಂದು ಸಂತಸ ನೀಡಿದಿರಿ, ಹಸಿವು ತೃಷೆ ಹಿಂಗಿತೇ? ನಾನೊಬ್ಬಳು ಬಡವಿ, ನನ್ನ ಮೇಲೆ ಮರುಕ ತೋರಿದಿರಾ?"ಎನ್ನುತ್ತಾಳೆ. ಶ್ರೀರಾಮನು "ನಿನ್ನ ಆತಿಥ್ಯದಲ್ಲಿ ಸ್ವಲ್ಪವೂ ಕೊರತೆಯಿಲ್ಲ, ನಮ್ಮ ಅರಮನೆಗಿಂತ ನಿನ್ನ ಆಶ್ರಮವೇ ಚೆಂದ, ನಿನ್ನ ಮನೆಯೇ ನಮ್ಮಮನೆ, ನೀನೇ ತಾಯಿಯಂತೆ" ಎನ್ನುತ್ತಾನೆ. ಶಬರಿಯು "ನಿನ್ನ ರೂಪದಂತೆ ನಿನ್ನ ಮಾತು ಸುಂದರ ಹಾಗೂ ಉದಾರ. ನಾನು ಧನ್ಯಳಾದೆ ಸಿದ್ಧ ಮಾತಂಗರ ವರ ನನಗೆ ಫಲಿಸಿತು. ನಿಮ್ಮನ್ನು ಕಂಡು ಪುಣ್ಯವು ತುಂಬಿತು. ಗುರುಪೂಜೆಯನ್ನು ಮಾಡಿದ ಪುಣ್ಯ ನನಗೆ ಇಂದು ಸೇರಿತು. ನನ್ನ ಚಿಂತೆಯೆಲ್ಲ ಹಿಂಗಿ ಹೋಯಿತು" ಎನ್ನುತ್ತಾಳೆ. ಶ್ರೀರಾಮನು ಗುರುಗಳ ಮಹಿಮೆಯನ್ನು ಬಲ್ಲೆನೆಂದು ಹೇಳುತ್ತ. "ದುಃಖವನ್ನು ಮರೆಸಿ, ಶಾಂತಿ ನೀಡುವ ಈ ವನದಲ್ಲಿ ನೀನು ಶುದ್ಧ ಪ್ರೇಮಮೂರ್ತಿಯಾಗಿದ್ದೀಯೆ. ಈ ದಿನ ನಮಗೆ ಸುದಿನ" ಎಂದು ಶಬರಿಯನ್ನು ಬಾಯಿತುಂಬ ಹೊಗಳುತ್ತಾನೆ.

೨. ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ಹೇಗೆ ವರ್ಣಿತವಾಗಿದೆ? ತಿಳಿಸಿ.

ರಾಮನು ಬಂದುತನ್ನ ಆಶ್ರಮದಲ್ಲಿ ನಿಂತಿರುವುದನ್ನು ನೋಡಿ ಶಬರಿ ಆಶ್ಚರ್ಯಪಟ್ಟಳು. ರಾಮನ ಹತ್ತಿರ ಬಂದು ಅವನನ್ನು ಮುಟ್ಟಿ, ಪಾದಕ್ಕೆ ನಮಸ್ಕರಿಸಿ, ಕೈಯನ್ನು ಕಣ್ಣಿಗೆ ಒತ್ತಿಕೊಂಡು ಕಣ್ಣೀರು ಸುರಿಸಿದಳು. ಗದ್ಗದ ಸ್ವರದಿಂದ "ಬನ್ನಿರಿ" ಎಂದು ಆಹ್ವಾನಿಸಿದಳು. "ಸಿದ್ಧತೆಯೇ ಇಲ್ಲವಲ್ಲ" ಎಂದು ಹಂಬಲಿಸಿದಳು. ಮನಸ್ಸಿನ ಬಯಕೆಯಂತೆ ಬಗೆಬಗೆಯ ಕಂಪು ಇರುವ ವನಮಾಲೆಯನ್ನು ರಾಮನ ಕೊರಳಿಗೆ ಇಟ್ಟು ಹಿಗ್ಗಿದಳು. ಜಗತ್ತಿನಲ್ಲಿ ಇಂತಹ ರುಚಿಕರವಾದ ಹಣ್ಣೇ ಇಲ್ಲವೆಂದು ಹೇಳುತ್ತ, ನಿಮಗಾಗಿ ತಂದಿದ್ದೇನೆಂದು ತಿಳಿಸಿ ರಾಮನ ಕೈಗೆ ಇತ್ತಳು. ಶಬರಿಯ ಸೇವೆಯಿಂದ ರಾಮನು ಸುಪ್ರಸನ್ನನಾದನು. ರಾಮಲಕ್ಷ್ಮಣರು ಧನ್ಯತಾಭಾವದಿಂದ ಮಂದಹಾಸ ಬೀರಿದರು. ಹೀಗೆ ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ವರ್ಣಿತವಾಗಿದೆ.

೩. 'ನಂಬಿ ಕೆಟ್ಟವರಿಲ್ಲ' ಎಂಬ ಮಾತು ಶಬರಿಯ ಪಾಲಿಗೆ ಹೇಗೆ ನಿಜವಾಗಿದೆ?

ಶಬರಿ ಮಾತಂಗ ಋಷಿಯ ಆಶ್ರಮದಲ್ಲಿ ಇರುತ್ತಾಳೆ. ಸಿದ್ಧರಾದ ಮಾತಂಗ ಋಷಿಗಳು ಶಬರಿಯ ಮನದಾಸೆಯನ್ನು ತಿಳಿದವರಾಗಿದ್ದು, "ರಾಮಲಕ್ಷ್ಮಣರು ಆಶ್ರಮಕ್ಕೆ ಬಂದೇ ಬರುತ್ತಾರೆ. ನಿನ್ನ ಇಷ್ಟಾರ್ಥ ನೆರವೇರುತ್ತದೆ" ಎಂದಿದ್ದರು. ಅವರ ಮಾತಿನಂತೆ ರಾಮಲಕ್ಷ್ಮಣರು ಶಬರಿಯ ಆಶ್ರಮಕ್ಕೆ ಭೇಟಿ ನೀಡುತ್ತಾರೆ. ಶಬರಿಯು ರಾಮನ ದರ್ಶನದಿಂದ ಪುಳಕಿತಳಾದಳು. ಕಣ್ತುಂಬ ರಾಮನ ದರ್ಶನ ಮಾಡಿ, ಮುಟ್ಟಿ, ನಮಸ್ಕರಿಸಿ, ಸಂಭ್ರಮಿಸಿದಳು. ಪರಿಮಳದ ವನಮಾಲೆಯನ್ನು ರಾಮನ ಕೊರಳಿಗೆ ಹಾಕಿ, ರುಚಿಕರ ಹಣ್ಣುಗಳನ್ನು ನೀಡಿ ಉಪಚರಿಸಿದಳು. ಧನ್ಯಳಾದೆನೆಂದು ಸಂತಸ ವ್ಯಕ್ತಪಡಿಸಿದಳು. ಹಲವಾರು ವರ್ಷಗಳಿಂದ ರಾಮನದರ್ಶನಕ್ಕಾಗಿ ಕಾದು, ಮುನಿಗಳ ಮಾತನ್ನು ನಂಬಿ, ರಾಮನು ಬರುವ ಸುದಿನವನ್ನು ಎದುರು ನೋಡುತ್ತಿದ್ದ ಶಬರಿಗೆ ರಾಮನ ದರ್ಶನವಾಯಿತು. ಶಬರಿಯ ಮನದಾಸೆ ಈಡೇರಿತು. ಹಾಗಾಗಿ 'ನಂಬಿಕೆಟ್ಟವರಿಲ್ಲ' ಎಂಬ ಮಾತು ಶಬರಿಯ ಪಾಲಿಗೆ ನಿಜವಾಯಿತು.

ಈ] ಸಂದರ್ಭ ಸಹಿತ ವಿವರಿಸಿ.

೧. "ಆವುದೀ ಮರುಳು? ನಮ್ಮೆಡೆಗೆ ಬರುತಿಹುದು."

**ಆಯ್ಕೆ:–** ಈ ವಾಕ್ಯವನ್ನು **ಪು. ತಿ. ನರಸಿಂಹಾಚಾರ್** ಅವರು ರಚಿಸಿರುವ **'ಶಬರಿ'** ಗೀತನಾಟಕದಿಂದ ಆಯ್ದ **'ಶಬರಿ'** ಎಂಬ ಗದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ:–**ಸೀತಾಪಹರಣದ ಅನಂತರ ಶೋಕತಪ್ತರಾದ ರಾಮಲಕ್ಷ್ಮಣರು ಸೀತೆಯನ್ನು ಹುಡುಕುತ್ತ, ತಪಸ್ವಿ ದನುವಿನ ಸೂಚನೆಯಂತೆ ಮತಂಗಾಶ್ರಮವನ್ನು ಪ್ರವೇಶಿಸುವ ಸಂದರ್ಭದಲ್ಲಿ ಎದುರಿಗೆ ಬರುತ್ತಿದ್ದ ವೃದ್ಧೆಯನ್ನು (ಶಬರಿಯನ್ನು)ಕಂಡು ರಾಮನು ಈ ಮಾತನ್ನು ಲಕ್ಷ್ಮಣನಿಗೆ ಹೇಳುತ್ತಾನೆ.

**ಸ್ವಾರಸ್ಯ:–** ಶ್ರೀರಾಮನ ಬರುವಿಕೆಗಾಗಿಕಾದು, ಕಾತರಿಸಿ, ಮರುಳಳಂತೆ ಆಗಿದ್ದ ವೃದ್ಧೆ ಶಬರಿಯನ್ನು ಕಂಡು ರಾಮಲಕ್ಷ್ಮಣರು ಭಯಗೊಂಡದ್ದನ್ನು ಈ ಮಾತಿನಲ್ಲಿ ಸ್ವಾರಸ್ಯ ಪೂರ್ಣವಾಗಿ ವರ್ಣಿಸಲಾಗಿದೆ.

೨. "ನಾಚುತಿಹೆನೀ ಪೂಜ್ಯೆಯೀ ನಲುಮೆಯಿಂದ."

**ಸಂದರ್ಭ:–**ತನ್ನಿಂದ ಇನಿತು ಉಪಕಾರವಿಲ್ಲದಿದ್ದರು ತನ್ನನ್ನು ಪ್ರೀತಿಯಿಂದ ನೆನೆಯುತ್ತ ಹಂಬಲಿಸುತ್ತಿರುವ ವೃದ್ಧೆ ಶಬರಿಯನ್ನು ಕಂಡ ಸಂದರ್ಭದಲ್ಲಿ ರಾಮನು ಲಕ್ಷ್ಮಣನಿಗೆ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:–** ಪೂಜ್ಯೆಯಾದ ಶಬರಿಯು ತನ್ನನ್ನು ಪ್ರೀತಿಯಿಂದ ನೆನೆಯುತ್ತ, ಬರುವಿಕೆಗಾಗಿ ಭಕ್ತಿಯಿಂದ ಹಂಬಲಿಸುತ್ತ ಇರುವ ದೃಶ್ಯವನ್ನು ನೋಡಿ ರಾಮನು "ಅವಳ ಅನುರಾಗವನ್ನು ಕಂಡು ನಾಚಿದೆನು" ಎಂದು ಹೇಳುವುದು ಸ್ವಾರಸ್ಯಪೂರ್ಣವಾಗಿದೆ.

೩. "ತಾಯಿ, ದಾರಿಗರಿಗೆ ಬೀಡಿಲ್ಲಿ ದೊರೆಯುವುದೇ?"

**ಸಂದರ್ಭ:–**ಮಾತಂಗಾಶ್ರಮವನ್ನು ಪ್ರವೇಶಿಸಿದ ಸಂದರ್ಭದಲ್ಲಿ "ಎಂದು ಕಾಣುವೆನು ಶ್ರೀರಾಮನನ್ನು, ಸನ್ಮಂಗಳ ಮೂರುತಿಯನ್ನು" ಎಂದು ಹಾಡುತ್ತ ತನಗಾಗಿ ಹಂಬಲಿಸುತ್ತಿರುವ ಶಬರಿಯನ್ನು ಕಂಡು ರಾಮನು ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:–** ತನಗಾಗಿ ಹಂಬಲಿಸುತ್ತಿರುವ ಶಬರಿಯನ್ನು ಕುರಿತು ರಾಮನು ಏನೂ ಅರಿಯದವನಂತೆ "ದಾರಿಗರಾದ ನಮಗೆ ಇಲ್ಲಿ ಉಳಿದುಕೊಳ್ಳಲು ಸ್ಥಳಾವಕಾಶ ದೊರೆಯುವುದೇ?" ಎಂದು ಕೇಳುವುದು ಸ್ವಾರಸ್ಯಪೂರ್ಣವಾಗಿದೆ.

೪. "ರೂಪಿನಂತೆ ಮಾತುಕೂಡ ಎನಿತುದಾರವಾಗಿದೆ?"

**ಸಂದರ್ಭ:–**ರಾಮನು ಶಬರಿಯ ಅತಿಥಿ ಸತ್ಕಾರದ ಪರಿಯನ್ನು ಕುರಿತು "ನಿನ್ನಆತಿಥ್ಯದ ಸವಿಯು ಅಯೋಧ್ಯೆಯ ಅರಮನೆಯ ಆತಿಥ್ಯಕ್ಕಿಂತ ಮಿಗಿಲಾದುದು, ಇಷ್ಟು ಪ್ರೀತಿಯನ್ನು ತೋರುವ ನಿನ್ನನ್ನು ತಾಯಿ ಎಂದು ತಿಳಿಯುವೆವು" ಎಂದ ಸಂದರ್ಭದಲ್ಲಿ ಶಬರಿಯು ಈ ಮಾತನ್ನು ಹೇಳುತ್ತಾಳೆ.

**ಸ್ವಾರಸ್ಯ :–** "ರಾಮನ ಪ್ರೀತಿಯ ಮಾತುಗಳು ಅವನ ರೂಪಿನಂತೆ ಮಧುರವಾದುದು" ಎಂದು ಹೇಳುವ ಮೂಲಕ ಶಬರಿಯು ರಾಮನ ವ್ಯಕ್ತಿತ್ವವನ್ನು ಬಹುಸ್ವಾರಸ್ಯಪೂರ್ಣವಾಗಿ ವರ್ಣಿಸುತ್ತಾಳೆ.

೫. "ಬೆಳಕಿಗೊಲಿದವರ್ ಉರಿವ ಬತ್ತಿಯ ಕರುಕ ಕಾಣರು."

**ಸಂದರ್ಭ:–**ರಾಮನದರ್ಶನ ಭಾಗ್ಯದಿಂದ ಸಂತುಷ್ಟಳಾದ ಶಬರಿಯು ಮುಕ್ತಿಯನ್ನು ಪಡೆಯುವುದಕ್ಕಾಗಿ ಅಗ್ನಿ ಪ್ರವೇಶಿಸಿದ ಸಂದರ್ಭದಲ್ಲಿ ರಾಮನು ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ :–** "ಬೆಳಕಿಗೆ ಒಲಿದವರು ಉರಿವ ಬತ್ತಿಯ ಕಪ್ಪನ್ನು ನೋಡುವುದಿಲ್ಲ" ಎಂಬ ಮಾತು ಶಬರಿಯ ರಾಮಭಕ್ತಿಯ ಶ್ರೇಷ್ಠತೆಯನ್ನು ಬಹುಸ್ವಾರಸ್ಯಪೂರ್ಣವಾಗಿ ವರ್ಣಿಸುತ್ತದೆ.

ಅ] ಕೊಟ್ಟಿರುವ ನಾಲ್ಕು ಉತ್ತರಗಳಲ್ಲಿ ಸರಿಯಾದ ಉತ್ತರವನ್ನು ಆರಿಸಿ ಬರೆಯಿರಿ

೧. ಕನ್ನಡ ವರ್ಣಮಾಲೆಯಲ್ಲಿರುವ ಯೋಗವಾಹಗಗಳು :
ಅ) ಐ. ಔ ಆ) ಅ, ಆ ಇ) ಎ. ಏ ಈ) ಅಂ, ಅಃ

೨. ಕನ್ನಡ ವರ್ಣಮಾಲೆಯಲ್ಲಿರುವ ಅವರ್ಗೀಯ ವ್ಯಂಜನಗಳ ಸಂಖ್ಯೆ :
ಅ) ೧೩ ಆ) ೨೫ ಇ) ೯ ಈ) ೩೪

೩. 'ಮತಂಗಾಶ್ರಮ' ಇಲ್ಲಿರುವ ಸಂಧಿ :
ಅ) ಆಗಮಸಂಧಿ ಆ) ಸವರ್ಣದೀರ್ಘಸಂಧಿ ಇ) ಗುಣಸಂಧಿ ಈ) ಲೋಪಸಂಧಿ

೪. 'ಅಹುದಹುದು' ಇದು ಈ ವ್ಯಾಕರಣಾಂಶವಾಗಿದೆ :
ಅ) ಜೋಡುನುಡಿ ಆ) ದ್ವಿರುಕ್ತಿ ಇ) ಅನುಕರಣಾವ್ಯಯ ಈ) ವಿದ್ಯರ್ಥಕ

೫. 'ಪೆರೆ' ಪದದಅರ್ಥ
ಅ) ಚಂದ್ರ ಆ) ಸೂರ್ಯ ಇ)ನಕ್ಷತ್ರ ಈ) ಆಕಾಶ

೬. 'ದನುಪೇಳ್ದ ದಾರಿಯೊಳೆ ನಾವು ಬಂದಿಹೆವೆ' ಈ ವಾಕ್ಯದ ಕೊನೆಯಲ್ಲಿ ಇರಬೇಕಾದ ಲೇಖನ ಚಿಹ್ನೆ :
ಅ) ಅರ್ಧವಿರಾಮ ಆ) ಪ್ರಶ್ನಾರ್ಥಕ ಇ) ಆವರಣ ಈ) ಭಾವಸೂಚಕ

೭. 'ಶೋಕದುಲ್ಕೆ' ಇಲ್ಲಿರುವ ಅಲಂಕಾರ
ಅ) ಉಪಮ ಆ) ರೂಪಕ ಇ) ದೃಷ್ಟಾಂತ ಈ) ಅರ್ಥಾಂತರನ್ಯಾಸ

೮. ಸ್ವಲ್ಪ ಉಸಿರಿನಿಂದ ಉಚ್ಚರಿಸಲ್ಪಡುವ ವ್ಯಂಜನಗಳನ್ನು ಹೀಗೆನ್ನುವರು :
ಅ) ಅಲ್ಪ ಪ್ರಾಣಗಳು ಆ) ಮಹಾ ಪ್ರಾಣಗಳು ಇ) ಅನುನಾಸಿಕಗಳು ಈ) ಸಂಧ್ಯಾಕ್ಷರಗಳು

೯. ಕನ್ನಡ ವರ್ಣಮಾಲೆಯಲ್ಲಿರುವ ಸಂಧ್ಯಾಕ್ಷರಗಳು
ಅ) ಅಂ, ಅಃ ಆ) ಐ, ಔ ಇ) ಎ, ಏ ಈ) ಉ, ಊ

೧೦. ವರ್ಗದ ಪಂಚಮಾಕ್ಷರಗಳನ್ನು ಅಕ್ಷರಗಳನ್ನು ಹೀಗೆನ್ನುವರು
ಅ) ಅಲ್ಪ ಪ್ರಾಣಗಳು ಆ) ಮಹಾ ಪ್ರಾಣಗಳು ಇ)ವ್ಯಂಜನಾಕ್ಷರ ಈ) ಅನುನಾಸಿಕಗಳು

೧೧. 'ವನಮಾಲೆ' ಇದು ಈ ಸಮಾಸಕ್ಕೆ ಉದಾಹರಣೆ
ಅ) ಕರ್ಮಧಾರಯಸಮಾಸ ಆ) ಅಂಶಿಸಮಾಸ ಇ) ತತ್ಪುರುಷಸಮಾಸ ಈ) ಕ್ರಿಯಾಸಮಾಸ

೧೨. ವರ್ಗದ ದ್ವಿತೀಯಾಕ್ಷರಗಳು ಹಾಗೂ ಚತುರ್ಥಾಕ್ಷರಗಳನ್ನು ಹೀಗೆನ್ನುತ್ತಾರೆ :
ಅ) ಅಲ್ಪಪ್ರಾಣಗಳು ಆ) ಮಹಾಪ್ರಾಣಗಳು ಇ) ಅನುನಾಸಿಕಗಳು ಈ) ಸಂಧ್ಯಾಕ್ಷರಗಳು

## ಪದ್ಯಪಾಠ – ೩
# ಹಲಗಲಿ ಬೇಡರು

**ಕವಿ–ಕೃತಿ ಪರಿಚಯ :** ಇದು ಜನಪದ ಸಾಹಿತ್ಯದ ವಿಶಿಷ್ಟ ಪ್ರಕಾರಗಳಲ್ಲಿ ಒಂದಾದ ಲಾವಣಿಯಾಗಿದೆ. ಲಾವಣಿಗಳು ವೀರತನ ಸಾಹಸವನ್ನು ವರ್ಣಿಸುವುದರಿಂದ ವೀರಗೀತೆಗಳೆಂದೂ ಸಹ ಕರೆಯುತ್ತಾರೆ. ಲಾವಣಿಗಳು ಗದ್ಯದ ಹೊಳಪನ್ನು ಹಾಗೂ ಭಾವಗೀತೆಯ ಸತ್ವವನ್ನು ಒಳಗೊಂಡಿವೆ. ಪ್ರಸ್ತುತ ಲಾವಣಿಯನ್ನು ಡಾ॥ ಗದ್ದಗಿಮಠರವರು ಸಂಪಾದಿಸಿರುವ **'ಕನ್ನಡ ಜನಪದ ಗೀತೆಗಳು '** ಕೃತಿಯಿಂದ ಆಯ್ಕೆಮಾಡಿಕೊಳ್ಳಲಾಗಿದೆ.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಕುಂಪಣಿ ಸರ್ಕಾರ ಹೊರಡಿಸಿದ ಆದೇಶ ಏನು?**

ಕುಂಪಣಿ ಸರ್ಕಾರದ ಅನುಮತಿ ಇಲ್ಲದೆ ಭಾರತೀಯರು ಶಸ್ತ್ರಾಸ್ತ್ರಗಳನ್ನು ಹೊಂದುವಂತಿಲ್ಲ ಮತ್ತು ತಮ್ಮಲ್ಲಿರುವ ಆಯುಧಗಳನ್ನು ಸರ್ಕಾರಕ್ಕೆ ಒಪ್ಪಿಸಿಬೇಕು ಎಂಬ ಆದೇಶ ಹೊರಡಿಸಿತು.

**೨. ಹಲಗಲಿಯ ನಾಲ್ವರು ಪ್ರಮುಖರು ಯಾರು?**

ಪೂಜೇರಿ ಹನುಮ, ಬ್ಯಾಡರ ಬಾಲ, ಜಡಗ, ರಾಮ ಈ ನಾಲ್ವರುಹಲಗಲಿಯ ಪ್ರಮುಖರು.

**೩. ಹಲಗಲಿಯ ಗುರುತು ಉಳಿಯದಂತಾದದು ಏಕೆ?**

ಹಲಗಲಿಯ ಮೇಲೆ ಬಿಚಿಟಿಷು ಸರ್ಕಾರದ ದಂಡು ದಾಳಿ ಮಾಡಿ, ಬೆಂಕಿ ಹಚ್ಚಿದ್ದರಿಂದ ಹಲಗಲಿಯ ಗುರುತು ಉಳಿಯದಂತಾಯಿತು.

**೪. ಯಾವ ಘಟನೆ ಹಲಗಲಿ ಲಾವಣಿಗೆ ಕಾರಣವಾಗಿದೆ?**

ಹಲಗಲಿಯ ಬೇಡರ ಹತಾರ ಕದನ ಘಟನೆ ಹಲಗಲಿ ಲಾವಣಿಗೆ ಕಾರಣವಾಗಿದೆ.

**೫. ಹಲಗಲಿ ಗ್ರಾಮ ಎಲ್ಲಿದೆ?**

ಹಲಗಲಿ ಮುಧೋಳ ಸಂಸ್ಥಾನದಲ್ಲಿದ್ದು ಇಂದಿನ ಬಾಗಲಕೋಟೆ ಜಿಲ್ಲೆಗೆ ಸೇರಿದೆ.

**ಆ] ಎರಡು ಮೂರು ವಾಕ್ಯಗಳಲ್ಲಿ ಉತ್ತರಿಸಿ.**

**೧. ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು?**

ಕ್ರಿ.ಶ. ೧೮೫೭ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ನಂತರ ಬ್ರಿಟಿಷರ ಸರ್ಕಾರದ ಅನುಮತಿ ಇಲ್ಲದೆ ಭಾರತೀಯರು ಶಸ್ತ್ರಾಸ್ತ್ರಗಳನ್ನು ಹೊಂದುವಂತಿಲ್ಲ ಮತ್ತು ತಮ್ಮಲ್ಲಿರುವ ಆಯುಧಗಳನ್ನು ಸರ್ಕಾರಕ್ಕೆ ಒಪ್ಪಿಸಬೇಕು ಎಂಬ ಆದೇಶವನ್ನು ನೀಡಿತು. ಈ ಆದೇಶವನ್ನು ವಿರೋಧಿಸಿ ಹಲಗಲಿಯ ಬೇಡರು ಪೂಜೇರಿ ಹನುಮ, ಬ್ಯಾಡರ ಬಾಲ, ಜಡಗ ರಾಮ, ಭೀಮ ಮೊದಲಾದ ವೀರರ ನಾಯಕತ್ವದಲ್ಲಿ ಸಭೆ ಸೇರಿ ತಮ್ಮ ಬದುಕಿನ ಆಧಾರವಾದ ಆಯುಧಗಳನ್ನು ಸರ್ಕಾರಕ್ಕೆ ಹಿಂದಿರುಗಿಸಲು ಒಪ್ಪಲಿಲ್ಲ. ಆದರೆ ಬ್ರಿಟಿಷ್ ಸಿಪಾಯಿಗಳು ಬಂದು ಬಲವಂತವಾಗಿ ಆಯುಧಗಳನ್ನು ಕಸಿದುಕೊಳ್ಳಲು ಪ್ರಾರಂಭಿಸಿದರು. ಇದು ಹಲಗಲಿಯ ಬೇಡರು ದಂಗೆ ಏಳಲು ಕಾರಣವಾಯಿತು.

**೨. ಹಲಗಲಿಗೆ ದಂಡು ಬರಲು ಕಾರಣವೇನು?**

ಹಲಗಲಿಯ ಬೇಡರಾದ ಪೂಜೇರಿ ಹನುಮ, ಬ್ಯಾಡರ ಬಾಲ, ರಾಮ, ಜಡಗ ಇವರುಗಳು ಬ್ರಿಟಿಷ್ ಸರ್ಕಾರ ಹೊರಡಿಸಿದ್ದ ನಿಶ್ಶಸ್ತ್ರೀಕರಣದ ಆದೇಶವನ್ನು ವಿರೋಧಿಸಿ ತಮ್ಮಲ್ಲಿರುವ ಆಯುಧಗಳನ್ನು ಕೊಡಲು ಒಪ್ಪದೆ ದಂಗೆ ಎದ್ದರು. ಈ ದಂಗೆಯನ್ನು ಹತ್ತಿಕ್ಕಲು ಬಂದ ಕಾರಕೂನನ ಕಪಾಳಕ್ಕೆ ಹೊಡೆದು ಸಿಪಾಯಿಗಳನ್ನು ಹೊಡೆದುರುಳಿಸಿದರು ಇದರಿಂದ ಕೋಪಗೊಂಡ ಕುಂಪಣಿ ಸರ್ಕಾರದ ಅಧಿಕಾರಿಗಳು ಹಲಗಲಿಯ ಬೇಡರ ದಂಗೆಯನ್ನು ಬಗ್ಗುಬಡಿಯಲು ದಂಡನ್ನು ಕರೆಯಿಸಿದರು.

**೩. ದಂಡು ಹಲಗಲಿಯ ಮೇಲೆ ಹೇಗೆ ದಾಳಿ ನಡೆಸಿತು?**

ನಿಶ್ಶಸ್ತ್ರೀಕರಣದ ಆದೇಶವನ್ನು ವಿರೋಧಿಸಿ ಬ್ರಿಟಿಷ್ ಸರ್ಕಾರದ ವಿರುದ್ಧ ದಂಗೆ ಎದ್ದ ಹಲಗಲಿಯ ಬೇಡರನ್ನು ಬಗ್ಗುಬಡಿಯಲು ಬ್ರಿಟಿಷರ ದಂಡು ಬಂದಿತು. ಬ್ರಿಟಿಷರು ದಂಡಿನ ಸಿಪಾಯಿಗಳು ಹಲಗಲಿಯ ಬೇಡರ ಬೆನ್ನು ಹತ್ತಿ ಕೊಂದರು. ಎದುರಿಗೆ ಸಿಕ್ಕಸಿಕ್ಕವರಿಗೆಲ್ಲ ಕರುಣೆ ಇಲ್ಲದೆ ಗುಂಡು ಹೊಡೆದು ಸಾಯಿಸಿದರು. ಬ್ರಿಟಿಷ್ ಸಿಪಾಯಿಗಳ ಗುಂಡಿಗೆ ಹೆದರಿ ಹಲಗಲಿಯ ಬೇಡರು ಗುಡ್ಡದ ಕಡೆಗೆ ಓಡಿ ತಲೆಮರೆಸಿಕೊಂಡರು.

**೪. ಲಾವಣಿಗಳನ್ನು ಏಕೆ ವೀರಗೀತೆಗಳು ಎನ್ನಲಾಗಿದೆ?**

ಲಾವಣಿಗಳು ಜನಪದ ಸಾಹಿತ್ಯದ ಒಂದು ವಿಶಿಷ್ಟ ಪ್ರಕಾರ. ಒಂದು ಘಟನೆಯನ್ನು ಆಧರಿಸಿ, ಕಥನಾತ್ಮಕವಾಗಿ ಕಟ್ಟಿದ ಹಾಡನ್ನು ಲಾವಣಿಗಳೆನ್ನುವರು. ಲಾವಣಿಗಳು ಸಾಮಾನ್ಯವಾಗಿ ವೀರತನ ಹಾಗೂ ಸಾಹಸವನ್ನು ವರ್ಣಿಸುವುದರಿಂದ ಅವುಗಳನ್ನು ವೀರಗೀತೆಗಳು ಎನ್ನುವರು.

**ಇ] ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಹಲಗಲಿ ದಂಗೆಗೆ ಕಾರಣವೇನು? ಸರಕಾರ ಅದನ್ನು ಹೇಗೆ ನಿಯಂತ್ರಿಸಿತು?**

೧೮೫೭ ರ ಸಿಪಾಯಿದಂಗೆ ಅಥವಾ ಭಾರತದ ಪ್ರಥಮ ಸ್ವಾತಂತ್ರ್ಯಸಂಗ್ರಾಮದ ನಂತರ ಬ್ರಿಟಿಷರು ನಿಶ್ಯಸ್ತ್ರೀಕರಣ ಕಾಯಿದೆಯನ್ನು ಜಾರಿಗೆ ತಂದರು. ಅದರ ಪ್ರಕಾರ ಭಾರತೀಯರು ಬ್ರಿಟಿಷರ ಅನುಮತಿಯಿಲ್ಲದೆ ಆಯುಧಗಳನ್ನು ಹೊಂದುವ ಹಾಗಿರಲಿಲ್ಲ. ಮತ್ತು ಈಗಾಗಲೇ ಹೊಂದಿರುವ ಆಯುಧಗಳನ್ನು ಮರಳಿಸಬೇಕಿತ್ತು. ಹಲಗಲಿ ಬೇಡರಿಗೆ ಆಯುಧಗಳೆ ಜೀವವಾಗಿತ್ತು. ಆಯುಧಗಳನ್ನು ಮರಳಿಸಲು ಒಪ್ಪದ ಹಲಗಲಿ ಬೇಡರು ಹನುಮ, ಬಾಲ, ಜಡಗ, ರಾಮರ ನೇತೃತ್ವದಲ್ಲಿ ಕಂಪನಿ ಸರಕಾರದ ವಿರುದ್ಧ ದಂಗೆ ಎದ್ದರು. ಸಿಪಾಯಿಗಳ ಕೆನ್ನೆಗೆ ಬಾರಿಸಿದರು. ಮನವೊಲಿಸಲು ಬಂದ ಹೆಬಲಕ್ ಎಂಬ ಅಧಿಕಾರಿಯನ್ನು ಕೊಂದರು. ಕೋಪಗೊಂಡ ಕಂಪನಿಯ ಸರಕಾರ ಬೇಡರನ್ನು ಕಂಡಕಂಡಲ್ಲಿ ಸಾಯಿಸಿತು. ಬೇಡರ ಮುಖಂಡರನ್ನು ನಿರ್ದಾಕ್ಷಿಣ್ಯವಾಗಿ ಹತ್ಯೆಗೈಯ್ಯಲಾಯಿತು. ಹಲಗಲಿ ಊರನ್ನು ಲೂಟಿಮಾಡಿ ಬೆಂಕಿ ಹಚ್ಚಲಾಯಿತು. ಹೀಗೆ ಹಲಗಲಿ ದಂಗೆಯನ್ನು ಸರಕಾರ ನಿಯಂತ್ರಿಸಿತು.

**೨. ಹಲಗಲಿ ದಂಗೆಯ ಪರಿಣಾಮವೇನು ?**

೧೮೫೭ ರ ಸಿಪಾಯಿದಂಗೆ ಅಥವಾ ಭಾರತದ ಪ್ರಥಮ ಸ್ವಾತಂತ್ರ್ಯಸಂಗ್ರಾಮದ ನಂತರ ಬ್ರಿಟಿಷರು ನಿಶ್ಯಸ್ತ್ರೀಕರಣ ಕಾಯಿದೆಯನ್ನು ಜಾರಿಗೆ ತಂದರು. ಅದರ ಪ್ರಕಾರ ಭಾರತೀಯರು ಬ್ರಿಟಿಷರ ಅನುಮತಿಯಿಲ್ಲದೆ ಆಯುಧಗಳನ್ನು ಹೊಂದುವ ಹಾಗಿರಲಿಲ್ಲ ಮತ್ತು ಈಗಾಗಲೇ ಹೊಂದಿರುವ ಆಯುಧಗಳನ್ನು ಮರಳಿಸಬೇಕಿತ್ತು. ಹಲಗಲಿ ಬೇಡರಿಗೆ ಆಯುಧಗಳೆ ಜೀವವಾಗಿತ್ತು. ಆಯುಧಗಳನ್ನು ಮರಳಿಸಲು ಒಪ್ಪದ ಹಲಗಲಿ ಬೇಡರು ಹನುಮ, ಬಾಲ, ಜಡಗ, ರಾಮರ ನೇತೃತ್ವದಲ್ಲಿ ಕಂಪನಿ ಸರಕಾರದ ವಿರುದ್ಧ ದಂಗೆ ಎದ್ದರು. ಸಿಪಾಯಿಗಳ ಕೆನ್ನೆಗೆ ಬಾರಿಸಿದರು. ಬೇಡರ ಮನವೊಲಿಸಲು ಬಂದ ಅಧಿಕಾರಿಯನ್ನೇ ಕೊಂದು ಹಾಕಿದರು. ಕ್ರೋಧಗೊಂಡ ಕಾರಾಸಾಹೇಬನ ಆದೇಶದಂತೆ ಕಂಪನಿಯ ದಂಡು ಬೇಡರನ್ನು ಕಂಡ ಕಂಡಲ್ಲಿ ಬೇಟೆಯಾಡಿತು. ಹನುಮ, ಭೀಮ, ಜಡಗ ರಾಮ, ಬಾಲರು ಮಾಡಿದ ಪ್ರಯತ್ನ ವಿಫಲವಾಯಿತು. ನಿರ್ದಯವಾಗಿ ಅವರನ್ನು ಸಾಯಿಸಲಾಯಿತು. ಬೇಡರ ಊರನ್ನು ಏನೂ ಉಳಿಸದಂತೆ ಲೂಟಿ ಮಾಡಲಾಯಿತು. ಊರಿಗೆ ಬೆಂಕಿ ಇಟ್ಟು ಗುರುತು ಸಿಗದಂತೆ ಬೂದಿ ಮಾಡಲಾಯಿತು.

**ಈ] ಸಂದರ್ಭಾನುಸಾರ ಸ್ವಾರಸ್ಯ ವಿವರಿಸಿ.**

**೧. "ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"**

**ಆಯ್ಕೆ :-** ಈ ವಾಕ್ಯವನ್ನು **ಡಾ. ಬಿ.ಎಸ್.ಗದ್ದಗಿಮಠ** ಅವರು ಸಂಪಾದಿಸಿರುವ **'ಕನ್ನಡ ಜನಪದ ಗೀತೆಗಳು'** ಕೃತಿಯಿಂದ ಆಯ್ದ **'ಹಲಗಲಿಯ ಬೇಡರು'** ಎಂಬ ಲಾವಣಿಯಿಂದ ಆರಿಸಲಾಗಿದೆ.

**ಸಂದರ್ಭ :-** "ಕ್ರಿ.ಶ. ೧೮೫೭ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ನಂತರ ಬ್ರಿಟಿಷ್ ಸರ್ಕಾರ ಅನುಮತಿ ಇಲ್ಲದೆ ಭಾರತೀಯರು ಶಸ್ತ್ರಾಸ್ತ್ರಗಳನ್ನು ಹೊಂದುವಂತಿಲ್ಲ ಮತ್ತು ತಮ್ಮಲ್ಲಿರುವ ಆಯುಧಗಳನ್ನು ಸರ್ಕಾರಕ್ಕೆ ಒಪ್ಪಿಸಬೇಕು" ಎಂಬ ಆದೇಶವನ್ನು ನೀಡಿದ ಸಂದರ್ಭದಲ್ಲಿ ಈ ಮಾತು ಬಂದಿದೆ.

**ಸ್ವಾರಸ್ಯ :-** ಭಾರತೀಯರ ಮೇಲಿನ ಬ್ರಿಟಿಷರ ದರ್ಪ ಈ ಮಾತಿನಲ್ಲಿ ವ್ಯಕ್ತಗೊಂಡಿದೆ. ಇದೇ ಹಲಗಲಿ ದಂಗೆಯ ಜ್ವಾಲೆ ಹೆಚ್ಚಾಗಲು ಕಾರಣವಾಯಿತು.

**೨. "ಜೀವ ಸತ್ತು ಹೋಗುವುದು ಗೊತ್ತ"**

**ಸಂದರ್ಭ :-** ಬ್ರಿಟಿಷರ ಆಜ್ಞೆಯನ್ನು ಹೊರಡಿಸಿ, ಜನರಿಂದ ಆಯುಧಗಳನ್ನು ಬಲವಂತವಾಗಿ ಕಿತ್ತುಕೊಳ್ಳಲು ಪ್ರಯತ್ನಿಸಿದಾಗ ಹಲಗಲಿಯ ಪೂಜೇರಿ ಹನುಮ, ಬ್ಯಾಡರ ಬಾಲ, ಜಡಗ, ರಾಮ ಮೊದಲಾದ ವೀರರು ತಮ್ಮಲ್ಲಿರುವ ಆಯುಧಗಳನ್ನು ಕೊಡಲು ಒಪ್ಪದೆ, ನೀಡಿದರೆ ತಾವು ಸತ್ತಂತೆ ಎಂದು ಹೇಳಿಕೊಂಡ ಸಂದರ್ಭದಲ್ಲಿ ಈ ಮಾತು ಬಂದಿದೆ.

**ಸ್ವಾರಸ್ಯ :-** ಹಲಗಲಿಯ ಬೇಡರು "ಆಯುಧಗಳು ತಮ್ಮ ಪ್ರಾಣಕ್ಕಿಂತ ಮಿಗಿಲಾದುದು ಎಂಬ ಭಾವನೆಯನ್ನು ಹೊಂದಿದ್ದರು" ಎಂಬುದು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಗೊಂಡಿದೆ.

**೩. "ಹೊಡೆದರೊ ಗುಂಡ ಕರುಣ ಇಲ್ಲದ್ಹಂಗ"**

**ಸಂದರ್ಭ :-** ನಿಶ್ಶಸ್ತ್ರೀಕರಣದ ಆದೇಶವನ್ನು ವಿರೋಧಿಸಿ ಬ್ರಿಟಿಷ್ ಸರ್ಕಾರದ ವಿರುದ್ಧ ದಂಗೆ ಎದ್ದ ಹಲಗಲಿಯ ಬೇಡರನ್ನು ಬಗ್ಗುಬಡಿಯಲು ಬ್ರಿಟಿಷರ ದಂಡು ಬಂದಿತು. ಹಲಗಲಿಯ ಬೇಡರ ಬೆನ್ನು ಹತ್ತಿ ಕೊಂದು, ಎದುರಿಗೆ ಸಿಕ್ಕಸಿಕ್ಕವರಿಗೆಲ್ಲ ಕರುಣೆ ಇಲ್ಲದೆ ಗುಂಡು ಹೊಡೆದು ಸಾಯಿಸಿದರು ಎಂದು ಲಾವಣಿಕಾರನು ಹೇಳುವ ಸಂದರ್ಭದಲ್ಲಿ ಈ ಮಾತು ಬಂದಿದೆ.

**ಸ್ವಾರಸ್ಯ :-** ಹಲಗಲಿಯ ಬೇಡರ ಮೇಲೆ ನಿಷ್ಕರುಣೆಯಿಂದ ಗುಂಡು ಹಾರಿಸಿಕೊಲ್ಲುವ ಬ್ರಿಟಿಷರ ಕ್ರೌರ್ಯದ ಪರಮಾವಧಿಯನ್ನು ಈ ಮಾತಿನಲ್ಲಿ ವರ್ಣಿಸಲಾಗಿದೆ.

**೪. "ಕೆಟ್ಟು ವರ್ಣಿಸಿ ಹೇಳಿದೆ ಕಂಡಷ್ಟು"**

**ಸಂದರ್ಭ :-** ಬ್ರಿಟಿಷ್ ಸೈನಿಕರು ಹಲಗಲಿಯನ್ನು ಲೂಟಿಮಾಡಿ, ಬೆಂಕಿ ಹಚ್ಚಿ ನಾಶಗೊಳಿಸಿದರು ಎಂದು ಲಾವಣಿಕಾರನು ಹೇಳುವ ಸಂದರ್ಭದಲ್ಲಿ ಈ ಮಾತು ಬಂದಿದೆ.

**ಸ್ವಾರಸ್ಯ :-** "ಹಲಗಲಿಯ ಬೇಡರ ಮೇಲಿನ ಬ್ರಿಟಿಷರ ದೌರ್ಜನ್ಯವು ವರ್ಣಿಸಲು ಅಸಾಧ್ಯವಾದುದು" ಎಂದು ಲಾವಣಿಕಾರನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಿದ್ದಾನೆ.

**ಉ] ಬಿಟ್ಟ ಸ್ಥಳ ತುಂಬಿರಿ.**

೧. ಹಲಗಲಿ ಬಂಟರ ಕದನ ವೀರರಸ ಪ್ರಧಾನವಾದ **ಲಾವಣಿ**

೨. ಹಲಗಲಿಯು ಈಗ ಈ ಜಿಲ್ಲೆಗೆ ಸೇರಿದೆ **ಬಾಗಲಕೋಟೆ**

೩. ಕುಂಪಣಿ ಸರ್ಕಾರ ಜಾರಿಗೆ ತಂದ ಶಾಸನ **ನಿಶ್ಶಸ್ತ್ರೀಕರಣ**

೪. ಲಾವಣಿಕಾರ ಅಂಕಿತಗೊಳಿಸಿದ ದೈವ **ಕಲ್ಮೇಶ.**

೫. ವಿಲಾತಿ ಪದದ ಸರಿಯಾದ ರೂಪ **ವಿಲಾಯತಿ.**

## ಭಾಷಾ ಚಟುವಟಿಕೆ

**೧. ಪದಗಳನ್ನು ವಿಗ್ರಹಿಸಿ ಸಮಾಸ ಹೆಸರಿಸಿ.**

ಮುಂಗೈ = ಕೈಯ + ಮುಂದು = ಅಂಶಿಸಮಾಸ

ನಡು ರಾತ್ರಿ = ರಾತ್ರಿಯ +ನಡುವೆ = ಅಂಶಿ ಸಮಾಸ

ಹನುಮ ಭೀಮರಾಯ = ಹನುಮನೂ + ಭೀಮನೂ + ರಾಮನೂ = ದ್ವಂದ್ವ ಸಮಾಸ

ಮೋಸಮಾಡು = ಮೋಸವನ್ನು + ಮಾಡು = ಕ್ರಿಯಾಸಮಾಸ

**೨. ಗ್ರಾಮ್ಯ ಪದಗಳಿಗೆ ಗ್ರಂಥಸ್ಥ ರೂಪ ಬರೆಯಿರಿ.**

ಹೀಂಗ–ಹೀಗೆ, ಮ್ಯಾಗ–ಮೇಲೆ, ಕಳುವ್ಯಾರೆ–ಕಳಿಸಿದರು, ಇಲ್ಲದಂಗ–ಇಲ್ಲದ ಹಾಗೆ, ಇಸವಾಸ–ವಿಶ್ವಾಸ, ಸಕ್ಕಾರಿ–ಸಕ್ಕರೆ.

**೩. ಅಲಂಕಾರವನ್ನು ಹೆಸರಿಸಿ ಸಮನ್ವಯಿಸಿ.**

**ಅ) "ಒಳಗಿನ ಮಂದಿ ಗುಂಡು ಹೊಡೆಸಿದರೊ ಮುಂಗಾರಿ ಸಿಡಿಲು ಸಿಡಿದಾಂಗ ".**

**ಉಪಮೇಯ :** ಒಳಗಿನ ಮಂದಿ ಹೊಡೆಸಿದ ಗುಂಡು

**ಉಪಮಾನ :** ಮುಂಗಾರಿನ ಸಿಡಿಲು

**ಉಪಮಾವಾಚಕ :** ಹಾಂಗ (ಹಾಗೆ)

**ಸಮಾನಧರ್ಮ :** ಸಿಡಿಯುವುದು

**ಅಲಂಕಾರ :** ಉಪಮಾಲಂಕಾರ

**ಸಮನ್ವಯ:** ಉಪಮೇಯವಾದ ಒಳಗಿನ ಮಂದಿ ಹೊಡೆಸಿದ ಗುಂಡನ್ನು ಉಪಮಾನವಾದ ಮುಂಗಾರಿನ ಸಿಡಿಲು ಸಿಡಿಯುವುದಕ್ಕೆ ಹೋಲಿಸಿ ವರ್ಣಿಸಿರುವುದರಿಂದ ಇದು **ಉಪಮಾಲಂಕಾರ**ವಾಗಿದೆ.

**ಆ) "ಸಿಡಿಲ ಸಿಡಿದಾಂಗ ಗುಂಡು ಸುರಿದಾವ ".**

**ಉಪಮೇಯ –** ಸುರಿದ ಗುಂಡು (ಗುಂಡು ಸುರಿಯುವುದು)

**ಉಪಮಾನ –** ಸಿಡಿದ ಸಿಡಿಲು (ಸಿಡಿಲು ಸಿಡಿಯುವುದು)

**ಉಪಮಾವಾಚಕ –** ಹಾಂಗ (ಹಾಗೆ)

**ಸಮಾನ ಧರ್ಮ –** ಸಿಡಿಯುವುದು

**ಅಲಂಕಾರ –** ಉಪಮಾಲಂಕಾರ

**ಸಮನ್ವಯ –** ಉಪಮೇಯವಾದ ಗುಂಡು ಸುರಿಯುವುದನ್ನು ಉಪಮಾನವಾದ ಸಿಡಿಲು ಸಿಡಿಯುವುದಕ್ಕೆ ಹೋಲಿಸಿ ವರ್ಣಿಸಿರುವುದರಿಂದ ಇದು ಉಪಮಾಲಂಕಾರವಾಗಿದೆ.

**೪. ದೇಶ್ಯ ಅನ್ಯ ದೇಶ್ಯಪದಗಳನ್ನು ಗುರುತಿಸಿ.**

**ದೇಶ್ಯ –** ಹೊತ್ತು, ಬಂಟರು, ಮುಂಗೈ, ಮುಂಗಾರು

**ಅನ್ಯದೇಶ್ಯ –** ಹತಾರ, ಮಸಲತ್ತು, ಹುಕುಮ, ಸಾಹೇಬ, ಕಾರಕೂನ, ಸಿಪಾಯಿ, ಕಬುಲ

## ಭಾಗ – ಬಿ

**ಕೊಟ್ಟಿರುವ ನಾಲ್ಕು ಉತ್ತರಗಳಲ್ಲಿ ಸೂಕ್ತವಾದ ಉತ್ತರವನ್ನು ಆಯ್ದು ಬರೆಯಿರಿ**

**೧. 'ವಿಲಾತಿ' ಪದದ ಸಮಾರ್ಥಕ ಪದ :**
ಎ) ಆಯುಧ ಬಿ) ವಿಹಾರ ಸಿ) ವಿಲಂತಿ ಡಿ) ವಿಲಾಯಿತಿ.

**೨. ' ಸಕ್ಕರೆ ' ಪದದ ತದ್ಭವರೂಪ :**
ಎ) ಸಂಕರೆ ಬಿ) ಶರ್ಕರಾ ಸಿ) ಶಬ್ದ ಡಿ) ಸಂಬಂಧ

**೩. ' ಚಟೇಕಾರ ' – ಪದವು ಈ ವ್ಯಾಕರಣಾಂಶಕ್ಕೆ ಉದಾಹರಣೆಯಾಗಿದೆ :**
ಎ) ಕೃದಂತನಾಮ ಬಿ) ಅವ್ಯಯ ಸಿ) ನಾಮಪದ ಡಿ) ತದ್ಧಿತಾಂತನಾಮ.

**೪. 'ಮಂಗಳಸೂತ್ರ ' – ಪದವು ಈ ಸಮಾಸಕ್ಕೆ ಉದಾಹರಣೆ :**
ಎ) ದ್ವಿಗುಸಮಾಸ ಬಿ) ಅಂಶಿಸಮಾಸ ಸಿ) ತತ್ಪುರುಷಸಮಾಸ ಡಿ) ದ್ವಂದ್ವಸಮಾಸ

**೫. ' ಗುಡದಾಗ ' ಪದದ ಗ್ರಾಂಥಿಕ ರೂಪ :**
ಎ) ಗುಡ್ಡದಲ್ಲಿ ಬಿ) ಗುಡ್ಡದಮೇಲೆ ಸಿ) ಗುಡ್ಡದೊಳಗೆ ಡಿ) ಗುಡ್ಡದಕೆಳಗೆ

**೬. ' ನಡುರಾತ್ರಿ ' ಪದವು ಈ ಸಮಾಸವಾಗಿದೆ :**
ಎ) ಗಮಕಸಮಾಸ ಬಿ) ಅಂಶಿಸಮಾಸ ಸಿ) ತತ್ಪುರುಷಸಮಾಸ ಡಿ) ಕರ್ಮಧಾರೆಯಸಮಾಸ

**೭. 'ಕಬುಲ' ಪದದ ಅರ್ಥ :**
ಎ) ಕಪ್ಪಕಾಣಿಕೆ ಬಿ) ಅನುಮತಿ ಸಿ) ಪಿತೂರಿ ಡಿ) ಸೈನ್ಯ

**೮. 'ವಿದ್ಯಾಧರ ' ಪದದ ತದ್ಭವ ರೂಪ :**
ಎ) ವಿದ್ಯಾವಂತ ಬಿ) ಬುದ್ಧಿವಂತ ಸಿ) ಬಿಜ್ಜೋದರ ಡಿ) ವಿದ್ಯೆಹೀನ

**೯. 'ಅಂಕುಶ' ಪದದ ತತ್ಸಮ ರೂಪವಿದು :**
ಎ) ಅಂಕುಸ ಬಿ) ಅಂಕಶ ಸಿ) ಶೂಲ ಡಿ) ಬರ್ಜಿ

**೧೦. ' ದಮ್ಮಡಿ ' ಪದವು ಈ ಭಾಷೆಯಿಂದ ಕನ್ನಡಕ್ಕೆ ಬಂದಿದೆ.**
ಎ) ಗ್ರೀಕ್ ಮತ್ತು ರೋಮನ್ ಬಿ) ಉರ್ದು ಸಿ) ಹಿಂದೂಸ್ಥಾನಿ ಡಿ) ಪರ್ಷಿಯನ್

**೧೧. ' ಅಬಕಾರಿ ' ಪದವು ಈ ಭಾಷೆಯ ಪದವಾಗಿದೆ :**
ಎ) ಹಿಂದೂಸ್ಥಾನಿ ಬಿ) ಫಾರ್ಸಿ ಸಿ) ಪೋರ್ಚಗೀಸ್ ಡಿ) ಅರಬ್ಬೀ

**೧೨. ' ಹುಕುಂ ' ಪದವು ಈ ಭಾಷೆಯಿಂದ ಕನ್ನಡಕ್ಕೆ ಬಂದಿದೆ :**
ಎ) ಇಂಗ್ಲೀಷ್ ಬಿ) ಪರ್ಷಿಯನ್ ಸಿ) ಹಿಂದೂಸ್ಥಾನಿ ಡಿ) ಉರ್ದು

**೧೩. ' ಬಂದೂಕು ' ಪದವು ಈ ಭಾಷೆಯ ಶಬ್ದವಾಗಿದೆ :**
ಎ) ಉರ್ದು ಬಿ) ಪರ್ಷಿಯನ್ ಸಿ) ಅರಬ್ಬೀ ಡಿ) ಹಿಂದೂಸ್ಥಾನಿ

[ಉತ್ತರಗಳು : **೧. ಡಿ.ವಿಲಾಯಿತಿ ೨. ಬಿ. ಶರ್ಕರಾ ೩. ಡಿ. ತದ್ಧಿತಾಂತನಾಮ ೪. ಸಿ. ತತ್ಪುರುಸಮಾಸ ೫. ಎ. ಗುಡ್ಡದಲ್ಲಿ ೬. ಬಿ.ಅಂಶಿಸಮಾಸ ೭. ಬಿ.ಅನುಮತಿ ೮. ಸಿ. ಬಿಜ್ಜೋದರ ೯. ಎ.ಅಂಕುಸ ೧೦. ಗ್ರೀಕ್ ಮತ್ತು ರೋಮನ್ ೧೧. ಬಿ. ಫಾರ್ಸಿ ೧೨. ಸಿ) ಹಿಂದೂಸ್ಥಾನಿ ೧೩. ಎ. ಉರ್ದು** ]

**ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ನಾಲ್ಕನೆಯ ಪದ ಬರೆಯಿರಿ :**

| | | | | | | |
|---|---|---|---|---|---|---|
| ೧. | ನಾನು, ನೀನು | : ಸರ್ವನಾಮಗಳು | : : | ತಿನ್ನು – ಹೋಗು | : | ________ |
| ೨. | ದರ್ಬಾರು | : ಹಿಂದೂಸ್ಥಾನಿ | : : | ಅನಾನಸು | : | ________ |
| ೩. | ದೀನಾರ | : ಗ್ರೀಕ್ | : : | ಕಾಲೇಜು | : | ________ |
| ೪. | ಕಲಶ | : ಕಳಸ | : : | ಶಿರ | : | ________ |
| ೫. | ಪಾದುಕಾ | : ಹಾವುಗೆ | : : | ವೈಶಾಖ | : | ________ |
| ೬. | ಕಳುವಾರೆ | : ಕಳುಹಿಸಿದ್ದಾರೆ | : : | ಇಸವಾಸ | : | ________ |
| ೭. | ಹತಾರ | : ದೇಶಿಯ ಪದ | : : | ಸಾಹೇಬ | : | ________ |
| ೮. | ಮುಂಗೈ | : ಅಂಶಿಸಮಾಸ | : : | ಮೋಸಮಾಡು | : | ________ |
| ೯. | ಕಾರಕೂನ | : ಗುಮಸ್ತ | : : | ಅಗಸಿ | : | ________ |

[ಉತ್ತರಗಳು : **೧. ಧಾತುಗಳು ೨. ಪೋರ್ಚುಗೀಸ್ ೩. ಇಂಗ್ಲೀಷ್ ೪. ಸಿರ ೫. ಬೇಸಗೆ ೬. ವಿಶ್ವಾಸ ೭. ಅನ್ಯದೇಶಿಯಪದ ೮. ಕ್ರಿಯಾಸಮಾಸ ೯. ಹೆಬ್ಬಾಗಿಲು** ]

## ಹಲಗಲಿ ಬೇಡರು ಲಾವಣಿಯಲ್ಲಿ ಬರುವ ಮುಖ್ಯ ವ್ಯಾಕರಣಾಂಶಗಳು :

➢ **ಹೊಸಪದಗಳ ಅರ್ಥ**

೧. **ವಿಲಾತಿ** – ವಿಲಾಯಿತಿ ( ವಿದೇಶ )
೨. **ಹುಕುಂ** – ಆದೇಶ
೩. **ಕಾರಕೂನ** – ಗುಮಾಸ್ತ
೪. **ಕುಮಕಿ** – ಸಹಾಯ
೫. **ಅಗಸಿ** – ಹೆಬ್ಬಾಗಿಲು
೬. **ದಂಡು** – ಸೈನ್ಯ
೭. **ಚರಿಗೆ** – ತಂಬಿಗೆ
೮. **ಮಸಲತ್ತು** – ಪಿತೂರಿ
೯. **ಹತಾರ** – ಆಯುಧ
೧೦. **ಕಬುಲ** – ಒಪ್ಪಿಗೆ, ಅನುಮತಿ.
–
–

**ಗ್ರಾಮ್ಯ ಪದಗಳಿಗೆ ಗ್ರಾಂಥಿಕ ರೂಪ**

೧. **ಹಿಂಗೆ** – ಹೀಗೆ
೨. **ಮ್ಯಾಗ** – ಮೇಲೆ
೩. **ಕಳಿವ್ಯಾರೆ** – ಕಳುಹಿಸಿದ್ದಾರೆ.
೪. **ಇಲ್ಲದ್ವಂಗ** – ಇಲ್ಲದ ಹಾಗೆ
೫. **ಇಸವಾಸ** – ವಿಶ್ವಾಸ
೬. **ಸಕ್ಕಾರಿ** – ಸಕ್ಕರೆ
೭. **ಕುಂಪಣಿ** – ಕಂಪನಿ
೮. **ಹೋಯ್ತು** – ಹೋಯಿತು.
೯. **ಸಿಡಿದ್ವಾಂಗ** – ಸಿಡಿದ ಹಾಗೆ.
೧೦. **ಮಾಡ್ಯಾರೊ** – ಮಾಡಿದರು.
೧೧. **ಗುಡದಾಗ** – ಗುಡ್ಡದಲ್ಲಿ
೧೨. **ಬ್ಯಾಡಿರಿ** – ಬೇಡಿರಿ.

➢ **ಸಮಾಸಪದಗಳು :**

೧. **ಮುಂಗೈ** -- ಕೈಯ + ಮುಂದು = ಅಂಶಿಸಮಾಸ.
೨. **ನಡುರಾತ್ರಿ** -- ರಾತ್ರಿಯ + ನಡು = ಅಂಶಿಸಮಾಸ.
೩. **ಮುಂಗಾರು** -- ಕಾರಿನ + ಮುಂದು = ಅಂಶಿಸಮಾಸ.
೪. **ಮಂಗಳಸೂತ್ರ** -- ಮಂಗಳದ + ಸೂತ್ರ = ತತ್ಪುರುಷಸಮಾಸ.
೫. **ಬುದ್ಧಿಮಾತು** -- ಬುದ್ಧಿಯ + ಮಾತು = ತತ್ಪುರಷಸಮಾಸ
೬. **ಮೋಸಮಾಡು** -- ಮೋಸವನ್ನು + ಮಾಡು = ಕ್ರಿಯಾಸಮಾಸ.
೭. **ಬೆನ್ಹತ್ತು** -- ಬೆನ್ನನ್ನು + ಹತ್ತು = ಕ್ರಿಯಾಸಮಾಸ.
೮. **ಐನೂರಮಂದಿ** -- ಐದುನೂರು + ಮಂದಿ = ದ್ವಿಗುಸಮಾಸ
೯. **ನಾಲ್ಕುಮಂದಿ** -- ನಾಲ್ಕು + ಮಂದಿ = ದ್ವಿಗುಸಮಾಸ
೧೦. **ಹನುಮಭೀಮರಾಮ** -- ಹನುಮನೂ + ಭೀಮನೂ + ರಾಮನೂ = ದ್ವಂದ್ವಸಮಾಸ.

➢ **ತತ್ಸಮ – ತದ್ಭವ**

೧. ದುಃಖ – ದುಗುಡ (ದುಕ್ಕ)
೨. ಸಕ್ಕರೆ – ಶರ್ಕರಾ
೩. ರಕ್ತ – ರಕುತ

➢ **ತದ್ಧಿತಾಂತ ನಾಮ** -- ಚಟೇಕಾರ

# ಗದ್ಯ-೩. ಲಂಡನ್ ನಗರ

**ಲೇಖಕರ ಪರಿಚಯ: ಡಾ.ವಿ.ಕೃ.ಗೋಕಾಕ್**

**ವಿನಾಯಕ** ಕಾವ್ಯನಾಮದಿಂದ ಪ್ರಸಿದ್ಧರಾಗಿರುವ **ಡಾ. ವಿನಾಯಕ ಕೃಷ್ಣ ಗೋಕಾಕ** (ಕ್ರಿ.ಶ.೧೯೦೯) ಇವರು ಹಾವೇರಿ ಜಿಲ್ಲೆಯ **ಸವಣೂರಿನವರು.** ವಿ.ಕೃ.ಗೋಕಾಕ ಅವರು **ಸಮುದ್ರಗೀತೆಗಳು, ಪಯಣ, ಉಗಮ, ಇಜ್ಜೋಡು, ಸಮರಸವೇ ಜೀವನ, ಭಾರತ ಸಿಂಧುರಶ್ಮಿ** ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಇವರ **'ದ್ಯಾವಾ ಪೃಥಿವೀ'** ಕೃತಿಗೆ **ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ** ಬಂದಿದೆ. ಇವರಿಗೆ **ಕರ್ನಾಟಕ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್, ಬೆಂಗಳೂರು ವಿಶ್ವವಿದ್ಯಾನಿಲಯದ ಗೌರವ ಡಿ.ಲಿಟ್. ಸಮಗ್ರ ಸಾಹಿತ್ಯಕ್ಕಾಗಿ ಜ್ಞಾನಪೀಠ ಪ್ರಶಸ್ತಿ,** ಭಾರತ ಸರ್ಕಾರ **ಪದ್ಮಶ್ರೀ** ಮುಂತಾದ ಪ್ರಶಸ್ತಿ ಪುರಸ್ಕಾರಗಳು ಲಭಿಸಿವೆ.

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಲಂಡನ್ನಿನ ರಸ್ತೆಗಳಲ್ಲಿ ನಿಲ್ಲುವುದನ್ನು ತಪ್ಪಿಸಲು ಮಾಡಿರುವ ವ್ಯವಸ್ಥೆಯೇನು?**

ಉ: ಲಂಡನ್ನಿನ ರಸ್ತೆಗಳಲ್ಲಿ ನಿಲ್ಲುವುದನ್ನು ತಪ್ಪಿಸಲು ಭೂಗರ್ಭದಲ್ಲಿ ಗಾಡಿಗಳನ್ನು ಹಾಕಿದ್ದಾರೆ.

**೨. ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರೇನು?**

ಉ: ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರು 'Trafalgar Square' (ಟ್ರಾಫಲ್ಗಾರ್ ಸ್ಕ್ವೇರ್).

**೩. 'ವೆಸ್ಟ್ ಮಿನ್‌ಸ್ಟರ್ ಅಬೆ' ಯಾರ ಸ್ಮಾರಕವಾಗಿದೆ?**

ಉ: 'ವೆಸ್ಟ್ ಮಿನ್‌ಸ್ಟರ್ ಅಬೆ' ಸತ್ತುಹೋಗಿರುವ ಸಾರ್ವಭೌಮರ, ಕವಿಪುಂಗವರ ಸ್ಮಾರಕವಾಗಿದೆ.

**೪. ಆಂಗ್ಲ ಸಾಮ್ರಾಜ್ಯದ ವೈಭವ ಕಂಡುಬರುವ ಓಣಿ ಯಾವುದು?**

ಉ: 'ಚೇರಿಂಗ್ ಕ್ರಾಸ್' ಎಂಬುದು ಆಂಗ್ಲ ಸಾಮ್ರಾಜ್ಯದ ವೈಭವ ಕಂಡುಬರುವ ಓಣಿ ಯಾಗಿದೆ.

**ಆ) ಕೊಟ್ಟಿರುವ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ.**

**೧. ವೂಲವರ್ಥ ಅಂಗಡಿಯಲ್ಲಿ ಸಿಗುವ ವಸ್ತುಗಳಾವುವು?**

ಉ: 'ವೂಲವರ್ಥ' ಎಂಬ ಸ್ಟೇಷನರಿ ಅಂಗಡಿಯಲ್ಲಿ ಬೂಟು, ಕಾಲುಚೀಲ, ಚಣ್ಣ, ಸಾಬೂನು, ಔಷಧ, ಪುಸ್ತಕ, ಅಡಿಗೆಯ ಪಾತ್ರೆ, ಇಲೆಕ್ಟ್ರಿಕ್ ದೀಪದ ಸಾಮಾನು, ಫೋಟೋ, ಅಡವಿಯ ಹೂವು, ಯುದ್ಧಸಾಮಗ್ರಿ ಎಲ್ಲವೂ ಇಲ್ಲಿ ದೊರೆಯುತ್ತವೆ.

**೨. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ?**

ಉ: ಲಂಡನ್ನಿನ ಯಾವುದಾದರೊಂದು ದೊಡ್ಡ ಅಂಗಡಿಗೆ ಹೋದರೆ ಅಲ್ಲಿಯ ಟೈಪಿಸ್ಟ್ ಕಾರಕೂನ, ಒಬ್ಬ ಹೆಣ್ಣು ಮಗಳು. ಸಿನಿಮಾ ಗೃಹದಲ್ಲಿ ನಿಮ್ಮ ಜಾಗವನ್ನು ಹುಡುಕಿಕೊಡುವವರು ಹೆಣ್ಣು! ಕಾಲೇಜಿನಲ್ಲಿ ಸಹ ವಿದ್ಯಾರ್ಥಿನಿಯರ ಅನುಕೂಲಕ್ಕಾಗಿ ಸಿಪಾಯಿಣಿಯರನ್ನು ಇಟ್ಟಿದ್ದಾರೆ!

**೩. ಟೊಪ್ಪಿಗೆಯ ವಿಶೇಷತೆಯನ್ನು ಲೇಖಕರು ಹೇಗೆ ದಾಖಲಿಸಿದ್ದಾರೆ?**

ಉ: ಲಂಡನ್ನಿನಲ್ಲಿ ಹೆಣ್ಣುಮಕ್ಕಳು ಧರಿಸುವ ಟೊಪ್ಪಿಗೆಯ ವಿಶೇಷತೆಯನ್ನು ತಿಳಿಸುತ್ತಾ ಲೇಖಕರು "ಒಂದು ಟೊಪ್ಪಿಗೆಯಂತೆ ಇನ್ನೊಂದಿರುವುದಿಲ್ಲ. ಸಿಕ್ಕಿಸಿದ ಪುಚ್ಚವಾದರೂ ಕನಿಷ್ಠಪಕ್ಷಕ್ಕೆ ಬೇರೆಯಾಗಿರುತ್ತದೆ! ಕೋಟ್ಯಾವಧಿ ಟೊಪ್ಪಿಗೆಗಳನ್ನು ಬೇಕಾದರೆ ಪರೀಕ್ಷಿಸಿ ಇದನ್ನು ಮನಗಾಣಬಹುದು. ಮನುಷ್ಯನಂತೆ ಟೊಪ್ಪಿಗೆಯಲ್ಲವೆ? ಒಬ್ಬ ಮನುಷ್ಯಳಂತೆ ಇನ್ನೊಬ್ಬಳಿಲ್ಲ." ಎಂದು ದಾಖಲಿಸಿದ್ದಾರೆ.

**೪. ಪೊಯೆಟ್ ಕಾರ್ನರ್‌ನಲ್ಲಿ ಯಾವ ಯಾವ ಕವಿಗಳ ಸಮಾಧಿಗಳಿವೆ?**

ಉ: ಪೊಯೆಟ್ ಕಾರ್ನರ್‌ನಲ್ಲಿ ಕಿಪ್ಲಿಂಗ್, ಹಾರ್ಡಿ, ಮ್ಯಾಕಾಲೆ, ಜಾನ್ಸನ್, ಗೋಲ್ಡ್‌ಸ್ಮಿತ್, ಡ್ರಾಯ್‌ಡನ್, ಬೆನ್‌ಜಾನ್ಸನ್, ವರ್ಡ್ಸ್‌ವರ್ತ್, ಮೊದಲಾದ ಕವಿಗಳ ಸಮಾಧಿಗಳಿವೆ.

**೫. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸನದ ಮೇಲಿರುವ ಕಲ್ಲುಪಾಟಿಯ ವಿಶೇಷತೆಯೇನು?**

ಉ: ಸಾಮ್ರಾಟರ ರಾಜ್ಯಾಭಿಷೇಕವಾಗುವಾಗ ಅವರ ಸಿಂಹಾಸನದ ಮೇಲೆ ಒಂದು ಕಲ್ಲು ಪಾಟಿಯನ್ನು ಹಾಕುತ್ತಾರೆ. ಪಟ್ಟಾಭಿಷೇಕವಾಗುವಾಗ ಮಾತ್ರ ಸಾಮ್ರಾಟರು ಇದರ ಮೇಲೆ ಕೂಡಬೇಕು. ಈ ಶಿಲೆಯನ್ನು ಒಳಗೊಂಡ ಸಿಂಹಾಸನವು ವೆಸ್ಟ್‌ಮಿನ್‌ಸ್ಟರ್ ಮಂದಿರದಲ್ಲಿಯ ಒಂದು ಭಾಗದಲ್ಲಿದೆ. 'ಸ್ಟೋನ್ ಆಫ್ ಸ್ಕೋನ್' ಎಂದು ಇದರ ಹೆಸರು. ೩ನೇ ಎಡ್ವರ್ಡನು ಸ್ಕಾಟ್‌ಲೆಂಡಿನ ಅರಸರಿಂದ ಇದನ್ನು ಕಿತ್ತುಕೊಂಡು ಬಂದಂತೆ ಕಾಣುತ್ತದೆ. ಅಂದಿನಿಂದ ಎಲ್ಲ ಸಾಮ್ರಾಟರ ಅಭಿಷೇಕವು ಈ ಕಲ್ಲಿನ ಮೇಲೆಯೇ ಆಗಿದೆ.

**ಇ) ಈ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಲಂಡನ್ ನಗರ ವೀಕ್ಷಣೆಯಲ್ಲಿ ಲೇಖಕರು ಗುರುತಿಸಿರುವ ವಿಶೇಷತೆಗಳೇನು?**

ಉ: ವಿ.ಕೃ.ಗೋಕಾಕ್ ಅವರು ಲಂಡನ್ ನಗರದಲ್ಲಿ ಹಲವಾರು ವಿಶೇಷತೆಗಳನ್ನು ಕಂಡರು.

ಲಂಡನ್ ಪಟ್ಟಣವೆಂದರೆ ಒಂದು ಸ್ವತಂತ್ರ ಜಗತ್ತು. ಅಲ್ಲಿಯ ರಸ್ತೆಗಳಲ್ಲಿ ವ್ಯಾಪಾರವು ತುಂಬಿ ಟ್ರಾಮ್ ಬಸ್ಸುಗಳಿಗೆ ಸುಗಮವಾಗಿ ಸಂಚರಿಸಲು ಸಾಧ್ಯವಾಗುವುದಿಲ್ಲ; ಬಹಳ ಹೊತ್ತು ನಡುನಡುವೆ ನಿಲ್ಲಬೇಕಾಗುತ್ತದೆ. ಅದನ್ನು ತಪ್ಪಿಸುವುದಕ್ಕಾಗಿ ಭೂಗರ್ಭದಲ್ಲಿ ಗಾಡಿಯನ್ನು ಓಡಿಸುತ್ತಾರೆ. 'ವೂಲವರ್ಥ' ಎಂಬ 'ಸ್ಟೇಷನರಿ' ಅಂಗಡಿಯು ವಿಶೇಷವಾಗಿದ್ದು ಅಲ್ಲಿ ಬೂಟು, ಕಾಲುಚೀಲ, ಚಣ್ಣ, ಸಾಬೂನು, ಔಷಧ, ಪುಸ್ತಕ, ಅಡಿಗೆಯ ಪಾತ್ರೆ, ಇಲೆಕ್ಟ್ರಿಕ್ ದೀಪದ ಸಾಮಾನು, ಫೋಟೋ, ಅಡವಿಯ ಹೂವು, ಯುದ್ಧಸಾಮಗ್ರಿ ಎಲ್ಲವೂ ದೊರೆಯುತ್ತವೆ.

ಎಲ್ಲ ಅಂಗಡಿಗಳಲ್ಲಿ ಸಾಮಾನ್ಯವಾಗಿ ಸ್ತ್ರೀಯರೇ ಕೆಲಸ ಮಾಡುತ್ತಾರೆ. 'ಚೇರಿಂಗ್ ಕ್ರಾಸ್' ಎಂಬ ಓಣಿಯಲ್ಲಿ ಆಂಗ್ಲರ ಸಾಮ್ರಾಜ್ಯ ವೈಭವವು ಕಂಡುಬರುತ್ತದೆ. ಇಂಡಿಯಾ ಆಫೀಸಿನ ಹತ್ತಿರ ಆಫ್ರಿಕನ್ ಕಚೇರಿ, ಇನ್ನೊಂದು ವಸಾಹತಿನ ಕಚೇರಿ, ನೂರೆಂಟು ಬ್ಯಾಂಕ್‌ಗಳು ದೊಡ್ಡ ಕಂಪೆನಿಗಳ ಕಚೇರಿಗಳು, ಎಲ್ಲವೂ ದಂಗುಬಡಿಸುವಂತೆ ನೆರೆದಿವೆ! ನಗರದ ಪ್ರತಿಯೊಂದು ಕೂಟಕ್ಕೆ ಒಂದು ಹೆಸರೇನಾದರೂ ಇದ್ದೇ ಇರುತ್ತದೆ. ಅಲ್ಲಿನ ಹೆಣ್ಣುಮಕ್ಕಳು ಧರಿಸುವ ಟೊಪ್ಪಿಗೆಗಳು ವಿಶೇಷವಾಗಿದ್ದು ಒಂದು ಟೊಪ್ಪಿಗೆಯಂತೆ ಇನ್ನೊಂದಿರುವುದಿಲ್ಲ. 'ವೆಸ್ಟ್ ಮಿನ್‌ಸ್ಟರ್ ಅಬೆ' ಎಂಬ ಪ್ರಾರ್ಥನಾ ಮಂದಿರ ಕನಿಷ್ಠ ಒಂದು ಸಾವಿರ ವರ್ಷದಷ್ಟು ಪುರಾತನವಾದ ಮಂದಿರ. ಅಲ್ಲಿ ಪ್ರಸಿದ್ಧ ಕವಿಗಳ, ಸಾರ್ವಭೌಮರ, ವಿಜ್ಞಾನಿಗಳ ಸ್ಮಾರಕಗಳಿವೆ.

ಅಲ್ಲಿನ ಅರಸರ ಅರಮನೆ ವಿಶೇಷವಾಗಿದ್ದು ಅದಕ್ಕೆ Royal Chapel (ರಾಜವಿಭಾಗ) ಎಂದು ಹೆಸರು. ಸಾಮ್ರಾಟರ ರಾಜ್ಯಾಭಿಷೇಕವಾಗುವಾಗ ಅವರ ಸಿಂಹಾಸನದ ಮೇಲೆ ಒಂದು ಕಲ್ಲುಪಾಟಿಯನ್ನು ಹಾಕುತ್ತಾರೆ. ಪಟ್ಟಾಭಿಷೇಕವಾಗುವಾಗ ಮಾತ್ರ ಸಾಮ್ರಾಟರು ಇದರ ಮೇಲೆ ಕೂಡಬೇಕು. 'ಸ್ಟೋನ್ ಆಫ್ ಸ್ಕೋನ್' ಎಂದು ಇದರ ಹೆಸರು.

**೨. 'ವೆಸ್ಟ್ ಮಿನ್‌ಸ್ಟರ್ ಅಬೆ' ಪ್ರಾರ್ಥನಾ ಮಂದಿರ ಒಂದು ವಿಶೇಷ ಸ್ಮಾರಕ ವಿವರಿಸಿ.**

ಉ: 'ವೆಸ್ಟ್ ಮಿನ್‌ಸ್ಟರ್ ಅಬೆ' ಎಂಬ ಪ್ರಾರ್ಥನಾ ಮಂದಿರ ಕನಿಷ್ಠ ಒಂದು ಸಾವಿರ ವರ್ಷದಷ್ಟು ಪುರಾತನವಾದ ಮಂದಿರ. ಕೆಲವೊಂದು ಭಾಗಗಳ ದುರಸ್ತಿಯನ್ನು ಬಿಟ್ಟರೆ ಇಂದಿಗೂ ಅಚ್ಚಳಿಯದೆ ಉಳಿದಿದೆ. ಇಲ್ಲಿ ಸಂತ, ಸಾರ್ವಭೌಮರು ಮಲಗಿರುವರು; ಕವಿಪುಂಗವರು ಒರಗಿರುವರು. ಸತ್ತವರ ಸ್ಮಾರಕವೆಂದು ಇದಕ್ಕಿಂತ ಘನತರವಾದ ಮಂದಿರವು ಜಗತ್ತಿನಲ್ಲಿ ಇನ್ನೆಲ್ಲಿಯೂ ಇರಲಾರದು.

"Mortality behold and fear What a litt'r of tombs is here." (ಮರ್ತ್ಯತ್ವವೇ ಎಷ್ಟು ಗೋರಿಗುಂಪುಗಳು ಇಲ್ಲಿವೆ ನೋಡಿ ಅಂಜು) ಎಂದು ೩೦೦ ವರ್ಷಗಳ ಹಿಂದೆ ಬ್ಯೂಮಾಂಟ್ ಎಂಬ ಕವಿಯು ಹಾಡಿದನು. ಗೋಲ್ಡ್‌ಸ್ಮಿತ್ ಹಾಗು ಎಡಿಸನ್ ಎಂಬ ಪ್ರಖ್ಯಾತ ಸಾಹಿತಿಗಳು Visit to West Minster Abbey (ವೆಸ್ಟ್‌ಮಿನ್‌ಸ್ಟರ್ ಅಬೆಯ ಸಂದರ್ಶನ) ಎಂಬ ವಿಷಯದ ಮೇಲೆ ಉತ್ತಮವಾದ ನಿಬಂಧಗಳನ್ನು ಬರೆದಿದ್ದಾರೆ. ಇಂದಿಗೂ ಇದು ಕಬ್ಬಿಗರ ಸ್ಫೂರ್ತಿಯ ತವರುಮನೆಯಾಗಿದೆ.

ಹೊರಗಿನಿಂದ ಉತ್ತಮವಾಗಿ ಶೃಂಗರಿಸಲಾಗಿದ್ದು ಒಳಗೆ ಕಟ್ಟಡವು ಭವ್ಯವಾಗಿದೆ. ಅಲ್ಲಿ ಸಾಗುವ ಹಾದಿಯ ಎಡಬಲಕ್ಕೆ ರಾಜಕಾರಣ ಚತುರರ ಶಿಲಾಮೂರ್ತಿಗಳಿವೆ. ಅಲ್ಲಿ Earl of Chatham (ಅರ್ಲ್ ಆಫ್ ಚ್ಯಾಟ್ಹಾಂ) ಗ್ಯಾಡ್‌ಸ್ಟನ್, ಮಾಲ್ಫ್ ಡಿಸ್‌ರೇಲಿ ಮೊದಲಾದವರ ಪ್ರತಿಮೆಗಳಿವೆ. ಪಾದ್ರಿಯ ಆಸನದ ಕಡೆಗೆ ಉತ್ತಮವಾದ ಕೆತ್ತನೆಯ ಕೆಲಸವು ಕಣ್ಣಿಗೆ ಬಿತ್ತು. ಬಂಗಾರದ ಬಣ್ಣವನ್ನು ಅದಕ್ಕೆ ಕೊಟ್ಟಿದ್ದರು.

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ನಿಮ್ಮ ದೇಶದ ಗೌರವವನ್ನು ಕಾಯಿರಿ! ಇದು ದೊಡ್ಡದಾದ ರಾಷ್ಟ್ರ"**

**ಉ: ಆಯ್ಕೆ:** ಈ ವಾಕ್ಯವನ್ನು ವಿ.ಕೃ. ಗೋಕಾಕ ಅವರ 'ಸಮುದ್ರದಾಚೆಯಿಂದ' ಎಂಬ ಪ್ರವಾಸ ಕಥನದಿಂದ ಆರಿಸಲಾಗಿರುವ 'ಲಂಡನ್ ನಗರ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಲೇಖಕರು ಲಂಡನ್ ನಗರದ ಬೀದಿಬೀದಿಯಲ್ಲೂ ಇತಿಹಾಸ ಪ್ರಸಿದ್ಧ ಪುರುಷರ ಪ್ರತಿಮೆಗಳನ್ನು ನೋಡಿ 'ತಮ್ಮ ದೇಶಕ್ಕಾಗಿ ಜೀವನವನ್ನು ಲೆಕ್ಕಿಸದೆ ದುಡಿದವರು ನಿಂತು ಕೈಯೆತ್ತಿ "ನಿಮ್ಮ ದೇಶದ ಗೌರವವನ್ನು ಕಾಯಿರಿ! ಇದು ದೊಡ್ಡದಾದ ರಾಷ್ಟ್ರ" ಎಂದು ಹೇಳುತ್ತಿರುವಂತೆ ತೋರುತ್ತದೆ' ಎಂದು ಈ ಸಂದರ್ಭದಲ್ಲಿ ಹೇಳಿದ್ದಾರೆ.

**ಸ್ವಾರಸ್ಯ:** ರಾಷ್ಟ್ರಕ್ಕಾಗಿ ದುಡಿದ ಮಹನೀಯರಿಗೆ ಲಂಡನ್ ನಗರದಲ್ಲಿ ಅಲ್ಲಿನ ಜನ ತೋರಿಸಿರುವ ಗೌರವಭಾವನೆ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೨. "ಹೊತ್ತು ! ಹೊತ್ತು ! ಹೊತ್ತೇ ಹಣ"**

**ಉ: ಆಯ್ಕೆ:** ಈ ವಾಕ್ಯವನ್ನು ವಿ.ಕೃ. ಗೋಕಾಕ ಅವರ 'ಸಮುದ್ರದಾಚೆಯಿಂದ' ಎಂಬ ಪ್ರವಾಸ ಕಥನದಿಂದ ಆರಿಸಲಾಗಿರುವ 'ಲಂಡನ್ ನಗರ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಲಂಡನ್ ನಗರದ ಬೀದಿಯಲ್ಲಿ ಲಕ್ಷಾನುಲಕ್ಷ ಜನರು ಅವಸರದಿಂದ ಓಡಾಡುತ್ತಿರುವುದನ್ನು ನೋಡಿ time! time! time is money (ಹೊತ್ತು! ಹೊತ್ತು! ಹೊತ್ತೇ ಹಣ) ಎಂದು ಈ ಸಂದರ್ಭದಲ್ಲಿ ಹೇಳಿದ್ದಾರೆ.

**ಸ್ವಾರಸ್ಯ:** ಸಮಯಕ್ಕೆ ಬಹಳ ಪ್ರಾಮುಖ್ಯತೆ ಇದೆ. ಅದರಲ್ಲೂ ವಿದೇಶಗಳಲ್ಲಿ ಸಮಯವೇ ಹಣ ಎಂಬ ಮಾತು ಅಕ್ಷರಶಃ ನಿಜವಾಗಿದೆ ಎಂಬ ಮಾತು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೩. "ಯಾರನ್ನು ತುಳಿದರೇನು! ಎಲ್ಲಿ ಹೆಜ್ಜೆ ಹಾಕಿದರೇನು? ಎಲ್ಲವೂ ಅಷ್ಟೆ! ಮಣ್ಣು! ಮಣ್ಣು!"**

**ಉ: ಆಯ್ಕೆ:** ಈ ವಾಕ್ಯವನ್ನು ವಿ.ಕೃ.ಗೋಕಾಕ ಅವರ 'ಸಮುದ್ರದಾಚೆಯಿಂದ' ಎಂಬ ಪ್ರವಾಸ ಕಥನದಿಂದ ಆರಿಸಲಾಗಿರುವ 'ಲಂಡನ್ ನಗರ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** 'ವೆಸ್ಟ್ ಮಿನ್‌ಸ್ಟರ್ ಅಬೆ' ಎಂಬ ಪ್ರಾರ್ಥನಾ ಮಂದಿರದ ಆವರಣದಲ್ಲಿ ಸ್ಥಾಪಿಸಲಾಗಿದ್ದ ಕವಿಗಳ, ಸಾರ್ವಭೌಮರ ನೆನಪಿಗಾಗಿ ಕಲ್ಲುಹಾಸುಗಳನ್ನು ಇಟ್ಟಿದ್ದು ಅವುಗಳ ಮೇಲೆ ನಡೆದು ಹೋಗಬೇಕಾಗಿತ್ತು. ಅವುಗಳ ಬಳಿ ನಡೆದು ಹೋಗುತ್ತಿದ್ದ ಸಂದರ್ಭದಲ್ಲಿ ಲೇಖಕರು "ಯಾರನ್ನು ತುಳಿದರೇನು? ಎಲ್ಲಿ ಹೆಜ್ಜೆ ಹಾಕಿದರೇನು? ಎಲ್ಲವೂ ಅಷ್ಟೆ! ಮಣ್ಣು, ಮಣ್ಣು! ಎಂದು ಮನಸ್ಸಿಗೆ ಬಂದಂತೆ ಮನುಷ್ಯನು ನಡೆಯಹತ್ತುತ್ತಾನೆ" ಎಂದು ಹೇಳಿದ್ದಾರೆ.

**ಸ್ವಾರಸ್ಯ:** ಸಾಧಕರ ಮಾರ್ಗದಲ್ಲಿ ನಡೆವಾಗ ಮಾನವನು ದಿಕ್ಕುತಪ್ಪಿದಂತಾದಾಗ "ಎಲ್ಲವೂ ಅಷ್ಟೇ! ಬರಿಯ ಮಣ್ಣು" ಎಂದು ಮನಸ್ಸಿನಲ್ಲಿ ಮೂಡುತ್ತದೆ. ನಶ್ವರವಾಗಿ ಕಾಣುತ್ತದೆ ಎಂಬುದು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೪. "ಪ್ರವಾಸವು ಶಿಕ್ಷಣದ ಒಂದು ಭಾಗವಾಗಿದೆ"**

**ಉ: ಆಯ್ಕೆ:** ಈ ವಾಕ್ಯವನ್ನು ವಿ.ಕೃ.ಗೋಕಾಕ ಅವರ 'ಸಮುದ್ರದಾಚೆಯಿಂದ' ಎಂಬ ಪ್ರವಾಸ ಕಥನದಿಂದ ಆರಿಸಲಾಗಿರುವ 'ಲಂಡನ್ ನಗರ' ಎಂಬ ಗದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಲಂಡನ್ ನಗರ ಪ್ರವಾಸ ಕಥನದ ಕೊನೆಯಲ್ಲಿ ಪ್ರವಾಸದ ಶೈಕ್ಷಣಿಕ ಮಹತ್ವವನ್ನು ತಿಳಿಸುವ ಸಂದರ್ಭದಲ್ಲಿ ಪ್ರವಾಸದಿಂದ ತಮ್ಮ ಮನಸ್ಸು ವಿಕಾಸಹೊಂದಿ, ದೃಷಿಕೋನ ವಿಶಾಲವಾದ ಬಗ್ಗೆ 'ಪ್ರವಾಸವು ಶಿಕ್ಷಣದ ಒಂದು ಭಾಗವಾಗಿದೆ' ಎಂದು ಬೇಕನ್ ಹೇಳಿದ ಮಾತನ್ನು ಇಲ್ಲಿ ಲೇಖಕರು ಉದಾಹರಿಸಿದ್ದಾರೆ.

**ಸ್ವಾರಸ್ಯ:** 'ದೇಶ ಸುತ್ತು ಕೋಶ ಓದು' ಎಂಬ ಮಾತಿನಂತೆ ಪರಿಪೂರ್ಣ ಶಿಕ್ಷಣಕ್ಕೆ ಪ್ರವಾಸ ಅತಿ ಮುಖ್ಯ. ಆದ್ದರಿಂದ ಈ ಮಾತು ಪ್ರವಾಸದ ಮಹತ್ವವನ್ನು ತಿಳಿಸುತ್ತದೆ.

**ಉ) ಇಲ್ಲಿ ಬಿಟ್ಟಿರುವ ಪದಗಳನ್ನು ಸರಿಯಾದ ಪದಗಳಿಂದ ತುಂಬಿರಿ.**

೧. ಲಂಡನ್ ಪಟ್ಟಣವೆಂದರೆ ಒಂದು **ಸ್ವತಂತ್ರ** ಜಗತ್ತು. ೨. ವೂಲವರ್ಥ ಎಂಬುದು **ಸ್ಟೇಷನರಿ** ಅಂಗಡಿ.

೩. ಮನೆ ಹಿಡಿದು ಇರುವ **ತರುಣನ** ಬುದ್ಧಿ ಮನೆಯ ಮಟ್ಟದ್ದೇ.

೪. ಅಬೆಯಲ್ಲಿರುವ ಸಿಂಹಾಸನಕ್ಕೆ **ಸ್ಟೋನ್ ಆಫ್ ಸ್ಕೋನ್** ಎಂದು ಹೆಸರು.

**ಊ) ಈ ಪದಗಳನ್ನು ಬಿಡಿಸಿ ಸಂಧಿಯ ಹೆಸರನ್ನು ಬರೆಯಿರಿ.**

೧. ಒಮ್ಮೊಮ್ಮೆ= ಒಮ್ಮೆ+ಒಮ್ಮೆ–ಲೋಪಸಂಧಿ ೨. ಜಾಗವನ್ನು = ಜಾಗ + ಅನ್ನು – ಆಗಮ ಸಂಧಿ (ವ್)

೩. ಅತ್ಯಾದರ= ಅತಿ+ಆದರ–ಯಣ್ಸಂಧಿ ೪. ವಾಚನಾಲಯ = ವಾಚನ + ಆಲಯ – ಸವರ್ಣದೀರ್ಘಸಂಧಿ

೫. ಸಂಗ್ರಹಾಲಯ= ಸಂಗ್ರಹ+ಆಲಯ–ಸವರ್ಣದೀರ್ಘಸಂಧಿ, ೬. ಓಣಿಯಲ್ಲಿ=ಓಣಿ+ಅಲ್ಲಿ – ಆಗಮ ಸಂಧಿ (ಯ್)

## ಭಾಷಾ ಚಟುವಟಿಕೆ

**ಕೊಟ್ಟಿರುವ ಸೂಚನೆಯಂತೆ ಉತ್ತರಿಸಿ.**

**೧. ವೆಸ್ಟ್‌ಮಿನ್‌ಸ್ಟರ್ ಅಬೆ ನೋಡಿಕೊಂಡು ಬಂದೆವು. (ಭವಿಷ್ಯತ್‌ಕಾಲಕ್ಕೆ ಪರಿವರ್ತಿಸಿ)**

**ಉ:** ವೆಸ್ಟ್‌ಮಿನ್‌ಸ್ಟರ್ ಅಬೆ ನೋಡಿಕೊಂಡು ಬರುವೆವು.

**೨. ಶೈಕ್ಷಣಿಕ ಅಧ್ಯಯನ ದೃಷ್ಟಿಯಿಂದ ಶೈಕ್ಷಣಿಕ ಪ್ರವಾಸ ಮಾಡುವರು. (ವರ್ತಮಾನಕಾಲಕ್ಕೆ ಪರಿವರ್ತಿಸಿ)**

**ಉ:** ಶೈಕ್ಷಣಿಕ ಅಧ್ಯಯನ ದೃಷ್ಟಿಯಿಂದ ಶೈಕ್ಷಣಿಕ ಪ್ರವಾಸ ಮಾಡುತ್ತಾರೆ.

೩. ಹೆಜ್ಜೆ ಹೆಜ್ಜೆಗೆ ಇತಿಹಾಸದ ಅಡಿಗಲ್ಲುಗಳು ದೊರೆಯುತ್ತವೆ. (ಭೂತಕಾಲಕ್ಕೆ ಪರಿವರ್ತಿಸಿ)

**ಉ:** ಹೆಜ್ಜೆ ಹೆಜ್ಜೆಗೆ ಇತಿಹಾಸದ ಅಡಿಗಲ್ಲುಗಳು ದೊರೆತವು.

**********

## ಗದ್ಯ-೪. ಭಾಗ್ಯಶಿಲ್ಪಿಗಳು

***(೧. ನಾಲ್ವಡಿ ಕೃಷ್ಣರಾಜ ಒಡೆಯರು, ೨. ಸರ್ ಎಂ. ವಿಶ್ವೇಶ್ವರಯ್ಯ)***

**ಲೇಖಕರ ಪರಿಚಯ: ಡಿ.ಎಸ್.ಜಯಪ್ಪಗೌಡ**

**ಡಿ. ಎಸ್. ಜಯಪ್ಪಗೌಡ (೧೯೪೭)** ಇವರು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ **ದಾರದಹಳ್ಳಿಯವರು.** ದಾರದಹಳ್ಳಿ ಸುಬ್ಬೇಗೌಡ ಜಯಪ್ಪಗೌಡ ಎಂಬುದು ಇವರ ಪೂರ್ಣಹೆಸರು. ಕರ್ನಾಟಕ ಗ್ರಾಮೀಣ ಸಂಸ್ಥೆಗಳು. **ಕರ್ನಾಟಕದ ಕಡಲಾಚೆಯ ಸಂಪರ್ಕಗಳು. ಮೈಸೂರು ಒಡೆಯರು. ಜನಪದ ಆಟಗಳು, ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು** ಶ್ರೀಯುತರ ಪ್ರಮುಖ ಕೃತಿಗಳು. **ಕರ್ನಾಟಕದ ಕಡಲಾಚೆಯ ಸಂಪರ್ಕಗಳು** ಕೃತಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದೆ. **ಧಾರವಾಡ ಕರ್ನಾಟಕ ಸಂಘದ ಸಂಶೋಧನಾ** ಬಹುಮಾನಕ್ಕೆ ಭಾಜನರಾಗಿದ್ದಾರೆ..

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

**೧. ನಾಲ್ವಡಿ ಕೃಷ್ಣರಾಜ ಒಡೆಯರು ಯಾವಾಗ ಪಟ್ಟಾಭಿಷಿಕ್ತರಾದರು?**
ಉ: ನಾಲ್ವಡಿ ಕೃಷ್ಣರಾಜ ಒಡೆಯರು **೧೮೯೫ ರಲ್ಲಿ** ಪಟ್ಟಾಭಿಷಿಕ್ತರಾದರು.

**೨. ನಾಲ್ವಡಿ ಕೃಷ್ಣರಾಜ ಒಡೆಯರು ಯಾವುದಕ್ಕಾಗಿ ಕಂಕಣಬದ್ಧರಾದರು?**
ಉ: ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯದ ಸರ್ವೋತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾದರು

**೩. ಏಷ್ಯಾ ಖಂಡದಲ್ಲಿಯೇ ಮೊದಲು ಪ್ರಾರಂಭಿಸಿದ ಜಲ ವಿದ್ಯುತ್ ಯೋಜನೆ ಯಾವುದು?**
ಉ: ಶಿವನಸಮುದ್ರದ ಬಳಿ ಕಾವೇರಿ ನದಿಯ ಜಲವಿದ್ಯುತ್ ಯೋಜನೆ ಏಷ್ಯಾ ಖಂಡದಲ್ಲಿಯೇ ಮೊದಲು ಪ್ರಾರಂಭಿಸಿದ ಜಲ ವಿದ್ಯುತ್ ಯೋಜನೆಯಾಗಿದೆ.

**೪. ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ ಯಾವ ಪದವಿಯನ್ನು ನೀಡಿ ಗೌರವಿಸಿತು?**
ಉ: ಬ್ರಿಟಿಷ್ ಸರ್ಕಾರ ವಿಶ್ವೇಶ್ವರಯ್ಯ ಅವರಿಗೆ ಸರ್ ಪದವಿಯನ್ನು ನೀಡಿ ಗೌರವಿಸಿತು.

**೫. ವಿಶ್ವೇಶ್ವರಯ್ಯ ಅವರನ್ನು ದಿವಾನರಾಗಿ ನೇಮಿಸಿದವರು ಯಾರು?**
ಉ: ವಿಶ್ವೇಶ್ವರಯ್ಯ ಅವರನ್ನು ದಿವಾನರಾಗಿ ನೇಮಿಸಿದವರು ನಾಲ್ವಡಿ ಕೃಷ್ಣರಾಜ ಒಡೆಯರ್.

**೬. ವಿಶ್ವೇಶ್ವರಯ್ಯ ಅವರ ಹುಟ್ಟು ಹಬ್ಬದ ನೆನಪಿಗಾಗಿ ಯಾವ ದಿನಾಚರಣೆಯನ್ನು ಮಾಡಲಾಗುತ್ತಿದೆ?**
ಉ: ವಿಶ್ವೇಶ್ವರಯ್ಯ ಅವರ ಹುಟ್ಟು ಹಬ್ಬದ ನೆನಪಿಗಾಗಿ ಎಂಜಿನಿಯರ್ ದಿನಾಚರಣೆಯನ್ನು ಮಾಡಲಾಗುತ್ತಿದೆ.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು?**
**ಉ:** ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 1. ಗ್ರಾಮ ನಿರ್ಮಲೀಕರಣ 2. ವೈದ್ಯ ಸಹಾಯ 3. ವಿದ್ಯಾ ಪ್ರಚಾರ 4. ನೀರಿನ ಸೌಕರ್ಯ 5. ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು.

**೨. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?**
**ಉ:** ೧೯೦೦ರಲ್ಲಿಯೇ ಶಿವನಸಮುದ್ರದ ಬಳಿ ಕಾವೇರಿ ನದಿಯಿಂದ ಜಲವಿದ್ಯುತ್ ಉತ್ಪಾದನಾ ಕೇಂದ್ರ ಪ್ರಾರಂಭವಾಯಿತು. ಇದು ಭಾರತ ಮಾತ್ರವಲ್ಲ, ಏಷ್ಯಾ ಖಂಡದಲ್ಲೇ ಮೊದಲ ಜಲವಿದ್ಯುತ್ ಯೋಜನೆ. ೧೯೦೭ರಲ್ಲಿ ವಾಣಿ ವಿಲಾಸ ಸಾಗರ (ಮಾರಿ ಕಣಿವೆ) ಕಟ್ಟಲ್ಪಟ್ಟಿತು. ೧೯೧೧ರಲ್ಲಿ ಕೃಷ್ಣರಾಜ ಸಾಗರ ಇವರ ಬೃಹತ್ ಕೊಡುಗೆ.

**೩. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಏನೆಂದು ಹೇಳಿದ್ದಾರೆ?**
**ಉ:** ವಿಶ್ವೇಶ್ವರಯ್ಯ ಅವರು **"**ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು**"** ಎಂದು ಹೇಳಿದ್ದಾರೆ.

**೪. ನೆಹರೂ ಅವರು ಸರ್ ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ ಏನೆಂದು ಹೇಳಿದ್ದಾರೆ?**
ಉ: ನೆಹರೂ ಅವರು ಸರ್ ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ **"**ದುರದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹುದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ. ಅದನ್ನು ನಾವು ತಮ್ಮಿಂದ ಕಲಿಯೋಣ**"** ಹೇಳಿದ್ದಾರೆ.

**೫. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಾಡುಗಳಾವುವು?**
**ಉ:** ವಿಶ್ವೇಶ್ವರಯ್ಯ ಅವರು ಕ್ರಿ.ಶ. 1913ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು. ಕೈಗಾರಿಕೆಗಳ ಅಭಿವೃದ್ಧಿಗೆ ಫೀಡರ್ ಬ್ಯಾಂಕ್ ಹಾಗೂ ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳು ರಚಿತಗೊಂಡವು. ಸಾರ್ವಜನಿಕ ಜೀವವಿಮಾ ಯೋಜನೆ ಜಾರಿಗೆ ತಂದರು. ರೈತರಿಗೆ ಹಾಗೂ ಕರಕುಶಲ ಕೆಲಸಗಾರರಿಗೆ ಸಾಲದ ಸೌಲಭ್ಯ ನೀಡಲು ಪ್ರಾಂತೀಯ ಸಹಕಾರಿ ಬ್ಯಾಂಕ್‌ಗಳನ್ನು ಸ್ಥಾಪಿಸಿದರು. ರಾಜ್ಯದ ಆಸ್ತಿಯನ್ನು ಹೆಚ್ಚಿಸಿ ಆದಾಯ ತರುವುದರ ಮೂಲಕ ಅಭಿವೃದ್ಧಿ ಕಾರ್ಯಗಳ ಪ್ರಭಾವವನ್ನು ಅಳೆಯಲು ಅನುಕೂಲವಾಗುವಂತೆ ಆಯವ್ಯಯದಲ್ಲಿ ಹೊಸ ದೃಷ್ಟಿಕೋನವನ್ನು ಕಂಡುಕೊಂಡರು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು?**

**ಉ:** 1902ರ ಆಗಸ್ಟ್ 8ನೇ ತಾರೀಖಿನಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿ ಕೃಷ್ಣರಾಜ ಒಡೆಯರ ಸುಪರ್ದಿಗೆ ಬಂದಿತು. ಆಗ ದಿವಾನರಾಗಿದ್ದ ಸರ್. ಕೆ. ಶೇಷಾದ್ರಿ ಅಯ್ಯರ್‌ರವರ ಸಹಕಾರದೊಡನೆ ಮೈಸೂರು ರಾಜ್ಯದ ಸರ್ವೋತೋಮುಖ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರು ಕಂಕಣಬದ್ಧರಾದರು. ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡುದರಿಂದ, ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು. ನಾಲ್ವಡಿ ಕೃಷ್ಣರಾಜ ಒಡೆಯರು ಅರಸು ಮನೆತನದಿಂದ ಬಂದವರಾಗಿದ್ದರೂ ಸಹ, ಜನತೆ ಆಡಳಿತದಲ್ಲಿ ಪಾಲ್ಗೊಳ್ಳುವಿಕೆಯ ಪರವಾಗಿದ್ದರು.

**೨. ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.**

**ಉ:** ವಿಶ್ವೇಶ್ವರಯ್ಯ ಮೈಸೂರು ಸಂಸ್ಥಾನದ ದಿವಾನರಾಗಿ ಆಡಳಿತದಲ್ಲಿ ಹೊಸ ಮಾದರಿಯನ್ನು ಅನುಷ್ಠಾನಗೊಳಿಸಿದರು. ಕಛೇರಿಯ ಕೆಲಸ ಕಾರ್ಯಗಳಲ್ಲಿ ಸಾಕಷ್ಟು ಸುಧಾರಣೆ ಮಾಡಿದರು. ಆಡಳಿತದಲ್ಲಿ ದಕ್ಷತೆ ಮತ್ತು ಪ್ರಾಮಾಣಿಕತೆಗೆ ಒತ್ತು ನೀಡಿದರು. ಸಂಸ್ಥಾನದಲ್ಲಿ ಸ್ಥಳೀಯ ಮಟ್ಟದಲ್ಲಿ ಕೇಂದ್ರೀಕೃತವಾಗಿದ್ದ ನ್ಯಾಯಾಂಗ ಮತ್ತು ಕಾರ್ಯಾಂಗಗಳ ಅಧಿಕಾರವನ್ನು ಪ್ರತ್ಯೇಕಗೊಳಿಸಿದರು. ರಾಜ್ಯ ಪ್ರವಾಸ ಮಾಡಿ ಅಜಮಾಯಿಷಿ ಕಾರ್ಯ ನಡೆಸಿದರು. ಸಮರ್ಥ ಕಾರ್ಯನಿರ್ವಹಣೆಗಾಗಿ ಸಮಿತಿಗಳನ್ನು ರಚಿಸಿದರು. ನೇಮಕಾತಿಯಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಿದರು. ತಾಂತ್ರಿಕ ವೃತ್ತಿಪರ ಶಿಕ್ಷಣಕ್ಕೆ ಆದ್ಯತೆ ನೀಡಿದರು. ಭಾಷೆ, ಸಾಹಿತ್ಯ ಮತ್ತು ಸಂಶೋಧನೆಗಳಿಗೆ ಪ್ರೋತ್ಸಾಹ ನೀಡಿದರು. ಮೈಸೂರು ಸಂಸ್ಥಾನದಲ್ಲಿ ಕೈಗಾರಿಕೆಗೆ ಅಗ್ರ ಪ್ರಾಶಸ್ತ್ಯ ನೀಡಿದರು. ರಾಜ್ಯದ ಆರ್ಥಿಕ ಚಟುವಟಿಕೆಗಳಿಗೆ ಭದ್ರ ಬುನಾದಿ ಹಾಕುವ ಉದ್ದೇಶದಿಂದ ಹಣಕಾಸು ನೀತಿಯಲ್ಲಿ ಮಾರ್ಪಾಡು ಮಾಡಿದರು.

**೩. ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.**

**ಉ:** ವಿಶ್ವೇಶ್ವರಯ್ಯ ಅವರು ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರವೆಂದು ನಂಬಿದ್ದರು. ಕ್ರಿ.ಶ. 1913 ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಮದ್ರಾಸ್ ವಿಶ್ವವಿದ್ಯಾನಿಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದ ಪ್ರೌಢಶಿಕ್ಷಣ ಶಾಲೆಗಳನ್ನು ಬದಲಿಸಿ ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನೆಯನ್ನು ಆರ್ಥಿಕ ಪರಿಷತ್ತಿನ ಮೂಲಕ ಜಾರಿಗೆ ತಂದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪಿಸಿದರು. "ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸ್ವತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂಬುದನ್ನು ಮನಗಂಡ ಇವರು ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಆದ್ಯತೆ ನೀಡಿದರು. ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಶಾಲೆ, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. ಮಹಿಳಾ ಶಿಕ್ಷಣದ ಬಗ್ಗೆ ಸಹಾನುಭೂತಿ ಹೊಂದಿದ್ದ ಇವರು ಗೃಹಶಿಕ್ಷಣ ಶಾಲೆಗಳನ್ನು ಸ್ಥಾಪಿಸಿದರು. ವಿದ್ಯಾರ್ಥಿ ವೇತನವನ್ನು ಕೊಡುವ ಮೂಲಕ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುವು ಮಾಡಿಕೊಟ್ಟರು.

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ಸಾಮಾಜಿಕ ಕಾನೂನುಗಳ ಹರಿಕಾರ."**

**ಉ: ಆಯ್ಕೆ:–** ಈ ವಾಕ್ಯವನ್ನು **ಶ್ರೀ ಡಿ.ಎಸ್. ಜಯಪ್ಪಗೌಡ** ಅವರು ರಚಿಸಿರುವ **'ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು'** ಎಂಬ ಕೃತಿಯಿಂದ ಆಯ್ದ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–** ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆಗಳನ್ನು ವಿವರಿಸುವ ಸಂದರ್ಭದಲ್ಲಿ ಲೇಖಕರು ಈ ಮಾತನ್ನು ಹೇಳಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರು ಸ್ಥಳೀಯ ಸಂಸ್ಥೆಗಳನ್ನು ರಚಿಸಿ ಆಡಳಿತ ವಿಕೇಂದ್ರೀಕರಣ ಮಾಡಿದರು. ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವನ್ನಾಗಿ ರೂಪಿಸಿದರು. 'ಸಾಮಾಜಿಕ ಕಾನೂನುಗಳ ಹರಿಕಾರ' ಎಂದು ಹೆಸರಾದರು. ಸಾಹಿತ್ಯ, ಸಂಗೀತ, ವಾಸ್ತುಶಿಲ್ಪಗಳ ಅಭಿವೃದ್ಧಿಗೆ ಒತ್ತು ನೀಡಿದರು.

**ಸ್ವಾರಸ್ಯ:–** ಸ್ವತಃ ರಾಜರಾಗಿ ಕೇಂದ್ರೀಕೃತ ವ್ಯವಸ್ಥೆಗೆ ಬದಲಾಗಿ ಆಡಳಿತದಲ್ಲಿ ವಿಕೇಂದ್ರೀಕೃತ ವ್ಯವಸ್ಥೆ ತಂದು ಸಾಮಾಜಿಕ ಕಾನೂನುಗಳನ್ನು ಜಾರಿಗೊಳಿಸಿದ ಒಡೆಯರಿಗೆ ಈ ಬಿರುದು ನೀಡಿರುವುದು ಒಪ್ಪುವಂತಾದ್ದಾಗಿದೆ.

**೨. "ಅವರ ಸಾಧನೆಯ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು."**

**ಉ: ಆಯ್ಕೆ:–** ಈ ವಾಕ್ಯವನ್ನು **ಶ್ರೀ ಡಿ.ಎಸ್. ಜಯಪ್ಪಗೌಡ** ಅವರು ರಚಿಸಿರುವ **'ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು'** ಎಂಬ ಕೃತಿಯಿಂದ ಆಯ್ದ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–**ವಿಶ್ವೇಶ್ವರಯ್ಯ ಅವರು ಪೂನಾದ ಮುಥಾ ಕಾಲುವೆಗೆ ನೀರಿನ ನೆಲೆಯಾಗಿದ್ದ ಪೀಪ್ ಜಲಾಶಯಕ್ಕೆ ಸ್ವತಃ ತಾವೇ ಅನ್ವೇಷಣೆ ಮಾಡಿದ ಸ್ವಯಂಚಾಲಿತ ಬಾಗಿಲುಗಳನ್ನು ಯಶಸ್ವಿಯಾಗಿ ಅಳವಡಿಸಿದರು ಎಂದು ಹೇಳುವ ಸಂದರ್ಭದಲ್ಲಿ ಲೇಖಕರು ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ:–** ವಿಶ್ವೇಶ್ವರಯ್ಯ ಅವರಲ್ಲಿದ್ದ ಬುದ್ಧಿಶಕ್ತಿ ಹಾಗೂ ಅನ್ವೇಷಣಾ ಸಾಮರ್ಥ್ಯವನ್ನು ಈ ಮಾತಿನ ಮೂಲಕ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸಲಾಗಿದೆ.

**೩. "ಆದರ್ಶ ಪುರುಷರೊಬ್ಬರು ದಿವಾನರಾದದ್ದು ಮೈಸೂರು ಸಂಸ್ಥಾನದ ಪುಣ್ಯ ವಿಶೇಷವೇ ಸರಿ."**

**ಉ: ಆಯ್ಕೆ:–** ಈ ವಾಕ್ಯವನ್ನು **ಶ್ರೀ ಡಿ.ಎಸ್. ಜಯಪ್ಪಗೌಡ** ಅವರು ರಚಿಸಿರುವ **'ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು'** ಎಂಬ ಕೃತಿಯಿಂದ ಆಯ್ದ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–**ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಂದ ದಿವಾನರಾಗಿ ನೇಮಕಗೊಂಡ ವಿಶ್ವೇಶ್ವರಯ್ಯ ಅವರು ಆಡಳಿತದಲ್ಲಿ ಹೊಸ ಮಾದರಿಯನ್ನು ಅನುಷ್ಠಾಗೊಳಿಸಿದ ಸಂದರ್ಭದಲ್ಲಿ ಜನರು ಈ ರೀತಿ ಹಾಡಿ ಹೊಗಳುತ್ತಾರೆ.

**ಸ್ವಾರಸ್ಯ:–** ಮೈಸೂರು ಸಂಸ್ಥಾನದ ದಿವಾನರಾಗಿ ವಿಶ್ವೇಶ್ವರಯ್ಯ ಅವರು ಮಾಡಿದ ಕಾರ್ಯಗಳು ಅಭೂತಪೂರ್ವವಾದವುಗಳು ಎಂಬುದನ್ನು ಈ ಮಾತಿನಲ್ಲಿ ಬಹು ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸಲಾಗಿದೆ.

೪. **"ಮೊಟ್ಟಮೊದಲ ಬಾರಿಗೆ ಸ್ತ್ರೀಯರಿಗೆ ಮತದಾನದ ಹಕ್ಕು."**

**ಆಯ್ಕೆ:–** ಈ ವಾಕ್ಯವನ್ನು **ಶ್ರೀ ಡಿ.ಎಸ್. ಜಯಪ್ಪಗೌಡ** ಅವರು ರಚಿಸಿರುವ **'ದಿವಾನ್ ಸರ್ ಎಂ. ವಿಶ್ವೇಶ್ವರಯ್ಯನವರ ಕಾರ್ಯಸಾಧನೆಗಳು'** ಎಂಬ ಕೃತಿಯಿಂದ ಆಯ್ದ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–** ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಜಾರಿಮಾಡಿದ ಸಾಮಾಜಿಕ ಕಾನೂನುಗಳನ್ನು ತಿಳಿಸುವ ಸಂದರ್ಭದಲ್ಲಿ '೧೯೨೭ ರಲ್ಲಿ ಮೊಟ್ಟಮೊದಲ ಬಾರಿಗೆ ಸ್ತ್ರೀಯರಿಗೆ ಮತದಾನದ ಹಕ್ಕನ್ನು ನೀಡಿದರು' ಎಂದು ಲೇಖಕರು ಉಲ್ಲೇಖಿಸಿದ್ದಾರೆ. ಇಷ್ಟೇ ಅಲ್ಲದೆ ದೇವದಾಸಿ ಪದ್ಧತಿ ನಿಷೇಧ, ವೇಶ್ಯಾ ವೃತ್ತಿ ತಡೆಗಟ್ಟುವ ಕಾಯ್ದೆ; ವಿಧವಾ ಮರು ವಿವಾಹ ಕಾಯ್ದೆ, ಸ್ತ್ರೀಯರಿಗೆ ಕಡ್ಡಾಯ ಶಿಕ್ಷಣ ಜಾರಿಗೊಳಿಸಿ ಸ್ತ್ರೀಯರಿಗೆ ಬಲತುಂಬಿದರು

**ಸ್ವಾರಸ್ಯ:–** ಸ್ತ್ರೀಯರಿಗೆ ಸರಿಯಾದ ಸ್ಥಾನಮಾನಗಳಿಲ್ಲದ ಕಾಲದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರು ಅವರಿಗೆ ಸಾಮಾಜಿಕ ನ್ಯಾಯ ದೊರಕಿಸಿದ್ದು ಸ್ವಾರಸ್ಯಪೂರ್ಣವಾಗಿ ವ್ಯಕ್ತಗೊಂಡಿದೆ.

**ಉ) ಬಿಟ್ಟ ಸ್ಥಳವನ್ನು ಸರಿಯಾದ ಪದದಿಂದ ತುಂಬಿರಿ.**

೧. ನಾಲ್ವಡಿ ಕೃಷ್ಣರಾಜ ಒಡೆಯರ್‌ರವರಿಗೆ ರೀಜೆಂಟರಾಗಿ ಕಾರ್ಯನಿರ್ವಹಿಸಿದವರು **ಮಹಾರಾಣಿ ವಾಣಿವಿಲಾಸರವರು**.

೨. ೧೯೧೮ರಲ್ಲಿ ಶಾಲಾ ಪ್ರವೇಶಕ್ಕೆ **ಜಾತಿ ಪರಿಗಣನೆಯ** ನಿಷೇಧವಾಯಿತು.

೩. ವಿಶ್ವೇಶ್ವರಯ್ಯ ಅವರು ಮುಂಬೈ ಪ್ರಾಂತ್ಯದಲಿ **ಸಹಾಯಕ ಎಂಜಿನಿಯರ್** ಆಗಿ ಸೇವೆ ಪ್ರಾರಂಭಿಸಿದರು.

೪. ಮುಂಬೈ ಪ್ರಾಂತ್ಯದ ಗವರ್ನರ್ ಆಗಿದ್ದ **ಲಾರ್ಡ್ ಸಂಡ್ ಹರ್ಸ್ಟ್** ಅವರು ವಿಶ್ವೇಶ್ವರಯ್ಯ ಅವರನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

೫. ಭಾರತ ಸರಕಾರವು ವಿಶ್ವೇಶ್ವರಯ್ಯನವರಿಗೆ **ಭಾರತ ರತ್ನ** ಎಂಬ ಪ್ರಶಸ್ತಿ ನೀಡಿ ಗೌರವಿಸಿತು.

**ಭಾಷಾ ಚಟುವಟಿಕೆ**

**೧) ಕೊಟ್ಟಿರುವ ಪದಗಳ ತತ್ಸಮ–ತದ್ಭವ ಬರೆಯಿರಿ.**

ವಂಶ – ಬಂಚ, ಸ್ಥಾನ – ತಾನ(ಠಾಣ), ಯಶ – ಜಸ, ಪಟ್ಟಣ – ಪತ್ತನ, ಕಾರ್ಯ – ಕಜ್ಜ

**೨) ನೀಡಿರುವ ಪದಗಳಲ್ಲಿ ಅನ್ಯದೇಶ್ಯ ಪದಗಳನ್ನು ಆರಿಸಿ ಬರೆಯಿರಿ.**

**ಅನ್ಯದೇಶ್ಯ ಪದಗಳು:** ಡಿಪ್ಲೊಮಾ, ಅಜಮಾಯಿಷಿ, ದಿವಾನ, ಸೋಪು, ಕಾರ್ಖಾನೆ, ಕಾಗದ, ಕಚೇರಿ.

# ಪದ್ಯ–೪ ಕೌರವೇಂದ್ರನ ಕೊಂದೆ ನೀನು

**ಕವಿ–ಕೃತಿ ಪರಿಚಯ : ಕುಮಾರವ್ಯಾಸ**

* **ಕುಮಾರವ್ಯಾಸ** ಎಂದು ಪ್ರಸಿದ್ಧನಾಗಿರುವ **ಗದುಗಿನ ನಾರಣಪ್ಪನು ಕ್ರಿ. ಶ.ಸುಮಾರು ೧೪೩೦** ರಲ್ಲಿ ಗದಗ ಪ್ರಾಂತ್ಯದ **ಕೋಳಿವಾಡ**ದಲ್ಲಿ ಜನಿಸಿದನು.

* ಇವನು **ಕರ್ನಾಟ ಭಾರತ ಕಥಾ ಮಂಜರಿ** ಮತ್ತು **ಐರಾವತ** ಎಂಬ ಕೃತಿಗಳನ್ನು ರಚಿಸಿದ್ದಾನೆ.

* ಈತನು ತನ್ನ ಕೃತಿಯಲ್ಲಿ ರೂಪಕಾಲಂಕಾರವನ್ನು ಹೆಚ್ಚಾಗಿ ಬಳಸಿದ್ದರಿಂದ **ರೂಪಕ ಸಾಮ್ರಾಜ್ಯ ಚಕ್ರವರ್ತಿ** ಎಂಬ ಬಿರುದನ್ನು ಪಡೆದಿದ್ದಾನೆ.

* **ಕರ್ನಾಟ ಭಾರತ ಕಥಾ ಮಂಜರಿ** ಕೃತಿಯನ್ನು **ಕನ್ನಡಭಾರತ, ಗದುಗಿನ ಭಾರತ, ಕುಮಾರವ್ಯಾಸ ಭಾರತ** ಎಂಬ ಹೆಸರುಗಳಿಂದಲೂ ಕರೆಯಲಾಗುತ್ತದೆ.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಶ್ರೀಕೃಷ್ಣನು ಕರ್ಣನನ್ನು ರಥದಲ್ಲಿಹೇಗೆ ಕೂರಿಸಿಕೊಂಡನು?**

**ಶ್ರೀಕೃಷ್ಣನು ಕರ್ಣ**ನ ಸಂಗಡ ಮೈದುನತನದ ಸರಸವನ್ನು ಮಾಡಿ, ಕೈಹಿಡಿದು ಎಳೆದು ರಥದ **ಪೀಠದಲ್ಲಿ ಕೂರಿಸಿದನು.**

**೨. ಕುಮಾರ ವ್ಯಾಸನ ಆರಾಧ್ಯ ದೈವ ಯಾರು?**

ಕುಮಾರವ್ಯಾಸನ ಆರಾಧ್ಯ ದೈವ **ಗದುಗಿನ ವೀರನಾರಾಯಣ.**

**೩. ಅಶ್ವಿನೀದೇವತೆಗಳ ವರಬಲದಿಂದ ಜನಿಸಿದವರು ಯಾರು?**

ಅಶ್ವಿನೀದೇವತೆಗಳ ವರಬಲದಿಂದ ಜನಿಸಿದವರು **ನಕುಲ ಮತ್ತು ಸಹದೇವ.**

**೪. ಕುಮಾರವ್ಯಾಸನಿಗೆ ಇರುವ ಬಿರುದು ಯಾವುದು?**

ಕುಮಾರವ್ಯಾಸನಿಗೆ **'ರೂಪಕ ಸಾಮ್ರಾಜ್ಯ ಚಕ್ರವರ್ತಿ'** ಎಂಬ ಬಿರುದು ಇದೆ.

**೫. ನಾರಣಪ್ಪನಿಗೆ ಕುಮಾರವ್ಯಾಸ ಎಂಬ ಹೆಸರು ಏಕೆ ಬಂತು?**

ನಾರಣಪ್ಪನು ವ್ಯಾಸರ ಸಂಸ್ಕೃತ ಮಹಾಭಾರತವನ್ನು ಕನ್ನಡದಲ್ಲಿ ಕರ್ನಾಟ ಭಾರತ ಕಥಾಮಂಜರಿ ಎಂಬ ಕೃತಿ ರಚಿಸಿದ್ದರಿಂದ ಕುಮಾರವ್ಯಾಸ ಎಂಬ ಹೆಸರು ಬಂದಿತು.

**ಆ] ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ.**

**೧. ಕೃಷ್ಣನು ಕರ್ಣನಮನದಲ್ಲಿ ಯಾವ ರೀತಿಯಲ್ಲಿಭಯವನ್ನುಬಿತ್ತಿದನು?**

"ಕರ್ಣ ನಿಮಗೂ (ಪಾಂಡವರಿಗೂ) ಯಾದವ ಕೌರವರಿಗೂ ವಂಶ ಗೌರವದಲ್ಲಿ ಭೇದವಿಲ್ಲ. ನೀನು ನಿಜವಾಗಿ ಭೂಮಿಯ ಒಡೆಯ.ಆದರೆ ನಿನಗೆ ಮನದಲ್ಲಿ ಅದರ ಅರಿವಿಲ್ಲ" ಎಂದು ಹೇಳುತ ಕೃಷ್ಣನು ಕರ್ಣನ ಕಿವಿಯಲ್ಲಿಭಯವನ್ನುಭಿತ್ತಿದನು.

**೨. ಕುಂತಿ, ಮಾದ್ರಿಯರು ಯಾರ್ಯಾರ ಅನುಗ್ರಹದಿಂದ ಮಕ್ಕಳನ್ನು ಪಡೆದರು?**

ಕುಂತಿಯು ಯಮಧರ್ಮನ ಅನುಗ್ರಹದಿಂದ ಧರ್ಮರಾಯನನ್ನು, ವಾಯುವಿನ ಅನುಗ್ರಹದಿಂದ ಭೀಮನನ್ನು, ಇಂದ್ರನ ಅನುಗ್ರಹದಿಂದ ಅರ್ಜುನನ್ನು ಪಡೆದಳು. ಮಾದ್ರಿಯು ಅಶ್ವಿನೀದೇವತೆಗಳ ಅನುಗ್ರಹದಿಂದ ನಕುಲ ಸಹದೇವರನ್ನು ಪಡೆದಳು.

**೩. ಕೃಷ್ಣನು ಆಮಿಷಗಳನ್ನು ಒಡ್ಡಿದಾಗ ಕರ್ಣನಮನದಲ್ಲಿಮೂಡಿದಭಾವನೆಗಳೇನು?**

ಕೃಷ್ಣನು ಕರ್ಣನಿಗೆ ಆಮಿಷಗಳನ್ನು ಒಡ್ಡಿದಾಗ ಕೊರಳಸೆರೆಹಿಗ್ಗಿದವು, ಕಂಬನಿಯು ರಭಸದಿಂದಮುಂದೆ ಬಂದು, ಅಧಿಕವಾಗಿ ಕರ್ಣನು ದುಃಖಿಗೊಂಡು ಮನದೊಳಗೆ "ಅಯ್ಯೋ, ದುರ್ಯೋಧನನಿಗೆ ಕೇಡಾಯಿತು" ಎಂದನು. ಹರಿಯ ಹಗೆತನವು ಹೊಗೆ ತೋರದೆ ಸುಟ್ಟುಹಾಕುವುದಲ್ಲದೆ ಸುಮ್ಮನೆ ಹೋಗುವುದೆ. ಕೃಷ್ಣನು "ನನ್ನವಂಶದ ರಹಸ್ಯವನ್ನು ತಿಳಿಸಿ ನನ್ನನ್ನು ಕೊಂದನು" ಎಂದು ಮನದಲ್ಲಿ ನೊಂದುಕೊಂಡನು.

**೪. ಕೃಷ್ಣನು ಕೌರವೇಂದ್ರನನ್ನು ಕೊಂದನು ಎಂದು ಕರ್ಣಹೇಳಲು ಕಾರಣವೇನು?**

ಕರ್ಣನು ಕೃಷ್ಣನಿಗೆ "ನಾನು ರಾಜ್ಯದ ಸಿರಿಸಂಪತ್ತಿಗೆ ಸೋಲುವವನಲ್ಲ, ಪಾಂಡವರು ಕೌರವರು ಸೇವೆಯನ್ನು ಮಾಡುವುದು ನನಗೆ ಇಷ್ಟವಿಲ್ಲ. ಆದರೆ ನನ್ನನ್ನು ಕಾಪಾಡಿದ ಒಡೆಯನಾದ ದುರ್ಯೋಧನನಿಗೆ ಶತ್ರುಗಳ ಶಿರವನ್ನು ಕಡಿದು ತಂದು ಒಪ್ಪಿಸುವ ಆವೇಶದಲ್ಲಿ ಇದ್ದೆನು.ಆದರೆ ನೀನು ನನ್ನ ಜನ್ಮ ರಹಸ್ಯವನ್ನು ತಿಳಿಸಿ ದುರ್ಯೋಧನನ್ನು ಕೊಂದೆ" ಎಂದನು.

**೫. ಯುದ್ಧದ ವಿಚಾರದಲ್ಲಿ ಕರ್ಣನ ತೀರ್ಮಾನವೇನು?**

ಕರ್ಣನು ಕೃಷ್ಣನನ್ನು ಕುರಿತು "ನಾಳಿನ ಕೌರವರ ಮತ್ತು ಪಾಂಡವರ ಚತುರಂಗ ಬಲದ ನಡುವಿನ ಯುದ್ಧವು ಮೃತ್ಯುದೇವತೆಗೆ ಭೋಜನ ಕೂಟ ಆಗುವುದು. ನಾನು ಕೌರವನ ಉಪಕಾರದ ಋಣ ತೀರಿಸುವಂತೆ ಹೋರಾಡಿ, ಯುದ್ಧರಂಗದಲ್ಲಿ ಲೆಕ್ಕವಿಲ್ಲದಷ್ಟು ವೀರಯೋಧರನ್ನು ಕೊಂದು, ನನ್ನ ಒಡೆಯನಿಗಾಗಿ ಪ್ರಾಣವನ್ನು ಬಿಡುವೆನು. ಸೂರ್ಯನ ಮೇಲಾಣೆ ಪಾಂಡವರನ್ನು ನೋಯಿಸೆನು" ಎಂದನು.

**ಇ] ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು?**

"ಕರ್ಣ ನಿಮಗೂ ಯಾದವ ಕೌರವರಿಗೂ ವಂಶ ಗೌರವದಲ್ಲಿ ಭೇದವಿಲ್ಲ. ನಿನ್ನಾಣೆ. ನೀನು ನಿಜವಾಗಿ ಭೂಮಿಯ ಒಡೆಯ. ಆದರೆ ನಿನಗೆ ಮನದಲ್ಲಿ ಅದರ ಅರಿವಿಲ್ಲ" ಎಂದು ಹೇಳುತ್ತ ಕರ್ಣನ ಜನ್ಮವೃತ್ತಾಂತವನ್ನು ಹೇಳಿದ ಕೃಷ್ಣನು 'ನಿನ್ನನ್ನು ಹಸ್ತಿನಾಪುರದ ರಾಜ್ಯದ ರಾಜನನ್ನಾಗಿ ಮಾಡುವೆನು. ಪಾಂಡವ ಕೌರವ ರಾಜರು ನಿನ್ನನ್ನು ಓಲೈಸುವರು. ನಿನಗೆ ಎರಡು ವಂಶವು ಮರುಮಾತನಾಡದೆ ಸೇವೆಯನ್ನು ಮಾಡುವುವು. ನೀನು ದುರ್ಯೋಧನನ ಬಾಯೆಂಜಲಿಗೆ ಕೈಯೊಡ್ಡುವುದೇ ಹೇಳು. ಎಡಭಾಗದಲ್ಲಿ ಕೌರವೇಂದ್ರರ ಸಮೂಹ, ಬಲಭಾಗದಲ್ಲಿ ಪಾಂಡು ಮಕ್ಕಳ ಸಮೂಹ, ಮುಂದುಗಡೆ ಮಾದ್ರ, ಮಾಗಧ, ಯಾದವಾದಿಗಳು. ಮಧ್ಯದಲ್ಲಿ ನೀನು ರಾಜಸಭೆಯಲ್ಲಿ ಪ್ರಕಾಶಿಸುವ ಸೊಬಗನ್ನು ತೊರೆದು, ದುರ್ಯೋಧನ ಹೇಳಿದ ಮಾತಿಗೆಲ್ಲಾ 'ಒಡೆಯ ಪ್ರಸಾದ, ಅನುಗ್ರಹವಾಗಲಿ' ಎಂಬುದು ನಿನಗೆ ಕಷ್ಟವಾಗುವುದಿಲ್ಲವೇ?" ಎಂದು ಆಮಿಷ ಒಡ್ಡಿದನು.

**೨. ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಮನಸ್ಥಿತಿಯನ್ನು ತಿಳಿಸಿ.**

ಕೃಷ್ಣನು ಕರ್ಣನಿಗೆ ಆಮಿಷಗಳನ್ನು ಒಡ್ಡಿದ್ದಾಗ ಕೊರಳಸೆರೆಹಿಗ್ಗಿದವು, ಕಂಬನಿಯು ರಭಸದಿಂದ ಮುಂದೆ ಬಂದು, ಅಧಿಕವಾಗಿ ಕರ್ಣನು ದುಃಖಿಗೊಂಡು ಮನದೊಳಗೆ "ಅಯ್ಯೋ, ದುರ್ಯೋಧನನಿಗೆ ಕೇಡಾದುದು" ಎಂದನು. ತನ್ನ ಜನ್ಮ ರಹಸ್ಯ ತಿಳಿದಾಗ ಅವನಿಗೆ ಸಂತೋಷವಾಗುವುದಕ್ಕೆ ಬದಲಾಗಿ ದುಃಖ ಉಂಟಾಯಿತು. ಅವನಿಗೆ ತಾನು ಏನು ಮಾಡಬೇಕೆಂಬುದು ತಿಳಿಯದಾಯಿತು. ಆಗ ತನ್ನ ಮನಸ್ಸಿನಲ್ಲಿ ಚಿಂತಿಸುತ್ತಾ 'ಹರಿಯ ಹಗೆತನವು ಹೊಗೆ ತೋರದೆ ಸುಟ್ಟುಹಾಕುವುದಲ್ಲದೆ; ಸುಮ್ಮನೆ ಹೋಗುವುದೇ? ಕೃಷ್ಣನು "ನನ್ನ ವಂಶದ ರಹಸ್ಯವನ್ನು ತಿಳಿಸಿ ನನ್ನನ್ನು ಕೊಂದನು" ಎಂದು ಮನದಲ್ಲಿ ನೊಂದುಕೊಂಡನು. "ಮುರುಳು ಮಾಧವ, ನಾನು ರಾಜ್ಯದ ಸಿರಿಸಂಪತ್ತಿಗೆ ಸೋಲುವವನಲ್ಲ, ಪಾಂಡವರು ಕೌರವರು ಸೇವೆಯನ್ನು ಮಾಡುವುದು ನನಗೆ ಇಷ್ಟವಿಲ್ಲ. ಆದರೆ ನನ್ನನ್ನು ಕಾಪಾಡಿದ ಒಡೆಯನಾದ ದುರ್ಯೋಧನನಿಗೆ ಶತ್ರುಗಳ ಶಿರವನ್ನು ಕಡಿದು ತಂದು ಒಪ್ಪಿಸುವ ಆವೇಶದಲ್ಲಿ ಇದ್ದೆನು. ಆದರೆ ನೀನು ನನ್ನ ಜನ್ಮ ರಹಸ್ಯವನ್ನು ತಿಳಿಸಿ ದುರ್ಯೋಧನನ ಕೊಂದೆ" ಎಂದು ಪರಿತಪಿಸುತ್ತಾ "ನಾನು ಕೌರವನ ಉಪಕಾರದ ಋಣ ತೀರಿಸುವಂತೆ ಹೋರಾಡಿ, ಯುದ್ಧರಂಗದಲ್ಲಿ ಲೆಕ್ಕವಿಲ್ಲದಷ್ಟು ವೀರಯೋಧರನ್ನು ಕೊಂದು, ನನ್ನ ಒಡೆಯನಿಗಾಗಿ ಪ್ರಾಣವನ್ನು ಬಿಡುವೆನು. ಸೂರ್ಯನ ಮೇಲಾಣೆ ಪಾಂಡವರನ್ನು ನೋಯಿಸೆನು" ಎಂದನು.

**೩. ಕರ್ಣನ ನಿರ್ಧಾರ ಸರಿ ಎನ್ನುವಿರಾ? ಏಕೆ?**

ಕೃಷ್ಣನು ಕರ್ಣನ ಜನ್ಮ ರಹಸ್ಯವನ್ನು ತಿಳಿಸುತ್ತಾ ಆತನನ್ನು ಸಕಲ ಸಾಮ್ರಾಜ್ಯಕ್ಕೆ ಚಕ್ರವರ್ತಿಯನ್ನಾಗಿ ಮಾಡುವುದಾಗಿ ತಿಳಿಸುತ್ತಾನೆ. ಸೂರ್ಯನ ಅನುಗ್ರಹದಿಂದ ಜನಿಸಿದ ಕರ್ಣನನ್ನು ಮಗುವಾಗಿದ್ದಾಗ ಕುಂತಿಯು ನೀರಿನಲ್ಲಿ ತೇಲಿಬಿಟ್ಟದ್ದರಿಂದ ಅಂಬಿಗನ ಮನೆಯಲ್ಲಿ ಮಾತೃವಾತ್ಸಲ್ಯದಿಂದ ವಂಚಿತನಾಗಿ ಸೂತಪುತ್ರನಾಗಿ ಬೆಳೆಯ ಬೇಕಾಯಿತು. ಸೂತಪುತ್ರನೆಂದು ಸಮಾಜದಲ್ಲಿ ಆತನ ಶಕ್ತಿ ಸಾಮರ್ಥ್ಯಕ್ಕೆ ಸೂಕ್ತವಾದ ಸ್ಥಾನಮಾನ ದೊರೆಯಲಿಲ್ಲ. ಅಂತಹ ಸಂದರ್ಭದಲ್ಲಿ ದುರ್ಯೋಧನ ಕರ್ಣನನ್ನು ಗೆಳೆಯನಾಗಿ ಸ್ವೀಕರಿಸಿ ಅಂಗರಾಜ್ಯದ ಅಧಿಪತಿಯನ್ನಾಗಿಸುತ್ತಾನೆ. ಆತನಿಗೆ ಒಂದು ಸ್ಥಾನ, ಗೌರವಗಳನ್ನು ದೊರಕಿಸಿಕೊಡುತ್ತಾನೆ. ಈ ಕಾರಣಗಳಿಂದ ಕರ್ಣನು ದುರ್ಯೋಧನನೇ ತನಗೆ ಒಡೆಯ, ಆತನ ಹಗೆಗಳು ನನಗೂ ಹಗೆಗಳೇ, ಆತನ ಅಭಿಮಾನ ನನ್ನ ಅಭಿಮಾನ, ದುರ್ಯೋಧನನ ಹಾದಿಯನ್ನೇ ಅನುಸರಿಸುತ್ತೇನೆ. 'ಯುದ್ಧದಲ್ಲಿ ನಿಜ ಪರಾಕ್ರಮದ ಶ್ರೇಷ್ಠತೆಯನ್ನು ತೋರಿಸುತ್ತೇನೆ' ಎನ್ನುವುದು ಕರ್ಣನ ಜಾಯಮಾನಕ್ಕೆ ಸರಿಯಾಗಿಯೇ ಇದೆ. ಕೌರವನು ತನಗೆ ಮಾಡಿದ ಉಪಕಾರವನ್ನು ಯುದ್ಧರಂಗದಲ್ಲಿ ತೀರಿಸುತ್ತೇನೆ. ತಮ್ಮಂದಿರನ್ನು ನೋಯಿಸದೆ, ಸೈನ್ಯಬಲವನ್ನು ಮಾರಿಗೆ ಔತಣವನ್ನಾಗಿ ನೀಡಿ, ಅನ್ನದಾತನ ಋಣವನ್ನು ಮುಗಿಸಿ, ಶರೀರವನ್ನು ತ್ಯಜಿಸುತ್ತೇನೆ' ಎಂಬ ಕರ್ಣನ ಮಾತು ಆತನ ಸ್ವಾಮಿ ಭಕ್ತಿಗೆ ಸಾಕ್ಷಿಯಾಗಿದೆ. 'ಸ್ಥಾನ, ಗೌರವ ಹಾಗೂ ಕೀರ್ತಿ ದೊರಕಿಸಿ ಕೊಟ್ಟ ಒಡೆಯನಿಗೆ ತನ್ನ ಪ್ರಾಣವನ್ನು ಸಮರ್ಪಿಸುವುದು ಧರ್ಮವೇ ಆಗಿದೆ' ಎಂಬ ಕರ್ಣನ ನಿರ್ಧಾರ ಸರಿಯಾಗಿದೆ.

**ಈ] ಸಂದರ್ಭಾನುಸಾರ ಸ್ವಾರಸ್ಯ ಬರೆಯಿರಿ.**

**೧. "ರವಿಸುತನ ಕಿವಿಯಲಿ ಬಿತ್ತಿದನು ಭಯವ"**

**ಆಯ್ಕೆ:–** ಈ ವಾಕ್ಯವನ್ನು **ಕುಮಾರವ್ಯಾಸನೆಂದು** ಪ್ರಸಿದ್ಧನಾದ **ಗದುಗಿನ ನಾರಣಪ್ಪನು** ರಚಿಸಿರುವ **'ಕರ್ಣಾಟ ಭಾರತ ಕಥಾಮಂಜರಿ'** ಎಂಬ ಮಹಾಕಾವ್ಯದಿಂದ ಆಯ್ದ **'ಕೌರವೇಂದ್ರನ ಕೊಂದೆ ನೀನು' ಎಂಬ ಪದ್ಯಭಾಗದಿಂದ ಆರಿಸಲಾಗಿದೆ.**

**ಸಂದರ್ಭ:–** ಕೃಷ್ಣನು ಪಾಂಡವ ಕೌರವರನಡುವೆ ಸಂಧಿ ಮಾಡಲು ಹೋಗಿ, ವಿಫಲನಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು, ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕವಿಯು ಹೇಳುತ್ತಾನೆ.

**ಸ್ವಾರಸ್ಯ:–** "ಕರ್ಣ ನಿಮ್ಮಲ್ಲಿ, ಯಾದವರು ಕೌರವರಲ್ಲಿ ಭೇದವಿಲ್ಲ. ಹೇಳುವುದಾದರೆ ವಂಶದಲ್ಲಿ ಮೊದಲೆರಡಿಲ್ಲ ನಿನ್ನಾಣೆ. ರಾಜ ನೀನು, ಮನದಲ್ಲಿ ನಡೆದುದರ ಅರಿವಿಲ್ಲ" ಎಂದು ಹೇಳುತ ಕೃಷ್ಣನು ಕರ್ಣನ ಕಿವಿಯಲ್ಲಿ ಉಭಯವನ್ನು (ದ್ವಂದ್ವವನ್ನು) ಬಿತ್ತಿದನು ಎಂದು ಕವಿಯು ಸ್ವಾರಸ್ಯಪೂರ್ಣವಾಗಿ ವರ್ಣಿಸುತ್ತಾನೆ.

**೨. "ಬಾಯ್ದಂಬುಲಕೆ ಕೈಯಾನುವರೆ"**

**ಸಂದರ್ಭ :–** ಕೃಷ್ಣನು ಪಾಂಡವ ಕೌರವರನಡುವೆ ಸಂಧಿ ಮಾಡಲುಹೋಗಿ, ವಿಫಲನಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು, ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕೃಷ್ಣ ಕರ್ಣನಿಗೆ ಹೇಳುತ್ತಾನೆ.

**ಸ್ವಾರಸ್ಯ :–** "ಕರ್ಣ ನೀನು ಹಸ್ತಿನಾಪುರದ ರಾಜನಾದರೆ ನಿನಗೆ ಕೌರವರು ಮತ್ತು ಪಾಂಡವರು ಸೇವೆಯನ್ನು ಮಾಡುವರು ಅದನ್ನು ಬಿಟ್ಟು ನೀನು ದುರ್ಯೋಧನನ ಬಾಯೆಂಜಲಿಗೆ ಕೈಯೊಡ್ಡುವುದು ಸರಿಯೇ" ಎಂದು ಕೃಷ್ಣನು ಹೇಳಿರುವುದು ಸ್ವಾರಸ್ಯಪೂರ್ಣವಾಗಿದೆ.

**೩. "ಜೀಯ ಹಸಾದವೆಂಬುದು ಕಂಷಂಬೆ"**

**ಸಂದರ್ಭ :–** ಕೃಷ್ಣನು ಪಾಂಡವ ಕೌರವರ ನಡುವೆ ಸಂಧಿ ಮಾಡಲು ಹೋಗಿ, ವಿಫಲನಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು, ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕೃಷ್ಣನು ಕರ್ಣನಿಗೆ ಹೇಳುತ್ತಾನೆ.

**ಸ್ವಾರಸ್ಯ :–** "ಕರ್ಣ ನಿನ್ನ ಎಡಗಡೆ ಕೌರವರು, ಬಲಗಡೆ ಪಾಂಡವರು, ಎದುರಿನಲ್ಲಿ ಮಾದ್ರ ಮಾಗಧ ಯಾದವಾದಿಗಳು ಇರುವಾಗ, ನೀನು ಓಲಗದಲ್ಲಿ ವಿಲಾಸದಿಂದ ಮೆರೆಯುವುದನ್ನು ಬಿಟ್ಟು, ಕೌರವನಿಗೆ ಜೀಯ ಪ್ರಸಾದವೆಂಬುದು ಕಷ್ಟವಾಗುವುದಿಲ್ಲವೇ?" ಎಂದು ಕೃಷ್ಣನು ಸ್ವಾರಸ್ಯಪೂರ್ಣವಾಗಿ ಹೇಳುತ್ತಾನೆ.

**೪. "ನಿನ್ನಪದೆಸೆಯ ಬಯಸುವನಲ್ಲ"**

**ಸಂದರ್ಭ :–** ಕೃಷ್ಣನು ಪಾಂಡವ ಕೌರವರ ನಡುವೆ ಸಂಧಿ ಮಾಡಲು ಹೋಗಿ, ವಿಫಲನಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು, ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕೃಷ್ಣನು ಕರ್ಣನಿಗೆ ಹೇಳುತ್ತಾನೆ.

**ಸ್ವಾರಸ್ಯ :–** ತನ್ನಜನ್ಮ ರಹಸ್ಯವನ್ನು ಅರಿತು ಕರ್ಣನು ಮನದಲ್ಲಿ ಚಿಂತಿತನಾಗಿ ಮೌನವಾದಾಗ, ಕೃಷ್ಣನು ಈ ಮಾತನ್ನು ಹೇಳುವುದರ ಮೂಲಕ ಕರ್ಣನನ್ನು ಸಮಾಧಾನಪಡಿಸಿದ್ದು ಸ್ವಾರಸ್ಯಪೂರ್ಣವಾಗಿದೆ.

**೫. "ಮಾರಿಗೌತಣವಾಯ್ತು ನಾಳಿನ ಭಾರತವು"**

**ಸಂದರ್ಭ :–** ಕೃಷ್ಣನು ಪಾಂಡವ ಕೌರವರ ನಡುವೆ ಸಂಧಿ ಮಾಡಲು ಹೋಗಿ, ವಿಫಲನಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು, ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕರ್ಣನು ಕೃಷ್ಣನಿಗೆ ಹೇಳುತ್ತಾನೆ.

**ಸ್ವಾರಸ್ಯ :–** ಕರ್ಣನು ಮುಂದೆ ನಡೆಯುವ ಮಹಾಭಾರತ ಕುರುಕ್ಷೇತ್ರ ಯುದ್ಧದ ಭೀಕರತೆಯನ್ನು ಈ ಮಾತಿನಲ್ಲಿ ಬಹು ಸ್ವಾರಸ್ಯಪೂರ್ಣವಾಗಿ

ಹೇಳುತ್ತಾನೆ.

**ಉ] ಬಿಟ್ಟಿರುವ ಸ್ಥಳಗಳನ್ನು ಸೂಕ್ತ ಉತ್ತರದಿಂದ ಪೂರ್ಣಗೊಳಿಸಿ.**

೧) ರಾಜೀವಸಖ ಎಂದರೆ **ಸೂರ್ಯ** ಎಂದು ಅರ್ಥ.

೨) ಗದುಗಿನ ಭಾರತವು **ಭಾಮಿನಿ ಷಟ್ಪದಿಯಲ್ಲಿ** ರಚಿತವಾಗಿದೆ.

೩) ಅಶ್ವಿನೀದೇವತೆಗಳ ವರಬಲದಿಂದ **ನಕುಲ–ಸಹದೇವರು** ಜನಿಸಿದರು.

೪) ಕರ್ಣನು **ಸೂರ್ಯನ** ಅನುಗ್ರಹದಿಂದ ಜನಿಸಿದನು.

೫) ಗದುಗಿನ ಸಮೀಪದ **ಕೋಳಿವಾಡದಲ್ಲಿ** ಕುಮಾರವ್ಯಾಸನು ಜನಿಸಿದನು.

## ಭಾಷಾ ಚಟುವಟಿಕೆ

**೧. ಅಲಂಕಾರವನ್ನು ಹೆಸರಿಸಿ, ಸಮನ್ವಯಗೊಳಿಸಿ.**

**"ಮಾರಿಗೌತನವಾಯ್ತು ನಾಳಿನ ಭಾರತವು"**

ಅಲಂಕಾರ: ರೂಪಕಾಲಂಕಾರ

**ಉಪಮೇಯ:** ಭಾರತ ಯುದ್ಧ

**ಉಪಮಾನ:** ಮಾರಿಯ ಔತಣ

**ಸಮನ್ವಯ:** ಇಲ್ಲಿ ಉಪಮೇಯವಾಗಿರುವ ಭಾರತ ಯುದ್ಧಕ್ಕೂ ಉಪಮಾನವಾರಿರುವ ಮಾರಿಯ ಔತಣಕ್ಕೂ ಅಭೇದ ಕಲ್ಪಿಸಲಾಗಿದೆ. ಆದ್ದರಿಂದ ಇದು ರೂಪಕಾಲಂಕಾರವಾಗಿದೆ.

**೨. ವಿಗ್ರಹಿಸಿ, ಸಮಾಸದ ಹೆಸರನ್ನು ತಿಳಿಸಿ.**

೧) **ಇನತನೂಜ** = ಇನನ ತನೂಜನು ಯಾರೋ ಅವನೇ (ಸೂರ್ಯ) – ಬಹುವ್ರೀಹಿಸಮಾಸ

೨) **ದನುಜರಿಪು** = ದನುಜರಿಗೆ ರಿಪು(ವೈರಿ) ಆಗಿರುವವನು ಯಾರೋ ಅವನೇ (ವಿಷ್ಣು ಅಥವಾ ಕೃಷ್ಣ) – ಬಹುವ್ರೀಹಿಸಮಾಸ

೩) **ಮುರಾರಿ** = ಮುರನಿಗೆ ಅರಿ (ಶತ್ರು) ಆದವನು ಯಾರೋ ಅವನೇ (ವಿಷ್ಣು ಅಥವಾ ಕೃಷ್ಣ) – ಬಹುವ್ರೀಹಿ ಸಮಾಸ

೪) **ಮೇದಿನೀಪತಿ** = ಮೇದಿನಿಗೆ (ಭೂಮಿಗೆ) ಪತಿಯಾದವನು (ಒಡೆಯನಾದವನು) ಯಾರೋ ಅವನೇ – ಬಹುವ್ರೀಹಿಸಮಾಸ

೫) **ಕೈಯಾನು** = ಕೈಯನ್ನು + ಆನು – ಕ್ರಿಯಾಸಮಾಸ.

೬) **ಮಾದ್ರಮಾಗಧಯಾದವರು** = ಮಾದ್ರರೂ + ಮಾಗಧರೂ + ಯಾದವರೂ – ದ್ವಂದ್ವಸಮಾಸ

೭) **ಹೊಗೆದೋರು** = ಹೊಗೆಯನ್ನು + ತೋರು – ಕ್ರಿಯಾಸಮಾಸ

೮) **ರಾಜೀವಸಖ** = ರಾಜೀವನಿಗೆ (ತಾವರೆಗೆ) ಸಖನಾದವನು ಯಾರೋ ಅವನೇ (ಸೂರ್ಯ) – ಬಹುವ್ರೀಹಿಸಮಾಸ

**೩. ಪ್ರಸ್ತಾರ ಹಾಕಿ, ಗಣವಿಂಗಡಿಸಿ, ಛಂದಸ್ಸಿನ ಹೆಸರು ತಿಳಿಸಿ.**

– ∪ | – – | – ∪ | – –
ಏನು । ಹೇಳ್ಯೆ । ಕರ್ಣ । ಚಿತ್ತ ।

– ∪ | – ∪ ∪ | ∪ ∪ ∪ | – –
ಗ್ಲಾನಿ । ಯಾವುದು । ಮನಕೆ । ಕುಂತೀ ।

– ∪ | ∪ ∪ ∪ ∪ | – ∪ | – ∪ ∪ | – ∪ | – ∪ ∪ | –
ಸೂನು । ಗಳಬೆಸ । ಕೈಸಿ । ಕೊಂಬುದು । ಸೇರ । ದೇನಿನ । ಗೆ

**ಛಂದಸ್ಸು –** ಭಾಮಿನಿಷಟ್ಪದಿ

**೪. ಮೊದಲೆರಡು ಪದಗಳಿಗಿರುವ ಸಂಬಂಧವನ್ನು ಗುರುತಿಸಿ ಮೂರನೇ ಪದಕ್ಕೆ ಸಂಬಂಧಿಸಿದ ನಾಲ್ಕನೆಯ ಪದ ಬರೆಯಿರಿ.**

| | | | |
|---|---|---|---|
| ೧. ತನುಜ | : ಮಗ | :: ಸಖ | : **ಸ್ನೇಹಿತ(ಗೆಳೆಯ)** |
| ೨. ಯುದ್ಧ | : ಜುದ್ದ | :: ಪ್ರಸಾದ | : **ಹಸಾದ** |
| ೩. ಭೇದವಿಲ್ಲ | : ಆಗಮ ಸಂಧಿ | :: ನಿಮ್ಮಡಿಗಳಲಿ | : **ಲೋಪಸಂಧಿ** |
| ೪. ಕಂದ | : ನಾಲ್ಕು ಸಾಲು | :: ಷಟ್ಪದಿ | : **ಆರು ಸಾಲು** |

# ಭಾಗ – ಬಿ

**ಕೊಟ್ಟಿರುವ ನಾಲ್ಕು ಉತ್ತರಗಳಲ್ಲಿ ಸರಿಯಾದ ಉತ್ತರನ್ನು ಆರಿಸಿ ಬರೆಯಿರಿ.**

೧. ಎರಡು ಮಾತ್ರೆಗಳ ಕಾಲದಲ್ಲಿ ಉಚ್ಚರಿಸುವ ಅಕ್ಷರವನ್ನು ಹೀಗೆ ಕರೆಯುತ್ತೇವೆ :
ಎ) ಪ್ಲುತ ಬಿ) ಗುರು ಸಿ) ಲಘು ಡಿ) ಗಣ

**೨. ಕೈಯಾನು – ಪದವು ಈ ಸಮಾಸವಾಗಿದೆ :**
ಎ) ಕ್ರಿಯಾಸಮಾಸ ಬಿ) ದ್ವಂದ್ವಸಮಾಸ ಸಿ) ಬಹುವ್ರೀಹಿಸಮಾಸ ಡಿ) ತತ್ಪುರುಷಸಮಾಸ

**೩. ಮಾದ್ರಮಾಗಧಯಾದವರು – ಇದು ಈ ಸಮಾಸಕ್ಕೆ ಉದಾಹರಣೆಯಾಗಿದೆ :**
ಎ) ಅಂಶಿಸಮಾಸ ಬಿ) ತತ್ಪುರುಷಸಮಾಸ ಸಿ) ದ್ವಿಗುಸಮಾಸ ಡಿ) ದ್ವಂದ್ವಸಮಾಸ.

**೪. ಹಸಾದ – ಪದದ ತತ್ಸಮ ರೂಪ :**
ಎ) ವಿಷಾದ ಬಿ) ಹಸನಾದ ಸಿ) ಪಸಾದ ಡಿ) ಪ್ರಸಾದ.

**೫. ದೃಗುಜಲ – ಪದದ ಅರ್ಥ ಇದಾಗಿದೆ :**
ಎ) ಕಣ್ಣನೀರು ಬಿ) ತಿಳಿನೀರು ಸಿ) ಮೃಗಗಳನೀರು ಡಿ) ಬಿಸಿನೀರು.

**೬. ಬಹುವ್ರೀಹಿ ಸಮಾಸಕ್ಕೆ ಈ ಪದವು ಉದಾಹರಣೆಯಾಗಿದೆ :**
ಎ) ಹೊಗೆದೋರು ಬಿ) ಕೈಯಾನು ಸಿ) ರಾಜೀವಸಖ ಡಿ) ಬಾಯ್ದಂಬುಲ

**೭. ಭಾಮಿನಿ ಷಟ್ಪದಿಯಲ್ಲಿನ ಒಟ್ಟು ಮಾತ್ರೆಗಳ ಸಂಖ್ಯೆ :**
ಎ) ೧೦೮ ಬಿ) ೧೦೨ ಸಿ) ೬೪ ಡಿ) ೧೪೪

**೮. ದನುಜರಿಪು – ಇದು ಈ ಸಮಾಸಕ್ಕೆ ಉದಾಹರಣೆಯಾಗಿದೆ :**
ಎ) ಕ್ರಿಯಾಸಮಾಸ ಬಿ)ಬಹುವ್ರೀಹಿಸಮಾಸ ಸಿ) ದ್ವಂದ್ವಸಮಾಸ ಡಿ) ತತ್ಪುರುಷಸಮಾಸ

**೯. ಉಪಮಾನ ಉಪಮೇಯಗಳ ನಡುವೆ ಅಭೇದ ಸಂಬಂಧ ಕಲ್ಪಿಸುವ ಅಲಂಕಾರ :**
ಎ) ಉಪಮಾಲಂಕಾರ ಬಿ) ರೂಪಕಾಲಂಕಾರ ಸಿ) ದೃಷ್ಟಾಂತಾಲಂಕಾರ ಡಿ) ಉತ್ಪ್ರೇಕ್ಷಾಲಂಕಾರ

**೧೦. ಗುರು–ಲಘು ಮೂರಿರಲು ಈ ಗಣವಾಗುತ್ತದೆ :**
ಎ) 'ಭ–ಯ'ಗಣ ಬಿ) 'ಜ–ರ'ಗಣ ಸಿ) 'ಮ–ನ'ಗಣ ಡಿ) 'ಸ–ತ'ಗಣ

**೧೧. ಷಟ್ಪದಿಯಲ್ಲಿರುವ ವಿಧಗಳು :**
ಎ) ಆರು ಬಿ) ಎಂಟು ಸಿ) ನಾಲ್ಕು ಡಿ) ಮೂರು

**೧೨. 'ಕೌಂತೇಯ' – ಪದವು ಈ ಅಕ್ಷರಗಣಕ್ಕೆ ಉದಾಹರಣೆಯಾಗಿದೆ :**
ಎ) 'ಯ'ಗಣ ಬಿ) 'ಸ'ಗಣ ಸಿ) 'ತ'ಗಣ ಡಿ) 'ಭ'ಗಣ

**೧೩. ಒಂದು ಅಕ್ಷರವನ್ನು ಉಚ್ಚರಿಸುವ ಅವಧಿಗೆ ಹೀಗೆನ್ನುತ್ತಾರೆ :**
ಎ) ಗಣ ಬಿ) ಮಾತ್ರೆ ಸಿ) ಯತಿ ಡಿ) ಪ್ರಾಸ

**೧೪. ಮೂರು–ನಾಲ್ಕು ಮಾತ್ರೆಗಳಿಂದ ಗಣವಿಭಜನೆಯನ್ನು ಮಾಡುವ ಷಟ್ಪದಿ :**
ಎ) ವಾರ್ಧಕ ಬಿ) ಕುಸುಮ ಸಿ) ಭೋಗ ಡಿ) ಭಾಮಿನಿ

**೧೫. ಉರವಣಿಸು – ಈ ಪದದ ಅರ್ಥ :**
ಎ) ಹೆಚ್ಚಾಗು ಬಿ) ಅವಸರ ಸಿ) ಮನಸ್ಸು ಡಿ) ಕಡಿಮೆಯಾಗು.

**[ ಉತ್ತರಗಳು : ೧. ಬಿ. ಗುರು ೨. ಎ. ಕ್ರಿಯಾಸಮಾಸ ೩. ಡಿ. ದ್ವಂದ್ವಸಮಾಸ ೪.ಡಿ. ಪ್ರಸಾದ ೫. ಎ. ಕಣ್ಣೀರು ೬. ಸಿ. ರಾಜೀವಸಖ ೭. ಬಿ. ೧೦೨ ೮. ಬಿ. ಬಹುವ್ರೀಹಿಸಮಾಸ ೯. ಬಿ. ರೂಪಕಾಲಂಕಾರ ೧೦. ಸಿ. ಮ–ನ ಗಣ ೧೧. ಎ. ಆರು ೧೨. ಸಿ. 'ತ'ಗಣ ೧೩. ಬಿ. ಮಾತ್ರೆ ೧೪. ಖ. ಭಾಮಿನಿ ೧೫. ಎ. ಹೆಚ್ಚಾಗು ]**

**ಮೊದಲೆರೆಡು ಪದಗಳಿಗಿರುವ ಸಂಬಂಧದಂತೆ ಮೂರನೇ ಪದಕ್ಕೆ ಸಂಬಂಧ ಬರೆಯಿರಿ :**

೧. ಕಂದಪದ್ಯ : ನಾಲ್ಕುಸಾಲು : : ಷಟ್ಪದಿ : ____________
೨. ಋಣ : ಹಂಗು : : ರಣ : ____________
೩. ಲಕ್ಷ್ಮೀಶ : ವಾರ್ಧಕಷಟ್ಪದಿ : : ಕುಮಾರವ್ಯಾಸ : ____________
೪. ಷಟ್ಪದಿ : ಮಾತ್ರಾಗಣ : : ಚಂಪಕಮಾಲಾವೃತ್ತ : ____________
೫. ಇನತನೂಜ : ಬಹುವ್ರೀಹಿಸಮಾಸ : : ಮಾದ್ರಮಾಗಧಯಾದವರು : ____________
೬. ಲಕ್ಷ್ಮೀಶ : ಉಪಮಾಲೋಲ : : ಕುಮಾರವ್ಯಾಸ : ____________
೭. ಉರ್ವಿಯೊಳ್ : ಸಪ್ತಮಿವಿಭಕ್ತಿ : : ಸುಯಾಜಿಯಂ : ____________
೮. ಲಘು : ಒಂದುಮಾತ್ರೆ : : ಗುರು : ____________
೯. ಮುರಾರಿ : ಕೃಷ್ಣ : : ರವಿಸುತ : ____________
೧೦. ಹಸಾದ : ಪ್ರಸಾದ : : ದಾತಾರ : ____________

**[ ಉತ್ತರಗಳು : ೧. ಆರುಸಾಲು ೨. ಯುದ್ಧ ೩. ಭಾಮಿನಿಷಟ್ಪದಿ ೪. ಅಕ್ಷರಗಣ ೫. ದ್ವಂದ್ವಸಮಾಸ ೬.ರೂಪಕಸಾಮ್ರಾಜ್ಯಚಕ್ರವರ್ತಿ ೭. ದ್ವಿತೀಯ ೮. ಎರಡು ಮಾತ್ರೆ ೯. ಕರ್ಣ ೧೦. ದಾತೃ ]**

# ಎದೆಗೆ ಬಿದ್ದಅಕ್ಷರ

**ಲೇಖಕರ ಪರಿಚಯ:–**

**ದೇವನೂರು ಮಹಾದೇವ** ಅವರು ಕ್ರಿ. ಶ. ೧೯೪೮ ರಲ್ಲಿ ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ **ದೇವನೂರಿನಲ್ಲಿ** ಜನಿಸಿದರು. ಇವರು **ಎದೆಗೆ ಬಿದ್ದಅಕ್ಷರ, ಕುಸುಮಬಾಲೆ, ದ್ಯಾವನೂರು, ಒಡಲಾಳ** ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಶ್ರೀಯುತರ **'ಕುಸುಮಬಾಲೆ'** ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯನ್ನು ಲಭಿಸಿದೆ.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಇಂದಲ್ಲ–ನಾಳೆ ಫಲ ಕೊಡುವ ಅಂಶಗಳು ಯಾವುವು?**

**'ಭೂಮಿಗೆ ಬಿದ್ದ ಬೀಜ ಮತ್ತು ಎದೆಗೆ ಬಿದ್ದ ಅಕ್ಷರ'** ಇಂದಲ್ಲ ನಾಳೆ ಫಲ ಕೊಡುವ ಅಂಶಗಳಾಗಿವೆ.

**೨. ಮನೆ ಮಂಚಮ್ಮ ಯಾರು?**

ಕವಿ ಸಿದ್ಧಲಿಂಗಯ್ಯ ಅವರು ದೇವನೂರು ಮಹಾದೇವ ಅವರಿಗೆ ಹೇಳಿದ ಕತೆಯಲ್ಲಿನ ಗ್ರಾಮದೇವತೆ ಮನೆ ಮಂಚಮ್ಮ.

**೩. ಮನೆಮಂಚಮ್ಮನ ಕತೆ ಹೇಳಿದ ಕವಿ ಯಾರು?**

ಮನೆಮಂಚಮ್ಮನ ಕತೆ ಹೇಳಿದ **ಕವಿ ಸಿದ್ಧಲಿಂಗಯ್ಯ.**

**೪. 'ಶಿವಾನುಭವ ಶಬ್ದಕೋಶ' ಪುಸ್ತಕ ಬರೆದವರು ಯಾರು?**

'ಶಿವಾನುಭವ ಶಬ್ದಕೋಶ' ಪುಸ್ತಕ ಬರೆದವರು **ಹಳಕಟ್ಟಿಯವರು.**

**೫. ವಚನಕಾರರಿಗೆ ಯಾವುದು ದೇವರಾಗಿತ್ತು?**

ವಚನಕಾರರಿಗೆ ಅವರವರ **ಪ್ರಜ್ಞೆಯೇ** ದೇವರಾಗಿತ್ತು.

**೬. ಅಶೋಕ ಪೈ ಅವರ ವೃತ್ತಿಯಾವುದು?**

ಅಶೋಕ ಪೈ ಅವರು **ಮನೋವೈದ್ಯರು.**

**೭. ದೇವನೂರರ 'ನನ್ನ ದೇವರು' ಯಾರೆಂಬುದನ್ನು ಸ್ಪಷ್ಟೀಕರಿಸಿ.**

**ಚಾವಣಿ ಇಲ್ಲದ ಗುಡಿಯಲ್ಲಿ ಕಾರುಣ್ಯ ಸಮತೆಯ ಬುದ್ಧನನ್ನುಇಟ್ಟರೆ** ಅದು ದೇವನೂರು ಮಹಾದೇವ ಅವರ ದೇವರಾಗುತ್ತದೆ.

**ಆ] ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಅಶೋಕ ಪೈ ಅವರು ಹೇಳಿದ ಸಂಶೋಧನಾ ಸತ್ಯವೇನು?**

ಕೆಲವು ಜನ ಒಂದು ಕೊಠಡಿಯಲ್ಲಿ ಕುಳಿತು ಟೆಲಿವಿಷನ್ ನೋಡುತ್ತಿರುವಾಗ, ಇನ್ನೊಂದಿಷ್ಟು ಜನ ಇದರ ಅರಿವಿಲ್ಲದೆ ಇನ್ನೊಂದು ಪಕ್ಕದ ಕೊಠಡಿಯಲ್ಲಿ ಏನೋ ಮಾತುಕತೆ ಆಡುತ್ತ ತಮ್ಮಷ್ಟಕ್ಕೆ ತಾವು ಇರುವಾಗ, ಟೆಲಿವಿಷನ್‌ನಲ್ಲಿ ಯಾವುದಾದರೂ ಕೊಲೆ ದೃಶ್ಯ ಬಂದಾಗ ಇಲ್ಲಿ ಇದನ್ನು ನೋಡುತ್ತಿದ್ದವರ ದುಃಖದ ಭಾವನೆಯು ಇದನ್ನು ನೋಡದೆ ಇರುವ ಪಕ್ಕದ ಕೊಠಡಿಯಲ್ಲಿ ಇರುವವರ ಮನಸ್ಸಿಗೂ ಮುಟ್ಟಿ ಅವರ ಮನಸ್ಸು ಸ್ವಲ್ಪಮಟ್ಟಿಗೆ ದುಗುಡಗೊಳ್ಳುತ್ತದೆ. ಅದೇ ಟೆಲಿವಿಷನ್‌ನಲ್ಲಿ ಯಾವುದಾರೊಂದು ನೃತ್ಯದೃಶ್ಯ ಬಂದಾಗ ಅದನ್ನು ನೋಡುತ್ತಿರುವವರ ಖುಷಿ ಭಾವನೆಯು ಪಕ್ಕದ ಕೊಠಡಿಯಲ್ಲಿ ಇದನ್ನು ನೋಡದೆ ತಮ್ಮಷ್ಟಕ್ಕೆ ತಾವೇ ಇದ್ದವರ ಮನಸ್ಸಿನ ಮೇಲೂ ಪರಿಣಾಮ ಬೀರಿ ಸ್ವಲ್ಪಮಟ್ಟಿಗೆ ಸಂತೋಷದ ಭಾವನೆ ಉಂಟಾಗುತ್ತದೆ. ಇದು ಅಶೋಕ ಪೈ ಅವರು ಹೇಳಿದ ಸಂಶೋಧನಾ ಸತ್ಯ.

**೨. ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೆ ಏನು? ವಿವರಿಸಿ.**

ವಚನಕಾರರ ದೃಷ್ಟಿಯಲ್ಲಿ ಅರಿವು ಅಂದರೆ 'ತನ್ನಷ್ಟಕ್ಕೆ ತಾನು ಇರುವ ಕೇವಲ ತಿಳಿವಳಿಕೆ, ಜ್ಞಾನ ಮಾತ್ರ ಅಲ್ಲ; ಅದು ಕ್ರಿಯೆಯ ಅನುಭವದಿಂದ ಒಡಮೂಡುವುದು. ಅದು ಕೇಳಿ ತಿಳಿದಿದ್ದಲ್ಲ. ಕ್ರಿಯೆಯಲ್ಲಿ ಮೂಡಿದ ತಿಳಿವಳಿಕೆ, ಅದು ತರ್ಕವಲ್ಲ. ನಡೆಯಿಂದ ನುಡಿ ಹುಟ್ಟಿದರೆ ಅದು ಅರಿವು.' ಅಂದರೆ ಜ್ಞಾನ–ನಡೆ–ನುಡಿ–ಕ್ರಿಯೆಯಿಂದ ಏಕರೂಪವಾಗಿ ಒಡಮೂಡಿದ ತಿಳಿವಳಿಕೆಯೇ ಅರಿವು ಎಂಬುದು ಅವರ ಅಭಿಮತ.

**ಇ] ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಕವಿ ಸಿದ್ಧಲಿಂಗಯ್ಯನವರು ಹೇಳಿದ ಕತೆಯನ್ನು ಬರೆಯಿರಿ.**

ಕವಿ ಸಿದ್ಧಲಿಂಗಯ್ಯನವರು ಹೇಳಿದ ಕತೆಯೆಂದರೆ– ಭೂಮಿಗೆ ಬಿದ್ದ ಬೀಜ, ಎದೆಗೆ ಬಿದ್ದಅಕ್ಷರ ಇಂದಲ್ಲ ನಾಳೆ ಫಲ ಕೊಡುವುದು ಎಂಬ ನೀತಿಯನ್ನು ಹೇಳುವ ಕಾರುಣ್ಯ ಸಮತೆಯ ಕತೆಯನ್ನು ಹೇಳಿದ್ದಾರೆ. ಅದೆಂದರೆ– ಒಮ್ಮೆ ಗ್ರಾಮದ ಜನರೆಲ್ಲಾ ಸೇರಿ ತಮ್ಮ ದೇವತೆಗೆ ಗುಡಿಕಟ್ಟಲು ಆರಂಭಿಸುತ್ತಾರೆ. ಗುಡಿಯ ಕಟ್ಟಡ ಚಾವಣಿಯವರೆಗೂ ಮೇಲೇಳುತ್ತದೆ. ಆಗ ಇದ್ದಕ್ಕಿದ್ದಂತೆಯೇ ಮಂಚಮ್ಮದೇವಿ ಭಕ್ತನೊಬ್ಬನ ಮೇಲೆ ಆವಾಹನೆಯಾಗಿ "ಏನ್ ಮಾಡ್ತಾಇದ್ದೀರಿ?" ಎಂದು ಕೇಳುತ್ತಾಳೆ. "ನಿನಗೊಂದು ಗುಡಿಕಟ್ತಾ ಇದ್ದೀವಿ, ತಾಯಿ" ಎಂದು ಹೇಳಿದಾಗ 'ನಿಮಗೆಲ್ಲಾ ಮನೆ ಉಂಟಾ?' ಎಂದು ಕೇಳುತ್ತಾಳೆ. ಅದಕ್ಕೆ ಉತ್ತರವಾಗಿ ಅಲ್ಲೊಬ್ಬ 'ನನಗಿಲ್ಲತಾಯಿ' ಎಂದು ಹೇಳುತ್ತಾನೆ. ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೂ ನನಗೂ ಬೇಡ ಎಂದು ಮಂಚಮ್ಮತಾಯಿ ಹೇಳುತ್ತಾಳೆ.

ಅಂದಿನಿಂದ ಮಂಚಮ್ಮ 'ಮನೆ ಮಂಚಮ್ಮ' ಎಂದೇ ಪ್ರಸಿದ್ಧಳಾದ ತಾಯಿ ಚಾವಣಿ ಇಲ್ಲದ ಗುಡಿಯಲ್ಲಿ ಪೂಜಿತಳಾಗಿ ಎಲ್ಲರನ್ನೂ ಅನುಗ್ರಹಿಸುತ್ತಿದ್ದಾಳೆ.

ಈ] ಸಂದರ್ಭದೊಂದಿಗೆ ಸ್ವಾರಸ್ಯ ಬರೆಯಿರಿ.

೧. **"ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ."**

**ಆಯ್ಕೆ :–** ಈ ವಾಕ್ಯವನ್ನು **ದೇವನೂರು ಮಹಾದೇವ** ಅವರು ರಚಿಸಿರುವ **'ಎದೆಗೆ ಬಿದ್ದ ಅಕ್ಷರ'** ಕೃತಿಯಿಂದ ಆಯ್ದ **'ಎದೆಗೆ ಬಿದ್ದ ಅಕ್ಷರ'** ಎಂಬ ಗದ್ಯಪಾಠದಿಂದ ಆರಿಸಲಾಗಿದೆ.

**ಸಂದರ್ಭ :–** ಗ್ರಾಮದೇವತೆ ಮಂಚಮ್ಮನಿಗೆ ಗುಡಿಕಟ್ಟಲು ಜನ ಪ್ರಾರಂಭಿಸಿದಾಗ, ಒಬ್ಬನ ಮೈ ಮೇಲೆ ಗ್ರಾಮದೇವತೆ ಮಂಚಮ್ಮ ಆವಾಹಿಸಿಕೊಂಡು ಬಂದು ಜನರೊಡನೆ ಮಾತನಾಡುವ ಸಂದರ್ಭದಲ್ಲಿ ಈ ಮಾತನ್ನು ಗ್ರಾಮದೇವತೆ ಮಂಚಮ್ಮ ಜನರಿಗೆ ಹೇಳುತ್ತಾಳೆ.

**ಸ್ವಾರಸ್ಯ :–** ತನ್ನ ಭಕ್ತರಿಗೆ ಮನೆ ಇಲ್ಲದ ಮೇಲೆ ನನಗೂ ಮನೆ ಬೇಡ ಎಂಬ ಮಂಚಮ್ಮದೇವತೆಯ ಮಾತು. ಕಾರುಣ್ಯ ಮತ್ತು ಸಮಾನತೆಯ ದ್ಯೋತಕವಾಗಿರುವುದು ಈ ಮಾತಿನ ಸ್ವಾರಸ್ಯವಾಗಿದೆ.

೨. **"ಯಾವ ಜೀವಿಯೂ ತನ್ನಷ್ಟಕ್ಕೆ ತಾನಿಲ್ಲ."**

**ಆಯ್ಕೆ :–** ಈ ವಾಕ್ಯವನ್ನು **ದೇವನೂರು ಮಹಾದೇವ** ಅವರು ರಚಿಸಿರುವ **'ಎದೆಗೆ ಬಿದ್ದ ಅಕ್ಷರ'** ಕೃತಿಯಿಂದ ಆಯ್ದ **'ಎದೆಗೆ ಬಿದ್ದ ಅಕ್ಷರ'** ಎಂಬ ಗದ್ಯಪಾಠದಿಂದ ಆರಿಸಲಾಗಿದೆ.

**ಸಂದರ್ಭ :–** ಲೇಖಕರಾದ ದೇವನೂರು ಮಹಾದೇವ ಅವರು ಡಾ. ಅಶೋಕ ಪೈ ಅವರ ಒಂದು ಸಂಶೋಧನಾ ಸತ್ಯಕತೆಯನ್ನು ಉದಾಹರಣೆ ನೀಡುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** "ಯಾವುದೇ ಒಂದು ಜೀವಿಗೆ ಆಗುವ ದುಃಖ–ದುಮ್ಮಾನ ಪರಿಸರದಲ್ಲಿ ಉಸಿರಾಡುತ್ತ, ಎಲ್ಲಾ ಜೀವಿಗಳಲ್ಲೂ ಕಂಪನ ಉಂಟುಮಾಡುತ್ತಿರುತ್ತದೆ" ಎಂಬುದು ಈ ಮಾತಿನ ಸ್ವಾರಸ್ಯವಾಗಿದೆ.

೩. **"ಅವರಿಗೆ ಅವರವರ ಪ್ರಜ್ಞೆಯೇ ದೇವರಾಗಿತ್ತು"**

**ಆಯ್ಕೆ :–** ಈ ವಾಕ್ಯವನ್ನು **ದೇವನೂರು ಮಹಾದೇವ** ಅವರು ರಚಿಸಿರುವ **'ಎದೆಗೆ ಬಿದ್ದ ಅಕ್ಷರ'** ಕೃತಿಯಿಂದ ಆಯ್ದ **'ಎದೆಗೆ ಬಿದ್ದ ಅಕ್ಷರ'** ಎಂಬ ಗದ್ಯಪಾಠದಿಂದ ಆರಿಸಲಾಗಿದೆ.

**ಸಂದರ್ಭ:** ಲೇಖಕರು ವಚನಕಾರರ ಪ್ರಕಾರ ದೇವರೆಂದರೆ ಏನು ಎಂದು ಹೇಳುವ ಸಂದರ್ಭದಲ್ಲಿ, 'ವಚನಕಾರರು ನಮ್ಮ ಸುತ್ತಮುತ್ತ ಇರುವ ದೇವರುಗಳನ್ನು ದೇವರು ಅಂದುಕೊಂಡಿರಲಿಲ್ಲ. ಪ್ರತಿಯೊಬ್ಬ ವಚನಕಾರರಿಗೂ ಅವರವರದೇ ಇಷ್ಟದೈವ. ಅಂದರೆ ಅವರಿಗೆ ಅವರವರ ಪ್ರಜ್ಞೆಯೇ ದೇವರಾಗಿತ್ತು.' ಎಂದು ಹೇಳಿದ್ದಾರೆ

**ಸ್ವಾರಸ್ಯ:** ಪ್ರಜ್ಞೆಯ ಮುಂದೆ ಸುಳ್ಳು ಹೇಳಲು ಸಾಧ್ಯವಿಲ್ಲ. ಆದ್ದರಿಂದ ವಚನಕಾರರು ಬೆಂಕಿಯಂತಹ ಪ್ರಜ್ಞೆಯನ್ನೇ ಪ್ರಮಾಣವಾಗಿಸಿಕೊಂಡು ಸತ್ಯಕ್ಕೆ ಆದ್ಯತೆ ನೀಡಿದರು ಎಂಬುದು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

೪. **"ಈ ಸಮಷ್ಟಿ ಮನಸ್ಸಲ್ಲಿ ಎಲ್ಲರೂ ಇರುತ್ತಾರೆ."**

**ಆಯ್ಕೆ :–** ಈ ವಾಕ್ಯವನ್ನು **ದೇವನೂರು ಮಹಾದೇವ** ಅವರು ರಚಿಸಿರುವ **'ಎದೆಗೆ ಬಿದ್ದ ಅಕ್ಷರ'** ಕೃತಿಯಿಂದ ಆಯ್ದ **'ಎದೆಗೆ ಬಿದ್ದ ಅಕ್ಷರ'** ಎಂಬ ಗದ್ಯಪಾಠದಿಂದ ಆರಿಸಲಾಗಿದೆ.

**ಸಂದರ್ಭ :–** ಲೇಖಕರಾದ ದೇವನೂರು ಮಹಾದೇವ ಅವರು "ಕೊಲೆ. ಸುಲಿಗೆ, ದ್ವೇಷ, ಅಸೂಯೆಗಳಿಂದ ಕ್ಷೋಭೆಗೊಂಡು ನರಳುತ್ತಿರುವ ಜಗತ್ತು ತನ್ನ ಆಳದ ಒಳ ಸಮಷ್ಟಿ ಮನಸ್ಸನ್ನು ಘಾಸಿಗೊಳಿಸುತ್ತಿದೆ" ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ಸಮಷ್ಟಿ ಮನಸ್ಸಿನಲ್ಲಿ ಎಲ್ಲರೂ ಇರುವುದರಿಂದ ಕಾರುಣ್ಯ ಹಾಗೂ ಸರ್ವಸಮಾನತೆ ಮನೋಭಾವ ಮೂಡಿಸಿಕೊಂಡು ಬದುಕಬೇಕು ಎಂಬುದು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಗೊಂಡಿದೆ.

ಉ] ಭಾಷಾಚಟುವಟಿಕೆ: ವಿರುದ್ಧಾರ್ಥಕ ಪದಗಳು :

೧. **ಒಳಿತು x** ಕೆಡುಕು. ೨. **ಸಮಷ್ಟಿ x** ವ್ಯಷ್ಟಿ ೩. ಪುಣ್ಯ **x** ಪಾಪ ೪. ಬೆಳಕು **x** ಕತ್ತಲು ೫. ಧರ್ಮ **x** ಅಧರ್ಮ

## ಭಾಗ – ಬಿ

**೧. ' ಜಾಣತನ ' ಪದವು ಈ ವ್ಯಾಕರಣಾಂಶಕ್ಕೆ ಉದಾಹರಣೆಯಾಗಿದೆ :**

ಎ) ತದ್ಧಿತಾಂತನಾಮ ಬಿ) ತದ್ಧಿತಾಂತಅವ್ಯಯ ಸಿ) ಕೃದಾಂತಭಾವನಾಮ ಡಿ) ತದ್ಧಿತಾಂತಭಾವನಾಮ

**೨. ' ಸಮಷ್ಟಿ ' ಪದದ ವಿರುದ್ಧಾರ್ಥಕ ರೂಪ :**

ಎ) ಸಮಾನದೃಷ್ಟಿ ಬಿ) ವ್ಯಷ್ಟಿ ಸಿ) ಸಮದೃಷ್ಟಿ ಡಿ) ಸಮಪುಷ್ಟಿ

**೩. ಅವನು ಭೀಮನಿಗಿಂತ ಬಲಶಾಲಿಯಾದ ಹುಡುಗ ಈ ವಾಕ್ಯದಲ್ಲಿ ತದ್ಧಿತಾಂತಾವ್ಯಯ ಪದವಿದು :**

ಎ) ಭೀಮನಿಗಿಂತ ಬಿ) ಅವನು ಸಿ) ಹುಡುಗ ಡಿ) ಬಲಶಾಲಿ

**೪. ' ವಿಜ್ಞಾನ ' ಪದದ ತದ್ಭವ ರೂಪ :**

ಎ) ವಿನಂತಿ ಬಿ) ಜ್ಞಾನ ಸಿ) ಬಿನ್ನಾಣ ಡಿ) ವೈಜ್ಞಾನಿಕ

**೫. ' ಸಚ್ಚಿಂತನೆ ' ಪದವು ಈ ಸಂಧಿಯ ಪದವಾಗಿದೆ :**

ಎ) ಆಗಮಸಂಧಿ ಬಿ) ಶ್ಚುತ್ವಸಂಧಿ ಸಿ) ಅನುನಾಸಿಕಸಂಧಿ ಡಿ) ಜಶ್ತ್ವಸಂಧಿ.

**೬. ' ಬಳೆಗಾರ ' ಪದದ ಸ್ತ್ರೀಲಿಂಗ ತದ್ಧಿತಾಂತ ಪದ :**

ಎ) ಬಳೆವಂತೆ ಬಿ) ಬಳೆಗಾರುತಿ ಸಿ) ಬಳೆಗಾರ್ತಿ ಡಿ) ಬಳೆಮಾರುವವಳು.

**೭. ' ಅವಳಿಗೋಸ್ಕರ ನನ್ನ ಬದುಕನ್ನೇ ತ್ಯಾಗಮಾಡಿದೆ' ಈ ವಾಕ್ಯದಲ್ಲಿರುವ ತದ್ಧಿತಾಂತಾವ್ಯಯ ಪದ :**

ಎ) ನನ್ನ ಬಿ) ತ್ಯಾಗಮಾಡು ಸಿ) ಬದುಕನ್ನೇ ಡಿ) ಅವಳಿಗೋಸ್ಕರ

**೮. 'ಬಿಳಿಕೂದಲು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ :**

ಎ) ತತ್ಪುರುಸಮಾಸ ಬಿ) ಕರ್ಮಧಾರಯಸಮಾಸ ಸಿ) ಅಂಶಿಸಮಾಸ ಡಿ) ದ್ವಂದ್ವಸಮಾಸ

**೯. ' ಮನೆ ' ಪದವು ಈ ವ್ಯಾಕರಣಾಂಶವಾಗಿದೆ :**

ಎ) ಅಂಕಿತನಾಮ ಬಿ) ಅನ್ವರ್ಥನಾಮ ಸಿ) ಕೃದಂತನಾಮ ಡಿ) ರೂಢನಾಮ

**೧೦. ' ಗುಡಿಕಟ್ಟು ' ಪದವು ಈ ಸಮಾಸ ಪದವಾಗಿದೆ :**

ಎ) ತತ್ಪುರುಸಮಾಸ ಬಿ) ಕ್ರಿಯಾಸಮಾಸ ಸಿ) ಅಂಶಿಸಮಾಸ ಡಿ) ದ್ವಂದ್ವಸಮಾಸ

**೧೧. ' ಗಳಿಗೆಗಳಿಗೆಗೆ ' ಪದವು ಈ ವ್ಯಾಕರಣಾಂಶಕ್ಕೆ ಉದಾಹರಣೆಯಾಗಿದೆ :**

ಎ) ದ್ವಿರುಕ್ತಿ ಬಿ) ಅನುಕರಣಾವ್ಯಯ ಸಿ) ಜೋಡಿಪದ ಡಿ) ನಾಮಪದ

**೧೨. ' ಮಹೋನ್ನತ ' ಪದವು ಈ ಸಂಧಿಗೆ ಉದಾಹರಣೆಯಾಗಿದೆ :**

ಎ) ಆಗಮಸಂಧಿ ಬಿ) ಸವರ್ಣದೀರ್ಘಸಂಧಿ ಸಿ) ಗುಣಸಂಧಿ ಡಿ) ಜಶ್ತ್ವಸಂಧಿ

[ **ಉತ್ತರಗಳು :** ೧. ಸಿ. ತದ್ಧಿತಾಂತಭಾವನಾಮ ೨. ಬಿ. ವ್ಯಷ್ಟಿ ೩. ಎ. ಭೀಮನಿಗಿಂತ ೪. ಸಿ. ಬಿನ್ನಣ
೫. ಡಿ. ಶ್ಚುತ್ವಸಂಧಿ ೬. ಸಿ. ಬಳೆಗಾರ್ತಿ ೭. ಡಿ. ಅವಳಿಗೋಸ್ಕರ ೮. ಬಿ. ಕರ್ಮಧಾರೆಯಸಮಾಸ
೯. ಡಿ. ರೂಢನಾಮ ೧೦. ಬಿ. ಕ್ರಿಯಾಸಮಾಸ ೧೧. ಎ. ದ್ವಿರುಕ್ತಿ ೧೨. ಗುಣಸಂಧಿ ]

**ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆ ಪದಕ್ಕೆ ಸಂಬಂಧ ಪದ ಬರೆಯಿರಿ :**

೧. ಬಿಡುಬಿಡು : ದ್ವಿರುಕ್ತಿ : : ಕೊಲೆಸುಲಿಗೆ : ____________

೨. ನಾಟಕಕಾರ : ತದ್ಧಿತಾಂತನಾಮ : : ಚೆಲುವಿಕೆ : ____________

೩. ಗುಡಿ : ರೂಢನಾಮ : : ಮೈಸೂರು : ____________

೪. ಹಣ : ಹಣವಂತ : : ಬಳೆ : ____________

೫. ಧರ್ಮ : ಅಧರ್ಮ : : ಪುಣ್ಯ : ____________

೬. ಅದಕ್ಕಿಂತ : ತದ್ಧಿತಾಂತಾವ್ಯಯ : : ಕಪ್ಪು : ____________

೭. ಜೀವಸಂಕುಲ : ತತ್ಪುರುಷಸಮಾಸ : : ಆ ದೇವತೆ : ____________

೮. ಕವಿ : ಕಬ್ಬಿಗ : : ಶಿಲ್ಪಿ : ____________

೯. ಸಿರಿವಂತ : ಸಿರಿವಂತೆ : : ಕನ್ನಡಿಗ : ____________

೧೦. ಅಲ್ಲೊಬ್ಬ : ಲೋಪಸಂಧಿ : : ಗುಡಿಯನ್ನು : ____________

[ **ಉತ್ತರಗಳು :** ೧. ಜೋಡುನುಡಿ ೨. ತದ್ಧಿತಾಂತಭಾವನಾಮ ೩. ಅಂಕಿತನಾಮ ೪. ಬಳೆಗಾರ ೫. ಪಾಪ
೬. ತದ್ಧಿತಾಂತಭಾವನಾಮ ೭. ಗಮಕಸಮಾಸ ೮. ಚಿಪ್ಪಿಗ ೯. ಕನ್ನಡತಿ ೧೦. ಆಗಮಸಂಧಿ ]

# ಪದ್ಯ–೫. ಹಸುರು

**ಕವಿ ಪರಿಚಯ: ಕುವೆಂಪು**

**ಕುವೆಂಪು** ಕಾವ್ಯನಾಮದಿಂದ ಪ್ರಸಿದ್ಧರಾದ ಕುಪ್ಪಳಿ ವೆಂಕಟಪ್ಪ ಪುಟ್ಟಪ್ಪ ಅವರು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ಸಮೀಪದ ಕುಪ್ಪಳಿಯವರು. ಜನನ ೧೯೦೪ ಡಿಸೆಂಬರ್ ೨೯.

ಇವರು ಬರೆದಿರುವ ಪ್ರಮುಖ ಕೃತಿಗಳು: **ಕೊಳಲು, ಪಾಂಚಜನ್ಯ, ಪ್ರೇಮಕಾಶ್ಮೀರ, ಪಕ್ಷಿಕಾಶಿ** ಮುಂತಾದ ಕವನ ಸಂಕಲನಗಳು, **ನನ್ನ ದೇವರು ಮತ್ತು ಇತರ ಕಥೆಗಳು, ಸಂನ್ಯಾಸಿ ಮತ್ತು ಇತರ ಕಥೆಗಳು** –ಕಥಾಸಂಕಲನಗಳು, **ಕಾನೂರು ಹೆಗ್ಗಡತಿ, ಮಲೆಗಳಲ್ಲಿ ಮದುಮಗಳು –** ಕಾದಂಬರಿಗಳು. **ರಸೋವೈಸಃ, ತಪೋನಂದನ** – ವಿಮರ್ಶಾ ಸಂಕಲನಗಳು, **ಅಮಲನ ಕಥೆ, ಮೋಡಣ್ಣನ ತಮ್ಮ, ಬೊಮ್ಮನಹಳ್ಳಿಯ ಕಿಂದರಿಜೋಗಿ** – ಮಕ್ಕಳ ಪುಸ್ತಕಗಳು, **ಜಲಗಾರ, ಯಮನ ಸೋಲು, ಬೆರಳ್ಗೆ ಕೊರಳ್** – ನಾಟಕಗಳು, **ನೆನಪಿನ ದೋಣಿಯಲ್ಲಿ** – ಆತ್ಮಕಥನ ಇವಲ್ಲದೆ ಮುಂತಾದ ಸುಮಾರು **ಎಪ್ಪತ್ತು** ಕೃತಿಗಳನ್ನು ರಚಿಸಿದ್ದಾರೆ.

ಶ್ರೀಯುತರಿಗೆ **'ಶ್ರೀರಾಮಾಯಣ ದರ್ಶನಂ'** ಮಹಾಕಾವ್ಯಕ್ಕೆ **ಕೇಂದ್ರ ಸಾಹಿತ್ಯ ಅಕಾಡೆಮಿ** ಪ್ರಶಸ್ತಿ ಮತ್ತು ೧೯೬೮ರಲ್ಲಿ **ಭಾರತೀಯ ಜ್ಞಾನಪೀಠ ಪ್ರಶಸ್ತಿ** ದೊರಕಿದೆ. ಧಾರವಾಡದಲ್ಲಿ ನಡೆದ ೧೯೫೭ ರ ಮೂವತ್ತೊಂಬತ್ತನೆಯ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು. ಇವರಿಗೆ ೧೯೬೪ರಲ್ಲಿ **ರಾಷ್ಟ್ರಕವಿ**, ೧೯೮೮ರಲ್ಲಿ **ಪಂಪ ಪ್ರಶಸ್ತಿ**, ೧೯೮೯ರಲ್ಲಿ **ಪದ್ಮವಿಭೂಷಣ ಪ್ರಶಸ್ತಿ** ದೊರೆತಿದೆ. ಅಲ್ಲದೆ ಮೈಸೂರು, ಕರ್ನಾಟಕ, ಬೆಂಗಳೂರು ಮತ್ತು ಗುಲ್ಬರ್ಗ ವಿಶ್ವವಿದ್ಯಾನಿಲಯಗಳಿಂದ **ಗೌರವ ಡಾಕ್ಟರೇಟ್** ಸಂದಿದೆ. ೧೯೯೨ರಲ್ಲಿ **ಕರ್ನಾಟಕ ರತ್ನ ಪ್ರಶಸ್ತಿ** ಲಭಿಸಿದೆ.

ಪ್ರಸ್ತುತ ಪದ್ಯಭಾಗವನ್ನು ಕುವೆಂಪು ಅವರ **'ಪಕ್ಷಿಕಾಶಿ'** ಕವನ ಸಂಕಲನದಿಂದ ಆಯ್ದುಕೊಳ್ಳಲಾಗಿದೆ.

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಆಶ್ವಯುಜದ ಬತ್ತದ ಗದ್ದೆಯ ಬಣ್ಣ ಯಾವ ಹಸುರಿನಂತಿದೆ?**

**ಉ:** ಆಶ್ವಯುಜದ ಬತ್ತದ ಗದ್ದೆಯ ಬಣ್ಣ **ಗಿಳಿಯ ಹಸುರಿನಂತಿದೆ.**

**೨. ಕವಿಯು ನೋಡಿದ ಅಡಕೆಯ ತೋಟ ಎಲ್ಲಿದೆ?**

**ಉ:** ಕವಿಯು ನೋಡಿದ ಅಡಕೆಯ ತೋಟ **ವನದಂಚಿನಲ್ಲಿದೆ.**

**೩. 'ಹಸುರು' ಎಂಬುದು ಯಾವುದನ್ನು ಕಂಡು ಪ್ರೇರಿತವಾದ ಕವನವಾಗಿದೆ?**

**ಉ:** 'ಹಸುರು' ಕವನವು ಆಶ್ವಯುಜ ಮಾಸದ ನವರಾತ್ರಿಯಲ್ಲಿ **ಪ್ರಕೃತಿಯ ಹಚ್ಚ ಹಸುರನ್ನು ಕಂಡು** ಪ್ರೇರಿತವಾದ ಕವನವಾಗಿದೆ.

**೪. ಕವಿಗೆ ಹುಲ್ಲಿನ ಹಾಸು ಯಾವ ರೀತಿ ಕಂಡಿದೆ?**

**ಉ:** ಕವಿಗೆ ಹುಲ್ಲಿನ ಹಾಸು **ಮಕಮಲ್ಲಿನ ಹೊಸಪಚ್ಚೆಯ ಜಮಖಾನೆಯ** ರೀತಿ ಕಂಡಿದೆ.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧) ಕವಿಗೆ ಯಾವ್ಯಾವುದರಲ್ಲಿ ಆಗಸದಿಂದ ಬಿಸಿಲವರೆಗೂ ಹಸುರು ಕಾಣುತ್ತಿದೆ?**

**ಉ:** ಕವಿಗೆ ನವರಾತ್ರಿಯಲ್ಲಿ, ಹಸುರಿನಿಂದ ಕಂಗೊಳಿಸುವ ಭೂಮಿಯಲ್ಲಿ, ನೀಲ ಸಮುದ್ರದಲ್ಲಿ ಹಸುರಾದ ಕವಿಯ ಹೃದಯಕ್ಕೆ 'ಆಗಸ, ಮುಗಿಲು, ಗದ್ದೆಯ ಬಯಲು, ಮಲೆ, ಕಣಿವೆ, ಸಂಜೆಯ ಬಿಸಿಲು ಕಾಡಂಚಿನ ಅಡಕೆಯ ತೋಟ, ಹೂವಿನ ಕಂಪಿನಲ್ಲಿ, ಎಲರಿನ ತಂಪಿನಲ್ಲಿ, ಹಕ್ಕಿಯ ಕೊರಲಿನಲ್ಲಿ, ಹೀಗೆ ಆಗಸದಿಂದ ಬಿಸಿಲವರೆಗೂ ಕವಿಗೆ ಹಸುರು ಕಾಣುತ್ತಿದೆ.

**೨) ಹಸುರು ಸಕಲೇಂದ್ರಿಯಗಳನ್ನು ವ್ಯಾಪಿಸಿದೆ ಎಂಬುದನ್ನು ಕವಿಯು ಹೇಗೆ ವರ್ಣಿಸಿದ್ದಾರೆ?**

**ಉ:** ಹಸುರಾದ ಭೂಮಿ, ಆಗಸ, ಮುಗಿಲು, ಗದ್ದೆಯ ಬಯಲು, ಮಲೆ, ಕಣಿವೆ, ಸಂಜೆಯ ಬಿಸಿಲು ಕಾಡಂಚಿನ ಅಡಕೆಯ ತೋಟ ಇವೆಲ್ಲಾ **ಕಣ್ಣಿಗೆ** ಗೋಚರವಾದರೆ, ಹೂವಿನ ಕಂಪಿನ ಹಸುರು **ಮೂಗಿಗೆ,** ಎಲರಿನ ತಂಪಿನ ಸ್ಪರ್ಷ **ಚರ್ಮಕ್ಕೆ,** ಹಕ್ಕಿಯ ಕೊರಲಿನ ಚಿಲಿಪಿಲಿ ಗಾನ **ಕಿವಿಗೆ,** ಶ್ಯಾಮಲ ಸಮುದ್ರದ ಹಸುರು ಕವಿಯಾತ್ಮಕ್ಕೆ ರಸಪಾನ ಮಾಡಿದಂತಾದುದು **ನಾಲಗೆಗೆ** ಹೀಗೆ ಪ್ರಕೃತಿಯ ಹಸುರು ಸಕಲ ಇಂದ್ರಿಯಗಳನ್ನೂ ವ್ಯಾಪಿಸಿದೆ ಎಂಬುದನ್ನು ಕವಿ ಕುವೆಂಪು ಅವರು ಅಭೂತಪೂರ್ಣವಾಗಿ ವರ್ಣಿಸಿದ್ದಾರೆ.

**೩) ಕವಿಯಾತ್ಮವು ಹಸುರುಗಟ್ಟಲು ಕಾರಣವಾದ ಹಿನ್ನೆಲೆಯ ಅಂಶಗಳೇನು?**

**ಉ:** ಕವಿಯಾತ್ಮವು ಹಸುರುಗಟ್ಟಲು ಆಶ್ವಯುಜ ಮಾಸದ ನವರಾತ್ರಿಯಲ್ಲಿ ವಿಶಾಲವಾದ ಶಾಮಲ ಕಡಲು, ಹಸುರಾಗಸ; ಹಸುರು ಮುಗಿಲು; ಹಸುರು ಗದ್ದೆಯ ಬಯಲು; ಹಸುರಿನ ಮಲೆ; ಹಸುರು ಕಣಿವೆ; ಸಂಜೆಯ ಬಿಸಿಲು, ಅಶ್ವೀಜದ ಶಾಲಿವನದ ಗಿಳಿಯ ಹಸುರು ಬಣ್ಣದ ನೋಟ; ಕಾಡಂಚಿನಲ್ಲಿ ಫಲಭರಿತ ಅಡಕೆಯ ತೋಟ; ಹುಲ್ಲಿನ ಮಕಮಲ್ಲಿನ ಹೊಸಪಚ್ಚೆಯ ಜಮಖಾನೆ ಪಸರಿಸಿದಂತೆ ಭೂಮಿಯು ಹಸುರುಟ್ಟಿದ್ದು ಹೊಸ ಹೂವಿನ ಕಂಪು; ತಂಗಾಳಿಯ ತಂಪು; ಹಕ್ಕಿಯ ಇಂಪಾದ ಗಾನ; ಎತ್ತೆತ್ತ ನೋಡಿದರೂ ಹಸುರು.. ಹಸುರು.. ಹಸರು.. ಈ ಇವೆಲ್ಲಾ ಕವಿಯಾತ್ಮವು ಹಸುರುಗಟ್ಟಲು ಕಾರಣವಾದ ಹಿನ್ನೆಲೆಯ ಅಂಶಗಳಾದವು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. 'ಹಸುರು' ಕವನದ ರೀತ್ಯ ಎಲ್ಲೆಲ್ಲಿ ಹಸುರು ವ್ಯಾಪಿಸಿದೆ ಎಂಬುದನ್ನು ವಿವರಿಸಿ.**

**ಉ:** 'ಹಸುರು' ಕವನವು ಆಶ್ವಯುಜ ಮಾಸದ ನವರಾತ್ರಿಯಲ್ಲಿ ಪ್ರಕೃತಿಯಲ್ಲಿ ಹೆಪ್ಪುಗಟ್ಟಿದ ಹಚ್ಚ ಹಸುರನ್ನು ಕಂಡು ಪ್ರೇರಿತವಾದ ಕವನವಾಗಿದೆ. ಇದು ಕುವೆಂಪು ಅವರ ಸ್ಥಳವಾದ ಮಲೆನಾಡಿನ ಕುಪ್ಪಳ್ಳಿಯ 'ಕವಿಶೈಲ'ದಲ್ಲಿ ಅವರಿಗುಂಟಾದ ಸೌಂದರ್ಯಾನುಭವ. ಪ್ರಕೃತಿ, ಅಲ್ಲಿಯ ಹಸುರುಗಳೊಂದಿಗೆ ಕುವೆಂಪು ಹೊಂದಿದ್ದ ಸಮೀಪ ಸಂಬಂಧವನ್ನು ತೋರಿಸುತ್ತದೆ.

ಕವಿಯಾತ್ಮವು ಹಸುರುಗಟ್ಟಲು ಆಶ್ವಯುಜ ಮಾಸದ ನವರಾತ್ರಿಯ ದಿನದಲ್ಲಿ ಹೊಸ ಚಿಗುರಿನಿಂದ ಕೂಡಿದ ಭೂಮಿಯಲ್ಲಿ ವಿಶಾಲವಾದ ಶಾಮಲ ಕಡಲು ಹಸುರಾಗಿರುವುದನ್ನು ನೋಡಿ ಕವಿಯ ಆತ್ಮವನ್ನು ರಸಪಾನದಲ್ಲಿ ಮಿಂದಿತು. ಆಗಸದಲ್ಲಿ; ಮುಗಿಲಿನಲ್ಲಿ;

ಗದ್ದೆಯ ಬಯಲಿನಲ್ಲಿ; ಬೆಟ್ಟಗುಡ್ಡಗಳಲ್ಲಿ; ಕಣಿವೆಯಲ್ಲಿ; ಸಂಜೆಯ ಬಿಸಿಲಿನಲ್ಲಿ ಹಸುರು ಹರಡಿತ್ತು. ಹಾಗೆಯೇ ಅಶ್ವೀಜ ಮಾಸದಲ್ಲಿ ಬತ್ತದ ಗದ್ದೆಗೆ ಮುತ್ತುವ ಗಿಳಿಗಳ ಹಸುರು ಬಣ್ಣದ ನೋಟ; ಅದರ ಪಕ್ಕದಲ್ಲೇ ಕಾಡಂಚಿನಲ್ಲಿ ಫಲಭರಿತ ಅಡಕೆಯ ತೋಟ; ಹುಲ್ಲಿನ ಮಕಮಲ್ಲಿನ ಹೊಸಪಚ್ಚೆಯ ಜಮಖಾನೆ ಹರಡಿದಂತೆ ಭೂಮಿಯು ಹಸುರಿನಿಂದ ಮೈ ಮುಚ್ಚಿರಲು ಕವಿಗೆ ಬೇರೆ ಬಣ್ಣಗಳೇ ಕಾಣದಾದವು. ಹೊಸ ಹೂವಿನ ಕಂಪು; ತಂಗಾಳಿಯ ತಂಪು; ಹಕ್ಕಿಯ ಇಂಪಾದ ಗಾನ; ಅತ್ತ-ಇತ್ತ-ಎತ್ತ ನೋಡಿದರೂ ಹಸುರು.. ಹಸುರು.. ಹಸರು.. ಇದನ್ನು ನೋಡಿದ ಕವಿಯಾತ್ಮವು ಹಸುರುಗಟ್ಟಿತು. ಕವಿಯ ದೇಹದಲ್ಲೂ ಹಸುರು ರಕ್ತವೇ ಹರಿದಾಡಿತು. ಎಂದು ಹಸುರು ವ್ಯಾಪಿಸಿದ ಬಗೆಯನ್ನು ಕವಿ ವರ್ಣಿಸಿದ್ದಾರೆ.

**೨. ಪ್ರಕೃತಿಯ 'ಹಸುರು' ಜೀವ ಜಗತ್ತಿಗೆ ಎಷ್ಟು ಮುಖ್ಯ ಎಂಬುದನ್ನು ಕುರಿತು ನಿಮ್ಮ ಅಭಿಪ್ರಾಯಗಳನ್ನು ಬರೆಯಿರಿ.**

(ಮಕ್ಕಳ ಸೃಜನಶೀಲತೆಗಾಗಿ ಬಿಡಲಾಗಿದೆ)

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ಹಸುರಾದುದು ಕವಿಯಾತ್ಮಂ"**

**ಆಯ್ಕೆ:** ಈ ವಾಕ್ಯವನ್ನು ಕುವೆಂಪು ಅವರ **'ಪಕ್ಷಿಕಾಶಿ'** ಕವನ ಸಂಕಲನದಿಂದ ಆರಿಸಲಾಗಿರುವ **'ಹಸುರು'** ಎಂಬ ಪದ್ಯದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ನವರಾತ್ರಿಯ ನವಧಾತ್ರಿಯ ಈ ಶ್ಯಾಮಲ ವರ್ಣದ ಕಡಲಿನಲ್ಲೂ ಕವಿಯ ಆತ್ಮ ಹಸುರಾಯಿತು, ರಸಪಾನದಲ್ಲಿ ಮಿಂದಿತು ಎಂದು ಪ್ರಕೃತಿಯಲ್ಲಿ ವ್ಯಾಪಿಸಿರುವ ಹಸುರಿನ ಬಗ್ಗೆ ವರ್ಣಿಸುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ. ಇದು ಕುವೆಂಪು ಅವರ ಸ್ಥಳವಾದ ಮಲೆನಾಡಿನ ಕುಪ್ಪಳ್ಳಿಯ 'ಕವಿಶೈಲ'ದಲ್ಲಿ ಅವರಿಗುಂಟಾದ ಸೌಂದರ್ಯಾನುಭವ. ಪ್ರಕೃತಿ, ಅಲ್ಲಿಯ ಹಸುರುಗಳೊಂದಿಗೆ ಕುವೆಂಪು ಹೊಂದಿದ್ದ ಅವಿನಾಭಾವ ಸಂಬಂಧವನ್ನು ತೋರಿಸುತ್ತದೆ.

**ಸ್ವಾರಸ್ಯ:** ನವರಾತ್ರಿಯ ಕಪ್ಪು ಕಡಲಿನಲ್ಲೂ ಹಸುರನ್ನು ಕಾಣುವ ಕುವೆಂಪು ಅವರ ಕವಿಯಾತ್ಮದ ಪ್ರಕೃತಿಯ ರಸಾಸ್ವಾದನೆ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೨. "ಬೇರೆ ಬಣ್ಣವನೆ ಕಾಣೆ"**

**ಆಯ್ಕೆ:** ಈ ವಾಕ್ಯವನ್ನು ಕುವೆಂಪು ಅವರ **'ಪಕ್ಷಿಕಾಶಿ'** ಕವನ ಸಂಕಲನದಿಂದ ಆರಿಸಲಾಗಿರುವ **'ಹಸುರು'** ಎಂಬ ಪದ್ಯದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಅಶ್ವೀಜ ಮಾಸದಲ್ಲಿ ಬತ್ತದ ಗದ್ದೆಗೆ ಮುತ್ತುವ ಗಿಳಿಗಳ ಹಸುರು ಬಣ್ಣದ ನೋಟ; ಅದರ ಪಕ್ಕದಲ್ಲೇ ಕಾಡಂಚಿನಲ್ಲಿ ಫಲಭರಿತ ಅಡಕೆಯ ತೋಟ; ಹುಲ್ಲಿನ ಮಕಮಲ್ಲಿನ ಹೊಸಪಚ್ಚೆಯ ಜಮಖಾನೆ ಹರಡಿದಂತೆ ಭೂಮಿಯು ಹಸುರಿನಿಂದ ಮೈ ಮುಚ್ಚಿರುವ ಬಗೆಯನ್ನು ವರ್ಣಿಸುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ.

**ಸ್ವಾರಸ್ಯ:** ಭೂಮಿಯ ಮೇಲೆ ಎಲ್ಲೆಂದರಲ್ಲಿ ವಿವಿಧ ರೂಪದಲ್ಲಿ ಹಸುರು ಪಸರಿಸಿರುವುದನ್ನು ನೋಡಿ ರಸಾನಂದ ಹೊಂದಿದ ಕವಿ 'ಬೇರೆ ಬಣ್ಣಗಳೇ ಕಾಣದಾದವು' ಎಂದು ಹೇಳಿರುವಲ್ಲಿ ಅವರ ರಸಾಸ್ವಾದನೆಯ ಔನ್ನತ್ಯವನ್ನು ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸಿರುವುದನ್ನು ಕಾಣಬಹುದಾಗಿದೆ.

**೩. "ಹಸುರು ಹಸುರಿಳೆಯುಸಿರೂ"**

**ಆಯ್ಕೆ:** ಈ ವಾಕ್ಯವನ್ನು ಕುವೆಂಪು ಅವರ **'ಪಕ್ಷಿಕಾಶಿ'** ಕವನ ಸಂಕಲನದಿಂದ ಆರಿಸಲಾಗಿರುವ **'ಹಸುರು'** ಎಂಬ ಪದ್ಯದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಹೊಸ ಹೂವಿನ ಕಂಪು, ಬೀಸುವ ಗಾಳಿಯ ತಂಪು, ಹಕ್ಕಿಯ ಕೊರಲಿನಿಂದ ಹೊರಟ ಗಾನದ ಇಂಪು, ಅಲ್ಲದೆ ಇಡೀ ಭೂಮಿಯ ಶ್ವಾಸವೆಲ್ಲಾ ಹಸುರುಮಯವಾಗಿದೆ ಎಂದು ವರ್ಣಿಸುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ. ಇಲ್ಲಿ ಹೂವು-ಗಾಳಿ-ಹಕ್ಕಿಯ ಗಾನಗಳಲ್ಲಿ ಬೇರೆ ಬೇರೆ ಅನುಭವವಿದ್ದರೂ ಕವಿಯ ಏಕತಾ ದೃಷ್ಟಿಯಲ್ಲಿ ಎಲ್ಲದರಲ್ಲೂ ಹಸುರೇ ಕಾಣುತ್ತದೆ.

**ಸ್ವಾರಸ್ಯ:** ಹಸುರು ಸರ್ವೇಂದ್ರಿಯಗಳನ್ನೂ ವ್ಯಾಪಿಸಿದೆ ಎಂದು ವರ್ಣಿಸಿರುವ ಕವಿಯ ಕಲ್ಪನೆ ಇಲ್ಲಿ ಸ್ವಾರಸ್ಯಪೂರ್ಣವಾಗಿ ಮೂಡಿಬಂದಿದೆ.

**೪. "ಹಸುರತ್ತಲ್, ಹಸುರಿತ್ತಲ್, ಹಸುರೆತ್ತಲ್"**

**ಆಯ್ಕೆ:** ಈ ವಾಕ್ಯವನ್ನು ಕುವೆಂಪು ಅವರ **'ಪಕ್ಷಿಕಾಶಿ'** ಕವನ ಸಂಕಲನದಿಂದ ಆರಿಸಲಾಗಿರುವ **'ಹಸುರು'** ಎಂಬ ಪದ್ಯದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಅತ್ತ-ಇತ್ತ-ಎತ್ತಲೂ ಹಸುರೇ ಆವರಿಸಿರುವುದನ್ನು ಕವಿದೃಷ್ಟಿಯಿಂದ ನೋಡಿದ ಕುವೆಂಪು ಅವರು 'ಕಡಲಿನಲ್ಲಿ ಎಲ್ಲೆಲ್ಲೂ ಹಸುರೇ ಹಸುರು. ಕವಿಯ ಆತ್ಮ ಹಸುರು ನೆತ್ತರಿನಿಂದ ಹಸುರುಗಟ್ಟಿತು' ಎಂದು ವರ್ಣಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳಿದ್ದಾರೆ. ಎಲ್ಲೆಲ್ಲೂ ಹಸುರನ್ನು ಕಂಡ ಕವಿಯಾತ್ಮವು ಹಸುರುಗಟ್ಟಿತಲ್ಲದೆ ಅವರ ದೇಹದಲ್ಲಿನ ರಕ್ತವೂ ಹಸುರೇ! ಎಂದು ವರ್ಣಿಸಿದ್ದಾರೆ.

**ಸ್ವಾರಸ್ಯ:** ಹಸುರು ಕೇವಲ ಸಸ್ಯವರ್ಗಕ್ಕೆ ಮಾತ್ರ ಸೀಮಿತವಲ್ಲ ಇಡೀ ಪ್ರಕೃತಿಯ ಚೈತನ್ಯಕ್ಕೆ ಅದೇ ಕಾರಣ. ಪ್ರಕೃತಿಗಷ್ಟೇ ಅಲ್ಲದೆ 'ರಕ್ತದಲ್ಲೂ ಹಸುರು ವ್ಯಾಪಿಸಿದೆ' ಎಂದು ಸ್ವಾರಸ್ಯಪೂರ್ಣವಾಗಿದೆ.

**********

# ಪದ್ಯ-೬ ಛಲಮನೆ ಮೆಱೆವೆಂ

**ಕವಿ ಪರಿಚಯ:- ರನ್ನ**

**ರನ್ನ ಕ್ರಿ. ಶ. ಸುಮಾರು ೯೪೯** ರಲ್ಲಿ (ಹತ್ತನೆಯ ಶತಮಾನದಲ್ಲಿ) ಬಾಗಲಕೋಟೆ ಜಿಲ್ಲೆಯ **ಮುದುವೊಳಲು (ಈಗಿನ ಮುಧೋಳ)** ಎಂಬ ಗ್ರಾಮದಲ್ಲಿ ಜನಿಸಿದನು. ಇವನ ತಂದೆ ಜಿನವಲ್ಲಭ, ತಾಯಿ ಅಬ್ಬಲಬ್ಬೆ. ಈತನು ಚಾಲುಕ್ಯ ದೊರೆಯಾದ ತೈಲಪನ ಆಸ್ಥಾನದಲ್ಲಿದ್ದನು. ಇವನು **'ಸಾಹಸ ಭೀಮ ವಿಜಯಂ (ಗದಾಯುದ್ಧ)', 'ಅಜಿತತೀರ್ಥಂಕರ ಪುರಾಣತಿಲಕಂ', 'ಪರಶುರಾಮಚರಿತಂ', 'ಚಕ್ರೇಶ್ವರಚರಿತಂ'** ಎಂಬ ಕಾವ್ಯಗಳನ್ನು ಬರೆದಿದ್ದಾನೆ. **'ರನ್ನಕಂದ'** ಎಂಬ ನಿಘಂಟನ್ನು ಬರೆದಿರುವುದಾಗಿ ತಿಳಿದುಬರುತ್ತದೆ. ಇವನಿಗೆ ತೈಲಪನು **'ಕವಿಚಕ್ರವರ್ತಿ'** ಎಂಬ ಬಿರುದನ್ನು ಕೊಟ್ಟನು. ಈತನು ಕನ್ನಡದ **ರತ್ನತ್ರಯರ**ಲ್ಲಿ ಒಬ್ಬನು.

**'ಛಲಮನೆ ಮೆಱೆವೆಂ'** ಎಂಬ ಪದ್ಯಭಾಗವನ್ನು ಪ್ರೊ. ಹಂಪ ನಾಗರಾಜಯ್ಯ ಅವರು ಸಂಪಾದಿಸಿರುವ 'ರನ್ನ ಸಂಪುಟ'ದ ಮಹಾಕವಿ ರನ್ನನ **'ಸಾಹಸ ಭೀಮ ವಿಜಯಂ'** ಎಂಬ ಮಹಾಕಾವ್ಯಭಾಗದ ಐದನೆಯ ಆಶ್ವಾಸದಿಂದ ಆರಿಸಿಕೊಳ್ಳಲಾಗಿದೆ.

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

**೧. ನಿಮಗೆ ನಮಸ್ಕರಿಸಿ ಹೋಗಲು ಬಂದೆನಷ್ಟೇ ಎಂದು ದುರ್ಯೋಧನ ಯಾರಿಗೆ ಹೇಳುವನು?**

**ಉ:** ನಿಮಗೆ ನಮಸ್ಕರಿಸಿ ಹೋಗಲು ಬಂದೆನಷ್ಟೇ ಎಂದು ದುರ್ಯೋಧನ **ಭೀಷ್ಮಾಚಾರ್ಯರಿಗೆ** ಹೇಳುವನು.

**೨. ದಿನಪಸುತ ಎಂದರೆ ಯಾರು?**

**ಉ:** ದಿನಪಸುತ ಎಂದರೆ **ಕರ್ಣ.**

**೩. ಯಾರಿಬ್ಬರನ್ನು ಕೊಂದ ಬಳಿಕ ಸಂಧಿ ಮಾಡಿಕೊಳ್ಳುವುದಾಗಿ ದುರ್ಯೋಧನ ಹೇಳುತ್ತಾನೆ?**

**ಉ: ಅರ್ಜುನ ಮತ್ತು ಭೀಮ** ಇಬ್ಬರನ್ನೂ ಕೊಂದ ಬಳಿಕ ಸಂಧಿ ಮಾಡಿಕೊಳ್ಳುವುದಾಗಿ ದುರ್ಯೋಧನ ಹೇಳುತ್ತಾನೆ.

**೪. ಛಲವನ್ನೇ ಮೆರೆಯುವುದಾಗಿ ನಿರ್ಧರಿಸಿದವನು ಯಾರು?**

**ಉ:** ಛಲವನ್ನೇ ಮೆರೆಯುವುದಾಗಿ ನಿರ್ಧರಿಸಿದವನು **ದುರ್ಯೋಧನ.**

**೫. ಅಂತಕಾತ್ಮಜ ಎಂದರೆ ಯಾರು?**

**ಉ:** ಅಂತಕಾತ್ಮಜ ಎಂದರೆ **ಧರ್ಮರಾಯ.**

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ.**

**೧. ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ದುರ್ಯೋಧನ ಹೇಗೆ ವಿವರಿಸುತ್ತಾನೆ?**

**ಉ:** ದುರ್ಯೋಧನನನು ಭೀಷ್ಮಾಚಾರ್ಯರಿಗೆ "ನಾನು ಭೂಮಿಗಾಗಿ ಹೋರಾಡುತ್ತಿಲ್ಲ ಆದರೆ ನನ್ನ ಛಲಕ್ಕಾಗಿ ಪಾಂಡವರೊಡನೆ ಹೋರಾಡುವೆನು. ಈ ಭೂಮಿ ನನಗೆ ಪಾಳು ಭೂಮಿಗೆ ಸಮ. ನನ್ನ ಒಡ ಹುಟ್ಟಿದ ನೂರುಮಂದಿ ಸಹೋದರರು ಯುದ್ಧದಲ್ಲಿ ಹೋರಾಡಿ ಸತ್ತರು. ಸತ್ತವರೇನು ಮತ್ತೆ ಹುಟ್ಟುವುದಿಲ್ಲವೇ? ಆದ್ದರಿಂದ ಪಾಂಡವರೊಡನೆ ಹೋರಾಡಿ ನನ್ನ ಛಲವನ್ನೇ ಮೆರೆಯುತ್ತೇನೆ" ಎಂದು ಹೇಳುತ್ತಾನೆ.

**೨. ಈ ನೆಲದೊಡನೆ ತಾನು ಸಹಬಾಳ್ವೆ ಮಾಡುವುದಿಲ್ಲವೆಂದು ದುರ್ಯೋಧನ ಹೇಳುವುದೇಕೆ?**

**ಉ:** ಭೀಷ್ಮಾಚಾರ್ಯರು ಪಾಂಡವರೊಡನೆ ಸಂಧಿ ಮಾಡಿಕೊ ಎಂದು ಸಲಹೆ ಮಾಡಿದಾಗ ದುರ್ಯೋಧನನನು ಅದಕ್ಕೆ ಒಪ್ಪುವುದಿಲ್ಲ. ಅವನು "ನಾನು ಭೂಮಿಗಾಗಿ ಹೋರಾಡುತ್ತಿಲ್ಲ. ಛಲಕ್ಕಾಗಿ ಪಾಂಡವರೊಡನೆ ಹೋರಾಡುವೆನು. ಈ ಭೂಮಿ ನನಗೆ ಪಾಳು ಭೂಮಿಗೆ ಸಮ. ಪ್ರಿಯ ಗೆಳೆಯನಾದ ಕರ್ಣನನ್ನು ಕೊಲ್ಲಿಸಿದ ಈ ಭೂಮಿಯೊಡನೆ ನಾನು ಮತ್ತೆ ಸಹಬಾಳ್ವೆ ಮಾಡುವುದಿಲ್ಲ" ಎನ್ನುತ್ತಾನೆ.

**೩. ಪಾರ್ಥ-ಭೀಮರ ಬಗೆಗೆ ದುರ್ಯೋಧನನ ಅಭಿಪ್ರಾಯವೇನು?**

**ಉ:** "ನನ್ನ ಪ್ರೀತಿಯ ಗೆಳೆಯ ಕರ್ಣನನ್ನು, ನನ್ನ ಪ್ರೀತಿಯ ತಮ್ಮನಾದ ದುಶ್ಯಾಸನನನ್ನು ಕೊಂದ ಅರ್ಜುನ-ಭೀಮರು ಬದುಕಿರುವವರೆಗೆ; ನನ್ನ ದೇಹದಲ್ಲಿ ಪ್ರಾಣ ಇರುವವರೆಗೆ; ನಾನು ಸಂಧಿಮಾಡಿಕೊಳ್ಳಲು ಒಪ್ಪುವುದಿಲ್ಲ. ಮೊದಲು ಆ ಇಬ್ಬರನ್ನೂ ಕೊಲ್ಲುವೆನು. ಅವರನ್ನು ಕೊಂದ ಬಳಿಕ ಧರ್ಮರಾಜನೊಡನೆ ಸಂಧಿಮಾಡಿಕೊಳ್ಳುತ್ತೇನೆ" ಎಂಬುದು ಪಾರ್ಥ-ಭೀಮರ ಬಗೆಗೆ ದುರ್ಯೋಧನನ ಅಭಿಪ್ರಾಯವಾಗಿದೆ.

**ಇ. ಕೊಟ್ಟಿರುವ ಪ್ರಶ್ನೆಗಳ ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಭೀಷ್ಮ ಮತ್ತು ದುರ್ಯೋಧನರ ನಡುವಿನ ಸಂಭಾಷಣೆಯ ಸ್ವಾರಸ್ಯವನ್ನು ವಿವರಿಸಿ.**

**ಉ:** ಮಹಾಭಾರತ ಯುದ್ದದಲ್ಲಿ ತನ್ನೆಲ್ಲ ಸಹೋದರರನ್ನೂ ಆಪ್ತಮಿತ್ರನಾದ ಕರ್ಣನನ್ನೂ ಕಳೆದುಕೊಂಡ ದುರ್ಯೋಧನನು ತನ್ನ ತಂದೆ ತಾಯಿಯರ ಅಪೇಕ್ಷೆಯಂತೆ ರಣರಂಗದಲ್ಲಿ ಶರಶಯ್ಯೆಯಲ್ಲಿ ಮಲಗಿದ್ದ ತಾತ ಭೀಷ್ಮರ ಸಲಹೆಯನ್ನು ಪಡೆಯಲು ಬರುತ್ತಾನೆ. ಭೀಷ್ಮರು ಯುದ್ಧವನ್ನು ನಿಲ್ಲಿಸಿ ಪಾಂಡವರೊಡನೆ ಸಂಧಿ ಮಾಡಿಕೊಳ್ಳುವುದು ಸೂಕ್ತವೆಂದು ದುರ್ಯೋಧನನಿಗೆ ಸಲಹೆ ನೀಡುತ್ತಾರೆ.

ಭೀಷ್ಮರು ದುರ್ಯೋಧನನಿಗೆ "ನೀನು ಒಪ್ಪುವೆಯಾದರೆ ಪಾಂಡವರನ್ನು ಒಪ್ಪಿಸಿ ಒಪ್ಪಂದ ಮಾಡಿ ಹಿಂದಿನಂತೆ ನಡೆಯುವ ಹಾಗೆ ಮಾಡುವೆನು" ಎಂದು ಹೇಳುತ್ತಾರೆ. ಅವರಿಗೆ ದುರ್ಯೋಧನನು ಛಲಗಾರ ಎಂಬುದು ತಿಳಿದಿದ್ದರೂ ಹಿರಿಯರಾಗಿ ಅವನನ್ನು ಸಂಧಿಗಾಗಿ ಒಪ್ಪಿಸುವ ಒಂದು ಪ್ರಯತ್ನ ಇಲ್ಲಿ ಕಂಡುಬರುತ್ತದೆ. ಹಾಗೆಯೇ "ಈಗಲೂ ಕೂಡ ಅವರು ನಮ್ಮ ಮಾತನ್ನು ಮೀರದೆ ಪಾಲಿಸುತ್ತಾರೆ. ನೀನೂ ಕೂಡ ನಮ್ಮ ಮಾತನ್ನು ಮೀರದೆ ನಡೆದುಕೊಳ್ಳಬೇಕು" ಎಂದು ಹೇಳುವ ಭೀಷ್ಮರ ಮಾತುಗಳಲ್ಲಿ ಅವರಿಗೆ ಪಾಂಡವರ ಮೇಲಿದ್ದ ನಂಬಿಕೆ–ವಿಶ್ವಾಸವೂ ವ್ಯಕ್ತವಾಗಿದೆ.

"ಅಜ್ಜಾ, ನಾನು ನಿಮಗೆ ನಮಸ್ಕರಿಸಿ ಹೋಗಲೆಂದು ಬಂದೆನೇ ಹೊರತು ಶತ್ರುಗಳೊಡನೆ ಒಪ್ಪಂದವನ್ನು ಏರ್ಪಡಿಸುವುದಕ್ಕೆಂದು ಬಂದಿಲ್ಲ. ನಾನು ಭೂಮಿಗಾಗಿ ಹೋರಾಡುವೆನೆಂದು ಭಾವಿಸಿದಿರಾ? ಆದರೆ ನಾನು ಛಲಕ್ಕಾಗಿ ಪಾಂಡವರೊಡನೆ ಹೋರಾಡುವೆನು. ಈ ಭೂಮಿ ನನಗೆ ಪಾಳು ಭೂಮಿ" ಎಂದು ಹೇಳುವಲ್ಲಿ ಅವನ ದಿಟ್ಟ ನಿರ್ಧಾರ ಸ್ಪಷ್ಟವಾಗಿ ಗೋಚರಿಸುತ್ತದೆ.

ಅಲ್ಲದೆ "ಕರ್ಣನನ್ನು ಕೊಲ್ಲಿಸಿದ ಈ ಭೂಮಿಯೊಡನೆ ನಾನು ಮತ್ತೆ ಬಾಳಲಾದೀತೆ? ನನ್ನ ಪ್ರೀತಿಯ ಗೆಳೆಯನನ್ನು ನನ್ನ ಪ್ರೀತಿಯ ತಮ್ಮನನ್ನು ಕೊಂದ ಅರ್ಜುನ–ಭೀಮರು ಬದುಕಿರುವವರೆಗೆ; ನನ್ನ ದೇಹದಲ್ಲಿ ಪ್ರಾಣ ಇರುವವರೆಗೆ; ನಾನು ಸಂಧಿಯನ್ನು ಒಪ್ಪುವುದಿಲ್ಲ. ಮೊದಲು ಆ ಇಬ್ಬರನ್ನೂ ಕೊಂದ ಬಳಿಕ ಧರ್ಮರಾಜನೊಡನೆ ಸಂಧಿಮಾಡಿಕೊಳ್ಳುತ್ತೇನೆ" ಎಂದು ಹೇಳುವಲ್ಲಿ ಆತನಿಗೆ ಕರ್ಣ ಮತ್ತು ದುಶ್ಯಾಸನನ ಮೇಲಿದ್ದ ಪ್ರೀತಿಯೂ ಭೀಮಾರ್ಜುನರ ಬಗೆಗಿದ್ದ ಕೋಪದ ತೀವ್ರತೆಯೂ ವ್ಯಕ್ತವಾಗಿದೆ. ಪ್ರಾಣ ಹೋದರೂ ಅಭಿಮಾನ ಬಿಡುವುದಿಲ್ಲ ಎಂಬ ದುರ್ಯೋಧನನ ಮಾತುಗಳು ಸ್ವಾರಸ್ಯಪೂರ್ಣವಾಗಿ ಮೂಡಿಬಂದಿವೆ.

**೨. ದುರ್ಯೋಧನನ ಛಲದ ಗುಣ ಅವನ ಮಾತುಗಳಲ್ಲಿ ವ್ಯಕ್ತವಾಗಿರುವ ಬಗೆಯನ್ನು ವಿವರಿಸಿ.**

**ಉ:** ಭೀಷ್ಮಾಚಾರ್ಯರು ತಮ್ಮ ಬಳಿಗೆ ಬಂದ ದುರ್ಯೋಧನನಿಗೆ ಪಾಂಡವರೊಡನೆ ಸಂಧಿಮಾಡಿಕೊಳ್ಳುವ ಸಲಹೆ ನೀಡುತ್ತಾರೆ. ಆದರೆ ಅಭಿಮಾನಧನನಾದ ದುರ್ಯೋಧನನು ಅದಕ್ಕೆ ಒಪ್ಪುವುದಿಲ್ಲ. ಆಗ ಅವನಾಡುವ ಮಾತುಗಳಲ್ಲಿ ಆತನ ಛಲದ ಗುಣ ವ್ಯಕ್ತವಾಗಿರುವುದನ್ನು ಕಾಣಬಹುದು.

ದುರ್ಯೋಧನನು ಭೀಷ್ಮರನ್ನು ಕುರಿತು "ಅಜ್ಜ, ನಿಮಗೆ ನಮಸ್ಕರಿಸಿ ಹೋಗಲೆಂದು ಬಂದೆನೇ ಹೊರತು ಶತ್ರುಗಳೊಡನೆ ಒಪ್ಪಂದವನ್ನು ಏರ್ಪಡಿಸುವುದಕ್ಕೆಂದು ಬಂದೆನೆ? ನಾನು ಭೂಮಿಗಾಗಿ ಹೋರಾಡುವೆನೆಂದು ಭಾವಿಸಿದಿರಾ? ಛಲಕ್ಕಾಗಿ ಪಾಂಡವರೊಡನೆ ಹೋರಾಡುವೆನು. ಈ ಭೂಮಿ ನನಗೆ ಪಾಳು ಭೂಮಿ. ಕರ್ಣನನ್ನು ಕೊಲ್ಲಿಸಿದ ಈ ಭೂಮಿಯೊಡನೆ ನಾನು ಮತ್ತೆ ಸಹಬಾಳ್ವೆ ಮಾಡುವೆನೆ?"

"ನನ್ನ ಪ್ರೀತಿಯ ಗೆಳೆಯನನ್ನೂ ಪ್ರೀತಿಯ ತಮ್ಮನನ್ನೂ ಕೊಂದ ಅರ್ಜುನ–ಭೀಮರು ಬದುಕಿರುವವರೆಗೆ; ನನ್ನ ದೇಹದಲ್ಲಿ ಪ್ರಾಣ ಇರುವವರೆಗೂ ಅಜ್ಜಾ, ನಾನು ಸಂಧಿಯನ್ನು ಒಪ್ಪುವುದಿಲ್ಲ. ಆ ಇಬ್ಬರನ್ನೂ ಕೊಂದ ಬಳಿಕ ಧರ್ಮರಾಜನೊಡನೆ ಸಂಧಿಮಾಡಿಕೊಳ್ಳುತ್ತೇನೆ. ನನ್ನ ಒಡಹುಟ್ಟಿದ ನೂರುಮಂದಿ ಸಹೋದರರು ಯುದ್ಧದಲ್ಲಿ ಹೋರಾಡಿ ಸತ್ತರು. ಸತ್ತವರೇನು ಮತ್ತೆ ಹುಟ್ಟುವುದಿಲ್ಲವೇ? ಪಾಂಡವರೊಡನೆ ಹೋರಾಡಿ ನನ್ನ ಛಲವನ್ನೇ ಮೆರೆಯುತ್ತೇನೆ. ನಾನು ಹೋರಾಡದೆ ಬಿಡುವುದಿಲ್ಲ. ಇಂದಿನ ಯುದ್ಧದಲ್ಲಿ ಪಾಂಡವರು ಉಳಿಯಬೇಕು; ಇಲ್ಲವೆ ನಾನು ಉಳಿಯಬೇಕು. ಹಾಗೆಯೇ ಈ ಭೂಮಿ ಪಾಂಡವರದಾಗಬೇಕು; ಇಲ್ಲವೇ ಕೌರವನದಾಗಬೇಕು" ಎಂದು ದುರ್ಯೋಧನನು ಶರಶಯ್ಯೆಯಲ್ಲಿ ಮಲಗಿದ್ದ ಭೀಷ್ಮಾಚಾರ್ಯರಿಗೆ ಹೇಳುವ ಮಾತುಗಳಲ್ಲಿ ಆತನ ಛಲ, ದೃಢನಿರ್ಧಾರ ಮತ್ತು ಸ್ವಾಭಿಮಾನವನ್ನು ಕಾಣಬಹುದಾಗಿದೆ.

**ಈ. ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ನೆಲಕಿಟಿವೆನೆಂದು ಬಗೆದಿರೆ ಚಲಕಿಟಿವೆಂ"**

**ಉ: ಆಯ್ಕೆ:** ಈ ವಾಕ್ಯವನ್ನು ಮಹಾಕವಿ **ರನ್ನ** ಬರೆದಿರುವ **'ಸಾಹಸ ಭೀಮ ವಿಜಯ'** ಎಂಬ ಕೃತಿಯಿಂದ ಆರಿಸಲಾಗಿರುವ **'ಛಲಮನೆ ಮೆಱೆವೆಂ'** ಎಂಬ ಪದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ಭೀಷ್ಮಾಚಾರ್ಯರು 'ಪಾಂಡವರನ್ನು ಒಪ್ಪಿಸುತ್ತೇನೆ, ಸಂಧಿಮಾಡಿಕೋ' ಎಂದು ಹೇಳಿದಾಗ ದುರ್ಯೋಧನನು "ಅಜ್ಜಾ, ನಾನು ಈ ಭೂಮಿಗಾಗಿ ಯುದ್ಧ ಮಾಡುವೆನೆಂದು ಭಾವಿಸಿರುವಿರಾ? ನಾನು ಛಲಕ್ಕಾಗಿ ಪಾಂಡವರೊಡನೆ ಹೋರಾಡುವೆನು. ಈ ಭೂಮಿ ನನಗೆ ಪಾಳುಬಿದ್ದ ನೆಲಕ್ಕೆ ಸಮ" ಎನ್ನುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** ದುರ್ಯೋಧನನ ಈ ಮಾತಿನಲ್ಲಿ ನಶ್ವರವಾದ ಅರಸುತನಕ್ಕಿಂತ ಛಲದಿಂದ ಬಾಳುವುದೇ ನಿಜವಾದ ಕ್ಷತ್ರಿಯನ ಗುಣ. ಸಂಧಿಮಾಡಿಕೊಳ್ಳುವುದು ಹೇಡಿತನದ ಲಕ್ಷಣ ಎಂಬ ಧ್ವನಿ ಸ್ವಾರಸ್ಯಪೂರ್ಣವಾಗಿ ಮೂಡಿಬಂದಿದೆ.

೨. **"ಸಮರದೊಳೆನಗಜ್ಜ ಪೇಟೆಮಾವುದು ಕಜ್ಜಂ."**

**ಉ: ಆಯ್ಕೆ:** ಈ ವಾಕ್ಯವನ್ನು ಮಹಾಕವಿ **ರನ್ನ** ಬರೆದಿರುವ **'ಸಾಹಸ ಭೀಮ ವಿಜಯ'** ಎಂಬ ಕೃತಿಯಿಂದ ಆರಿಸಲಾಗಿರುವ **'ಛಲಮನೆ ಮೆಱೆವೆಂ'** ಎಂಬ ಪದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ಭೀಷ್ಮಾಚಾರ್ಯರು ನೀನು ಒಪ್ಪುವೆಯಾದರೆ ಪಾಂಡವರನ್ನು ಒಪ್ಪಿಸಿ ಒಪ್ಪಂದ ಮಾಡಿ ಮೊದಲಿದ್ದಂತೆ ನಡೆಯುವ ಹಾಗೆ ಮಾಡುವೆನು. ಈಗಲೂ ಕೂಡ ಅವರು ನಮ್ಮ ಮಾತನ್ನು ಮೀರದೆ ಪಾಲಿಸುತ್ತಾರೆ. ನೀನೂ ಕೂಡ ನಮ್ಮ ಮಾತನ್ನು ಮೀರದೆ ನಡೆದುಕೊಳ್ಳಬೇಕು. ಎಂದು ಭೀಷ್ಮರು ಹೇಳಿದಾಗ ದುರ್ಯೋಧನನು ಮುಗುಳು ನಗೆ ನಕ್ಕು "ಅಜ್ಜಾ, ನಿಮಗೆ ನಮಸ್ಕರಿಸಿ ಹೋಗಲೆಂದು ಬಂದೆನೇ ಹೊರತು ಶತ್ರುಗಳೊಡನೆ ಒಪ್ಪಂದವನ್ನು ಏರ್ಪಡಿಸುವುದಕ್ಕೆಂದು ಬಂದೆನೆ? ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** "ಸಮರದೊಳೆನಗಜ್ಜ ಪೇಟೆಮಾವುದು ಕಜ್ಜಂ" ಎಂದು ಹೇಳುವ ದುರ್ಯೋಧನನ ಮಾತಿನಲ್ಲಿ 'ಸಂಧಿ ಮಾಡಿಕೊಳ್ಳುವ ಮಾತೊಂದನ್ನು ಬಿಟ್ಟು, ಯುದ್ಧದಲ್ಲಿ ನಾನೇನು ಮಾಡಬಹುದೆಂಬುದನ್ನು ಹೇಳಿ' ಎಂಬುದು ಇಲ್ಲಿನ ಸ್ವಾರಸ್ಯವಾಗಿದೆ. ಏಕೆಂದರೆ ದುರ್ಯೋಧನನಿಗೆ ಇಷ್ಟವಾಗದ ಒಂದು ಮಾತು "ಸಂಧಿ".

೩. **"ಪಾಂಡವರೊಳಿಱಿದು ಛಲಮನೆ ಮೆರೆವೆಂ."**

**ಉ: ಆಯ್ಕೆ:** ಈ ವಾಕ್ಯವನ್ನು ಮಹಾಕವಿ **ರನ್ನ** ಬರೆದಿರುವ **'ಸಾಹಸ ಭೀಮ ವಿಜಯ'** ಎಂಬ ಕೃತಿಯಿಂದ ಆರಿಸಲಾಗಿರುವ **'ಛಲಮನೆ ಮೆಱೆವೆಂ'** ಎಂಬ ಪದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** "ನನ್ನ ಒಡ ಹುಟ್ಟಿದ ನೂರುಮಂದಿ ಸಹೋದರರು ಹೋರಾಡಿ ಸತ್ತರು. ಆದ್ದರಿಂದ ನನ್ನಲ್ಲಿ ಕೋಪ ಹುಟ್ಟಿ ಬೆಳೆಯಿತು. ಸತ್ತವರೇನು ಮತ್ತೆ ಹುಟ್ಟುವುದಿಲ್ಲವೇ? ಆದ್ದರಿಂದ ಪಾಂಡವರೊಡನೆ ಹೋರಾಡಿ ನನ್ನ ಛಲವನ್ನೇ ಮೆರೆಯುತ್ತೇನೆ. ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** ದುರ್ಯೋಧನನ ತನಗೆ ಕೋಪ ಹೆಚ್ಚಾಗಲು ಕಾರಣವನ್ನು ನೀಡಿರುವುದಲ್ಲದೆ ತನ್ನ ಸಹೋದರರು ಸತ್ತಿಲ್ಲ ಅವರು ಮತ್ತೆ ಹುಟ್ಟಿಬರುವರೆಂಬ ನಂಬಿಕೆಹೊಂದಿರುವುದು ಹಾಗೂ ಛಲಕ್ಕಾಗಿ ಹೋರಾಡುವ ಆತನ ನಿಲುವು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

೪. **"ಮೇಣಾಯ್ತು ಕೌರವಂಗವನಿತಳಂ."**

**ಉ: ಆಯ್ಕೆ:** ಈ ವಾಕ್ಯವನ್ನು ಮಹಾಕವಿ **ರನ್ನ** ಬರೆದಿರುವ **'ಸಾಹಸ ಭೀಮ ವಿಜಯ'** ಎಂಬ ಕೃತಿಯಿಂದ ಆರಿಸಲಾಗಿರುವ **'ಛಲಮನೆ ಮೆಱೆವೆಂ'** ಎಂಬ ಪದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ಸಂಧಿಗೆ ಒಪ್ಪದ ದುರ್ಯೋಧನನು, "ಅಜ್ಜ, ನಾನು ಹೋರಾಡದೆ ಬಿಡುವುದಿಲ್ಲ. ಇಂದಿನ ಯುದ್ಧದಲ್ಲಿ ಪಾಂಡವರು ಉಳಿಯಬೇಕು ಇಲ್ಲವೆ ನಾನು ಉಳಿಯಬೇಕು. ಆದ್ದರಿಂದ ಈ ಭೂಮಿ ಪಾಂಡವರದಾಗಬೇಕು ಇಲ್ಲವೇ ಕೌರವನದಾಗಬೇಕು ಎಂದು ಶರಶಯ್ಯೆಯಲ್ಲಿ ಮಲಗಿದ್ದ ಭೀಷ್ಮಾಚಾರ್ಯರಿಗೆ ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** ತನ್ನ ಕೊನೆಯುಸಿರು ಇರುವ ವರೆಗೂ ಪಾಂಡವರ ವಿರುದ್ಧ ಹೋರಾಡುತ್ತೇನೆಂಬ ದುರ್ಯೋಧನನ ದಿಟ್ಟ ನಿರ್ಧಾರ, ಪಾಂಡವರ ಮೇಲಿನ ಕೋಪದ ತೀವ್ರತೆ ಈ ಸಂದರ್ಭದಲ್ಲ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

## ಭಾಷಾ ಚಟುವಟಿಕೆ

**ಅ. ಕೊಟ್ಟಿರುವ ಪದ್ಯದ ಸಾಲುಗಳಿಗೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ.**

— U U | — U U | — U U
೧. ಪುಟ್ಟಿದ | ನೂರ್ವರು | ಮೆನ್ನೊಡ

— U U | — U U | U — U | — U U | — —
ಪುಟ್ಟಿದ | ನೂರ್ವರು | ಮಿದಿರ್ಚಿ | ಸತ್ತೊಡೆ | ಕೋಪಂ|

ಛಂದಸ್ಸು– **ಕಂದಪದ್ಯ**

ಭ ರ ನ ಭ ಭ ರ ಲ ಗ

— U U | — U — | U U U | — U U | — U U | — U — | U —
೨. ಎನ್ನಣು | ಗಾಳನೆ | ನ್ನಣುಗ | ದಮ್ಮನ | ನಿಕ್ಕಿದ | ಪಾರ್ಥಭೀ |ಮರು

ಳೃನ್ನೆವ್

ಛಂದಸ್ಸು– **ಉತ್ಪಲಮಾಲಾ ವೃತ್ತ**

**ಆ. ಕೊಟ್ಟಿರುವ ಪದಗಳಿಗೆ ತತ್ಸಮ– ತದ್ಭವಗಳನ್ನು ಬರೆಯಿರಿ.**

ಕಜ್ಜ – **ಕಾರ್ಯ**, ಅಜ್ಜ – **ಆರ್ಯ**

**ಇ. ಕೊಟ್ಟಿರುವ ಪದಗಳನ್ನು ವಿಗ್ರಹವಾಕ್ಯ ಮಾಡಿ ಸಮಾಸದ ಹೆಸರನ್ನು ತಿಳಿಸಿ.**

**ಪಾರ್ಥಭೀಮರು** = ಪಾರ್ಥನೂ + ಭೀಮನೂ – ದ್ವಂದ್ವ ಸಮಾಸ
**ಅಂತಕಾತ್ಮಜ** = ಅಂತಕನ ಆತ್ಮಜನಾದವನು ಯಾರೋ ಅವನೇ ಅಂತಕಾತ್ಮಜ(ಧರ್ಮರಾಜ) – ಬಹುವ್ರೀಹಿ ಸಮಾಸ
**ದಿನಪಸುತ** = ದಿನಪನ ಸುತನಾದವನು ಯಾರೋ ಅವನೇ ದಿನಪಸುತ(ಕರ್ಣ) – ಬಹುವ್ರೀಹಿ ಸಮಾಸ

******

# ವ್ಯಾಘ್ರಗೀತೆ

**ಲೇಖಕರ ಪರಿಚಯ:– ಎ. ಎನ್. ಮೂರ್ತಿರಾವ್**

**ಅಕ್ಕಿಹೆಬ್ಬಾಳು ನರಸಿಂಹ ಮೂರ್ತಿರಾವ್** ಅವರು **ಕ್ರಿ. ಶ. ೧೯೦೦** ರಲ್ಲಿ ಮಂಡ್ಯ ಜಿಲ್ಲೆಯ ಕೃಷ್ಣರಾಜ ಪೇಟೆ ತಾಲೂಕಿನ **ಅಕ್ಕಿಹೆಬ್ಬಾಳು** ಗ್ರಾಮದಲ್ಲಿ ಜನಿಸಿದರು. ಇವರು **ಸಮಗ್ರ ಲಲಿತಪ್ರಬಂಧಗಳು, ದೇವರು, ಹಗಲುಗನಸು, ಅಲೆಯುವಮನ, ಚಂಡಮಾರುತ, ಮಿನುಗು–ಮಿಂಚು** ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಶ್ರೀಯುತರು **ದೇವರು** ಎಂಬ ಕೃತಿಗೆ ಪಂಪ ಪ್ರಶಸ್ತಿ, **ಚಿತ್ರಗಳು–ಪತ್ರಗಳು** ಎಂಬ ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಮೈಸೂರು ವಿಶ್ವವಿದ್ಯಾಲಯದ **ಗೌರವ ಡಿ.ಲಿಟ್ ಪದವಿ** ಗಳನ್ನು ಪಡೆದಿದ್ದಾರೆ.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ಭಗವದ್ಗೀತೆಯನ್ನು ರಚಿಸಿದವರು ಯಾರು?** ಉ:– ಭಗವದ್ಗೀತೆಯನ್ನು ರಚಿಸಿದವರು ಮಹರ್ಷಿ ವೇದವ್ಯಾಸರು.

**೨. ಹುಲಿಗೆ ಪರಮಾನಂದವಾಗಲು ಕಾರಣವೇನು?**

ಶಾನುಭೋಗರ ದುಂಡುದುಂಡಾದ ಶರೀರವನ್ನು ನೋಡಿ ಹುಲಿಗೆ ಪರಮಾನಂದವಾಯಿತು.

**೩. ಶಾನುಭೋಗರಿಗೆ ತಲೆ ಸುತ್ತಲು ಕಾರಣವೇನು?**

ಹುಲಿಗೆ ತಮ್ಮ ಮುಖದರ್ಶನವಾಗದಂತೆ ತಪ್ಪಿಸಿಕೊಳ್ಳುವ ದೊಂಬರಾಟದಲ್ಲಿ ಶಾನುಭೋಗರಿಗೆ ತಲೆ ಸುತ್ತಲಾರಂಭಿಸಿತು.

**೪. ಶಾನುಭೋಗರ ಬ್ರಹ್ಮಾಸ್ತ್ರ ಯಾವುದು?**

ಶಾನುಭೋಗರ ಬ್ರಹ್ಮಾಸ್ತ್ರ ಖಿರ್ದಿ ಪುಸ್ತಕ

**೫. ಹಸಿದು ಮಲಗಿದ್ದ ಹುಲಿಯು ಏನೆಂದು ಯೋಚಿಸಿತು?**

ಹಸಿದು ಮಲಗಿದ್ದ ಹುಲಿಯು ವಿಧಿ ಆಹಾರಕ್ಕೆ ಏನನ್ನು ಒದಗಿಸುವುದೋ ಎಂದು ಯೋಚಿಸಿತು.

**ಆ] ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರು ಏನೆಂದು ಯೋಚಿಸಿದರು?**

ಶಾನುಭೋಗರು ಮದಲಿಂಗನ ಕಣಿವೆಯನ್ನು ದಾಟಿ ಹೋಗಬೇಕಿತ್ತು. ಅದು ಕಾಡುದಾರಿಯಾಗಿತ್ತು. ಆದಿನ ಬೆಳುದಿಂಗಳಿನ ರಾತ್ರಿ. ಅದರೂ ಶಾನುಭೋಗರ ಮನಸ್ಸಿನಲ್ಲಿ ಭಯ ಆವರಿಸಿತ್ತು. ಹೊಟ್ಟೆಯೂ ಹಸಿಯುತ್ತಿತ್ತು. "ಸ್ವಲ್ಪ ದೊಡ್ಡ ಹೆಜ್ಜೆ ಹಾಕಿ ಊಟದ ಹೊತ್ತಿಗೆ ಊರು ಸೇರಿಕೊಳ್ಳಬಹುದು" ಎಂದು ಶಾನುಭೋಗರು ಯೋಚಿಸಿದರು.

**೨. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು?**

ಭರತಖಂಡದ ಹುಲಿಗಳು ಹಿಂದಿನಿಂದ ಹಾರಿ ಕೊಲ್ಲುವುದಿಲ್ಲ ಏಕೆಂದರೆ ಶತ್ರುಗಳಾದರೂ ಸರಿಯೆ, ಬೆನ್ನು ತಿರುಗಿಸಿರುವಾಗ ಕೊಲ್ಲುವುದು ಧರ್ಮವಲ್ಲ. ಆದ್ದರಿಂದ ಹುಲಿಯು ಶಾನುಭೋಗರ ಬೆನ್ನ ಹಿಂದಿನಿಂದ ಹಾರಿ ಕೊಲ್ಲಲಿಲ್ಲ.

**೩. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಗಳನ್ನು ವಿವರಿಸಿ.**

ಚಿಕ್ಕನಾಯಕನಹಳ್ಳಿಗೆ ತೆಂಗಿನಕಾಯಿ ತುಂಬಿಕೊಂಡು ಹೋಗಿದ್ದ ರೈತರ ಗಾಡಿಯ ಎತ್ತುಗಳು ಮುಂದೆ ಹೋಗದೆ ನಿಂತವು. ಹುಲಿಯ ಗರ್ಜನೆ ಕೇಳಿಸಿತು. ಎತ್ತುಗಳ ಗಂಟೆಯ ಸದ್ದನ್ನು ಕೇಳಿದ ಹುಲಿಯು ಕೆಲವು ನಿಮಿಷ ತಡೆದು ರೈತರ ಮಾತು ಕೇಳಿಬಂದ ಮೇಲೆ ನಿರಾಶೆಯಿಂದ ಪಲಾಯನಮಾಡಿತು. ಅನಂತರ ರೈತರು ತಮ್ಮಲ್ಲಿದ್ದ ಕೋವಿಯಿಂದ ಒಂದೆರಡು ತೋಟಾ ಹಾರಿಸಿ, ಸಾಧ್ಯವಾದಷ್ಟು ಗಲಭೆ ಮಾಡುತ್ತಾ ತೆಂಗಿನ ಗರಿಯ ಪಂಜು ಹೊತ್ತಿಸಿಕೊಂಡು ಜಾಗರೂಕತೆಯಿಂದ ಮುಂದೆ ಬಂದರು. ಮೂರ್ಛೆಯಲ್ಲಿ ಬಿದ್ದಿದ್ದ ಶಾನುಭೋಗರನ್ನು ಕಂಡು, ಮುಖದ ಮೇಲೆ ನೀರೆರಚಿ ಎಚ್ಚರಿಸಿದರು.

**ಇ] ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಮೂರ್ತಿರಾಯರ ದೃಷ್ಟಿಯಲ್ಲಿ ಹುಲಿಯು ಬೇಟೆಯಾಡುವ ಬಗೆಯನ್ನು ವಿವರಿಸಿ.**

"ಶಾಕಾಹಾರವನ್ನು ತಿಂದು ಬದುಕಬಹುದಾದ ಮಾನವನೇ ಮಾಂಸವನ್ನು ತಿನ್ನ ಬಹುದಾದರೆ ಆಹಾರಕ್ಕಾಗಿ ಹುಲಿಯು ಪ್ರಾಣಿಗಳನ್ನು ಕೊಂದು ತಿನ್ನುವುದರಲ್ಲಿ ತಪ್ಪಿಲ್ಲ. ಆದರೆ ಹಾಗೆ ಕೊಲ್ಲುವಾಗ ಯಾವುದಾರೂ ಒಂದು ಧರ್ಮವನ್ನು ಅನುಸರಿಸಿ ಕೊಲ್ಲುವುದೋ ಅಥವಾ ಧರ್ಮಾಧರ್ಮಗಳ ಲೆಕ್ಕ ಇಡದೆ ಸ್ವಚ್ಛಂದದಿಂದ ವರ್ತಿಸುತ್ತದೆಯೇ ಎಂಬುದೇ ಮುಖ್ಯ ಪ್ರಶ್ನೆ. ಇತರ ದೇಶಗಳಲ್ಲಿ ಇರುವ ಹುಲಿಗಳ ವಿಷಯ ಹೇಗೋ ಗೊತ್ತಿಲ್ಲ ಆದರೆ ಯಾವ ನಾಡಿನಲ್ಲಿ ಶ್ರೀರಾಮನಂಥ ದೊರೆಗಳು ಆಳಿದರೋ, ಭಗವದ್ಗೀತೆಯಂಥ ಗ್ರಂಥ ಉದ್ಭವಿಸಿತೋ, ಅಂತಹ ಭರತ ಭೂಮಿಯಲ್ಲಿ ಹುಲಿಗಳು ಅಧರ್ಮಕ್ಕೆ ಅವಕಾಶ ಮಾಡಿಕೊಡುವುದಿಲ್ಲ ಭರತಖಂಡದ ಹುಲಿಗಳು ಹಿಂದಿನಿಂದ ಹಾರಿ ಕೊಲ್ಲುವುದಿಲ್ಲ ಏಕೆಂದರೆ ಶತ್ರುಗಳಾದರೂ ಸರಿಯೆ, ಬೆನ್ನು ತಿರುಗಿಸಿರುವಾಗ ಕೊಲ್ಲುವುದು ಧರ್ಮವಲ್ಲ. ಭಗವದ್ಗೀತೆಯ 'ಸ್ವಧರ್ಮೇ ನಿಧನಂ ಶ್ರೇಯಃ' ಎಂಬ ಮಾತಿನಂತೆ ಹುಲಿಗಳು ಧರ್ಮಪರತೆಯಿಂದ ಬೇಟೆಯಾಡುತ್ತವೆ" ಎಂದು ಮೂರ್ತಿರಾಯರು ಅಭಿಪ್ರಾಯಪಡುತ್ತಾರೆ.

**೨. ಶಾನುಭೋಗರನ್ನು ರಕ್ಷಿಸಿದುದು ಖಿರ್ದಿ ಪುಸ್ತಕವೇ? ಹುಲಿಯ ಧರ್ಮವೇ? ಸಮರ್ಥನೆಯೊಂದಿಗೆ ವಿವರಿಸಿ.**

ಹುಲಿಗಳು ಹಿಂದಿನಿಂದ ಮೇಲೆ ಬೀಳುವುದಿಲ್ಲ ವೆಂದು ಅರಿತಿದ್ದ ಶಾನುಭೋಗರು ಉಪಾಯವಾಗಿ ಹುಲಿಗೆ ಬೆನ್ನು ತಿರುಗಿಸಿ ನಡೆದು ನಡೆದು ದಣಿದರು. ಆ ವಿಪತ್ತಿನ ಸನ್ನಿವೇಶದಲ್ಲಿ ಅವರಿಗೆ ನೆನಪಾಗಿದ್ದು ಅವರ ಬಳಿಯಿದ್ದ ಖಿರ್ದಿ ಪುಸ್ತಕ. ಅದು ಸಧ್ಯಕ್ಕೆ ಅವರ ಬಳಿಯಿದ್ದ ಬ್ರಹ್ಮಾಸ್ತ್ರ. ಆದ್ದರಿಂದ ಹುಲಿಯ ಮುಖಕ್ಕೆ ಬಡಿದಾಗ ಏನಾಯಿತೆಂದು ಅರಿಯಲು ಅರೆ ನಿಮಿಷ ಹಿಡಿಯಿತು. ಅದನ್ನೇ ಉಪಯೋಗಿಸಿಕೊಂಡು ಓಡಿದ ಅವರು ಕಲ್ಲು ಎಡವಿ ಬಿದ್ದು ಮೂರ್ಛೆ ಹೋದಾಗ ಅಷ್ಟರಲ್ಲಿ ಅಲ್ಲಿಗೆ ಬರುತ್ತಿದ್ದ ರೈತರ ಶಬ್ದ ಕೇಳಿ ಹುಲಿ ಪಲಾಯನ ಮಾಡಿತು. ಅವರಿಗೆ ಆ ಅರೆನಿಮಿಷದ ಅವಕಾಶವನ್ನು ಒದಗಿಸಿಕೊಟ್ಟು ಪ್ರಾಣವನ್ನು ಕಾಪಾಡಿದ ಖಿರ್ದಿ ಪುಸ್ತಕದ ಮೇಲೆ ಅವರಿಗೆ ಕೃತಜ್ಞತಾ ಭಾವವಿದೆ. ಖಿರ್ದಿ ಪುಸ್ತಕವೇ ತಮ್ಮ ಜೀವ ಉಳಿಸಿತು ಎಂಬುದು ಅವರ ನಂಬಿಕೆ. ಆದರೆ ನಿಜವಾಗಿ ನೋಡಿದರೆ ಶಾನುಭೋಗರು ಉಳಿದದ್ದು ಖಿರ್ದಿ ಪುಸ್ತಕದಿಂದಲ್ಲ. ಹುಲಿಯ ಧರ್ಮಶ್ರದ್ಧೆಯಿಂದ. ಏಕೆಂದರೆ ಭರತಖಂಡದ ಹುಲಿಗಳು ಹಿಂದಿನಿಂದ ದಾಳಿಮಾಡಿ ಕೊಲ್ಲದಿರುವ ಧರ್ಮಶ್ರದ್ಧೆಯ ಗುಣ. ಮನಸ್ಸು ಮಾಡಿದ್ದರೆ ಹುಲಿ ಯಾವಾಗಲೋ ಶಾನುಭೋಗರನ್ನು ಕೊಲ್ಲಬಹುದಿತ್ತು. ಆದರೆ ಹುಲಿಯ ಶ್ರದ್ಧೆಯೇ ಶಾನುಭೋಗರು ಹುಲಿಯಿಂದ ಪಾರಾಗಲು ಕಾರಣವಾಯಿತು ಎಂದು ಹೇಳಬಹುದು.

**ಈ] ಸಂದರ್ಭದೊಂದಿಗೆ ಸ್ವಾರಸ್ಯವನ್ನು ಬರೆಯಿರಿ**

**೧. "ಖಂಡವಿದೆಕೋ, ಮಾಂಸವಿದೆಕೋ, ಗುಂಡಿಗೆಯ ಬಿಸಿರಕ್ತವಿದೆಕೋ"**

**ಆಯ್ಕೆ:–** ಈ ವಾಕ್ಯವನ್ನು **ಶ್ರೀ ಎ. ಎನ್. ಮೂರ್ತಿರಾವ್** ಅವರು ರಚಿಸಿರುವ **'ಸಮಗ್ರ ಲಲಿತಪ್ರಬಂಧಗಳು'** ಕೃತಿಯಿಂದ ಆಯ್ದ **'ವ್ಯಾಘ್ರಗೀತೆ'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–** ಮದಲಿಂಗನ ಕಣಿವೆಯ ಕಾಲುದಾರಿಯಲ್ಲಿ ಶಾನುಭೋಗರ ಬೆನ್ನ ಹಿಂದೆ ಬಂದ ಹುಲಿಯು 'ವೈರಿಯಾದರೂ ಸರಿಯೇ ಹಿಂದಿನಿಂದ ಹಾರಿ ಕೊಲ್ಲಬಾರದು' ಎಂಬ ತನ್ನ ಧರ್ಮವನ್ನು ನೆನೆದು, ಗೊಂದಲದಲ್ಲಿ ಇದ್ದ ಸಂದರ್ಭದಲ್ಲಿ ಪುಣ್ಯಕೋಟಿಯ ಈ ಮಾತನ್ನು ಲೇಖಕರು ನೆನಪಿಸಿಕೊಳ್ಳುತ್ತಾರೆ.

**ಸ್ವಾರಸ್ಯ:–** ತನ್ನನ್ನು ತಿನ್ನಲು ಆಹ್ವಾನ ಕೊಟ್ಟಾಗಲೂ ಹುಲಿರಾಯ ಸತ್ಯವ್ರತೆಯಾದ ಪುಣ್ಯಕೋಟಿಯನ್ನು ತಿನ್ನದೆ ಪ್ರಾಣಬಿಟ್ಟು, ತನ್ನ ಆದರ್ಶವನ್ನು ಹಾಗೂ ಧರ್ಮಶ್ರದ್ಧೆಯನ್ನು ಮೆರೆಯಿತು ಎಂಬುದನ್ನು ಈ ವಾಕ್ಯದಲ್ಲಿ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸಲಾಗಿದೆ.

**೨. "ಸ್ವಧರ್ಮೇ ನಿಧನಂ ಶ್ರೇಯಃ"**

**ಆಯ್ಕೆ:–** ಈ ವಾಕ್ಯವನ್ನು **ಶ್ರೀ ಎ. ಎನ್. ಮೂರ್ತಿರಾವ್** ಅವರು ರಚಿಸಿರುವ **'ಸಮಗ್ರ ಲಲಿತಪ್ರಬಂಧಗಳು'** ಕೃತಿಯಿಂದ ಆಯ್ದ **'ವ್ಯಾಘ್ರಗೀತೆ'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:–** ಮದಲಿಂಗನ ಕಣಿವೆಯ ಕಾಲುದಾರಿಯಲ್ಲಿ ಶಾನುಭೋಗರ ಬೆನ್ನ ಹಿಂದೆ ಬಂದ ಹುಲಿಯು 'ವೈರಿಯಾದರೂ ಸರಿಯೇ ಹಿಂದಿನಿಂದ ಹಾರಿ ಕೊಲ್ಲಬಾರದು' ಎಂಬ ತನ್ನ ಧರ್ಮವನ್ನು ನೆನೆದು, ಗೊಂದಲದಲ್ಲಿ ಇದ್ದ ಸಂದರ್ಭದಲ್ಲಿ ಹುಲಿಗೆ ಭಗವದ್ಗೀತೆಯ ಈ ಮಾತು ನೆನಪಿಗೆ ಬಂದಿತು.

**ಸ್ವಾರಸ್ಯ:–** ಸದ್ವಂಶದಲ್ಲಿ ಜನಿಸಿದ ಹುಲಿಯು ಶಾನುಭೋಗರ ಬೆನ್ನ ಹಿಂದಿನಿಂದ ಆಕ್ರಮಣ ಮಾಡದೆ ಭಗವದ್ಗೀತೆಯ ಈ ಮಾತನ್ನು ನೆನೆಯುವುದು ಸ್ವಾರಸ್ಯಪೂರ್ಣವಾಗಿದೆ.

**೩. "ದೇವರೆ, ಮರ ಹತ್ತುವಷ್ಟು ಅವಕಾಶ ಕರುಣಿಸು"**

**ಆಯ್ಕೆ :–** ಈ ವಾಕ್ಯವನ್ನು **ಶ್ರೀ ಎ. ಎನ್. ಮೂರ್ತಿರಾವ್** ಅವರು ರಚಿಸಿರುವ **'ಸಮಗ್ರ ಲಲಿತಪ್ರಬಂಧಗಳು'** ಕೃತಿಯಿಂದ ಆಯ್ದ **'ವ್ಯಾಘ್ರಗೀತೆ'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ :–** ಮದಲಿಂಗನ ಕಣಿವೆಯ ದಾರಿಯಲ್ಲಿ ಹುಲಿಯ ಆಕ್ರಮಣದಿಂದ ತಪ್ಪಿಸಿಕೊಳ್ಳಲು, ಶಾನುಭೋಗರು ಖಿರ್ದಿ ಪುಸ್ತಕವನ್ನು ಹುಲಿಯ ಮುಖದ ಮೇಲೆ ಎಸೆದು, ಮರದ ಕಡೆಗೆ ಓಡಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** 'ಸಂಕಟ ಬಂದಾಗ ವೆಂಕಟರಮಣ' ಎಂಬಂತೆ ಶಾನುಭೋಗರು ಹುಲಿಯಿಂದ ತಪ್ಪಿಸಿಕೊಳ್ಳಲು ಅವಕಾಶ ಮಾಡಿಕೊಡು ಎಂದು ದೇವರನ್ನು ಪ್ರಾರ್ಥಿಸುವುದು ಬಹು ಸ್ವಾರಸ್ಯಪೂರ್ಣವಾಗಿದೆ.

**೪. "ನಾನು ಮುಖ ಮೇಲಾಗಿ ಬಿದ್ದಿದ್ದೇನೇ?"**

**ಆಯ್ಕೆ :–** ಈ ವಾಕ್ಯವನ್ನು **ಶ್ರೀ ಎ. ಎನ್. ಮೂರ್ತಿರಾವ್** ಅವರು ರಚಿಸಿರುವ **'ಸಮಗ್ರ ಲಲಿತಪ್ರಬಂಧಗಳು'** ಕೃತಿಯಿಂದ ಆಯ್ದ **'ವ್ಯಾಘ್ರಗೀತೆ'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ :–** ಶಾನುಭೋಗರು ಹುಲಿಯ ಆಕ್ರಮಣದಿಂದ ಹೆದರಿ, ಮರ ಹತ್ತಲು ಓಡುವಾಗ ಕಲ್ಲನ್ನು ಎಡವಿ ಬಿದ್ದು, ಪ್ರಜ್ಞೆ ತಪ್ಪಿದಾಗ, ಅದೇ ದಾರಿಯಲ್ಲಿ ಹೋಗುತ್ತಿದ್ದ ರೈತರು ಅವರ ಮುಖದ ಮೇಲೆ ನೀರೆರಚಿ ಎಚ್ಚರಿಸಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** **"**ನಾನು ಪ್ರಜ್ಞೆ ತಪ್ಪಿ ಬಿದ್ದಿದ್ದಾಗ ಹುಲಿಯು ಏಕೆ ಎಳೆದುಕೊಂಡು ಹೋಗಲಿಲ್ಲ?**"** ಎಂಬ ಸಮಸ್ಯೆಗೆ ಶಾನುಭೋಗರು ಈ ಪ್ರಶ್ನೆಯ ಮೂಲಕ ಉತ್ತರ ಕಂಡುಕೊಳ್ಳುವುದು ಇಲ್ಲಿಯ ಸ್ವಾರಸ್ಯವಾಗಿದೆ.

**೫. "ಹುಲಿ ಈಗ ಎಷ್ಟು ಹಸಿದಿರಬೇಕು"**

**ಆಯ್ಕೆ :–** ಈ ವಾಕ್ಯವನ್ನು **ಶ್ರೀ ಎ. ಎನ್. ಮೂರ್ತಿರಾವ್** ಅವರು ರಚಿಸಿರುವ **'ಸಮಗ್ರ ಲಲಿತಪ್ರಬಂಧಗಳು'** ಕೃತಿಯಿಂದ ಆಯ್ದ **'ವ್ಯಾಘ್ರಗೀತೆ'** ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ :–** ಮದಲಿಂಗನ ಕಣಿವೆಯ ದಾರಿಯಲ್ಲಿ ಹುಲಿಯ ಆಕ್ರಮಣದಿಂದ ತಪ್ಪಿಸಿಕೊಂಡ ಶಾನುಭೋಗರು ಜೀವ ಸಹಿತ ಮನೆಗೆ ಬಂದು ರಸದೂಟವನ್ನು ಮಾಡಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ನಾನು ಹುಲಿಯಿಂದ ತಪ್ಪಿಸಿಕೊಂಡು ಬಂದು ರಸದೂಟವನ್ನು ಮಾಡುತ್ತಿದ್ದೇನೆ ಆದರೆ ನನ್ನನ್ನು ಕೊಲ್ಲಲು ಬಂದ ಹುಲಿಯು ಕೊಲ್ಲಲಾಗದೆ ಹಸಿವಿನಿಂದ ಬಳಲುತ್ತಿರಬಹುದು ಎಂದು ಶಾನುಭೋಗರು ಹೇಳುವುದು ಸ್ವಾರಸ್ಯಪೂರ್ಣವಾಗಿದೆ.

**ಉ] ಬಿಟ್ಟಿರುವ ಸ್ಥಳವನ್ನು ಸೂಕ್ತ ಉತ್ತರದಿಂದ ತುಂಬಿರಿ.**

೧) ಮಂತ್ರಿತ್ವ ಹೋಗಿ ಕೇವಲ **ಶಾನುಭೋಗಿಕೆ** ಮಾತ್ರ ಉಳಿದಿತ್ತು.

೨) ಖಿರ್ದಿ ಪುಸ್ತಕ **ಶಾನುಭೋಗರ** ಬ್ರಹ್ಮಾಸ್ತ್ರ.

೩) ನೆಲದಿಂದ ಮೇಲೆದ್ದುಕೊಂಡಿದ್ದ **ಕಲ್ಲನ್ನು** ಎಡವಿ ಶಾನುಭೋಗರು ಬಿದ್ದರು.

೪) ರೈತರು ತಿಂಗಳ ಬೆಳಕಿನಲ್ಲಿ **ಗಾಡಿ** ಹೊಡೆಯುತ್ತಿದ್ದರು.

೫) ಶಾನುಭೋಗರು ಉಳಿದದ್ದು **ಖಿರ್ದಿ** ಪುಸ್ತಕದಿಂದಲ್ಲ.

## ಭಾಗ – ಬಿ

**ಕೊಟ್ಟಿರುವ ನಾಲ್ಕು ಉತ್ತರಗಳಲ್ಲಿ ಸರಿಯಾದ ಉತ್ತರವನ್ನು ಆಯ್ಕೆಮಾಡಿ ಬರೆಯಿರಿ :**

**೧. ನಾಮಪದದ ಮೂಲ ರೂಪಕ್ಕೆ :**

ಎ) ಧಾತು ಬಿ) ಭಾವನಾಮ ಸಿ) ನಾಮಪ್ರಕೃತಿ ಡಿ) ಸರ್ವನಾಮ

**೨. 'ವ್ಯಾಪಾರಿ' – ಪದವು ಈ ನಾಮಪದಕ್ಕೆ ಉದಾಹರಣೆಯಾಗಿದೆ :**

ಎ) ರೂಢನಾಮ ಬಿ) ಅಂಕಿತನಾಮ ಸಿ) ಭಾವನಾಮ ಡಿ) ಅನ್ವರ್ಥನಾಮ

**೩. 'ಹಿರಿಯ'ದರ ಭಾವನಾಮ :**

ಎ) ದೊಡ್ಡದು ಬಿ) ಕಿರಿದು ಸಿ) ಇಂಪು ಡಿ) ಹಿರಿಮೆ

**೪. ಆತನ ಓಟ ಚೆನ್ನಾಗಿತ್ತು ಈ ವಾಕ್ಯದಲ್ಲಿ ಗೆರೆ ಎಳೆದಿರುವ ಪದವು ಈ ವ್ಯಾಕರಣಾಂಶಕ್ಕೆ ಉದಾಹರಣೆ :**

ಎ) ಕೃದಂತಭಾವನಾಮ ಬಿ) ತದ್ಧಿತಾಂತಭಾವನಾಮ ಸಿ) ಕೃದಂತವ್ಯಯ ಡಿ) ಕೃದಂತನಾಮ

**೫. 'ತಾನು – ತಾವು' – ಪದಗಳು ಈ ಸರ್ವನಾಮಕ್ಕೆ ಉದಾಹರಣೆಯಾಗಿವೆ :**

ಎ) ಪ್ರಶ್ನಾರ್ಥಕ ಬಿ) ಆತ್ಮಾರ್ಥಕ ಸಿ) ಪುರುಷಾರ್ಥಕ ಡಿ) ನಾಮಾತ್ಮಕ

**೬. 'ಮೂಡಣ' – ಈ ನಾಮಪದಕ್ಕೆ ಉದಾಹರಣೆಯಾಗಿದೆ :**

ಎ) ದಿಗ್ವಾಚಕ ಬಿ) ಗುಣವಾಚಕ ಸಿ) ಪರಿಮಾಣವಾಚಕ ಡಿ) ಸಂಖ್ಯಾವಾಚಕ

**೭. ವಸ್ತು, ವ್ಯಕ್ತಿ, ಪ್ರಾಣಿ, ಪಕ್ಷಿ ಮುಂತಾದವುಗಳನ್ನು ಗುರುತಿಸಲು ಇಟ್ಟ ಹೆಸರು ಈ ನಾಮಪದವಾಗಿದೆ :**

ಎ) ರೂಢನಾಮ ಬಿ) ಅಂಕಿತನಾಮ ಸಿ) ಅನ್ವರ್ಥನಾಮ ಡಿ) ಭಾವನಾಮ

**೮. ನಾನು, ನಾವು – ಪದಗಳು ಈ ಪುರುಷಾರ್ಥಕ ಸರ್ವನಾಮಗಳು :**

ಎ) ಉತ್ತಮಪುರುಷ ಬಿ) ಪ್ರಥಮಪುರುಷ ಸಿ) ಮಧ್ಯಮಪುರುಷ ಡಿ) ಅಧಮಪುರುಷ

**೯. ' ಮಾಡಲಿಕ್ಕೆ ' – ಇದು ಈ ವ್ಯಾಕರಣಾಂಶಕ್ಕೆ ಉದಾಹರಣೆಯಾಗಿದೆ :**

ಎ) ಕೃದಂತನಾಮ ಬಿ) ಕೃದಂತ ಭಾವನಾಮ ಸಿ) ಕೃದಂತಾವ್ಯಯ ಡಿ) ತದ್ಧಿತಾಂತಾವ್ಯಯ

**೧೦. ' ಬರೆಯದ ' – ಪದವು ಈ ಕೃದಂತಕ್ಕೆ ಉದಾಹರಣೆ :**

ಎ) ವರ್ತಮಾನ ಕೃದಂತ ಬಿ) ಭೂತಕಾಲಕೃದಂತ ಸಿ) ನಿಷೇಧಕೃದಂತ ಡಿ) ಕೃದಂತಭಾವನಾಮ.

**[ ಉತ್ತರಗಳು :**

**೧. ಸಿ. ನಾಮಪ್ರಕೃತಿ ೨. ಡಿ. ಅನ್ವರ್ಥನಾಮ ೩. ಡಿ) ಹಿರಿಮೆ ೪. ಎ) ಕೃದಂತಭಾವನಾಮ ೫. ಬಿ) ಆತ್ಮಾರ್ಥಕ**

**೬. ಎ) ದಿಗ್ವಾಚಕ ೭. ಬಿ) ಅಂಕಿತನಾಮ ೮. ಎ) ಉತ್ತಮಪುರುಷ ೯. ಡಿ) ಕೃದಂತಾವ್ಯಯ ೧೦. ಸಿ) ನಿಷೇಧ ಕೃದಂತ ]**

**ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೇಯ ಪದಕ್ಕೆ ಸಂಬಂಧಿಸಿದ ನಾಲ್ಕನೆಯ ಪದ ಬರೆಯಿರಿ :**

೧. ದೃಷ್ಟಿ : ದಿಟ್ಟಿ : : ಧರ್ಮ : ____________

೨. ಪುಸ್ತಕ : ಹೊತ್ತಿಗೆ : : ಪ್ರಾಣ : ____________

೩. ಸ್ಪರ್ಶೇಂದ್ರಿಯ : ಚರ್ಮ : : ಘ್ರಾಣೇಂದ್ರಿಯ : ____________

೪. ಗಂಧ : ಸುವಾಸನೆ : : ಲಾಂಛನ : ____________

೫. ಹನ್ನೆರಡು : ಸಂಖ್ಯಾವಾಚಕ : : ಹನ್ನೆರಡನೆಯ : ____________

೬. ನೋಡುವುದರ ಭಾವ : ನೋಟ : : ನೆನೆಯುವುದರ ಭಾವ : ____________

೭. ಓಡಿದ : ಭೂತಕಾಲಕೃದಂತ : : ಓಡುವ : ____________

೮. ಮನುಷ್ಯ : ರೂಢನಾಮ : : ವಿಜ್ಞಾನಿ : ____________

೯. ತಮ್ಮ : ಆತ್ಮಾರ್ಥಕ ಸರ್ವನಾಮ : : ಯಾರು : ____________

೧೦. ರಾಜಭಕ್ತಿ : ತತ್ಪುರುಷಸಮಾಸ : : ಇಮ್ಮಡಿ : ____________

೧೧. ಬ್ರಹ್ಮಾಸ್ತ್ರ : ಸವರ್ಣದೀರ್ಘಸಂಧಿ : : ಪಂಚೇಂದ್ರಿಯ : ____________

೧೨. ಮಾಂಸವನ್ನು : ದ್ವಿತೀಯವಿಭಕ್ತಿ : : ಹುಲಿಯಲ್ಲಿ : ____________

೧೩. ನಾಮಪ್ರಕೃತಿ : ನಾಮಪದ : : ಧಾತು : ____________

**[ ಉತ್ತರಗಳು : ೧. ದಮ್ಮ ೨. ಹರಣ ೩. ಮೂಗು ೪. ಗುರುತು ೫. ಸಂಖ್ಯೇಯವಾಚಕ ೬. ನೆನಪು ೭. ವರ್ತಮಾನಕೃದಂತ ೮. ಅನ್ವರ್ಥನಾಮ ೯. ಪ್ರಶ್ನಾರ್ಥಕ ಸರ್ವನಾಮ ೧೦. ದ್ವಿಗುಸಮಾಸ ೧೧. ಗುಣಸಂಧಿ ೧೨. ಸಪ್ತಮಿವಿಭಕ್ತಿ ೧೩. ಕ್ರಿಯಾಪದ ]**

# ಪದ್ಯ–೭ ವೀರಲವ

**ಕವಿಪರಿಚಯ– ಲಕ್ಷ್ಮೀಶ**

**ಕವಿ ಲಕ್ಷ್ಮೀಶನು ಕ್ರಿ. ಶ. ಸುಮಾರು ೧೫೫೦** ರಲ್ಲಿ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ **ದೇವನೂರಿನಲ್ಲಿ** ಜನಿಸಿದನು. ಇವನಿಗೆ ಲಕ್ಷ್ಮೀರಮಣ, ಲಕ್ಷ್ಮೀಪತಿ ಎಂಬ ಹೆಸರುಗಳೂ ಇದ್ದವು. ಇವರು **'ಜೈಮಿನಿ ಭಾರತ'** ಎಂಬ ಪ್ರಸಿದ್ಧ ಕಾವ್ಯವನ್ನು ರಚಿಸಿದ್ದಾನೆ. ಈತನಿಗೆ **ಉಪಮಾಲೋಲ, ಕರ್ಣಾಟ ಕವಿಚೂತವನಚೈತ್ರ** ಎಂಬ ಬಿರುದುಗಳನ್ನು ನೀಡಿಗೌರವಿಸಲಾಗಿದೆ.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. 'ಜೈಮಿನಿ ಭಾರತ' ಕಾವ್ಯವನ್ನು ಬರೆದ ಕವಿ ಯಾರು?**

ಜೈಮಿನಿ ಭಾರತಕಾವ್ಯವನ್ನು ಬರೆದ ಕವಿ ಲಕ್ಷ್ಮೀಶ

**೨. ಯಜ್ಞಾಶ್ವವನ್ನು ಕಟ್ಟಿದವರು ಯಾರು?**

ಯಜ್ಞಾಶ್ವವನ್ನು ಕಟ್ಟಿದವರು ಲವ

**೩. ಕುದುರೆಯನ್ನು ಲವನು ಯಾವುದರಿಂದ ಕಟ್ಟಿದನು?**

ಕುದುರೆಯನ್ನು ಲವನು ತನ್ನ ಉತ್ತರೀಯದಿಂದ ಕಟ್ಟಿದನು.

**೪. ಮುನಿಸುತರು ಹೆದರಲು ಕಾರಣವೇನು?**

ಲವನು ಯಜ್ಞಾಶ್ವವನ್ನು ಕಟ್ಟಿ ಹಾಕಿದ್ದರಿಂದ ಮುನಿಸುತರು ಹೆದರಿದರು.

**ಆ] ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ವಿವರಿಸಿ.**

ಶ್ರೀರಾಮನು ಮಹರ್ಷಿಗಳ ಆದೇಶದಂತೆ ಅಶ್ವಮೇಧಯಾಗವನ್ನು ಕೈಗೊಂಡು, ಶತ್ರುಘ್ನನ ಬೆಂಗಾವಲಿನಲ್ಲಿ ಯಜ್ಞಾಶ್ವವನ್ನು ಕಳುಹಿಸಿದನು. ರಾಮನ ಆಜ್ಞೆಯಂತೆ ಹೊರಟ ಯಜ್ಞಾಶ್ವವನ್ನು ಭುಜಬಲ ಪರಾಕ್ರಮಿಗಳಾದ ರಾಜರುಗಳು ತಡೆಯಲು ಹೆದರಿ ನಮಸ್ಕರಿಸಿ ಮುಂದೆ ಹೋಗಲು ಬಿಟ್ಟರು. ಹೀಗೆ ಯಜ್ಞಾಶ್ವವು ಭೂಮಿಯಲ್ಲೆಲ್ಲ ಸಂಚರಿಸುತ್ತ ವಾಲ್ಮೀಕಿಯ ಆಶ್ರಮದ ತೋಟದ ಹಸುರಾದ ಹುಲ್ಲನ್ನು ತಿನ್ನಲು ಒಳಹೊಕ್ಕಿತು.

**೨. ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ ಏನೆಂದು ಬರೆಯಲಾಗಿತ್ತು?**

ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ "ಭೂಮಂಡಲದಲ್ಲಿ ಕೌಸಲ್ಯೆಯು ಮಗನಾದ ರಾಮನು ಒಬ್ಬನೇ ವೀರನು ಇದು ಅವನ ಯಜ್ಞಕುದುರೆ ಇದನ್ನು ತಡೆಯುವ ಸಾಮರ್ಥ್ಯವುಳ್ಳವರು ಯಾರೇ ಆದರು ತಡೆಯಲಿ" ಎಂದ ಬರೆಯಲಾಗಿತ್ತು.

**೩. ಕುದುರೆಯನ್ನುಕಟ್ಟುವ ವಿಚಾರದಲ್ಲಿ ಮುನಿಸುತರಿಗೂ ಲವನಿಗೂ ನಡೆದ ಸಂವಾದವನ್ನು ಬರೆಯಿರಿ.**

ಲವನು ಆಶ್ರಮವನ್ನು ಹೊಕ್ಕ ಯಜ್ಞಾಶ್ವವನ್ನು ತನ್ನ ಉತ್ತರೀಯದಿಂದ ಬಾಳೆಯ ಗಿಡಕ್ಕೆ ಕಟ್ಟಿ ಹಾಕಿದ್ದನ್ನು ಕಂಡು ಹೆದರಿದ ಮುನಿಸುತರು "ಬೇಡಬೇಡ ಅರಸುಗಳ ಕುದುರೆಯನ್ನು ಬಿಡು, ನಮ್ಮನ್ನು ಹೊಡೆಯುವರು" ಎಂದು ಹೇಳಿದರು. ಆಗ ಲವನು ನಗುತ "ಬ್ರಾಹ್ಮಣರ ಮಕ್ಕಳು ಹೆದರಿದರೆ. ಜಾನಕಿಯ ಮಗನು ಇದಕ್ಕೆ ಹೆದರುವನೇ, ನೀವು ಹೋಗಿ" ಎಂದು ಶೌರ್ಯದಿಂದ ಹೇಳಿದನು.

**ಇ] ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ಲವನು ಯಜ್ಞಾಶ್ವವನ್ನು ಕಟ್ಟಲು ಕಾರಣವೇನು?**

ಶ್ರೀರಾಮನು ಮಹರ್ಷಿಗಳ ಆದೇಶದಂತೆ ಅಶ್ವಮೇಧಯಾಗವನ್ನು ಕೈಗೊಂಡು, ಶತ್ರುಘ್ನನ ಬೆಂಗಾವಲಿನಲ್ಲಿ ಯಜ್ಞಾಶ್ವವನ್ನು ಕಳುಹಿಸಿದನು. ರಾಮನ ಆಜ್ಞೆಯಂತೆ ಹೊರಟ ಯಜ್ಞಾಶ್ವವನ್ನು ಭುಜಬಲ ಪರಾಕ್ರಮಿಗಳಾದ ರಾಜರುಗಳು ತಡೆಯಲು ಹೆದರಿ ನಮಸ್ಕರಿಸಿ ಮುಂದೆ ಹೋಗಲು ಬಿಟ್ಟರು. ಹೀಗೆ ಯಜ್ಞಾಶ್ವವು ಭೂಮಿಯಲ್ಲೆಲ್ಲ ಸಂಚರಿಸುತ್ತ ವಾಲ್ಮೀಕಿಯ ಆಶ್ರಮದ ತೋಟದ ಹಸುರಾದ ಹುಲ್ಲನ್ನು ತಿನ್ನಲು ಒಳಹೊಕ್ಕಿತು. ಆಗ ಇದನ್ನು ಕಂಡ ಲವನು "ಇದು ಯಾವ ಕಡೆಯ ಕುದುರೆಯು, ಹೊಕ್ಕು, ಹೂತೋಟವನ್ನು ನುಗ್ಗುನುರಿಯಾಗುವಂತೆ ತುಳಿದುದು." ಎಂದು ಕುದುರೆ ಯಕಡೆಗೆ ನಡೆದು ಬಂದು ನೋಡಿದನು. ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ "ಭೂಮಂಡಲದಲ್ಲಿ ಕೌಸಲ್ಯೆಯ ಮಗನಾದ ರಾಮನು ಒಬ್ಬನೇ ವೀರನು ಇದು ಅವನ ಯಜ್ಞಕುದುರೆ ಇದನ್ನು ತಡೆಯುವ ಸಾಮರ್ಥ್ಯವುಳ್ಳವರು ಯಾರೇ ಆದರು ತಡೆಯಲಿ" ಎಂದು ಬರೆಯಲಾಗಿತ್ತು. ಇದನ್ನು ಓದಿದ ಲವನು ಕೋಪಗೊಂಡು "ಅಹಂಕಾರವನ್ನು ಬಿಡಿಸದಿದ್ದರೆ ತನ್ನ ತಾಯಿಯನ್ನು ಎಲ್ಲ ಜನರೂ ಬಂಜೆ ಎನ್ನದಿರುವರೇ, ತನಗೆ ರುವ ತೋಳುಗಳು ಇವು ಏತಕೆ?" ಎಂದು ಪ್ರತಿಜ್ಞೆಯನ್ನು ಕೈಗೊಂಡು, ಯಜ್ಞಾಶ್ವವನ್ನು ತನ್ನ ಉತ್ತರೀಯದಿಂದ ಕಟ್ಟಿಹಾಕಿದನು.

**೨. ಲವನ ನಡೆವಳಿಕೆ ಮೆಚ್ಚುಗೆಯಾಯಿತೇ? ಏಕೆ?**

ಲವನು ಬಾಲಕನಾಗಿದ್ದರು ಸ್ವಾಭಿಮಾನಿ. ಅವನ ಮಾತುಗಳು ವೀರೋಚಿತ. ಆತನ ಮಾತೃಪ್ರೇಮ ಅನನ್ಯ. ವಾಲ್ಮೀಕಿ ಮಹರ್ಷಿಗಳು ಆಶ್ರಮದಿಂದ ಹೊರಗೆ ಹೋಗುವಾಗ ಲವನಿಗೆ ಆಶ್ರಮದ ಜವಾಬ್ದಾರಿಯನ್ನು ವಹಿಸಿರುತ್ತಾರೆ. ಇಂತಹ ಸಮಯದಲ್ಲಿ ರಾಮನ ಯಜ್ಞಾಶ್ವವು ಆಶ್ರಮವನ್ನು ಪ್ರವೇಶಿಸಿ ಹೂದೋಟವನ್ನು ಹಾಳುಮಾಡುತ್ತದೆ. ಇದನ್ನುಕಂಡು ಲವನು ಕುದುರೆಯ ಬಳಿಬಂದು, ಕುದುರೆಯ ನೆತ್ತಿಯ ಮೇಲೆ ಮೆರೆಯುತ್ತಿದ್ದ ಪಟ್ಟದ ಲಿಖಿತವನ್ನು ಓದಿ, ರಾಮನೊಬ್ಬನೇ ಜಗತ್ತಿಗೆ ವೀರನೆಂಬ ವಾಕ್ಯವನ್ನು ಕಂಡು ಕೆರಳಿ, ಇವನ ಗರ್ವವನ್ನು ಬಿಡಿಸುತ್ತೇನೆ, ಇಲ್ಲದಿದ್ದಲ್ಲಿ ನನ್ನತಾಯಿಯನ್ನು ಎಲ್ಲರೂ ಹೇಡಿಯನ್ನು ಹೆತ್ತವಳೆಂದು ದೂರಿಬಿಡುತ್ತಾರೆ ಎಂದು ಚಿಂತಿಸಿ, ತನ್ನ ತೋಳ್ಬಲವನ್ನು ತೋರಿಸಿಬಿಡುತ್ತೇನೆ ಎಂದು ಕುದುರೆಯನ್ನು ಕಟ್ಟಿಹಾಕುತ್ತಾನೆ. ಋಷಿ ಮುನಿಗಳ ಮಕ್ಕಳು ಹೆದರಿಕೆಯಿಂದ ಬೇಡವೆಂದಾಗ, "ಬ್ರಾಹ್ಮಣರ ಮಕ್ಕಳು ಯುದ್ಧಕ್ಕೆ ಹೆದರಿದರೆ; ಜಾನಕಿಯ ಸುತನು ಹೆದರುವನೇ?" ಎಂದು ವೀರನಂತೆ ಬಿಲ್ಲಿನ ಹೆದೆಯೇರಿಸಿ ಠೇಂಕಾರವನ್ನುಮಾಡಿ ನಿಂತನು. ಇಂತಹ ವೀರ ಬಾಲಕನ ಶೌರ್ಯ, ತಾಯಿಯ ಮೇಲಿನ ಮಮತೆ, ದುರಹಂಕಾರವನ್ನು ಮೆಟ್ಟುವ ಸಾಹಸ ಎಂತಹವರಿಗೂ ಮೆಚ್ಚುಗೆಯಾಗುತ್ತದೆ.

**ಈ] ಸಂದರ್ಭ ಸಹಿತ ಸ್ವಾರಸ್ಯ ತಿಳಿಸಿ.**

೧. **“ರಘೂದ್ವಹನ ಸೊಲ್ಗೇಳಿ ನಮಿಸಲ್”**

**ಆಯ್ಕೆ :–** ಈ ವಾಕ್ಯವನ್ನು **ಕವಿ ಲಕ್ಷ್ಮೀಶನು** ರಚಿಸಿರುವ **‘ಜೈಮಿನಿ ಭಾರತ’** ಮಹಾಕಾವ್ಯದಿಂದ ಆಯ್ದ **‘ವೀರಲವ’** ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

**ಸಂದರ್ಭ :–** ಶ್ರೀರಾಮನ ಅಶ್ವಮೇಧ ಯಾಗದ ಯಜ್ಞಾಶ್ವವು ಸಂಚರಿಸಿದ ಕಡೆಯಲ್ಲೆಲ್ಲ ರಾಜರುಗಳಿಂದ ಅದಕ್ಕೆ ದೊರೆತ ಭವ್ಯ ಸ್ವಾಗತ ಹಾಗೂ ನೀಡಿದ ಗೌರವವನ್ನು ಕುರಿತು ವರ್ಣಿಸುವ ಸಂದರ್ಭದಲ್ಲಿ ಕವಿಯು ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ :–** ಶ್ರೀರಾಮನ ಹೆಸರನ್ನು ಕೇಳಿಯೇ ಪರಾಕ್ರಮಿಗಳಾದ ರಾಜರುಗಳು ಗೌರವದಿಂದ ನಮಿಸಿ ಶರಣಾಗಿ ಯಜ್ಞಾಶ್ವವು ಮುಂದೆ ಸಂಚರಿಸಲು ಅನುವು ಮಾಡಿಕೊಟ್ಟರು ಎಂದು ವರ್ಣಿಸಿರುವುದು ಸ್ವಾರಸ್ಯಪೂರ್ಣವಾಗಿದೆ.

೨. **“ತನ್ನ ಮಾತೆಯಂ ಸರ್ವಜನಮುಂ ಬಂಜೆಯೆನ್ನದಿರ್ದಪುದೆ”**

**ಸಂದರ್ಭ :–** ಲವನು ತನ್ನ ಆಶ್ರಮದ ತೋಟವನ್ನು ಧ್ವಂಸ ಮಾಡಿದ ಶ್ರೀರಾಮನ ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯ ಬರಹವನ್ನು ಓದಿ ಅದನ್ನು ಕಟ್ಟಿಹಾಕಲು ನಿರ್ಧರಿಸಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ :–** ಕ್ಷತ್ರಿಯನಾದ ವೀರಲವನು ಬಾಲಕನಾದರೂ ಹೆದರದೆ ಕುದುರೆಯನ್ನು ಕಟ್ಟಲು ನಿರ್ಧರಿಸಿ, ತನ್ನ ವೀರತ್ವವನ್ನು ಪ್ರದರ್ಶಿಸುವುದು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಗೊಂಡಿದೆ.

೩. **“ಅರಸುಗಳ ವಾಜಿಯಂ ಬಿಡು”**

**ಸಂದರ್ಭ :–** ವೀರಲವನು ತನ್ನ ಉತ್ತರೀಯದಿಂದ ಯಜ್ಞಾಶ್ವವನ್ನು ಬಾಳೆಯಗಿಡಕ್ಕೆ ಕಟ್ಟಿಹಾಕಿದ ಸಂದರ್ಭದಲ್ಲಿ ಮುನಿಪುತ್ರರು ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ರಾಜನ ಯಜ್ಞಾಶ್ವವನ್ನು ಕಟ್ಟಿಹಾಕುವುದು ಅಪರಾಧ ಅದರಿಂದ ಮುಂದೆ ತೊಂದರೆ ಉಂಟಾಗುತ್ತದೆ ಎಂದು ಮುನಿಪುತ್ರರು ಭಯಗೊಳ್ಳುವುದನ್ನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

೪. **“ಜಾನಕಿಯ ಮಗನಿದಕೆ ಬೆದರುವನೆ”**

**ಸಂದರ್ಭ :–** ವೀರಲವನು ತನ್ನ ಉತ್ತರೀಯದಿಂದ ಯಜ್ಞಾಶ್ವವನ್ನು ಬಾಳೆಯಗಿಡಕ್ಕೆ ಕಟ್ಟಿ ಹಾಕಿದ್ದನ್ನು ಕಂಡು ಮುನಿಪುತ್ರರು ಕುದುರೆಯನ್ನು ಬಿಡು ಎಂದು ಹೇಳಿದ ಸಂದರ್ಭದಲ್ಲಿ ಈ ಮಾತನ್ನು ಲವನು ಹೇಳುತ್ತಾನೆ.

**ಸ್ವಾರಸ್ಯ :–** ಸೀತೆಯ ಮಗನಾದ ಲವನ ಧೈರ್ಯವು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

## ಭಾಷಾ ಚಟುವಟಿಕೆ

೧. **ವಿಗ್ರಹಿಸಿ ಸಮಾಸವನ್ನು ಹೆಸರಿಸಿ.**

೧. ಸೊಲ್ಗೇಳಿ – ಸೊಲ್ಲನ್ನು + ಕೇಳಿ = ಕ್ರಿಯಾಸಮಾಸ
೨. ನಲ್ಗುದುರೆ – ನಲ್ಲಿತು + ಕುದುರೆ = ಕರ್ಮಧಾರಯಸಮಾಸ
೩. ಬಿಲ್ಗೊಂಡು – ಬಿಲ್ಲನ್ನು + ಕೊಂಡು = ಕ್ರಿಯಾಸಮಾಸ.
೪. ಬಿಲ್ದಿರುವನೇರಿಸಿ – ಬಿಲ್ಲಿನತಿರುವನ್ನು + ಏರಿಸಿ = ಕ್ರಿಯಾಸಮಾಸ.
೫. ಪೂದೋಟ – ಪೂವಿನ + ತೋಟ = ತತ್ಪುರುಷಸಮಾಸ.
೬. ಲಿಖಿತವನೋದಿ – ಲಿಖಿತವನ್ನು + ಓದಿ = ಕ್ರಿಯಾಸಮಾಸ
೭. ಯಜ್ಞತುರುಗ – ಯಜ್ಞದ + ತುರುಗ = ತತ್ಪುರುಷಸಮಾಸ.
೮. ಕದಳಿದ್ರುಮ – ಕದಳಿಯ + ದ್ರುಮ =ತತ್ಪುರುಷಸಮಾಸ.
೯. ಅಬ್ಧಿಪ – ಅಬ್ಧಿಗೆ ( ಸಮುದ್ರಕ್ಕೆ) ಪತಿ (ಒಡೆಯ) ಯಾರೋ ಆತ ( ವರುಣ) = ಬಹುವ್ರೀಹಿಸಮಾಸ.

೨. **ತತ್ಸಮ–ತದ್ಭವ ಬರೆಯಿರಿ.**

೧. ವೀರ – ಬೀರ ೨. ಯಜ್ಞ – ಜನ್ನ ೩. ಬಂಜೆ – ವಂಧ್ಯಾ ೪. ಕುವರ – ಕುಮಾರ ೫. ಲೋಕ – ಲೋಗ

೩. **ವಿಂಗಡಿಸಿ ಸಂಧಿಯ ಹೆಸರು ಬರೆಯಿರಿ.**

೧. ಚರಿಸುತಧ್ವರದ – ಚರಿಸುತ + ಅಧ್ವರದ = ಲೋಪಸಂಧಿ.
೨. ನಿಜಾಶ್ರಮ – ನಿಜ + ಆಶ್ರಮ = ಸವರ್ಣದೀರ್ಘಸಂಧಿ.
೩. ಲೇಖನವನೋದಿ – ಲೇಖನವನು + ಓದಿ = ಲೋಪಸಂಧಿ.
೪. ತೆಗೆದುತ್ತರೀಯಮಂ – ತೆಗೆದು + ಉತ್ತರೀಯಮಂ = ಲೋಪಸಂಧಿ.
೫. ಬೇಡಬೇಡರಸುಗಳ – ಬೇಡಬೇಡ + ಅರಸುಗಳ= ಲೋಪಸಂಧಿ.
೬. ನಿಂತಿರ್ದನ್ – ನಿಂತು + ಇರ್ದನ್ = ಲೋಪಸಂಧಿ.
೭. ಪೂದೋಟ – ಪೂ + ತೋಟ = ಆದೇಶಸಂಧಿ.
೮. ಸೊಲ್ಗೇಳಿ – ಸೊಲ್ಲು + ಕೇಳಿ = ಆದೇಶಸಂಧಿ.

೪. **ಪ್ರಸ್ತಾರಹಾಕಿ ಗಣ ವಿಭಾಗ ಮಾಡಿ ಛಂದಸ್ಸನ್ನು ಹೆಸರಿಸಿ ಲಕ್ಷಣ ಬರೆಯಿರಿ.**

```
  ೫          ೫          ೫       ೫
– U –      – – U     U U U U U   – – U
ಉರ್ವಿಯೊಳ್ । ಕೌಸಲ್ಯೆ । ಪಡೆದಕುವ । ರಂರಾಮು।
– U –     – U –    U U – U    U U U U U
ನೊರ್ವನೇ । ವೀರನಾ । ತನಯಜ್ಞ । ತುರಗಮಿದು।
– U U U   – U –    – U –    U U U –    – U –    U U U –  –
ನಿರ್ವಹಿಸ । ಲಾರ್ಪರಾ । ರಾದೊಡಂ । ತಡೆಯಲೆಂ । ದಿರ್ದಲೇ । ಖನವನೋ ।ದಿ
```

**ಛಂದಸ್ಸು :** ವಾರ್ಧಕ ಷಟ್ಪದಿ

**ವಾರ್ಧಕ ಷಟ್ಪದಿಯ ಲಕ್ಷಣಗಳು:**

* ಆರು ಸಾಲುಗಳಿರುತ್ತವೆ.
* ೧, ೩, ೪ ಮತ್ತು ೫ ನೆಯ ಸಾಲುಗಳು ತಲಾ ೨೦ ಮಾತ್ರೆಗಳನ್ನು ಹೊಂದಿದ್ದು ೫ ಮಾತ್ರೆಯ ೪ ಗಣಗಳಿರುತ್ತವೆ.
* ೩ ಮತ್ತು ೬ ನೆಯ ಸಾಲುಗಳು ತಲಾ ೩೨ ಮಾತ್ರೆಗಳನ್ನು ಹೊಂದಿದ್ದು ೫ ಮಾತ್ರೆಯ ೬ ಗಣಗಳೊಂದಿಗೆ ಒಂದು ಗುರು ಇರುತ್ತದೆ.
* ಮೊದಲನೆಯ ಸಾಲಿನನ ಗಣವಿನ್ಯಾಸ : ೫\೫\೫\೫

## ಭಾಗ – ಬಿ

**ಬಹು ಅಂಶ ಆಯ್ಕೆ ಪ್ರಶ್ನೆಗಳು:**

೧.' ರಗಳೆ ' ಪದದ ತದ್ಭವ ರೂಪವಿದೆ.
ಎ) ರಘಟಾ ಬಿ) ರಗಳಾ ಸಿ) ರಾಗಟ ಡಿ) ರಂಗಗೀತೆ

೨. ಇವುಗಳಲ್ಲಿ ಬಹುಪಾದಗಳುಳ್ಳ ಪದ್ಯ :
ಎ) ಕಂದ ಬಿ) ಷಟ್ಪದಿ ಸಿ) ವೃತ್ತ ಡಿ) ರಗಳೆ

೩. ವಾರ್ಧಕ ಷಟ್ಪದಿಯ ಒಂದು ಪದ್ಯದಲ್ಲಿರುವ ಒಟ್ಟು ಮಾತ್ರೆಗಳ ಸಂಖ್ಯೆ :
ಎ) ೧೦೨ ಬಿ) ೧೪೦ ಸಿ) ೧೪೪ ಡಿ) ೬೪

೪. ಇವುಗಳಲ್ಲಿ ಯಾವುದು ರಗಳೆಯ ವಿಧವಾಗಿಲ್ಲ :
ಎ) ಉತ್ಸಾಹ ಬಿ) ಲಲಿತ ಸಿ) ಸರಸಿ ಡಿ) ಮಂದಾನಿಲ

೫. ವಾರ್ಧಕ ಷಟ್ಪದಿಯಲ್ಲಿ ಪ್ರತಿ ಗಣವು ಎಷ್ಟು ಮಾತ್ರೆಗಳಿಂದ ಕೂಡಿರುತ್ತದೆ?
ಎ) ೩ ಬಿ) ೬ ಸಿ) ೫ ಡಿ) ೪

೬. ' ನೆತ್ತಿಯೊಳ್ ' ಇದು ಈ ವಿಭಕ್ತಿಗೆ ಉದಾಹರಣೆಯಾಗಿದೆ.
ಎ) ಪ್ರಥಮ ಬಿ) ದ್ವಿತೀಯ ಸಿ) ತೃತೀಯ ಡಿ) ಸಪ್ತಮಿ

೭. 'ಲಿಖಿತಮಂ' ಇಲ್ಲಿರುವ ವಿಭಕ್ತಿ :
ಎ) ಪ್ರಥಮ ಬಿ) ದ್ವಿತೀಯ ಸಿ) ತೃತೀಯ ಡಿ) ಚತುರ್ಥಿ

೮. 'ಕುವರಂ' ಇಲ್ಲಿರುವ ಅಕ್ಷರಗಣ :
ಎ) ಭ–ಗಣ ಬಿ) ಸ–ಗಣ ಸಿ) ಮ–ಗಣ ಡಿ) ತ–ಗಣ

೯. ಉರ್ವಿಯೊಳ್ ? ಈ ಪದದಲ್ಲಿರುವ ಕಾರಕಾರ್ಥ :
ಎ) ಕರ್ಮಾರ್ಥ ಬಿ) ಸಂಪ್ರದಾನ ಸಿ) ಅಪಾದಾನ ಡಿ) ಅಧಿಕರಣ

೧೦. ' ಅಗಡು ' ಪದದ ಹೊಸಗನ್ನಡ ರೂಪ ಇದಾಗಿದೆ :
ಎ) ಅಡಗಿಕೋ ಬಿ) ಶೌರ್ಯ ಸಿ) ಕುದುರೆ ಡಿ) ಹಡಗು

[**ಉತ್ತರಗಳು:** ೧. ಎ) ರಘಟಾ ೨. ಡಿ) ರಗಳೆ ೩. ಸಿ) ೧೪೪ ೪. ಸಿ) ಸರಸಿ ೫. ಸಿ) ೫ ೬. ಡಿ) ಸಪ್ತಮಿ ೭. ಬಿ) ದ್ವಿತೀಯ ೮. ಬಿ) ಸ–ಗಣ ೯. ಡಿ) ಅಧಿಕರಣ ೧೦. ಬಿ. ಶೌರ್ಯ]

**ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ಪದ ಬರೆಯಿರಿ:**

| | | | | |
|---|---|---|---|---|
| ೧. ಭಾಮಿನಿ | : ೧೦೨ | : : | ವಾರ್ಧಕ | : ____________ |
| ೨. ವೃತ್ತಗಳು | : ಅಕ್ಷರಗಣ | : : | ರಗಳೆ | : ____________ |
| ೩. ಸೊಲ್ಗೇಳಿ | : ಕ್ರಿಯಾ ಸಮಾಸ | : : | ಪೂದೋಟ | : ____________ |
| ೪. ಬಿಲ್ದಿರುವನೇರಿಸಿ | : ಕ್ರಿಯಾ ಸಮಾಸ | : : | ನಲ್ಗುದುರೆ | : ____________ |
| ೫. ನೃಪ | : ರಾಜ | : : | ಅಬ್ಧಿಪ | : ____________ |
| ೬. ಸೊಲ್ಗೇಳಿ | : ಸೊಲ್ಲನ್ನು+ಕೇಳಿ | : : | ನಲ್ಗುದುರೆ | : ____________ |
| ೭. ವೀರ | : ಬೀರ | : : | ಬಂಜೆ | : ____________ |
| ೮. ಗಳ | : ಕೊರಳು | : : | ವಾಜಿ | : ____________ |

[**ಉತ್ತರಗಳು:** ೧) ೧೪೪ ೨) ಮಾತ್ರಾಗಣ ೩) ತತ್ಪುರುಷ ಸಮಾಸ ೪) ಕರ್ಮಧಾರಯ ೫) ವರುಣ ೬) ನಲ್ಲಿತು+ ಕುದುರೆ ೭) ವಂಧ್ಯಾ ೮) ಕುದುರೆ]

## 'ವೀರಲವ' ಪದ್ಯಭಾಗದಲ್ಲಿ ಬರುವ ವ್ಯಾಕರಣಾಂಶಗಳು

**ಹೊಸಪದಗಳ ಅರ್ಥ :**

೧. ನೃಪ – ದೊರೆ, ೨. ಚರಿಸು – ಸಂಚರಿಸು, ೩. ತುರಂಗ – ವಾಜಿ, ಹಯ, ಕುದುರೆ, ೪. ಆರ್ಪರ್ – ಸಮರ್ಥರು. ೫. ಅಬ್ಧಿಪ – ವರುಣ, ೬. ಉರ್ವಿ – ಭೂಮಿ ೭. ವಾಸಿ – ಪ್ರತಿಜ್ಞೆ, ೮. ಗಳ – ಕೊರಳು ೯. ಕದಳೀದ್ರುಮ – ಬಾಳೆಗಿಡ, ೧೦. ಅಗಡು – ಶೌರ್ಯ, ೧೧. ಪಾರ್ವರು – ಬ್ರಾಹ್ಮಣರು. ೧೨. ಲಿಖಿತ – ಬರಹ ( ಬರವಣಿಗೆ)

**********

ಗದ್ಯಪಾಠ –೭

# ವೃಕ್ಷಸಾಕ್ಷಿ

**ಕವಿ ಪರಿಚಯ:– ದುರ್ಗಸಿಂಹ:**

**ದುರ್ಗಸಿಂಹನು ಕ್ರಿ. ಶ. ಸುಮಾರು ೧೦೩೧ ರಲ್ಲಿ** ಕಿಸುಕಾಡು ನಾಡಿನ **ಸಯ್ಯಡಿಯಲ್ಲಿ** ಜನಿಸಿದನು. ಇವನು ಒಂದನೆಯ ಜಗದೇಕಮಲ್ಲನ ಆಸ್ಥಾನದಲ್ಲಿ ದಂಡನಾಯಕನೂ ಸಂಧಿವಿಗ್ರಹಿಯೂ ಆಗಿದ್ದನು. ಮತಧರ್ಮ ಸಮನ್ವಯನಾದ ಈತ ಸಯ್ಯಡಿಯಲ್ಲಿ ಹಲವಾರು ಹರಿಹರ ಭವನಗಳನ್ನು ನಿರ್ಮಿಸಿದ್ದಾನೆ. ಈತನು **'ಕರ್ಣಾಟಕ ಪಂಚತಂತ್ರ'** ಎಂಬ ಚಂಪೂ ಕಾವ್ಯವನ್ನು ರಚಿಸಿದ್ದಾನೆ.

**ಅ] ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. 'ವೃಕ್ಷಸಾಕ್ಷಿ' ಕತೆಯನ್ನು ಯಾವ ಕೃತಿಯಿಂದ ಆರಿಸಲಾಗಿದೆ?**
'ವೃಕ್ಷಸಾಕ್ಷಿ' ಕತೆಯನ್ನು **ದುರ್ಗಸಿಂಹನ 'ಕರ್ನಾಟಕ ಪಂಚತಂತ್ರ'** ಕೃತಿಯಿಂದ ಆರಿಸಲಾಗಿದೆ.

**೨. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು?**
ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ **ಹೊನ್ನಿನ ಕಳ್ಳತನದ** ಆರೋಪವನ್ನು ಹೊರಿಸಿದನು.

**೩. ಧರ್ಮಾಧಿಕರಣರು ಏಕೆ ವಿಸ್ಮಯ ಹೊಂದಿದರು?**
**ದುಷ್ಟಬುದ್ಧಿಯು "ಆ ಸ್ಥಳದಲ್ಲಿ ಹೊನ್ನನ್ನು ಇಡುವಾಗ ಈತ ಮತ್ತು ನಾನು ಅಲ್ಲದೆ ಬೇರೆ ಯಾರು ಮನುಷ್ಯರು ಇರಲಿಲ್ಲ. ಆಸ್ಥಳದಲ್ಲಿ ಇದ್ದ ಆಲದ ಮರವೇ ಸಾಕ್ಷಿ" ಎಂದು ಹೇಳಿದ್ದನ್ನು ಕೇಳಿ** ಧರ್ಮಾಧಿಕರಣರು ವಿಸ್ಮಯ ಹೊಂದಿದರು.

**೪. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು?**
ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು**ದೇವರು, ಗುರುಗಳು, ವೇದಾಧ್ಯಯನ ನಿರತರನ್ನು ಪೂಜೆ ಮಾಡುತ್ತ**ಕಳೆದನು.

**೫. ಧರ್ಮಾಧಿಕರಣರು ವಟವೃಕ್ಷದ ಸಮೀಪಕ್ಕೆ ಏಕೆ ಬಂದರು?**
ದುಷ್ಟಬುದ್ಧಿ ಮತ್ತು ಧರ್ಮಬುದ್ಧಿಯ ನಡುವಿನ ವ್ಯಾಜ್ಯವನ್ನು ಪರಿಹರಿಸಲು, ವೃಕ್ಷಸಾಕ್ಷಿಯನ್ನು ಕೇಳಲು**ಧರ್ಮಾಧಿಕರಣರುವಟವೃಕ್ಷದ ಸಮೀಪಕ್ಕೆ ಬಂದರು.**

**ಆ] ಮೂರು/ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು?**
ಅರ್ಧರಾತ್ರಿಯಲ್ಲಿ ಧರ್ಮಬುದ್ಧಿಯು ದುರ್ಬುದ್ಧಿಯಾದ ದುಷ್ಟಬುದ್ಧಿಯನ್ನು ಕರೆದು, "ಚಿನ್ನವನ್ನು ಹಂಚಿಕೊಳ್ಳೋಣ"ಎಂದಾಗ ದುಷ್ಟಬುದ್ಧಿಯು ಪಾಪಬುದ್ಧಿಯವನಾಗಿ "ನಾವು ಈ ಹೊನ್ನನ್ನು ಹಂಚಿಕೊಂಡು ಮನೆಯಲ್ಲಿ ಸ್ವೇಚ್ಛೆಯಿಂದ ಇರುವವರಲ್ಲ. ಮತ್ತೆ ವ್ಯಾಪಾರಕ್ಕೆ ಹೋಗಬೇಕಾಗುತ್ತದೆ. ಆಕಾರಣದಿಂದ ನಿನಗೂ ನನಗೂ ಖರ್ಚಿಗೆ ತಕ್ಕಷ್ಟು ಹೊನ್ನನ್ನು ತೆಗೆದುಕೊಂಡು, ಉಳಿದ ಹೊನ್ನೆಲ್ಲವನ್ನು ಇಲ್ಲೆಯೇ ಇಟ್ಟು ಬಿಡೋಣ" ಎಂದು ಸಲಹೆಯಿತ್ತನು.

**೨. ದುಷ್ಟಬುದ್ಧಿಯು ತನ್ನ ತಂದೆಗೆ ಏಕಾಂತದಲ್ಲಿ ಏನೆಂದು ಹೇಳಿದನು?**
ದುಷ್ಟಬುದ್ಧಿಯು ತನ್ನ ತಂದೆಯ ಕೈ ಹಿಡಿದು, ಏಕಾಂತ ಸ್ಥಳಕ್ಕೆ ಕರೆದುಕೊಂಡು ಹೋಗಿ "ನಿನ್ನ ಒಂದು ಮಾತಿನಿಂದ ನಮ್ಮ ಕಷ್ಟಗಳೆಲ್ಲವೂ ಪರಿಹಾರವಾಗಿ, ಹಲವು ಕಾಲ ಹಸಿಯದೆ ಊಟಮಾಡಿ ಬಾಳುವಂತಹ ಸಾಧನೆಯನ್ನು ಮಾಡಬಹುದು. ನೀನು ಆ ಮರದ ಪೊಟರೆಯಲ್ಲಿ ಅಡಗಿದ್ದು, ಧರ್ಮಬುದ್ಧಿಯೇ ಹೊನ್ನು ತೆಗೆದುಕೊಂಡು ಹೋದನೆಂದು ಹೇಳು" ಎಂದು ಹೇಳಿದನು.

**೩. ಧರ್ಮಾಧಿಕರಣರು ವಟವೃಕ್ಷಕ್ಕೆ ಏನು ಹೇಳಿದರು?**
ಧರ್ಮಾಧಿಕರಣರು **ವಟವೃಕ್ಷಕ್ಕೆ** "ನೀನಾದರೋ ಯಕ್ಷಾದಿ ದಿವ್ಯ ದೇವತೆಗಳು ವಾಸ ಮಾಡುವಂತಹ ಮತ್ತು ಅವರಸೇವೆಯನ್ನು ಮಾಡುವಂತಹವನು ಆಗಿದ್ದೀಯಾ, ಆ ಕಾರಣದಿಂದ ನಿನ್ನನ್ನು ಸಾಕ್ಷಿ ಮಾಡಿ ಕೇಳುತ್ತಿದ್ದೇವೆ, ನೀನು ತಪ್ಪದೆಸಾಕ್ಷಿಯನ್ನು ನುಡಿ" ಎಂದು ಹೇಳಿದರು.

**ಇ] ಎಂಟು/ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. 'ವೃಕ್ಷಸಾಕ್ಷಿ' ಪಾಠದಲ್ಲಿ ನೀವು ಮೆಚ್ಚುವ ಪಾತ್ರ ಯಾವುದು? ಏಕೆ?**

'ವೃಕ್ಷಸಾಕ್ಷಿ' ಪಾಠದಲ್ಲಿ ನಾವು ಮೆಚ್ಚುವ ಪಾತ್ರ ಧರ್ಮಬುದ್ಧಿಯದು. ಧರ್ಮಬುದ್ಧಿಯು ವ್ಯಾಪಾರಿ ಆದರೂ ಕಪಟವರಿಯದ ಸತ್ಯವಂತ, ಆಧ್ಯಾತ್ಮಿಕ ಮನೋಭಾವವುಳ್ಳವನು. ಸೂರ್ಯೋದಯಕ್ಕೆ ಮೊದಲೇ ಎದ್ದು ನಿತ್ಯಕರ್ಮ ಮುಗಿಸಿ ದೇವರು, ಗುರುಗಳು, ವೇದಾಧ್ಯಯನ ನಿರತರನ್ನು ಪೂಜಿಸುವವನು. ದುಷ್ಟಬುದ್ಧಿಯು ಮರದ ಪೊಟರೆಯೊಳಗೆ ತಂದೆಯನ್ನು ಕೂರಿಸಿ ಧರ್ಮಬುದ್ಧಿಯೇ ಚಿನ್ನ ಕದ್ದನೆಂದು ಹೇಳಿಸಿದಾಗಲೂ ಧರ್ಮಬುದ್ಧಿ ಕೂಗಾಡಲಿಲ್ಲ, ಶಾಂತನಾಗಿಯೇ ಇದ್ದನು. ಅವನಿಗೆ ದೇವರ ಮೇಲೆ ನಂಬಿಕೆ. ದೇವರಿದ್ದರೆ ಸತ್ಯವೇ ಹೊರಬರಬೇಕಿತ್ತು ಎಂಬುದು ಅವನ ಅನಿಸಿಕೆ. ಮರವನ್ನು ಪರೀಕ್ಷಿಸಬೇಕೆಂದು ಮರವನ್ನು ಸುತ್ತಿದಾಗ ಅಲ್ಲಿ ಮನುಷ್ಯ ಸಂಚಾರವಾಗಿರುವುದನ್ನು ಬುದ್ಧಿವಂತಿಕೆಯಿಂದ ಕಂಡುಕೊಂಡನು. ದುಷ್ಟಬುದ್ಧಿಗೆ ಬುದ್ಧಿಕಲಿಸುವ ಚಾಣಾಕ್ಷತನವನ್ನು ಮೆರೆಯುತ್ತಾನೆ. "ಸುಳ್ಳನ್ನು ಸುಳ್ಳಿನಿಂದಲೇ; ಮುಳ್ಳನ್ನು ಮುಳ್ಳಿನಿಂದಲೇ ಜಯಿಸುವಂತೆ" ಧರ್ಮಬುದ್ಧಿಯು ತಂತ್ರಬುದ್ಧಿಯಿಂದ ತನಗೆ ಒದಗಿದ್ದ ಕೆಟ್ಟ ಹೆಸರನ್ನು ಹೋಗಲಾಡಿಸಿ ಕೊಂಡನು. ಆದ್ದರಿಂದ ಸತ್ಯವಂತನಾದ ಧರ್ಮಬುದ್ಧಿ ಮೆಚ್ಚುಗೆಗೆ ಪಾತ್ರನಾಗುತ್ತಾನೆ.

೨. ದುಷ್ಟಬುದ್ಧಿಯ ತಂತ್ರ ಅವನಿಗೆ ತಿರುಗುಬಾಣವಾದ ಬಗೆಯನ್ನು ತಿಳಿಸಿ.

ದುಷ್ಟಬುದ್ಧಿಯು ಧರ್ಮಬುದ್ಧಿಯೊಡನೆ ಸೇರಿ ವ್ಯಾಪಾರ ಮಾಡಿ, ಲಾಭ ಗಳಿಸಿದ್ದ ಹೊನ್ನನು ತಾನೇ ದೋಚಿ, ಕಳ್ಳತನವನ್ನು ಧರ್ಮಬುದ್ಧಿಯ ಮೇಲೆ ಹೊರಿಸಿ, ಇದಕ್ಕೆ ವಟವೃಕ್ಷವೇ ಸಾಕ್ಷಿ ಎಂದು ಧರ್ಮಾಧಿಕಾರಿಗಳ ಮುಂದೆ ಹೇಳುತ್ತಾನೆ. ಇದರಿಂದ ಧರ್ಮಬುದ್ಧಿ ಮತ್ತು ಧರ್ಮಾಧಿಕಾರಿಗಳಿಗೆ ಆಶ್ಚರ್ಯವಾಗುತ್ತದೆ. ದುಷ್ಟಬುದ್ಧಿಯು ತಂದೆಯ ಬುದ್ಧಿ ಮಾತನ್ನು ಆಲಿಸದೇ, ಮರದಿಂದ ಸಾಕ್ಷಿ ಹೇಳಿಸಲು ತನ್ನ ತಂದೆಯನ್ನೇ ಪೊಟರೆಯಲ್ಲಿ ಕೂರಿಸಿ, ಅವನಿಂದ ಧರ್ಮಬುದ್ಧಿಯೇ ಚಿನ್ನ ಕದ್ದನೆಂದು ಸುಳ್ಳು ಹೇಳಿಸುತ್ತಾನೆ. ಧರ್ಮಬುದ್ಧಿಯು ದೈವ ಭಕ್ತನಾಗಿದ್ದು ಸತ್ಯ ಹೊರ ಬರುತ್ತದೆ ಎಂದು ನಂಬಿದ್ದನು. ಅವನ ನಂಬಿಕೆಯು ಸುಳ್ಳಾದಾಗ ಮರದ ಬಳಿ ಪರೀಕ್ಷಿಸಿ ಪೊಟರೆಯೊಳಗೆ ಮನುಷ್ಯ ಸಂಚಾರವಾಗಿರುವುದನ್ನು ಕಂಡುಕೊಳ್ಳುತ್ತಾನೆ. ಧರ್ಮಾಧಿಕಾರಿಗಳಿಗೆ ತಾನು ವ್ಯಾಪಾರಿಯ ಮನೋಭಾವದಂತೆ ಸುಳ್ಳು ಹೇಳಿದ್ದಾಗಿ, ಚಿನ್ನವನ್ನು ತಾನೇ ತೆಗೆದುಕೊಂಡುದ್ದಾಗಿ ತಿಳಿಸಿ, ಈಗ ಆ ಚಿನ್ನಕ್ಕೆ ಹಾವು ಸುತ್ತುಕೊಂಡಿದೆ ಎಂದು ಹೇಳಿ, ಚಿನ್ನವನ್ನು ತೆಗೆಯಲು ಮರದ ಪೊಟರೆಗೆ ಹುಲ್ಲುಕಡ್ಡಿಯಿಟ್ಟು ಬೆಂಕಿ ಇಡುತ್ತಾನೆ. ಪೊಟರೆಗೆ ಹೊಗೆ ತುಂಬಿ ದುಷ್ಟಬುದ್ಧಿಯ ತಂದೆ ಪ್ರೇಮಮತಿ ಉಸಿರು ಕಟ್ಟಿಕೂಗಾಡುತ್ತ ಪೊಟರೆಯಿಂದ ಉರುಳಿ ಪ್ರಾಣಬಿಡುತ್ತಾನೆ. ದುಷ್ಟಬುದ್ಧಿಯ ಕುಟಿಲತೆ ಧರ್ಮಾಧಿಕಾರಿಗಳಿಗೆ ತಿಳಿಯುತ್ತದೆ. ಹೀಗೆ ದುಷ್ಟಬುದ್ಧಿಯ ತಂತ್ರ ಅವನಿಗೆ ತಿರುಗು ಬಾಣವಾಯಿತು.

**ಈ] ಸಂದರ್ಭಾನುಸಾರ ಸ್ವಾರಸ್ಯ ಬರೆಯಿರಿ.**

**೧. "ಪೊನ್ನನೆಲ್ಲಮಂ ನೀನೆ ಕೊಂಡೆ"**

**ಆಯ್ಕೆ :–** ಈ ಮಾತನ್ನು **ಕವಿ ದುರ್ಗಸಿಂಹನು** ರಚಿಸಿರುವ **"ಕರ್ನಾಟಕ ಪಂಚತಂತ್ರ"** ಕೃತಿಯಿಂದ ಆಯ್ದ **'ವೃಕ್ಷಸಾಕ್ಷಿ'** ಎಂಬ ಗದ್ಯಪಾಠದಿಂದ ಆರಿಸಲಾಗಿದೆ.

**ಸಂದರ್ಭ :–** ದುಷ್ಟಬುದ್ಧಿಯು ಧರ್ಮಬುದ್ಧಿಯನ್ನು ಮೋಸಗೊಳಿಸಿ ಹೂತಿಟ್ಟ ಹೊನ್ನೆಲ್ಲವನ್ನು ತೆಗೆದುಕೊಂಡು ಗುಳಿಯನ್ನು ಮೊದಲಿನಂತೆ ಮುಚ್ಚಿ, ತಾನೇ ಧರ್ಮಬುದ್ಧಿಯ ಹತ್ತಿರ ಬಂದು **"ಖರ್ಚಿಗೆ ಹೊನ್ನು ಇಲ್ಲ, ಸ್ವಲ್ಪ ಹೊನ್ನನ್ನು ತೆಗೆದುಕೊಳ್ಳೋಣ ಬಾ"** ಎಂದು ಜೊತೆಯಲ್ಲಿ ಕರೆದುಕೊಂಡು ಹೋಗಿ, ಹೂತಿಟ್ಟ ಸ್ಥಳದಲ್ಲಿ ಹೊನ್ನನ್ನು ಕಾಣದೆ ಇದ್ದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:–** ದುಷ್ಟಬುದ್ಧಿಯು ಇನ್ನು ಮಾತನಾಡದಿದ್ದರೆ ಅಪವಾದವು ತನ್ನ ಮೇಲೆ ಬರುವುದೆಂದು, **"ಹೊನ್ನೆಲ್ಲವನ್ನು ನೀನೆ ತೆಗೆದುಕೊಂಡಿದ್ದೀಯೆ"** ಎಂದನು ಎಂದು ಕವಿ ಸ್ವಾರಸ್ಯಪೂರ್ಣವಾಗಿ ವರ್ಣಿಸುತ್ತಾನೆ.

**೨. "ಈತನ ಮಾತು ಅಶ್ರುತಪೂರ್ವಮ್"**

**ಸಂದರ್ಭ :–** ದುಷ್ಟಬುದ್ಧಿಯು **"ಆ ಸ್ಥಳದಲ್ಲಿ ಹೊನ್ನನ್ನು ಇಡುವಾಗ ಈತ ಮತ್ತು ನಾನು ಅಲ್ಲದೆ ಬೇರೆ ಯಾರು ಮನುಷ್ಯರು ಇರಲಿಲ್ಲ. ಆ ಸ್ಥಳದಲ್ಲಿ ಇದ್ದ ಆಲದ ಮರವೇ ಸಾಕ್ಷಿ"** ಎಂದ ಸಂದರ್ಭದಲ್ಲಿ ಧರ್ಮಾಧಿಕರಣರು ಆಶ್ಚರ್ಯಗೊಂಡು ಈ ಮಾತನ್ನು ಹೇಳುತ್ತಾರೆ.

**ಸ್ವಾರಸ್ಯ :–** ಧರ್ಮಾಧಿಕರಣರು **"ವೃಕ್ಷವು ಸಾಕ್ಷಿಯನ್ನು ಹೇಳುವುದು ಎಂಬುದನ್ನು ಹಿಂದೆ ಎಂದೂ ಕೇಳಿಲ್ಲ"**ಎಂದು ವಿಸ್ಮಯದಿಂದ ಹೇಳುವುದು ಬಹುಸ್ವಾರಸ್ಯಪೂರ್ಣವಾಗಿದೆ.

**೩. "ನಿನ್ನ ಪಟುವಗೆ ನಮ್ಮ ಕುಲಮನೆಲ್ಲಮನಟಿವ ಬಗೆ"**

**ಸಂದರ್ಭ :–** ದುಷ್ಟಬುದ್ಧಿಯು ತನ್ನ ಮನೆಗೆ ಬಂದು ತನ್ನ ತಂದೆಯ ಕೈ ಹಿಡಿದು, ಏಕಾಂತ ಸ್ಥಳಕ್ಕೆ ಕರೆದುಕೊಂಡುಹೋಗಿ, ನೀನು ಆ ಮರದ ಪೊಟರೆಯಲ್ಲಿ ಅಡಗಿದ್ದು, ಧರ್ಮಬುದ್ಧಿಯೇ ಹೊನ್ನು ತೆಗೆದುಕೊಂಡು ಹೋದನೆಂದು ಹೇಳು**"** ಎಂದು ಹೇಳಿದ ಸಂದರ್ಭದಲ್ಲಿ ಅವನಿಗೆ ಬುದ್ಧಿಯನ್ನು ಹೇಳುತ್ತ ತಂದೆಯು ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ :–** ದುಷ್ಟಬುದ್ಧಿಯನ್ನು ಕುರಿತು ಅವನ ತಂದೆಯು "ನಿನ್ನ ಕೆಟ್ಟತನ ನಮ್ಮ ಕುಲವನ್ನು ನಾಶಮಾಡುವ ರೀತಿಯದಾಗಿದೆ**"** ಎಂದು ಹೇಳುವುದು ಸ್ವಾರಸ್ಯಪೂರ್ಣವಾಗಿದೆ.

**೪. "ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"**

**ಸಂದರ್ಭ :–** ಮರದ ಪೊಟರೆಯೊಳಗೆ ಅಡಗಿದ್ದ ದುಷ್ಟಬುದ್ಧಿಯ ತಂದೆ ಪ್ರೇಮಮತಿಯು ಮತಿಗೆಟ್ಟು, ಧರ್ಮದಹಾದಿಯನ್ನು ಬಿಟ್ಟು **"ಧರ್ಮಬುದ್ಧಿಯೇ ಹೊನ್ನನ್ನು ತೆಗೆದುಕೊಂಡನೆಂದು"** ನುಡಿದ ಸಂದರ್ಭದಲ್ಲಿ ಕವಿಯು ಈಮಾತನ್ನು ಹೇಳುತ್ತಾನೆ.

**ಸ್ವಾರಸ್ಯ :–** ಪಾಪಕರ್ಮನಾದ ದುಷ್ಟ ಮಗನ ಮಾತನ್ನು ಕೇಳಿ ತಂದೆಯು ತೊಂದರೆಗೆ ಒಳಗಾದನು ಎಂಬುದನ್ನು 'ಪ್ರಕೃತಿ ವಿಕೃತಿಯಾದ ಮನುಷ್ಯನ ಆಯುಷ್ಯವು ಕಡಿಮೆಯಾಗುತ್ತದೆ' ಎಂಬ ಮಾತು ಸ್ವಾರಸ್ಯಪೂರ್ಣವಾಗಿ ವರ್ಣಿಸಲ್ಪಟ್ಟಿದೆ.

**೫. ಹುಸಿಯದ ಬೇಹಾರಿಯೇ ಇಲ್ಲ"**

**ಸಂದರ್ಭ:–** ಧರ್ಮಬುದ್ಧಿಯು ಆಲದ ಮರದ ಬಳಿ ಬಂದು ನೋಡಿ, ಮರವನ್ನು ಸುತ್ತು ಹಾಕಿ, ದೊಡ್ಡದಾದ ಪೊಟರೆಯನ್ನು, ಮನುಷ್ಯ ಸಂಚಾರವಾಗಿರುವುದನ್ನು ಕಂಡು ನಿಶ್ಚಯಿಸಿದ ಸಂದರ್ಭದಲ್ಲಿ ಧರ್ಮಾಧಿಕಾರಿಗಳಿಗೆ ಈಮಾತನ್ನು ಹೇಳುತ್ತಾನೆ.

**ಸ್ವಾರಸ್ಯ :–** ವ್ಯಾಪಾರಿ ವೃತ್ತಿಧರ್ಮದಲ್ಲಿ ಧರ್ಮಬುದ್ಧಿಯು ಅಧರ್ಮಬುದ್ಧಿಯಾಗಿ ಸುಳ್ಳು ಹೇಳುವ ಮನಸ್ಸು ಉಂಟಾಗುತ್ತದೆ ಎಂಬುದನ್ನು ಈ ಮಾತಿನಲ್ಲಿ ಬಹು ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ.

**ಉ] ಮೊದಲೆರಡು ಪದಗಳಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ಪದವನ್ನು ಬರೆಯಿರಿ.**

೧) ವಡ್ಡಾರಾಧನೆ : ಶಿವಕೋಟ್ಯಾಚಾರ್ಯ : : ಪಂಚತಂತ್ರ : **ದುರ್ಗಸಿಂಹ.**

೨) ಕಬ್ಬ : ಕಾವ್ಯ : : ಬೇಹಾರಿ : **ವ್ಯಾಪಾರಿ.**

೩) ಅನೃತ : ಸುಳ್ಳು : : ಕೃತ್ರಿಮ : **ಮೋಸ.**

೪) ಬಂದಲ್ಲದೆ : ಲೋಪ : : ಧೃತಿಗೆಟ್ಟು : **ಆದೇಶ**

೫) ದೈವಭಕ್ತಿ : ತತ್ಪುರುಷ : : ಅಬ್ಜೋದರ : **ಬಹುವ್ರೀಹಿ**

**ಊ] ಈ ಪದಗಳನ್ನು ಬಿಂಗಡಿಸಿ, ಸಂಧಿಯ ಹೆಸರನ್ನು ತಿಳಿಸಿ.**

೧) ಪೋಗಲ್‌ವೇಟ್ಕುಂ = ಪೋಗಲ್ + ಬೇಟ್ಕುಂ – ವಕಾರಾದೇಶ ಸಂಧಿ
೨) ತಕ್ಕನಿತು = ತಕ್ಕ + ಅನಿತು – ಲೋಪಸಂಧಿ
೩) ಪೊಟ್ಟಿಡೆ = ಪೊಟ್ಟ್ + ಎಡೆ – ಲೋಪಸಂಧಿ

**ಋ] ನೀಡಿರುವ ಪದಗಳನ್ನು ವಿಗ್ರಹಿಸಿ, ಸಮಾಸವನ್ನು ಹೆಸರಿಸಿ.**

೧) ಅತಿಕುಟಿಲ = ಅತಿಯಾದ + ಕುಟಿಲ – ಕರ್ಮಧಾರಯ ಸಮಾಸ
೨) ಕೈಕೊಳ್ವುದು = ಕೈಯನ್ನು + ಕೊಳ್ವುದು (ಕೈಯಂ + ಕೊಳ್ವುದು) – ಕ್ರಿಯಾಸಮಾಸ
೩) ಕಟ್ಟೇಕಾಂತ = ಕಡಿದಾದ + ಏಕಾಂತ – ಕರ್ಮಧಾರಯ ಸಮಾಸ
೪) ಸ್ವಾಮಿದ್ರೋಹ = ಸ್ವಾಮಿಗೆ + ದ್ರೋಹ – ತತ್ಪುರುಷ ಸಮಾಸ
೫) ಪರಧನ = ಪರರ + ಧನ – ತತ್ಪುರುಷ ಸಮಾಸ
೬) ಧನಹರಣ = ಧನದ + ಹರಣ – ತತ್ಪುರುಷ ಸಮಾಸ
೭) ಸಾಕ್ಷಿಮಾಡಿ = ಸಾಕ್ಷಿಯನ್ನು + ಮಾಡಿ – ಕ್ರಿಯಾಸಮಾಸ
೮) ಬಲವಂದು = ಬಲಮಂ + ಬಂದು – ಕ್ರಿಯಾಸಮಾಸ

**ಎ] ಕೊಟ್ಟಿರುವ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣವಿಂಗಡಿಸಿ, ಛಂದಸ್ಸಿನ ಹೆಸರು ಮತ್ತು ಲಕ್ಷಣ ಬರೆಯಿರಿ.**

U U U U   U U –   U U –
ಅ) ಅತಿಕುಟಿ । ಲಮನಂ । ಡನಲು ।
U U –   – –   U U –   U U –   U U –
ಬ್ಧತೆಯಿಂ । ದಂದು । ಷ್ಟಬುದ್ಧಿ । ನುಡಿದಂ । ಪುಸಿಯಂ ।

–ಇದು ಕಂದ ಪದ್ಯ

ಲಕ್ಷಣ: ೪।೪।೪। = ೧೨

೪।೪।೪।೪।೪ = ೨೦

ಭ   ರ   ನ   ಭ   ಭ   ರ   ಲಗ
– U U   – U –   U U U   – U U   – U U   – U –   U –
ಆ) ಮೇದಿನಿ । ಯಂಕ್ರಮ । ಕ್ರಮದೆ । ಪುರ್ವಿದು । ದಾತ್ತನ । ಭೋವಿ ಭಾ । ಗಮಾ. . . .

–ಇದು ಉತ್ಪಲಮಾಲಾವೃತ್ತ

ಲಕ್ಷಣ:–ಭರನಭಭರಲಗ

**<u>ಭಾಗ – ಬಿ</u>**

**ಕೆಳಗೆ ಕೊಟ್ಟಿರುವ ಹೇಳಿಕೆಗಳಿಗೆ ನಾಲ್ಕು ಉತ್ತರಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸೂಕ್ತವಾದುದನ್ನು ಆರಿಸಿ ಬರೆ:**

೧. ' ಪರದು' ಪದದ ಅರ್ಥ : [ಎ) ಪರರದು ಬಿ) ವ್ಯಾಪಾರ ಸಿ) ಪಾರವಿಲ್ಲ ಡಿ) ಅವರದು]
೨. 'ಬೀಯ' ಪದದ ಅರ್ಥ : [ಎ) ವ್ಯಯ ಬಿ) ಬೀಜ ಸಿ) ಬೀಗ ಡಿ) ಆದಾಯ]
೩. 'ಕೆಲದೊಳ್' ಪದದಲ್ಲಿರುವ ವಿಭಕ್ತಿ ಪ್ರತ್ಯಯ: [ಎ) ಪ್ರಥಮವಿಭಕ್ತಿ ಬಿ) ಚತುರ್ಥಿವಿಭಕ್ತಿ ಸಿ) ಸಪ್ತಮಿವಿಭಕ್ತಿ ಡಿ) ಷಷ್ಠಿವಿಭಕ್ತಿ]
೪.. ' ವ್ಯಾಪಾರಿ ' ಪದದ ತದ್ಭವ ರೂಪ : [ಎ) ಬೇಹಾರಿ ಬಿ) ವ್ಯವಹಾರಿ ಸಿ) ಗ್ರಾಹಕ ಡಿ) ಮಾರಾಟಗಾರ]
೫. ' ಪೊಳ್ದಡೆ ' ಪದದಲ್ಲಿರುವ ಸಂಧಿ : [ಎ) ಲೋಪಸಂಧಿ ಬಿ) ಆಗಮಸಂಧಿ ಸಿ) ಆದೇಶಸಂಧಿ ಡಿ) ಪ್ರಕೃತಿಭಾವ]
೬. 'ಧರ್ಮಾಧಿಕರಣ' ಪದದಲ್ಲಿರುವ ಸಂಧಿ : [ಎ) ಗುಣಸಂಧಿ ಬಿ) ಯಣ್‌ಸಂಧಿ ಸಿ) ವೃದ್ಧಿಸಂಧಿ ಡಿ) ಸವರ್ಣದೀರ್ಘಸಂಧಿ]
೭. 'ಭಂಗೋದರ' ಪದದಲ್ಲಿರುವ ಸಂಧಿ : [ಎ) ಗುಣಸಂಧಿ ಬಿ) ಯಣ್ ಸಂಧಿ ಸಿ) ವೃದ್ಧಿ ಸಂಧಿ ಡಿ) ಸವರ್ಣದೀರ್ಘಸಂಧಿ]
೮. 'ಮನುಷ್ಯನಾಯುಶ್ಯಂ' ಪದದಲ್ಲಿರುವ ವಿಭಕ್ತಿ ಪ್ರತ್ಯಯ: [ಎ) ಪ್ರಥಮವಿಭಕ್ತಿ ಬಿ) ಚತುರ್ಥಿವಿಭಕ್ತಿ ಸಿ) ಪಂಚಮಿವಿಭಕ್ತಿ ಡಿ) ಷಷ್ಠಿವಿಭಕ್ತಿ]
೯. 'ಆದಿತ್ಯೋದಯ' ಪದದಲ್ಲಿರುವ ಸಂಧಿ : [ಎ) ಗುಣಸಂಧಿ ಬಿ) ಯಣ್‌ಸಂಧಿ ಸಿ) ವೃದ್ಧಿಸಂಧಿ ಡಿ) ಆಗಮಸಂದಿ]
೧೦. ಮಹಾಸ್ರಗ್ಧರಾ ವೃತ್ತದ ಒಂದು ಸಾಲಿನಲ್ಲಿರುವ ಅಕ್ಷರಗಳ ಸಂಖ್ಯೆ : [ಎ) ೧೯ ಬಿ) ೨೦ ಸಿ) ೨೧ ಡಿ) ೨೨]
೧೧. 'ಪ್ರತ್ಯರ್ಥಿ' ಪದದಲ್ಲಿರುವ ಸಂಧಿ : [ಎ) ಗುಣಸಂಧಿ ಬಿ) ಯಣ್‌ಸಂಧಿ ಸಿ) ವೃದ್ಧಿಸಂಧಿ ಡಿ)ಲೋಪಸಂಧಿ]
೧೨. 'ಚೋದ್ಯಂಬಟ್ಟ' ಪದದಲ್ಲಿರುವ ಸಂಧಿ : [ಎ) ಆದೇಶಸಂಧಿ ಬಿ) ಆಗಮಸಂಧಿ ಸಿ) ಲೋಪಸಂಧಿ ಡಿ) ಗುಣಸಂಧಿ]
೧೩. ಕಂದ ಪದ್ಯದ ನಾಲ್ಕು ಸಾಲುಗಳಲ್ಲಿರುವ ಮಾತ್ರೆಗಳ ಸಂಖ್ಯೆ ______ [ಎ) ೩೨ ಬಿ) ೬೪ ಸಿ) ೧೦೨ ಡಿ) ೧೪೪]
೧೪. 'ಚಾಗದ' ಪದವು ಈ ಗಣಕ್ಕೆ ಉದಾಹರಣೆಯಾಗಿದೆ. [ಎ) ಯ–ಗಣ ಬಿ) ಭ–ಗಣ ಸಿ) ಮ–ಗಣ ಡಿ) ಸ–ಗಣ]
೧೫. ಉತ್ಪಲಮಾಲಾವೃತ್ತದ ಗಣವಿನ್ಯಾಸ: [ಎ) ಭರನಭಭರ ಬಿ) ಮರಭನಯಯಯ ಸಿ) ಸತತನಸರರ ಡಿ) ನಜಭಜಜಜರ]
೧೬. 'ಅಬ್ಜೋದರ' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ: [ಎ) ಗಮಕ ಬಿ) ಬಹುವ್ರೀಹಿ ಸಿ) ತತ್ಪುರುಷ ಡಿ) ಅಂಶಿ]
೧೭. 'ಕಿಚ್ಚನಿಕ್ಕು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ______ [ಎ) ತತ್ಪುರುಷ ಬಿ) ಕ್ರಿಯಾ ಸಿ) ಗಮಕ ಡಿ) ದ್ವಂದ್ವ]

[ **<u>ಉತ್ತರಗಳು :</u>** ೧. ಬಿ)ವ್ಯಾಪಾರ ೨. ಎ)ವ್ಯಯ ೩. ಸಿ. ಸಪ್ತಮಿವಿಭಕ್ತಿ ೪. ಎ) ಬೇಹಾರಿ ೫. ಎ) ಲೋಪಸಂಧಿ
೬. ಡಿ) ಸವರ್ಣದೀರ್ಘ ಸಂಧಿ ೭. ಎ) ಗುಣಸಂಧಿ ೮. ಎ) ಪ್ರಥಮವಿಭಕ್ತಿ ೯. ಎ) ಗುಣಸಂಧಿ ೧೦. ಡಿ) ೨೨
೧೧. ಬಿ) ಯಣ್‌ಸಂಧಿ ೧೨. ಎ) ಆದೇಶಸಂಧಿ ೧೩. ಬಿ) ೬೪ ೧೪. ಬಿ) ಭ–ಗಣ ೧೫. ಎ.ಭರನಭಭರ
೧೬. ಬಿ) ಬಹುವ್ರೀಹಿ ೧೭. ಬಿ) ಕ್ರಿಯಾ ಸಮಾಸ ]

**ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ಪದ ಬರೆಯಿರಿ:**

| | | | | |
|---|---|---|---|---|
| ೧. ಕಬ್ಬ | : ಕಾವ್ಯ | : : | ಬೇಹಾರಿ | : ________ |
| ೨. ಅನೃತ | : ಸುಳ್ಳು | : : | ಕೃತ್ರಿಮ | : ________ |
| ೩. ಬಂದಲ್ಲದೆ | : ಲೋಪ ಸಂಧಿ | : : | ಧೃತಿಗೆಟ್ಟು | : ________ |
| ೪. ದೈವ ಭಕ್ತಿ | : ತತ್ಪುರುಷ | : : | ಶಿತಿಕಂಠ | : ________ |
| ೫. ಸಂದೆಯ | : ಸಂದೇಹ | : : | ಕೋಕಿಲಾ | : ________ |
| ೬. ನೇಸರ | : ಸೂರ್ಯ | : : | ಮೇದಿನಿ | : ________ |
| ೭. ಮೊರೆ | : ಪ್ರಾರ್ಥನೆ | : : | ಮೊಱೆ | : ________ |
| ೮. ನೆಱೆ | : ಪ್ರವಾಹ | : : | ನೆರೆ | : ________ |
| ೯. ಕಂದಪದ್ಯ | : ಮಾತ್ರಾಗಣ | : : | ವೃತ್ತಗಳು | : ________ |
| ೧೦. ಏರ್ | : ಹತ್ತು | : : | ಏಱ್ | : ________ |
| ೧೧. ಕಟ್ಟೇಕಾಂತ | : ಲೋಪ ಸಂಧಿ | : : | ಬಾಳುವಷ್ಟು | : ________ |
| ೧೨. ಅತಿಕುಟಿಲ | : ಕರ್ಮಧಾರಯ | : : | ಕೈಕೊಳ್ವುದು | : ________ |
| ೧೩. ಪರಧನ | : ತತ್ಪುರುಷ | : : | ಸಾಕ್ಷಿಮಾಡಿ | : ________ |
| ೧೪. ಕಟ್ಟೇಕಾಂತ | : ಕರ್ಮಧಾರಯ | : : | ಸ್ವಾಮಿದ್ರೋಹ | : ________ |
| ೧೫. ಶಿತಿಕಂಠ | : ಬಹುವ್ರೀಹಿ | : : | ಅಬ್ಜೋದರ | : ________ |

[ **ಉತ್ತರಗಳು :** ೧. ವ್ಯಾಪಾರಿ ೨. ಮೋಸ ೩. ಆದೇಶ ಸಂಧಿ ೪. ಬಹುವ್ರೀಹಿ ೫. ಕೋಗಿಲೆ ೬. ಭೂಮಿ ೭. ಗೋಳಾಟ ೮.ಸಮೀಪ ೯. ಅಕ್ಷರ ಗಣ ೧೦. ಗಾಯ ೧೧. ಆಗಮ ಸಂಧಿ ೧೨. ಕ್ರಿಯಾ ಸಮಾಸ ೧೩. ಕ್ರಿಯಾ ಸಮಾಸ ೧೪. ತತ್ಪುರುಷ ಸಮಾಸ ೧೫. ಬಹುವ್ರೀಹಿಸಮಾಸ ]

***************

# ಪದ್ಯ-೮. ಕೆಮ್ಮನೆ ಮೀಸೆವೊತ್ತೆನೇ

**ಕವಿ ಪರಿಚಯ: ಪಂಪ ಮಹಾಕವಿ**

**ಪಂಪ ಮಹಾಕವಿ** (ಕ್ರಿ.ಶ. ೯೪೧) **ವೆಂಗಿ ಮಂಡಲದ ವೆಂಗಿಪಳು** ಎಂಬ ಅಗ್ರಹಾರದವನು. ಚಾಲುಕ್ಯರ ಅರಿಕೇಸರಿಯ ಆಸ್ಥಾನಕವಿಯಾಗಿದ್ದ ಪಂಪ **ಆದಿಪುರಾಣ** ಮತ್ತು **ವಿಕ್ರಮಾರ್ಜುನ ವಿಜಯಂ** ಎಂಬ ಮಹಾಕಾವ್ಯಗಳ ಕರ್ತೃ.

ವಿಕ್ರಮಾರ್ಜುನ ವಿಜಯ ಕಾವ್ಯಕ್ಕೆ **ಪಂಪಭಾರತ** ಎಂಬ ಮತ್ತೊಂದು ಹೆಸರಿದೆ. ಕಲಿಯೂ ಕವಿಯೂ ಆಗಿದ್ದ ಪಂಪ **ರತ್ನತ್ರಯರಲ್ಲಿ** ಒಬ್ಬ. **ಸರಸ್ವತೀ ಮಣಿಹಾರ, ಸಂಸಾರ ಸಾರೋದಯ, ಕವಿತಾಗುಣಾರ್ಣವ** ಎಂಬ ಬಿರುದುಗಳನ್ನು ಪಡೆದಿದ್ದ ಕವಿ.

[**ಪಂಪಮಹಾಕವಿ** ವಿರಚಿತ **ವಿಕ್ರಮಾರ್ಜುನ ವಿಜಯಂ** ಕಾವ್ಯವನ್ನು ಡಿ.ಎಲ್. ನರಸಿಂಹಾಚಾರ್ಯರು ಸಂಪಾದಿಸಿದ್ದು ಅದರ ದ್ವಿತೀಯಾಶ್ವಾಸದಿಂದ **'ಕೆಮ್ಮನೆ ಮೀಸೆವೊತ್ತನೇ'** ಪದ್ಯಭಾಗವನ್ನು ಆಯ್ಕೆ ಮಾಡಲಾಗಿದೆ.]

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ದ್ರೋಣನು ಪರಶುರಾಮರಲ್ಲಿಗೆ ಏಕೆ ಬಂದನು?**

**ಉ:** ದ್ರೋಣನು ಪರಶುರಾಮರಲ್ಲಿಗೆ **ದ್ರವ್ಯವನ್ನು(ಹಣವನ್ನು) ಬೇಡುವುದಕ್ಕಾಗಿ** ಬಂದನು.

**೨. ದ್ರೋಣನು ಯಾರೊಡನೆ ಪರಶುರಾಮನ ಬಳಿಗೆ ಬಂದನು?**

**ಉ:** ದ್ರೋಣನು **ಅಶ್ವತ್ಥಾಮನೊಡನೆ** ಪರಶುರಾಮನ ಬಳಿಗೆ ಬಂದನು.

**೩. ಪರಶುರಾಮನು ದ್ರೋಣನಿಗೆ ಕೊಟ್ಟ ಪ್ರಧಾನ ಅಸ್ತ್ರಗಳು ಯಾವುವು?**

**ಉ:** ಪರಶುರಾಮನು ದ್ರೋಣನಿಗೆ **ವಾರುಣ, ವಾಯುವ್ಯ, ಆಗ್ನೇಯ, ಐಂದ್ರಾದಿ ಪ್ರಧಾನ ಅಸ್ತ್ರಗಳನ್ನು** ಕೊಟ್ಟನು.

**೪. ದ್ರುಪದನು ಪಡಿಯಱನಿಗೆ ಏನೆಂದು ಹೇಳಿ ಕಳುಹಿಸಿದನು?**

**ಉ:** ಅಂತಹವನನ್ನು ನಾನು ತಿಳಿದಿಲ್ಲ ; ಅವನನ್ನು ಹೊರಕ್ಕೆ ತಳ್ಳು ಎಂದು ದ್ರುಪದನು ಪಡಿಯಱನಿಗೆ(ದ್ವಾರಪಾಲಕನಿಗೆ) ಹೇಳಿದನು.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ:**

**೧. ಪರಶುರಾಮನು ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು?**

**ಉ:** ಪರಶುರಾಮನು ತನ್ನಲ್ಲಿದ್ದದ್ದನ್ನೆಲ್ಲಾ ಬೇಡಿದವರಿಗೆ ದಾನಮಾಡಿದ್ದರಿಂದ ಆತನ ಬಳಿ ಬಿಲ್ಲು-ಬಾಣಗಳಲ್ಲದೆ ಬೇರೇನೂ ಇರಲಿಲ್ಲ. ಆ ಸಂದರ್ಭದಲ್ಲಿ ದ್ರೋಣನು ಅಶ್ವತ್ಥಾಮನ ಜೊತೆಯಲ್ಲಿ ಏನಾದರು ದ್ರವ್ಯ ಬೇಡಲೆಂದು ಪರಶುರಾಮನ ಬಳಿಗೆ ಬಂದನು. ಆಗ ಪರಶುರಾಮನು ತನ್ನ ಬಳಿ ಚಿನ್ನದ ಪಾತ್ರೆಗಳಿಲ್ಲದುದರಿಂದ ದ್ರೋಣರಿಗೆ ಮಣ್ಣಿನ ಪಾತ್ರೆಯಲ್ಲಿಯೇ ಅರ್ಘ್ಯವನ್ನು ಕೊಟ್ಟು ಪೂಜಿಸಿದನು.

**೨. ದ್ರುಪದನು ದ್ರೋಣರಿಗೆ ಹೇಳಿದ ಮಾತುಗಳು ಯಾವುವು?**

**ಉ:** ದ್ರುಪದನು ದ್ರೋಣರಿಗೆ "ನೀನು ಯಾರೆಂದು ನನಗೆ ತಿಳಿದಿಲ್ಲ. ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ? ಎಂಬ ಮಾತುಗಳಿಂದ ದ್ರೋಣನಿಗೆ ಮರ್ಮಭೇದಕ ವಾಗುವಂತೆ ಹೀಯ್ಯಾಳಿಸಿದನು.

**೩. ದ್ರುಪದನ ಮಾತಿಗೆ ದ್ರೋಣನ ಪ್ರತ್ಯುತ್ತರವೇನು?**

**ಉ:** ದ್ರುಪದನ ಮಾತಿಗೆ ದ್ರೋಣನು 'ಎಲೋ ಖಳನೇ ನೊಣಕ್ಕೆ ಕಸವೇ ಶ್ರೇಷ್ಠವಾದುದು' ಎನ್ನುವ ಗಾದೆಯಂತೆ ನಿನ್ನ ಯೋಗ್ಯತೆ ನನ್ನವರೆಗೂ ಉಂಟೆ? ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದೆವೆಂಬ ಒಂದು ಕಾರಣದಿಂದ ನಿನ್ನನ್ನು ಕೊಲ್ಲದೆ ಬಿಡುತ್ತಿದ್ದೇನೆ. ಈ ಸಭಾವಲಯದದಲ್ಲಿ ನನ್ನನ್ನು ಹಿಯ್ಯಾಳಿಸಿದ ನಿನ್ನನ್ನು ನನ್ನ ಶಿಷ್ಯರಿಂದ ನೀನು ಬೆಚ್ಚುವಂತೆ ಕಟ್ಟಿಸದೆ ಬಿಟ್ಟರೆ ನಾನು ಮೀಸೆಯನ್ನು ಹೊತ್ತಿರುವುದು ವ್ಯರ್ಥವಲ್ಲವೆ?" ಎಂದು ಪ್ರತ್ಯುತ್ತರ ಕೊಟ್ಟನು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯದಲ್ಲಿ ಉತ್ತರಿಸಿ:**

**೧. ದ್ರುಪದನಿಗೂ ದ್ರೋಣನಿಗೂ ನಡೆದ ಸಂಭಾಷಣೆಯನ್ನು ಸಂಕ್ಷಿಪ್ತವಾಗಿ ಬರೆಯಿರಿ.**

ಉ: ದ್ರುಪದನು "ಅಂತಹವನನ್ನು ನಾನು ತಿಳಿದಿಲ್ಲ; ಅವನನ್ನು ಹೊರಕ್ಕೆ ತಳ್ಳು" ಎಂದು ದ್ವಾರಪಾಲಕನಿಗೆ ಹೇಳಿದಾಗ ದ್ವಾರಪಾಲಕನು ಬಂದು ಆ ರೀತಿಯಲ್ಲಿ ತಿಳಿಸಲಾಗಿ ದ್ರೋಣನು ಬಲವಂತವಾಗಿ ಒಳಕ್ಕೆ ಪ್ರವೇಶಿಸಿ ದ್ರುಪದನನ್ನು ನೋಡಿ 'ಅಣ್ಣಾ ನೀನೂ ನಾನೂ ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದುದನ್ನು ತಿಳಿದಿಲ್ಲವೇ' ಎನ್ನಲು ದ್ರುಪದನು ನಿನ್ನನ್ನು ನಾನು ತಿಳಿದಿಲ್ಲ, ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ?' ಎಂಬ ಮಾತುಗಳಿಂದ ದ್ರೋಣನಿಗೆ ಮರ್ಮಭೇದಕ ವಾಗುವಂತೆ ಹೀಯ್ಯಾಳಿಸಿದನು.

ಹಾಗೆ ಮಾಡಿದುದೂ ಅಲ್ಲದೆ ದ್ರುಪದನು "ಈ ನಾಚಿಕೆಗೆಟ್ಟ ಬ್ರಾಹ್ಮಣನನ್ನು ಎಳೆದು ಹೊರಗೆ ನೂಕಿರಿ" ಎನ್ನಲು ದ್ರೋಣನು ಹೀಗೆಂದನು-"ಐಶ್ವರ್ಯ ಬರಲು ಮದ್ಯಪಾನ ಮಾಡಿದವರಂತೆ ಮಾತು ತೊದಲುವುದು; ಮುಖದಲ್ಲಿ ವಕ್ರಚೇಷ್ಟೆಯುಂಟಾಗುವುದು; ಮಾತುಗಳು ನಾಚಿಕೆಯಿಲ್ಲದಾಗುವುವು; ಸಂಬಂಧವನ್ನು ಮರೆಯುವಂತೆ ಮಾಡುವುದು; ಆದುದರಿಂದ ಐಶ್ವರ್ಯವು ಕಳ್ಳಿನೊಡನೆ(ಹೆಂಡದೊಡನೆ) ಹುಟ್ಟಿತು ಎಂಬುದನ್ನು ನಿಸ್ಸಂಶಯವಾಗಿ ತಟ್ಟನೆ ಈಗ ನಾನು ವಿಶದವಾಗಿ ತಿಳಿದೆನು. ಎಲೋ ಖಳನೇ 'ನೊಣಕ್ಕೆ ಕಸವೇ ಶ್ರೇಷ್ಠವಾದುದು' ಎನ್ನುವ ಗಾದೆಯ ಹಾಗೆ ನಿನ್ನ ಯೋಗ್ಯತೆ ನನ್ನವರೆಗೂ ಉಂಟೆ? ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದೆವೆಂಬ ಒಂದು ಕಾರಣದಿಂದ ನಿನ್ನನ್ನು ಕೊಲ್ಲಲಾರೆ. ಈ ಸಭಾವಲಯದದಲ್ಲಿ ನನ್ನನ್ನು ಹಿಯ್ಯಾಳಿಸಿದ ನಿನ್ನನ್ನು ನನ್ನ ಶಿಷ್ಯರಿಂದ ನಿರಾಯಾಸವಾಗಿ, ನೀನು ಗಾಬರಿಪಡುವಂತೆ ಕಟ್ಟಿಸದೆ ಬಿಟ್ಟರೆ ನಾನು ಮೀಸೆಯನ್ನು ಹೊತ್ತಿರುವುದು ವ್ಯರ್ಥವಲ್ಲವೆ?"

**೨. ದ್ರೋಣನು ದ್ರುಪದನ ವಿರುದ್ಧ ಶಪಥ ಮಾಡಲು ಕಾರಣವಾದ ಅಂಶಗಳನ್ನು ವಿವರಿಸಿ.**

ಉ: ದ್ರೋಣ ಮತ್ತು ದ್ರುಪದರಿಬ್ಬರೂ ಯಜ್ಞಸೇನನೆಂಬ ಗುರುವಿನಲ್ಲಿ ಸಹಪಾಠಿಗಳಾಗಿ ವಿದ್ಯಾಭ್ಯಾಸ ಮಾಡಿದರು. ದ್ರುಪದನು ತಾನು ದೊರೆಯಾದಾಗ ತನ್ನ ಬಳಿಕ ಬಂದರೆ ಸಹಾಯಮಾಡುವುದಾಗಿ ದ್ರೋಣನಿಗೆ ಹೇಳಿದನು. ಇಬ್ಬರ ವಿದ್ಯಾಭ್ಯಾಸ ಮುಗಿದ ನಂತರ ದ್ರುಪದನು ಛತ್ರಾವತಿಯಲ್ಲಿ ರಾಜನಾಗಿ ಆಳುತ್ತಿದ್ದನು. ಆಸಮಯದಲ್ಲಿ ದ್ರೋಣನಿಗೆ ಬಹಳ ಬಡತನ ಉಂಟಾಯಿತು. ಆಗ ಅವನು ದ್ರುಪದನು ವಿದ್ಯಾಭ್ಯಾಸ ಮಾಡುವ ಸಮಯದಲ್ಲಿ ಆಡಿದ್ದ ಮಾತುಗಳನ್ನು ಜ್ಞಾಪಿಸಿಕೊಂಡು ಸಹಾಯವನ್ನು ನಿರೀಕ್ಷಿಸಿ ದ್ರುಪದನಲ್ಲಿಗೆ ಬಂದನು. ಆದರೆ ದ್ರುಪದನಿಗೆ ಅಧಿಕಾರಮದ ಆವರಿಸಿತ್ತು. ದ್ರೋಣ ತನ್ನ ಸಹಪಾಠಿ ಎಂದು ಗುರುತಿಸದಾದನು.

ದ್ರೋಣನು ದ್ರುಪದನರಮನೆಯ ಬಾಗಿಲಲ್ಲಿ ನಿಂತು ಬಾಗಿಲು ಕಾಯುವವನನ್ನು ಕರೆದು ನಿಮ್ಮ ಜೊತೆಯಲ್ಲಾಟವಾಡಿದ ಸ್ನೇಹಿತನಾದ ದ್ರೋಣನೆಂಬ ಬ್ರಾಹ್ಮಣನು ಬಂದಿದ್ದಾನೆಂದು ನಿಮ್ಮ ರಾಜನಿಗೆ ತಿಳಿಯಪಡಿಸು ಹೇಳಿಕಳುಹಿಸಿದಾಗ ದ್ರುಪದನು 'ಅವನಾರೋ ನನಗೆ ತಿಳಿದಿಲ್ಲ. ಅವನನ್ನು ಹೊರಕ್ಕೆ ತಳ್ಳು' ಎಂದು ಆದೇಶಿಸಿದನು. ಆದರೆ ದ್ರೋಣನು ಬಲವಂತವಾಗಿ ಒಳಕ್ಕೆ ನುಗ್ಗಿ ಬಂದು ದ್ರುಪದನಿಗೆ ತಮ್ಮಿಬ್ಬರೂ ಸಹಪಾಠಿಗಳಾಗಿದ್ದ ಸಂದರ್ಭವನ್ನು ಹೇಳಿದಾಗ ದ್ರುಪದನು "ನೀನಾರೋ ನನಗೆ ತಿಳಿದಿಲ್ಲ. ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ?" ಎಂದು ಹೀಯಾಳಿಸಿ ಮಾತನಾಡಿದ್ದನ್ನು ಕೇಳಿ ಕೋಪಗೊಂಡ ದ್ರೋಣನು "ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದೆವೆಂಬ ಒಂದು ಕಾರಣದಿಂದ ನಿನ್ನನ್ನು ಕೊಲ್ಲದೆ ಬಿಡುತ್ತಿದ್ದೇನೆ. ಈ ಸಭಾವಲಯದಲ್ಲಿ ನನ್ನನ್ನು ಹಿಯ್ಯಾಳಿಸಿದ ನಿನ್ನನ್ನು ನನ್ನ ಶಿಷ್ಯರಿಂದ ನೀನು ಬೆಚ್ಚುವಂತೆ ಕಟ್ಟಿಸದೆ ಬಿಟ್ಟರೆ ನಾನು ಮೀಸೆಯನ್ನು ಹೊತ್ತಿರುವುದು ವ್ಯರ್ಥವಲ್ಲವೆ?" ಎಂದು ಶಪಥ ಮಾಡಿದನು.

**ಈ) ಕೊಟ್ಟಿರುವ ಹೇಳಿಕೆಗಳಿಗೆ ಸಂದರ್ಭದೊಡನೆ ಸ್ವಾರಸ್ಯ ಬರೆಯಿರಿ:**

**೧. 'ಈಗಳೊಂದಡಕೆಯುಮಿಲ್ಲ ಕೈಯೊಳ್'**

**ಉ: ಆಯ್ಕೆ:** ಈ ವಾಕ್ಯವನ್ನು ಪಂಪ ಮಹಾಕವಿ ರಚಿಸಿರುವ **'ವಿಕ್ರಮಾರ್ಜುನ ವಿಜಯಂ'** ಕೃತಿಯಿಂದ ಆರಿಸಿಕೊಳ್ಳಲಾಗಿರುವ **'ಕೆಮ್ಮನೆ ಮೀಸೆವೊತ್ತನೇ'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ದ್ರೋಣನು ತನಗೆ ಬಡತನವುಂಟಾಗಲು ಅಶ್ವತ್ಥಾಮನನ್ನೂ ಕರೆದುಕೊಂಡು ದೇಶದೇಶಗಳಲ್ಲೆಲ್ಲ ಸುತ್ತಿ ಪರಶುರಾಮನ ಬಳಿಗೆ ಬಂದು ಸಹಾಯ ಯಾಚಿಸಿದ ಸಂದರ್ಭದಲ್ಲಿ ಪರಶುರಾಮನು "ನನ್ನ ಪದಾರ್ಥಗಳನ್ನೆಲ್ಲ ಬೇಡಿದವರಿಗೆ ಕೊಟ್ಟೆನು. ಭೂಮಂಡಲವನ್ನು ಗುರುಗಳಿಗೆ ಕೊಟ್ಟೆನು. ಈಗ ನನ್ನಲ್ಲಿ ಒಂದಡಕೆಯೂ ಇಲ್ಲ" ಎಂದು ದ್ರೋಣನಿಗೆ ಹೇಳುತ್ತಾನೆ.

**ಸ್ವಾರಸ್ಯ:** ದ್ರೋಣನು ತನ್ನ ಬಳಿ ಬಂದು ಸಹಾಯ ಯಾಚಿಸಿದಾಗ ಪರಶುರಾಮನು ಯಾವುದೇ ಮುಚ್ಚುಮರೆ ಇಲ್ಲದೆ ತನ್ನ ನಿಜ ಸ್ಥಿತಿಯನ್ನು ಹೇಳಿಕೊಳ್ಳುವುದು ಈ ಮಾತಿನಲ್ಲಿ ಸ್ವಾರಸ್ಯ ಪೂರ್ಣವಾಗಿ ವ್ಯಕ್ತವಾಗಿದೆ.

**೨. 'ವಿದ್ಯಾಧನಮೆ ಧನಮಪ್ಪುದು'**

**ಉ: ಆಯ್ಕೆ:** ಈ ವಾಕ್ಯವನ್ನು ಪಂಪ ಮಹಾಕವಿ ರಚಿಸಿರುವ **'ವಿಕ್ರಮಾರ್ಜುನ ವಿಜಯಂ'** ಕೃತಿಯಿಂದ ಆರಿಸಿಕೊಳ್ಳಲಾಗಿರುವ **'ಕೆಮ್ಮನೆ ಮೀಸೆವೊತ್ತನೇ'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ದ್ರೋಣನು ತನ್ನ ಬಳಿ ಬಂದು ಸಹಾಯ ಯಾಚಿಸಿದಾಗ ಪರಶುರಾಮನು "ಎಲೈ ದ್ರೋಣನೆ ಈಗ ಇದೊಂದು ಬಿಲ್ಲೂ ಇದೊಂದು ದಿವ್ಯಾಸ್ತ್ರಗಳ ಸಮೂಹವೂ ಇದೆ. ನನ್ನಲ್ಲಿ ಬೇರೆ ಯಾವುದೇ ಆಸ್ತಿಯಿಲ್ಲ. ಇವುಗಳಲ್ಲಿ ನಿನಗೆ ಯಾವುದನ್ನು ಕೊಡಲಿ? ಚೆನ್ನಾಗಿ ಯೋಚಿಸಿ ಹೇಳು" ಎಂದು ಹೇದ ಸಂದರ್ಭದಲ್ಲಿ ದ್ರೋಣನು "ನನಗೆ ವಿದ್ಯಾಧನವೇ ಧನವಾಗಿರುವುದರಿಂದ ಆ ದಿವ್ಯಾಸ್ತ್ರಗಳನ್ನು ದಯಪಾಲಿಸಬೇಕು" ಎಂದು ಹೇಳುತ್ತಾನೆ.

**ಸ್ವಾರಸ್ಯ:** 'ವಿದ್ಯಾಧನವೇ ನಿಜವಾದ ಸಂಪತ್ತು' ಎಂದು ಹೇಳುವ ಮೂಲಕ ದ್ರೋಣನು ವಿದ್ಯೆಯ ಮಹತ್ವವನ್ನು ತಿಳಿಸಿರುವುದು ಇಲ್ಲಿನ ಸ್ವಾರಸ್ಯವಾಗಿದೆ.

**೩. 'ಎಂತು ನಾಣಿಲಿಗರಪ್ಪರೆ ಮಾನಸರ್'**

**ಉ: ಆಯ್ಕೆ:** ಈ ವಾಕ್ಯವನ್ನು ಪಂಪ ಮಹಾಕವಿ ರಚಿಸಿರುವ **'ವಿಕ್ರಮಾರ್ಜುನ ವಿಜಯಂ'** ಕೃತಿಯಿಂದ ಆರಿಸಿಕೊಳ್ಳಲಾಗಿರುವ **'ಕೆಮ್ಮನೆ ಮೀಸೆವೊತ್ತನೇ'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ದ್ರೋಣನು ದ್ರುಪದನ ಬಳಿಗೆ ಹೋಗಿ "ಅಣ್ಣಾ ನೀನೂ ನಾನೂ ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದುದನ್ನು ತಿಳಿದಿಲ್ಲವೇ?" ಎನ್ನಲು ದ್ರುಪದನು ನನಗೆ ನಿನ್ನ ಪರಿಚಯವಿಲ್ಲ. ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ? ಎಂಬ ಮಾತುಗಳಿಂದ ದ್ರೋಣನಿಗೆ ಹೀಯ್ಯಾಳಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** ತನ್ನ ಸಹಪಾಠಿಯಾಗಿದ್ದ ಆತ್ಮೀಯ ಸ್ನೇಹಿತ ಒಬ್ಬ ಬಡವನೆಂಬ ಕಾರಣಕ್ಕೆ 'ನೀನಾರೋ ನನಗೆ ತಿಳಿದಿಲ್ಲ' ಎಂದು ಹೇಳುವ ದ್ರೋಣನ ಅಹಂಕಾರ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೪. 'ಜಲಕ್ಕನೀಗಳಱಿದೆಂ ಸಿರಿ ಕಳ್ಳೊಡವುಟ್ಟಿತೆಂಬುದಂ'**

**ಉ: ಆಯ್ಕೆ:** ಈ ವಾಕ್ಯವನ್ನು ಪಂಪ ಮಹಾಕವಿ ರಚಿಸಿರುವ 'ವಿಕ್ರಮಾರ್ಜುನ ವಿಜಯಂ' ಕೃತಿಯಿಂದ ಆರಿಸಿಕೊಳ್ಳಲಾಗಿರುವ 'ಕೆಮ್ಮನೆ ಮೀಸೆವೊತ್ತನೇ' ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ತನ್ನ ಬಳಿ ಸಹಾಯ ಕೇಳಲು ಬಂದ ದ್ರೋಣನನ್ನು ಕುರಿತು ದ್ರುಪದನು "ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ?" ಎಂದು ಹೀಯಾಳಿಸಿದ ಸಂದರ್ಭದಲ್ಲಿ ದ್ರೋಣನು "ಐಶ್ವರ್ಯವೆಂಬ ಮದವೇರಿದರೆ ಮಾತಿನಲ್ಲಿ; ಮುಖದಲ್ಲಿ ವಕ್ರತೆಯುಂಟಾಗುತ್ತದೆ; ಸಂಬಂಧವನ್ನು ಮರೆಯುವಂತೆ ಮಾಡುವುದು; ಆದುದರಿಂದ ಐಶ್ವರ್ಯವು ಕಳ್ಳಿನೊಡನೆ(ಹೆಂಡದೊಡನೆ) ಹುಟ್ಟಿತು ಎಂಬುದನ್ನು ಈಗ ನಾನು ತಕ್ಷಣವೇ ಸ್ಪಷ್ಟವಾಗಿ ತಿಳಿದೆನು" ಎಂದು ಹೇಳುತ್ತಾನೆ.

**ಸ್ವಾರಸ್ಯ:** ಸಮುದ್ರ ಮಥನ ಕಾಲದಲ್ಲಿ ಐಶ್ವರ್ಯ(ಲಕ್ಷ್ಮಿ) ಮತ್ತು ಕಳ್ಳು(ಅಮೃತ/ಸುರಪಾನ) ಇವರಡೂ ಹುಟ್ಟಿದವು. ಆ ಘಟನೆಯನ್ನು ದ್ರೋಣನ ಮೂಲಕ ಮಹಾಕವಿ ಪಂಪನು 'ದ್ರುಪದನ ಐಶ್ವರ್ಯ ಮದಕ್ಕೆ' ಅನ್ವಯಮಾಡಿ ಹೇಳಿರುವುದು ಇಲ್ಲಿನ ಸ್ವಾರಸ್ಯವಾಗಿದೆ.

೫. **'ನೊಳವಿಂಗೆ ಕುಪ್ಪೆ ವರಂ'**

**ಉ: ಆಯ್ಕೆ:** ಈ ವಾಕ್ಯವನ್ನು ಪಂಪ ಮಹಾಕವಿ ರಚಿಸಿರುವ 'ವಿಕ್ರಮಾರ್ಜುನ ವಿಜಯಂ' ಕೃತಿಯಿಂದ ಆರಿಸಿಕೊಳ್ಳಲಾಗಿರುವ 'ಕೆಮ್ಮನೆ ಮೀಸೆವೊತ್ತನೇ' ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ದ್ರುಪದನು ಹೀಯಾಳಿಸಿದಾಗ ಕೋಪಗೊಂಡ ದ್ರೋಣನು ದ್ರುಪದನನ್ನು ಕುರಿತು "ಎಲೋ ಖಳನೇ, ನೊಣಕ್ಕೆ ಕಸವೇ ಶ್ರೇಷ್ಠವಾದುದು' ಎನ್ನುವ ಗಾದೆಯ ಹಾಗೆ ನಿನ್ನ ಯೋಗ್ಯತೆ ನನ್ನವರೆಗೂ ಉಂಟೆ? ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದೆವೆಂಬ ಒಂದು ಕಾರಣದಿಂದ ನಿನ್ನನ್ನು ಕೊಲ್ಲಲಾರೆ. ಈ ಸಭಾವಲಯದಲ್ಲಿ ನನ್ನನ್ನು ಹಿಯ್ಯಾಳಿಸಿದ ನಿನ್ನನ್ನು ನನ್ನ ಶಿಷ್ಯರಿಂದ ನಿರಾಯಾಸವಾಗಿ, ನೀನು ಗಾಬರಿಪಡುವಂತೆ ಕಟ್ಟಿಸದೆ ಬಿಟ್ಟರೆ ನಾನು ಮೀಸೆಯನ್ನು ಹೊತ್ತಿರುವುದು ವ್ಯರ್ಥವಲ್ಲವೆ?" ಎಂದು ಶಪಥ ಮಾಡುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** 'ನೊಣಕ್ಕೆ ಕಸವೇ ಶ್ರೇಷ್ಠ' ಎಂಬಂತೆ ವ್ಯಕ್ತಿಯ ಯೋಗ್ಯತೆಗೆ ತಕ್ಕಂತೆ ಗುಣ–ನಡತೆ–ಅಭಿರುಚಿಗಳಿರುತ್ತವೆ ಎಂಬುದು ಇಲ್ಲಿ ಸ್ವಾರಸ್ಯಪೂರ್ಣವಾಗಿದೆ.

## ಭಾಷಾ ಚಟುವಟಿಕೆ

**ಅ) ಕೊಟ್ಟಿರುವ ಪದಗಳನ್ನು ಬಿಡಿಸಿ, ಸಂಧಿ ಹೆಸರಿಸಿ.**

**ವಲ್ಕಲಾವೃತ** = ವಲ್ಕಲ + ಆವೃತ – ಸವರ್ಣದೀರ್ಘಸಂಧಿ
**ದ್ರವ್ಯಾರ್ಥಿ** = ದ್ರವ್ಯ + ಅರ್ಥಿ – ಸವರ್ಣದೀರ್ಘಸಂಧಿ
**ನಿಮ್ಮರಸ** = ನಿಮ್ಮ + ಅರಸ – ಲೋಪಸಂಧಿ
**ಮದೋನ್ಮತ್ತ** = ಮದ + ಉನ್ಮತ್ತ – ಗುಣಸಂಧಿ
**ಕಳ್ಗುಡಿ** = ಕಳ್ + ಕುಡಿ – ಆದೇಶಸಂಧಿ

**ಆ) ಕೊಟ್ಟಿರುವ ಪದಗಳನ್ನು ವಿಗ್ರಹ ವಾಕ್ಯ ಮಾಡಿ, ಸಮಾಸ ಹೆಸರಿಸಿ.**

**ನಾಣಿಲಿ** = ನಾಣು(ನಾಚಿಕೆ) ಇಲ್ಲದವನು ಯಾರೋ ಅವನೇ ನಾಣಿಲಿ(ನಾಚಿಕೆಗೇಡಿ) – ಬಹುವ್ರೀಹಿ ಸಮಾಸ
**ದಿವ್ಯಶರಾಳಿ** = ದಿವ್ಯವಾದ + ಶರಾಳಿ – ಕರ್ಮಧಾರಯ ಸಮಾಸ
**ಮಹೀಪತಿ** = ಮಹಿ(ಭೂಮಿ)ಗೆ ಪತಿ(ಒಡೆಯ) ಆದವನು ಯಾರೋ ಅವನೇ ಮಹೀಪತಿ(ರಾಜ) – ಬಹುವ್ರೀಹಿ ಸಮಾಸ
**ಕಳ್ಗುಡಿದ** = ಕಳ್ಳಂ(ಕಳ್ಳನ್ನು) + ಕುಡಿದ – ಕ್ರಿಯಾ ಸಮಾಸ

**ಇ) ಕೊಟ್ಟಿರುವ ವಾಕ್ಯದಲ್ಲಿರುವ ಅಲಂಕಾರವನ್ನು ಗುರುತಿಸಿ, ಲಕ್ಷಣದೊಂದಿಗೆ ಸಮನ್ವಯಗೊಳಿಸಿ.**

***"ನೊಳವಿಂಗೆ ಕುಪ್ಪೆ ವರಮೆಂಬವೊಲಾಂಬರಮುಂಟೆ ನಿನ್ನ ದೊಂದಳವು?"***

**ಅಲಂಕಾರ:** ಉಪಮಾಲಂಕಾರ

**ಲಕ್ಷಣ:** ಎರಡು ವಸ್ತುಗಳಿಗಿರುವ ಸಾದೃಶ್ಯಸಂಪತ್ತನ್ನು ಪರಸ್ಪರ ಹೋಲಿಸಿ ವರ್ಣಿಸಿದರೆ ಅದು 'ಉಪಮಾಲಂಕಾರ'.

**ಉಪಮೇಯ:** ದ್ರುಪದನ ಅಳವು(ಯೋಗ್ಯತೆ/ಪರಾಕ್ರಮ)

**ಉಪಮಾನ:** ಕುಪ್ಪೆಯನ್ನೇ ಶ್ರೇಷ್ಠವೆಂದು ಭಾವಿಸಿದ ನೊಳ(ನೊಣ)

**ಉಪಮಾ ವಾಚಕ:** ವೊಲ್

**ಸಮನ್ವಯ:** ಇಲ್ಲಿ ಉಪಮೇಯವಾಗಿರುವ ದ್ರುಪದನ ಯೋಗ್ಯತೆಯನ್ನು ಕುಪ್ಪೆಯನ್ನೇ ಶ್ರೇಷ್ಠವೆಂದು ಭಾವಿಸಿದ ನೊಳ(ನೊಣ)ಕ್ಕೆ ಹೋಲಿಸಲಾಗಿರುವುದರಿಂದ ಇದು **ಉಪಮಾಲಂಕಾರ**ವಾಗಿದೆ.

**ಈ) ಕೊಟ್ಟಿರುವ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ.**

ಳ ಳ ಳ =೧೨
ಅಂತೆಂ | ಬನಾರ್ಗೆ | ಪಿರಿದುಂ|

ಳ ಳ ಳ ಳ ಳ =೨೦
ಭ್ರಾಂತುದ | ಲೇಂದ್ರೋ | ಣನೆಂಬ | ನೇಂಪಾ |ರ್ವನೆಪೇ|

ಛಂದಸ್ಸು–ಕಂದಪದ್ಯ

ನ ಜ ಭ ಜ ಜ ಜ ರ
ಖಳನೊ | ಳವಿಂಗೆ | ಕುಪ್ಪೆವ | ರಮೆಂಬ | ವೊಲಾಂಬ | ರಮುಂಟೆ | ನಿನ್ನದೊಂ

ಛಂದಸ್ಸು– ಚಂಪಕಮಾಲಾವೃತ್ತ

*********

# ಗದ್ಯ-೮. ಸುಕುಮಾರಸ್ವಾಮಿಯ ಕಥೆ

**ಲೇಖಕರ ಪರಿಚಯ: ಶಿವಕೋಟ್ಯಾಚಾರ್ಯ**

**ಶಿವಕೋಟ್ಯಾಚಾರ್ಯ** ಕನ್ನಡದ ಪ್ರಥಮ ಗದ್ಯಕೃತಿ **'ವಡ್ಡಾರಾಧನೆ'**ಯ ಕರ್ತೃ. ಇವನ ಕಾಲ **ಕ್ರಿ. ಶ. ಸುಮಾರು ೧೦ ನೆಯ ಶತಮಾನ.** ಬಳ್ಳಾರಿ ಜಿಲ್ಲೆಯ ಹೂವಿನ ಹಡಗಲಿ ತಾಲ್ಲೂಕಿನ **ಕೋಗಳಿ ನಾಡಿನವನು.** ಜೈನ ಧಾರ್ಮಿಕ ಕಥೆಗಳ ಸಂಗ್ರಹವಾದ **ವಡ್ಡಾರಾಧನೆಯಲ್ಲಿ ೧೯ ಕಥೆಗಳಿವೆ.** ಈ ಕಥೆಗಳ ನಾಯಕರೆಲ್ಲ ಧರ್ಮವೀರರು. ಕೆಲವರು ಮೋಕ್ಷವನ್ನು ಸಂಪಾದಿಸಿಕೊಳ್ಳುತ್ತಾರೆ. ಕೆಲವರು ಸರ್ವಾರ್ಥಸಿದ್ಧಿಯೆಂಬ ಸ್ವರ್ಗಕ್ಕೆ ಹೋಗುತ್ತಾರೆ ಎಂದು ಈ ಕಥೆಗಳು ಸಾರುತ್ತವೆ.

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

**೧. ಸುಕುಮಾರಸ್ವಾಮಿಯ ತಂದೆತಾಯಿಗಳ ಹೆಸರೇನು?**

ಉ: ಸುಕುಮಾರಸ್ವಾಮಿಯ ತಂದೆ ಸೂರದತ್ತ, ತಾಯಿ ಯಶೋಭದ್ರೆ.

**೨. ಸುಕುಮಾರಸ್ವಾಮಿಗೆ ಯಾವ ಪಟ್ಟವನ್ನು ಕಟ್ಟಲಾಯಿತು?**

ಉ: ಸುಕುಮಾರಸ್ವಾಮಿಗೆ ಸೆಟ್ಟಿಯ ಪಟ್ಟವನ್ನು ಕಟ್ಟಲಾಯಿತು.

**೩. ನೈಮಿತ್ತಿಕನು ಸುಕುಮಾರಸ್ವಾಮಿಯ ಬಗ್ಗೆ ಏನು ಹೇಳಿದನು?**

ಉ: ನೈಮಿತ್ತಿಕನು "ಎಂದು ಈತನು ಋಷಿಗಳನ್ನು ನೋಡುವನೋ ಅಂದು ತಪಸ್ಸಿಗೆ ಹೋಗುತ್ತಾನೆ" ಎಂದು ಹೇಳಿದನು.

**೪. ಯಶೋಭದ್ರೆಯು ರತ್ನ ಕಂಬಳಿಗಳನ್ನು ಯಾರಿಗೆ ಕೊಟ್ಟಳು?**

ಉ: ಯಶೋಭದ್ರೆಯು ರತ್ನ ಕಂಬಳಿಗಳನ್ನು ತನ್ನ ಮೂವತ್ತೆರಡು ಸೊಸೆಯರಿಗೆ ಕೊಟ್ಟಳು.

**೫. ಅರಸ ವೃಷಭಾಂಕನ ಉಂಗುರವು ಯಾವಾಗ ಕೆಳಕ್ಕೆ ಬಿದ್ದಿತು?**

ಉ: ಅರಸ ವೃಷಭಾಂಕನ ಉಂಗುರವು ಮಜ್ಜನ(ಸ್ನಾನ) ಮಾಡುವ ಸಮಯದಲ್ಲಿ ಕೆಳಕ್ಕೆ ಬಿದ್ದಿತು.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಸುಕುಮಾರಸ್ವಾಮಿಯು ಹೇಗೆ ಸುಖಭೋಗಗಳನ್ನು ಅನುಭವಿಸುತ್ತಿದ್ದನು?**

**ಉ:** ಸುಕುಮಾರಸ್ವಾಮಿಯು ತಾರುಣ್ಯವನ್ನು ಪಡೆದು ಅತ್ಯಂತ ರೂಪ ಲಾವಣ್ಯ ಸೌಭಾಗ್ಯ ಕಾಂತಿಯಿಂದ ಕೂಡಿದವನಾದನು. ಅವನಿಗೆ ಮೂವತ್ತೆರಡು ಲತಾಗೃಹಗಳೂ ಅತ್ಯಂತ ರೂಪ, ಲಾವಣ್ಯ, ಸೌಭಾಗ್ಯ, ಕಾಂತಿ, ಹಾವ, ಭಾವ, ವಿಲಾಸ, ವಿಭ್ರಮಗಳಿಂದ ಕೂಡಿದ ದೇವತಾಸ್ತ್ರೀಯರನ್ನು ಹೋಲುವ ಮೂವತ್ತೆರಡು ಮಂದಿ ದಿವ್ಯರಾದ ಸ್ತ್ರಿಯರೂ ಇದ್ದರು, ಮೂವತ್ತೆರಡು ಬಗೆಯ ನಾಟ್ಯಗಳು, ಮೂವತ್ತೆರಡು ಕೋಟಿ ಹೊನ್ನು, ಐದು ಬಗೆಯ ರತ್ನಗಳು ಎಂಬಿವೆಲ್ಲವುಗಳನ್ನು ಹೊಂದಿದ್ದ ಸುಕುಮಾರಸ್ವಾಮಿ ಎಲ್ಲಾ ರೀತಿಯ ಸುಖಗಳನ್ನು ಅನುಭವಿಸುತ್ತಿದ್ದನು.

**೨. ಅರಸ ವೃಷಭಾಂಕನು ಆಶ್ಚರ್ಯಗೊಳ್ಳಲು ಕಾರಣವೇನು?**

**ಉ:** ಒಮ್ಮೆ ಒಬ್ಬ ವರ್ತಕನು ಲಕ್ಷದೀನಾರ (ಚಿನ್ನದ ನಾಣ್ಯ)ಗಳ ಬೆಲೆಬಾಳುವ ರತ್ನಗಂಬಳಿಗಳನ್ನು ಮಾರಲು ಉಜ್ಜಯಿನಿಗೆ ತೆಗೆದುಕೊಂಡು ಬಂದಿದ್ದಾಗ ಆ ಪಟ್ಟಣವನ್ನಾಳುವ ವೃಷಭಾಂಕನೆಂಬ ರಾಜ ಮತ್ತು ಮಹಾರಾಣಿ ಅವುಗಳ ಬೆಲೆ ಹೆಚ್ಚಾಯಿತೆಂದು ಕ್ರಯಕ್ಕೆ ಕೊಳ್ಳಲಿಲ್ಲ. ಆದರೆ ಸುಕುಮಾರ ಸ್ವಾಮಿಯ ತಾಯಿ ಅಷ್ಟೂ ಬೆಲೆಕೊಟ್ಟು ಖರೀದಿಸಿ ಅವುಗಳನ್ನು ಮೂವತ್ತೆರಡು ತುಂಡುಗಳನ್ನಾಗಿ ಮಾಡಿ ಸೊಸೆಯಂದಿರಿಗೆ ಪಾದುಕೆಗಳಿಗೆ ಸಿಕ್ಕಿಸಿಕೊಳ್ಳಲು ಕೊಟ್ಟಳು. ಈ ಸಂಗತಿಯನ್ನು ತಿಳಿದು ರಾಜನು ಆಶ್ಚರ್ಯಪಟ್ಟನು.

**೩. ವೃಷಭಾಂಕನು ಸುಕುಮಾರಸ್ವಾಮಿಗೆ ವ್ಯಾದಿಯಿದೆ ಎಂದುಕೊಳ್ಳಲು ಕಾರಣವೇನು?**

ಉ: ವೃಷಭಾಂಕನು ಸುಕುಮಾರ ಸ್ವಾಮಿಯ ಮನೆಗೆ ಆಗಮಿಸಿದಾಗ, ಸ್ವಜನರೂ ಸೇವಕರೂ ಬಿಳಿ ಸಾಸುವೆಗಳನ್ನು ಮಂಗಳಕರವೆಂದು ಇಬ್ಬರಿಗೂ ಮಂತ್ರಾಕ್ಷತೆಯನ್ನು ಹಾಕಿದರು. ಆ ಬಿಳಿ ಸಾಸವೆಕಾಳುಗಳು ಸುಕುಮಾರಸ್ವಾಮಿ ಕುಳಿತಿದ್ದ ಆಸನದಲ್ಲಿ ಒತ್ತುತ್ತಿದುದರಿಂದ ಸೊಂಟವನ್ನು ಅತ್ತಿತ್ತ ಹೊರಳಾಡಿಸುತ್ತಿದ್ದುದನ್ನೂ ದೀಪ ನೋಡಿದಾಗ ಅವನಗೆ ಕಣ್ಣೀರು ಸುರಿಯುತ್ತಿತ್ತು. ಅಲ್ಲದೆ ಊಟಮಾಡುವಾಗ ಸುಕುಮಾರಸ್ವಾಮಿ ಆಹಾರದ ಅರ್ಧಾಂಶವನ್ನು ನುಂಗುತ್ತಾ ಇನ್ನುಳಿದ ಅರ್ಧಾಂಶ ಆಹಾರವನ್ನು ಉಗುಳುತ್ತಿದ್ದನು. ಅದನ್ನು ಅರಸನು ನೋಡಿ ಸುಕುಮಾರಸ್ವಾಮಿಗೆ ವ್ಯಾದಿಯಿದೆ ಎಂದು ಭಾವಿಸಿದನು.

**೪. ಸುಕುಮಾರಸ್ವಾಮಿಯ ವ್ಯಾದಿಗೆ ಮದ್ದನ್ನು ಏಕೆ ಮಾಡಿಸಿಲ್ಲ ಎಂದು ಅರಸನು ಕೇಳಿದಾಗ ತಾಯಿ ಯಶೋಭದ್ರೆಯು ಏನೆಂದು ಹೇಳಿದಳು?**

**ಉ:** ಅರಸ ವೃಷಭಾಂಕನು ಯಶೋಭದ್ರೆಯನ್ನು ಕುರಿತು "ಸುಕುಮಾರನಿಗೆ ಸೊಂಟದ ರೋಗಕ್ಕೂ ಕಣ್ಣೀರು ಸುರಿಯುವುದಕ್ಕೂ ಊಟ ಸೇರದಿರುವುದಕ್ಕೂ ಏಕೆ ಔಷಧ ಮಾಡಿಸಿಲ್ಲ?" ಎಂದು ಕೇಳಿದಾಗ ಅವಳು "ಒಡೆಯರೇ, ಇವು ರೋಗಗಳಲ್ಲ. ಮಂತ್ರಾಕ್ಷತೆಯಾಗಿ ಹಾಕಿದ ಬಿಳಿ ಸಾಸವೆಗಳು ಒತ್ತಿದುದರಿಂದ ಸಹಿಸದಾದನು. ಅವನು ಯಾವಾಗಲೂ ಮಾಣಿಕ್ಯ ರತ್ನದ ಬೆಳಕಿನಲ್ಲಿ ಇರುವುದರಿಂದ ದೀಪದ ಬೆಳಕನ್ನು ಸಹಿಸಲಾರದೆ ಅವನ ಕಣ್ಣಿನಲ್ಲಿ ನೀರು ಬರುತ್ತಿತ್ತು. ನೀವು ಬಂದ ಸಂದರ್ಭದಲ್ಲಿ ತಾವರೆ ನೈದಿಲೆ ಹೂಗಳ ಸುವಾಸನೆಯಿಂದ ಕೂಡಿದ ಅಕ್ಕಿಯೊಂದಿಗೆ ಬೇರೆ ಅಕ್ಕಿಯನ್ನು ಮಿಶ್ರಮಾಡಿ ಬೇಯಿಸಿದ ಅನ್ನವನ್ನು ಬಡಿಸಿದ್ದರಿಂದ ಅವನು ಸುವಾಸನೆಯ ಅಕ್ಕಿಯ ಅನ್ನವನ್ನು ನುಂಗುತ್ತಿದ್ದನು, ಉಳಿದ ಅನ್ನವನ್ನು ಉಗುಳುತ್ತಿದ್ದನು. ಆದುದರಿಂದಲೇ ಇವನಿಗೆ ಈ ಅವಸ್ಥೆಗಳಾಗಿವೆ" ಎಂದು ಹೇಳಿದಳು. ಅದನ್ನು ಕೇಳಿ ಅರಸನು ಆಶ್ಚರ್ಯಪಟ್ಟನು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

೧. ಸುಕುಮಾರಸ್ವಾಮಿಯ ಕಥೆಯನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

ಉಜ್ಜಯಿನಿಯೆಂಬ ಪಟ್ಟಣದಲ್ಲಿ ಯಶೋಭದ್ರೆ ಮತ್ತು ಸೂರದತ್ತ ಎಂಬ ದಂಪತಿಗೆ ಸುಕುಮಾರಸ್ವಾಮಿಯೆಂಬ ಮಗ ಜನಿಸಿದನು. ಆ ದಿನವೇ ವೈರಾಗ್ಯವುಂಟಾಗಿ ಸೂರದತ್ತ ಸೆಟ್ಟಿಯು ಸುಕುಮಾರಸ್ವಾಮಿಗೆ ಸೆಟ್ಟಿ ಪಟ್ಟವನ್ನು ಕಟ್ಟಿ ತಪಸ್ಸಿಗೆ ತೆರಳಿದನು. ಸುಕುಮಾರಸ್ವಾಮಿಯು ಬೆಳೆದು ದೊಡ್ಡವನಾಗಿ ಅತ್ಯಂತ ಸುಂದರನಾಗಿದ್ದನಲ್ಲದೆ ಬಹಳ ವೈಭವ-ಸುಖ-ಸಂತೋಷಗಳಿಂದ ಕೂಡಿದ್ದನು. ಒಂದು ದಿನ ಅರಮನೆಗೆ ಬಂದ ಒಬ್ಬ ಜೋಯಿಸನು "ಈ ಸುಕುಮಾರಸ್ವಾಮಿ ಯಾವಾಗ ಋಷಿಗಳ ರೂಪವನ್ನು ಕಾಣುವನೋ ಅಂದೇ ತಪಸ್ಸಿಗೆ ತೆರಳುವನು" ಎಂದು ಭವಿಷ್ಯನುಡಿದುದನ್ನು ಕೇಳಿದ ಯಶೋಭದ್ರೆ ತನ್ನ ಮನೆಗೆ ಋಷಿಗಳು ಪ್ರವೇಶಿಸದಂತೆ ಕಾವಲಿಟ್ಟಳು.

ರಾಜನೇ ಕೊಂಡುಕೊಳ್ಳಾಗದ ರತ್ನಗಂಬಳಿಗಳನ್ನು ಸುಕುಮಾರ ಸ್ವಾಮಿಯ ತಾಯಿ ಲಕ್ಷದಿನಾರ ಕೊಟ್ಟು ಖರೀದಿಸಿ ಅವುಗಳನ್ನು ಮೂವತ್ತೆರಡು ತುಂಡುಗಳನ್ನಾಗಿ ಮಾಡಿ ಸೊಸೆಯಂದಿರಿಗೆ ಪಾದುಕೆಗಳಿಗೆ ಸಿಕ್ಕಿಸಿಕೊಳ್ಳಲು ಕೊಟ್ಟಳು. ಈ ಸಂಗತಿಯನ್ನು ರಾಜ ವೃಷಭಾಂಕನು ತಿಳಿದು ಆಶ್ಚರ್ಯಪಟ್ಟು ಅವರ ವೈಭವವನ್ನು ನೋಡಲು ಸುಕುಮಾರಸ್ವಾಮಿಯ ಮನೆಗೆ ಬಂದಾಗ ರತ್ನಾದಿಗಳಿಂದ ಸ್ವಾಗತಿಸಿದರು.

ಮನೆಗೆ ಬಂದ ರಾಜನ ಅಪೇಕ್ಷೆಯಂತೆ ಯಶೋಭದ್ರೆ ಮಾಳಿಗೆಗೆ ಹೋಗಿ ಸುಕುಮಾರಸ್ವಾಮಿಯನ್ನು ಕರೆತಂದಳು. ಅವನನ್ನು ನೋಡಿದ ರಾಜನು 'ನಾನು ಕಣ್ಣನ್ನು ಪಡೆದದ್ದು ಇಂದು ಸಾರ್ಥಕವಾಯಿತು' ಎಂದು ಅಪ್ಪಿಕೊಂಡು ಶ್ರೇಷ್ಠವಾದ ಆಸನದ ಮೇಲೆ ತನ್ನ ಜೊತೆಯಲ್ಲಿ ಕುಳ್ಳಿರಿಸಿಕೊಂಡನು. ಆಗ ಮಂಗಳಕರವೆಂದು ಸೇವಕರು ಬಿಳಿ ಸಾಸುವೆಗಳನ್ನು ಇಬ್ಬರಿಗೂ ಮಂತ್ರಾಕ್ಷತೆಯನ್ನು ಹಾಕಿದರು. ಆ ಬಿಳಿ ಸಾಸವೆಕಾಳುಗಳು ಸುಕುಮಾರಸ್ವಾಮಿ ಕುಳಿತಿದ್ದ ಆಸನದಲ್ಲಿ ಒತ್ತುತ್ತಿದ್ದುದರಿಂದ ಅವನು ಸೊಂಟವನ್ನು ಅತ್ತಿತ್ತ ಹೊರಳಾಡಿಸುತ್ತಿದ್ದುದನ್ನೂ ದೀಪ ನೋಡಿದಾಗ ಕಣ್ಣೀರು ಸುರಿವುದನ್ನೂ ಕಂಡು ಈತನಿಗೆ ಏನೋ ರೋಗವಿದೆ ಎಂದು ಭಾವಿಸಿಕೊಂಡಿದ್ದನು. ನಂತರ ರಾಜನು ಸುಕುಮಾರಸ್ವಾಮಿಯ ಮನೆಯಲ್ಲಿದ್ದ ಕೆರೆಯಲ್ಲಿ ಸ್ನಾನ ಮಾಡುತ್ತಿದ್ದಾಗ ಅವನ ಬೆರಳಿನಲ್ಲಿದ್ದ ಅಮೂಲ್ಯವಾದ ಉಂಗುರ ಬಿದ್ದು ಹೋಯಿತು. ಅದನ್ನು ಹುಡುಕುವುದಕ್ಕಾಗಿ ಆ ಕೆರೆಯ ಎದುರಿನ ತೂಬನ್ನು ತೆಗೆದು ನೀರನ್ನು ಬಿಟ್ಟನು. ಅಲ್ಲಿ ರಾಶಿರಾಶಿಯಾಗಿದ್ದ ರತ್ನಗಳ ಹಲವು ಆಭರಣಗಳನ್ನು ಕಂಡು ಬಹಳ ಆಶ್ಚರ್ಯಪಟ್ಟನು.

ಅನಂತರ ಊಟಮಾಡುತ್ತಿರುವಾಗ ಸುಕುಮಾರಸ್ವಾಮಿ ಆಹಾರದ ಅರ್ಧಾಂಶವನ್ನು ನುಂಗುತ್ತಿದ್ದನು, ಇನ್ನುಳಿದ ಅರ್ಧಾಂಶ ಆಹಾರವನ್ನು ಉಗುಳುತ್ತಿದ್ದನು. ಊಟದ ಬಳಿಕ ಅರಸನು ಯಶೋಭದ್ರೆಯನ್ನು ಕುರಿತು "ಸುಕುಮಾರನಿಗೆ ಸೊಂಟದ ರೋಗಕ್ಕೂ ಕಣ್ಣೀರು ಸುರಿಯುವುದಕ್ಕೂ ಊಟ ಸೇರದಿರುವುದಕ್ಕೂ ಏಕೆ ಔಷಧ ಮಾಡಿಸಿಲ್ಲ?" ಎಂದು ಕೇಳಿದಾಗ ಆಕೆ "ಒಡೆಯರೆ, ಅವನಿಗೆ ಇವು ರೋಗಗಳಲ್ಲ. ಮಂತ್ರಾಕ್ಷತೆಯಾಗಿ ಹಾಕಿದ ಬಿಳಿ ಸಾಸವೆಗಳು ಒತ್ತಿದುದರಿಂದ ಸಹಿಸದಾದನು. ಯಾವಾಗಲೂ ಮಾಣಿಕ್ಯ ರತ್ನದ ಬೆಳಕಿನಲ್ಲಿ ಇರುತ್ತಿದ್ದ ಅವನು ಇಂದು ದೀಪದ ಬೆಳಕನ್ನು ಸಹಿಸಲಾರದೆ ಅವನ ಕಣ್ಣಿನಲ್ಲಿ ನೀರು ಬರುತ್ತಿತ್ತು. ನೀವು ಬಂದ ಸಂದರ್ಭದಲ್ಲಿ ತಾವರೆ ನೈದಿಲೆ ಹೂಗಳ ಸುವಾಸನೆಯಿಂದ ಕೂಡಿದ ಅಕ್ಕಿಯೊಂದಿಗೆ ಬೇರೆ ಅಕ್ಕಿಯನ್ನು ಮಿಶ್ರಮಾಡಿ ಬೇಯಿಸಿದ ಅನ್ನವನ್ನು ಬಡಿಸಿದ್ದರಿಂದ ಅವನು ಸುವಾಸನೆಯ ಅಕ್ಕಿಯ ಅನ್ನವನ್ನು ನುಂಗುತ್ತಿದ್ದನು, ಉಳಿದ ಅನ್ನವನ್ನು ಉಗುಳುತ್ತಿದ್ದನು. ಆದುದರಿಂದಲೇ ಇವನಿಗೆ ಈ ಅವಸ್ಥೆಗಳಾಗಿವೆ" ಎಂದು ಹೇಳಿದಳು. ಅದನ್ನೆಲ್ಲ ಕೇಳಿ ಅರಸನು ಆಶ್ಚರ್ಯಪಟ್ಟನು. "ಈತನ ಒಂದು ಕ್ಷಣದ ಸುಖ-ಭೋಗಗಳಿಗೆ ನನ್ನ ಇಡೀ ಅರಸುತನದ ಕಾಲದಲ್ಲಿ ಅನುಭವಿಸಿದ ಭೋಗ ? ಉಪಭೋಗಗಳು ಸಮಾನವಾಗುವುದಿಲ್ಲ. ಆದುದರಿಂದ "ಲೋಕದಲ್ಲಿ ನಿಜವಾಗಿಯೂ ಈತನೇ ಸುಖಿ" ಎಂದು ಸಂತಸಗೊಂಡು ಅರಸನು ಅವನಿಗೆ 'ಅವಂತಿ ಸುಕುಮಾರ' ಎಂದು ಹೆಸರನ್ನಿಟ್ಟನು.

**೨. 'ಸುಕುಮಾರ' – ಎಂಬ ಹೆಸರು ಸುಕುಮಾರ ಸ್ವಾಮಿಗೆ ಹೇಗೆ ಅನ್ವರ್ಥವಾಗುತ್ತದೆ? ವಿವರಿಸಿ.**

ಸುಕುಮಾರಸ್ವಾಮಿಯು ಶ್ರೀಮಂತಿಕೆ-ಗುಣ-ಸೌಂದರ್ಯದಲ್ಲಿ ವೈಭವದಿಂದ ಕೂಡಿದ್ದು ಅವನಿಗೆ 'ಸುಕುಮಾರ' ಎಂಬ ಹೆಸರು ಅನ್ವರ್ಥವಾಗಿ ಒಪ್ಪುತ್ತದೆ ಎಂಬುದಕ್ಕೆ ಅನೇಕ ನಿದರ್ಶನಗಳನ್ನು ನೀಡಬಹುದು.

ಅವನು ಅತ್ಯಂತ ರೂಪ ಲಾವಣ್ಯ ಸೌಭಾಗ್ಯ ಕಾಂತಿಯಿಂದ ಕೂಡಿದವನಾದನು. ಅವನಿಗೆ ಮೂವತ್ತೆರಡು ಲತಾಗೃಹಗಳೂ ಅತ್ಯಂತ ರೂಪ, ಲಾವಣ್ಯ, ಸೌಭಾಗ್ಯ, ಕಾಂತಿ, ಹಾವ, ಭಾವ, ವಿಲಾಸ, ವಿಭ್ರಮಗಳಿಂದ ಕೂಡಿದ ದೇವತಾಸ್ತ್ರೀಯರನ್ನು ಹೋಲುವ ಮೂವತ್ತೆರಡು ಮಂದಿ ದಿವ್ಯರಾದ ಸ್ತ್ರಿಯರೂ ಇದ್ದರು, ಮೂವತ್ತೆರಡು ಬಗೆಯ ನಾಟ್ಯಗಳು, ಮೂವತ್ತೆರಡು ಕೋಟಿ ಹೊನ್ನು, ಐದು ಬಗೆಯ ರತ್ನಗಳು ಎಂಬಿವೆಲ್ಲವುಗಳನ್ನು ಹೊಂದಿದ್ದ ಸುಕುಮಾರಸ್ವಾಮಿ ಎಲ್ಲಾ ರೀತಿಯ ಸುಖಗಳನ್ನು ಅನುಭವಿಸುತ್ತಿದ್ದನು.

ಅರಸನಾದ ವೃಷಭಾಂಕನು ಮನೆಗೆ ಬಂದಾಗ ಸುಕುಮಾರಸ್ವಾಮಿಯ ಮನೆಯ ಸೇವಕರು ಬಿಳಿ ಸಾಸುವೆಗಳನ್ನು ಮಂಗಳಕರವೆಂದು ಹಾಕಿದರು. ಆಗ ಬಿಳಿ ಸಾಸವೆಕಾಳುಗಳು ಸುಕುಮಾರಸ್ವಾಮಿ ಕುಳಿತಿದ್ದ ಆಸನದಲ್ಲಿ ಒತ್ತುತ್ತಿದುದರಿಂದ ಅವನು ಸೊಂಟವನ್ನು ಅತ್ತಿತ್ತ ಹೊರಳಾಡಿಸುತ್ತಿದ್ದನು. ದೀಪ ನೋಡಿದಾಗ ಅವನಿಗೆ ಕಣ್ಣೀರು ಸುರಿಯುತ್ತಿತ್ತು. ಅಲ್ಲದೆ ಊಟಮಾಡುವಾಗ ಸುಕುಮಾರಸ್ವಾಮಿ ಆಹಾರದ ಅರ್ಧಾಂಶವನ್ನು ನುಂಗುತ್ತಾ ಇನ್ನುಳಿದ ಅರ್ಧಾಂಶ ಆಹಾರವನ್ನು ಉಗುಳುತ್ತಿದ್ದನು. ಅದನ್ನು ಅರಸನು ನೋಡಿ ಸುಕುಮಾರಸ್ವಾಮಿಗೆ ವ್ಯಾದಿಯಿದೆ ಎಂದು ಭಾವಿಸಿದನು. ಅದನ್ನೆಲ್ಲ ನೋಡಿ ರಾಜನು ಯಶೋಭದ್ರೆಯನ್ನು ಈ ಬಗ್ಗೆ ವಿಚಾರಿಸಿದಾಗ ಅವಳು "ಒಡೆಯರೆ, ಅವನಿಗೆ ಇವು ರೋಗಗಳಲ್ಲ. ಮಂತ್ರಾಕ್ಷತೆಯಾಗಿ ಹಾಕಿದ ಬಿಳಿ ಸಾಸವೆಗಳು ಒತ್ತಿದುದರಿಂದ ಸಹಿಸದಾದನು. ಯಾವಾಗಲೂ ಮಾಣಿಕ್ಯ ರತ್ನದ ಬೆಳಕಿನಲ್ಲಿ ಇರುತ್ತಿದ್ದ ಅವನು ಇಂದು ದೀಪದ ಬೆಳಕನ್ನು ಸಹಿಸಲಾರದೆ ಅವನ ಕಣ್ಣಿನಲ್ಲಿ ನೀರು ಬರುತ್ತಿತ್ತು. ನೀವು ಬಂದ ಸಂದರ್ಭದಲ್ಲಿ ತಾವರೆ ನೈದಿಲೆ ಹೂಗಳ ಸುವಾಸನೆಯಿಂದ ಕೂಡಿದ ಅಕ್ಕಿಯೊಂದಿಗೆ ಬೇರೆ ಅಕ್ಕಿಯನ್ನು ಮಿಶ್ರಮಾಡಿ ಬೇಯಿಸಿದ ಅನ್ನವನ್ನು ಬಡಿಸಿದ್ದರಿಂದ ಅವನು ಸುವಾಸನೆಯ ಅಕ್ಕಿಯ ಅನ್ನವನ್ನು ನುಂಗುತ್ತಿದ್ದನು, ಉಳಿದ ಅನ್ನವನ್ನು ಉಗುಳುತ್ತಿದ್ದನು. ಆದುದರಿಂದಲೇ ಇವನಿಗೆ ಈ ಅವಸ್ಥೆಗಳಾಗಿವೆ" ಎಂದು ಹೇಳಿದಳು.

ಅದನ್ನು ಕೇಳಿದ ಕೂಡಲೇ ಸ್ವತಃ ರಾಜನೇ "ಈತನ ಒಂದು ಕ್ಷಣದ ಸುಖ-ಭೋಗಗಳಿಗೆ ನನ್ನ ಇಡೀ ಅರಸುತನದ ಕಾಲದಲ್ಲಿ ಅನುಭವಿಸಿದ ಭೋಗ? ಉಪಭೋಗಗಳು ಸಮಾನವಾಗುವುದಿಲ್ಲ. ಆದುದರಿಂದ "ಲೋಕದಲ್ಲಿ ನಿಜವಾಗಿಯೂ ಈತನೇ ಸುಖಿ" ಎಂದು ಸಂತಸಗೊಂಡು ಅರಸನು ಅವನಿಗೆ 'ಅವಂತಿ ಸುಕುಮಾರ' ಎಂದು ಹೆಸರನ್ನಿಟ್ಟನು. ಈ ಎಲ್ಲಾ ಕಾರಣಗಳಿಂದ ಸುಕುಮಾರಸ್ವಾಮಿಗೆ 'ಸುಕುಮಾರ' ಎಂಬ ಹೆಸರು ಅನ್ವರ್ಥವಾಗಿ ಒಪ್ಪುತ್ತದೆಂದು ಹೇಳಬಹುದು.

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ರಿಸಿಯರ ರೂಪಂ ಕಾಣ್ಬುಮಂದೀತನುಂ ತಪಂಬಡುಗುಮ್"**

**ಆಯ್ಕೆ:** ಈ ವಾಕ್ಯವನ್ನು ಶಿವಕೋಟ್ಯಾಚಾರ್ಯರು ಬರೆದಿರುವ 'ವಡ್ಡಾರಾಧನೆ' ಎಂಬ ಕೃತಿಯಿಂದ ಆರಿಸಲಾದ 'ಸುಕುಮಾರಸ್ವಾಮಿ ಕಥೆ' ಎಂಬ ಗದ್ಯದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ಸುಕುಮಾರಸ್ವಾಮಿಯ ಭವಿಷ್ಯವನ್ನು ಯಶೋಭದ್ರೆಗೆ ಹೇಳುವ ಸಂದರ್ಭದಲ್ಲಿ ಜೋಯಿಸರು ಈ ಮಾತನ್ನು ಹೇಳುತ್ತಾರೆ. ಒಂದು ದಿನ ಅರಮನೆಗೆ ಬಂದ ಒಬ್ಬ ಜೋಯಿಸನು "ಈ ಸುಕುಮಾರಸ್ವಾಮಿ ಯಾವಾಗ ಋಷಿಗಳ ರೂಪವನ್ನು ಕಾಣುವನೋ ಅಂದೇ ತಪಸ್ಸಿಗೆ ತೆರಳುವನು" ಎಂದು ಭವಿಷ್ಯನುಡಿದುದನ್ನು ಕೇಳಿದ ಯಶೋಭದ್ರೆ ತನ್ನ ಮನೆಗೆ ಋಷಿಗಳು ಪ್ರವೇಶಿಸದಂತೆ ಕಾವಲಿಟ್ಟಳು.

**ಸ್ವಾರಸ್ಯ:** ಇಲ್ಲಿ ವಿಧಿಯನ್ನು ಯಾರಿಂದಲು ಬದಲಾಯಿಸಲು ಸಾಧ್ಯವಿಲ್ಲ ಎಂಬುದು ಸತ್ಯವಾದರೂ ಸುಕುಮಾರಸ್ವಾಮಿ ವೈರಾಗ್ಯ ಹೊಂದುವುದನ್ನು ತಡೆಯಲು ಯಶೋಭದ್ರೆ ಮಾಡುವ ಪ್ರಯತ್ನ ಸ್ವಾರಸ್ಯಪೂರ್ಣವಾಗಿ ಮೂಡಿಬಂದಿದೆ.

**೨. "ನಮ್ಮನಾಳ್ವರುಮೊಳರೆ ಎಂದು ವಿಸ್ಮಯಂಬಟ್ಟು"**

**ಆಯ್ಕೆ:** ಈ ವಾಕ್ಯವನ್ನು ಶಿವಕೋಟ್ಯಾಚಾರ್ಯರು ಬರೆದಿರುವ 'ವಡ್ಡಾರಾಧನೆ' ಎಂಬ ಕೃತಿಯಿಂದ ಆರಿಸಲಾದ 'ಸುಕುಮಾರಸ್ವಾಮಿ ಕಥೆ' ಎಂಬ ಗದ್ಯದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ರಾಜ ವೃಷಭಾಂಕನು ಸುಕುಮಾರಸ್ವಾಮಿಯ ಮನೆಗೆ ಬಂದು "ಸುಕುಮಾರನು ಎಲ್ಲಿದ್ದಾನೆ?" ಎಂದು ಕೇಳಿದಾಗ ಅದಕ್ಕೆ ಉತ್ತರವಾಗಿ "ಸ್ವಾಮಿ, ಅವನು ಬಹಳ ಸಾಧು, ನೀವು ಬಂದುದನ್ನು ಅವನು ತಿಳಿದಿಲ್ಲ. ಉಪ್ಪರಿಗೆಯ ಮೇಲೆ ಇದ್ದಾನೆ" ಎಂದು ಯಶೋಭದ್ರೆ ಸುಕುಮಾರನಲ್ಲಿಗೆ ಹೋಗಿ "ಮಗನೇ, ರಾಜರು ಬಂದಿದ್ದಾರೆ ಬಾ, ಹೋಗೋಣ* ಎಂದಳು. ಆಗ ಸುಕುಮಾರನು "ರಾಜರೆಂದರೆ ಯಾರು?" ಎಂದು ಕೇಳಲು, ತಾಯಿಯು "ನಮ್ಮನ್ನು ಆಳುವವರು" ಎಂದು ಹೇಳಿದ ಸಂದರ್ಭದಲ್ಲಿ ಸುಕುಮಾರನು ಈ ಮಾತನ್ನು ಹೇಳುತ್ತಾನೆ.

**ಸ್ವಾರಸ್ಯ:** ಹೊರಗಿನ ಪ್ರಪಂಚದ ಅರಿವೇ ಇಲ್ಲದ ಸುಕುಮಾರನು ತನ್ನ ಮನೆಯೇ ಅರಮನೆ, ನಾವೇ ಆಳುವವರೆಂದು ಭಾವಿಸಿದ್ದ ಸುಕುಮಾರಸ್ವಾಮಿಯು ನಮ್ಮನ್ನು ಆಳುವವರೂ ಇದ್ದಾರೆಯೇ! ಎಂದು ವಿಸ್ಮಯಪಡುವುದು ಇಲ್ಲಿ ಸ್ವಾರಸ್ಯಕರವಾಗಿದೆ.

**೩. "ಅರ್ಧಾಹಾರಮಂ ನುಂಗುಗುಮರ್ಧಾಹಾರಮನುಗುಳ್ದುಮದಂ ನೋಡಿ"**

**ಆಯ್ಕೆ:** ಈ ವಾಕ್ಯವನ್ನು ಶಿವಕೋಟ್ಯಾಚಾರ್ಯರು ಬರೆದಿರುವ 'ವಡ್ಡಾರಾಧನೆ' ಎಂಬ ಕೃತಿಯಿಂದ ಆರಿಸಲಾದ 'ಸುಕುಮಾರಸ್ವಾಮಿ ಕಥೆ' ಎಂಬ ಗದ್ಯದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ರಾಜನು ಸುಕುಮಾರನೊಂದಿಗೆ ಊಟದ ತಟ್ಟೆಯ ಮುಂದೆ ಕುಳಿತುಕೊಂಡು ಹಲವು ವಿಧದ ಸವಿಯಾದ ಆಹಾರವನ್ನು ಊಟಮಾಡುತ್ತಿದ್ದ ಸಂದರ್ಭದಲ್ಲಿ ಈ ಮಾತನ್ನು ಕವಿ ಹೇಳಿದ್ದಾರೆ. ಸುಕುಮಾರಸ್ವಾಮಿ ಆಹಾರದ ಅರ್ಧಾಂಶವನ್ನು ನುಂಗುತ್ತಿದ್ದನು, ಇನ್ನುಳಿದ ಅರ್ಧಾಂಶ ಆಹಾರವನ್ನು ಉಗುಳುತ್ತಿದ್ದನು. ಅದನ್ನು ಅರಸನು ನೋಡಿ "ಇದು ಒಂದು ಬಗೆಯ ರೋಗ, ಊಟದ ಮೇಲೆ ರುಚಿಯಿಲ್ಲದುದು" ಎಂದು ಭಾವಿಸಿಕೊಂಡನು.

**ಸ್ವಾರಸ್ಯ:** ಇಲ್ಲಿ ಸುಕುಮಾರಸ್ವಾಮಿಯ ವೈಭವದ ಉತ್ತುಂಗ ಸ್ಥಿತಿ ಮತ್ತು ಆತನ ಸುಕೋಮಲತೆ ಸ್ವಾರಸ್ಯಪೂರ್ಣವಾಗಿ ಮೂಡಿಬಂದಿದೆ.

**೪. "ಅವಂತಿ ಸುಕುಮಾರನೆಂದು ಪೆಸರನಿಟ್ಟಂ"**

**ಆಯ್ಕೆ:** ಈ ವಾಕ್ಯವನ್ನು ಶಿವಕೋಟ್ಯಾಚಾರ್ಯರು ಬರೆದಿರುವ 'ವಡ್ಡಾರಾಧನೆ' ಎಂಬ ಕೃತಿಯಿಂದ ಆರಿಸಲಾದ 'ಸುಕುಮಾರಸ್ವಾಮಿ ಕಥೆ' ಎಂಬ ಗದ್ಯದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ಸುಕುಮಾರನ ತಾಯಿಯ ಮೂಲಕ ಆತನ ವೈಭವ–ಗುಣ–ನಡತೆಗಳನ್ನೂ ಆತನು ಅನುಭವಿಸುತ್ತಿದ್ದ ಸುಖ–ಭೋಗಗಳನ್ನೂ ಕೇಳಿದ ಕೂಡಲೇ ಸ್ವತಃ ರಾಜನೇ "ಈತನ ಒಂದು ಕ್ಷಣದ ಸುಖ–ಭೋಗಗಳಿಗೆ ನನ್ನ ಇಡೀ ಅರಸುತನದ ಕಾಲದಲ್ಲಿ ಅನುಭವಿಸಿದ ಭೋಗ? ಉಪಭೋಗಗಳು ಸಮಾನವಾಗುವುದಿಲ್ಲ. ಆದುದರಿಂದ "ಲೋಕದಲ್ಲಿ ನಿಜವಾಗಿಯೂ ಈತನೇ ಸುಖಿ" ಎಂದು ಸಂತಸಗೊಂಡ ಸಂದರ್ಭದಲ್ಲಿ ಅರಸನು ಅವನಿಗೆ 'ಅವಂತಿ ಸುಕುಮಾರ' ಎಂದು ಹೆಸರನ್ನಿಟ್ಟನು. ಎಂಬಲ್ಲಿ ಈ ಮಾತು ಬಂದಿದೆ.

**ಸ್ವಾರಸ್ಯ:** ಸ್ವತಃ ರಾಜನೇ ಸುಕುಮಾರಸ್ವಾಮಿಯ ವೈಭವವನ್ನು ಮೆಚ್ಚಿ, ಈತನ ವೈಭವದ ಮುಂದೆ ತನ್ನ ವೈಭವ ಏನೇನೂ ಅಲ್ಲ ಎಂದು ಅವನಿಗೆ 'ಅವಂತಿ ಸುಕುಮಾರ' ಎಂದು ಹೆಸರಿಟ್ಟದ್ದು ಸ್ವಾರಸ್ಯಪೂರ್ಣವಾಗಿ ಮೂಡಿಬಂದಿದೆ.

## ಭಾಷಾ ಚಟುವಟಿಕೆ

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.**

**೧. ನಾಮಪದ ಎಂದರೇನು? ಉದಾಹರಿಸಿರಿ.**

ನಾಮ ಪ್ರಕೃತಿಗಳಿಗೆ ವಿಭಕ್ತಿ ಪ್ರತ್ಯಯಗಳು ಸೇರಿ ಆಗುವ ಪದವೇ ನಾಮಪದ. ಉದಾ : **'ಭೀಮ'** ಎನ್ನುವುದು ನಾಮ ಪ್ರಕೃತಿ, **ಅನ್ನು** ಎನ್ನುವುದು ವಿಭಕ್ತಿ ಪ್ರತ್ಯಯ **'ಭೀಮನನ್ನು'** ಎನ್ನುವುದು ನಾಮಪದ. [ಭೀಮ+ಅನ್ನು=ಭೀಮನನ್ನು]

**೨. ನಾಮವಾಚಕಗಳ ವಿಧಗಳನ್ನು ಪಟ್ಟಿಮಾಡಿರಿ.**

ನಾಮವಾಚಕಗಳನ್ನು ವಸ್ತುವಾಚಕ, ಗುಣವಾಚಕ, ಸಂಖ್ಯಾವಾಚಕ, ಸಂಖ್ಯೇಯವಾಚಕ, ಭಾವನಾಮ, ಪರಿಮಾಣವಾಚಕ, ದಿಗ್ವಾಚಕ, ಸರ್ವನಾಮ ಎಂಬ ಗುಂಪುಗಳಾಗಿ ವಿಂಗಡಿಸಬಹುದು.

**೩. ಕೃದಂತ ಎಂದರೇನು? ಉದಾಹರಣೆಗಳನ್ನು ಬರೆಯಿರಿ.**

ಧಾತುಗಳಿಗೆ ಕೃತ್‌ಪ್ರತ್ಯಯಗಳು ಸೇರಿ ಕೃದಂತಗಳೆನಿಸುತ್ತವೆ. ಇದಕ್ಕೆ ಕೃನ್ನಾಮಗಳೆಂಬ ಹೆಸರೂ ಇದೆ. ಕೃದಂತಗಳಲ್ಲಿ ಕೃದಂತನಾಮ, ಕೃದಂತಭಾವನಾಮ, ಕೃದಂತಾವ್ಯಯಗಳೆಂದು ಮೂರು ವಿಧಗಳಿವೆ.

**ಉದಾ:** **ಕೃದಂತನಾಮಕ್ಕೆ:** ಮಾಡಿದ, ಮಾಡುವ, ಮಾಡದ, **ಕೃದಂತಭಾವನಾಮಕ್ಕೆ:** ಮಾಟ, ತಿನ್ನುವಿಕೆ, ನಡೆತ, ಓಟ
**ಕೃದಂತಾವ್ಯಯ:** ಮಾಡಿ, ತಿಂದು, ನಡೆಯುತ್ತ, ಓಡಿ

**ಆ) ಕೊಟ್ಟಿರುವ ಪದಗಳನ್ನು ಕೃದಂತನಾಮ, ಕೃದಂತಭಾವನಾಮ, ಕೃದಂತಾವ್ಯಯಗಳಾಗಿ ವಿಂಗಡಿಸಿ ಬರೆಯಿರಿ.**

**ಕೃದಂತನಾಮಕ್ಕೆ:** ಓಡಿದ, ತಿಂದ, ನೋಡಿದ, **ಕೃದಂತಭಾವನಾಮಕ್ಕೆ:** ಮಾಟ, ಆಟ, **ಕೃದಂತಾವ್ಯಯ:** ನೋಡಿ

**ಇ) ಕೊಟ್ಟಿರುವ ನಾಲ್ಕು ಉತ್ತರಗಳಲ್ಲಿ ಸೂಕ್ತವಾದುದನ್ನು ಆರಿಸಿ ಬರೆಯಿರಿ.**

೧. ವರ್ತಮಾನ ಕೃದಂತನಾಮಕ್ಕೆ ಈ ಪದವು ಉದಾಹರಣೆಯಾಗಿದೆ. [ಅ)ಬರೆಯುವ **ಆ)ಬರೆದ** ಇ)ಬರೆಯದ ಈ) ಬರೆಹ]
೨. 'ನೋಟ' ಎಂಬುದು ಈ ವ್ಯಾಕರಣಾಂಶವಾಗಿದೆ. [ಅ)ಕೃದಂತನಾಮ **ಆ)ಕೃದಂತಭಾವನಾಮ** ಇ) ಕೃದಂತಾವ್ಯಯ ಈ)ತದ್ಧಿತಾಂತ]
೩. ಇವುಗಳಲ್ಲಿ ಕೃದಂತಾವ್ಯಯಕ್ಕೆ ಉದಾಹರಣೆಯಾದ ಪದ. [ಅ)ತೊಡುಗೆ ಆ)ತಿನ್ನುವಿಕೆ ಇ)ನಡೆಯುವ **ಈ)ಮಾಡಲಿಕ್ಕೆ**]
೪. 'ಲೋಕದೊಳ್' ಎಂಬುದು ಈ ವಿಭಕ್ತಿಯಲ್ಲಿದೆ. [ಅ) ಪ್ರಥಮಾ ಆ) ತೃತೀಯಾ ಇ) ಪಂಚಮೀ **ಈ) ಸಪ್ತಮೀ**]

**ಈ) ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ನಾಲ್ಕನೆಯ ಪದ ಬರೆಯಿರಿ.**

೧. ವ್ಯಾಪಾರಿ, ವಿಜ್ಞಾನಿ : **ಅನ್ವರ್ಥನಾಮ**
೨. ಯಾರು? ಏನು? : **ಪ್ರಶ್ನಾರ್ಥಕ ಸರ್ವನಾಮ**
೩. ಹನ್ನೆರಡು : **ಸಂಖ್ಯಾವಾಚಕ**
೪. ಮೊಬೈಲ್ : ಪಟ್ಟಣ : : ಕಸವರ : **ಚಿನ್ನ**

## ಪಠ್ಯಪೂರಕ ಅಧ್ಯಯನ–೧ ಸ್ವಾಮಿ ವಿವೇಕಾನಂದರ ಚಿಂತನೆಗಳು

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದು ವಾಕ್ಯದಲ್ಲಿ ಉತ್ತರಿಸಿ.**

**೧. ವಿವೇಕಾನಂದರೆಂದರೆ ಯಾವುದರ ರೂಪಕವಾಗಿದೆ?**

**ಉತ್ತರ:** ವಿವೇಕಾನಂದರೆಂದರೆ **ಸಾಮಾಜಿಕ ಸಂಕಟ, ಸಿಟ್ಟು, ಸ್ಫೋಟ, ಸ್ಪಷ್ಟತೆಗಳ** ರೂಪಕವಾಗಿದೆ.

**೨. ವಿವೇಕಾನಂದರು ಮೊದಲನೆ ಆದ್ಯತೆ ಯಾವುದಕ್ಕೆ ನೀಡಬೇಕೆಂದಿದ್ದಾರೆ?**

**ಉತ್ತರ:** ವಿವೇಕಾನಂದರು **ದೈಹಿಕ ಹಸಿವನ್ನು ಇಂಗಿಸುವುದಕ್ಕೆ** ಮೊದಲ ಆದ್ಯತೆ ನೀಡಬೇಕೆಂದಿದ್ದಾರೆ.

**೩. ವಿವೇಕಾನಂದರು ಯಾವ ವ್ಯವಸ್ಥೆಯನ್ನು ವಿರೋಧಿಸುತ್ತಾರೆ?**

**ಉತ್ತರ:** ವಿವೇಕಾನಂದರು **ಜಾತಿ ಮತ್ತು ವರ್ಗ ವ್ಯವಸ್ಥೆಯನ್ನು** ವಿರೋಧಿಸಿದರು.

**೪. ಜಾತಿ ವ್ಯವಸ್ಥೆಯ ಕೌರ್ಯಕ್ಕೆ ತುತ್ತಾಗಿರುವವರು ಯಾರು?**

**ಉತ್ತರ:** **ಶೂದ್ರರು, ಅಸ್ಪೃಶ್ಯರು** ಜಾತಿ ವ್ಯವಸ್ಥೆಯ ಕೌರ್ಯಕ್ಕೆ ತುತ್ತಾಗಿದ್ದಾರೆ.

**೫. ಸರ್ವಧರ್ಮ ಸಮ್ಮೇಳನವು ಎಲ್ಲಿ ನಡೆಯಿತು?**

**ಉತ್ತರ:** ಸರ್ವಧರ್ಮ ಸಮ್ಮೇಳನವು **ಚಿಕಾಗೊದಲ್ಲಿ** ನಡೆಯಿತು

**೬. ವಿವೇಕಾನಂದರನ್ನು 'ಮಾನವತಾಮಿತ್ರ' ರೆಂದು ಕರೆದವರಾರು?**

**ಉತ್ತರ:** **ಕುವೆಂಪು ಅವರು** ವಿವೇಕಾನಂದರನ್ನು **'ಮಾನವತಾಮಿತ್ರ'** ಎಂದು ಕರೆದರು.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಜಾತಿ ವ್ಯವಸ್ಥೆಯ ಬಗ್ಗೆ ವಿವೇಕಾನಂದರ ಅಭಿಪ್ರಾಯವೇನು?**

**ಉತ್ತರ:** ಜಾತಿ ವ್ಯವಸ್ಥೆಯ ಬಗ್ಗೆ ವಿವೇಕಾನಂದರು – "ಜಾತಿ ಎಂಬುದು ಸಮಾಜದ ಒಂದು ಆಂತರಿಕ ಭಾಗವಾಗಿದೆ. ಹಿಂದೆ ಅದು ವಿಕಾಸವಾಗುತ್ತಿತ್ತು. ಈಗ ಅದು ಘನೀಭೂತವಾಗಿದೆ. ಅದರ ದುರ್ಗಂಧದಿಂದ ಭಾರತದ ವಾತಾವರಣವೆಲ್ಲ ತುಂಬಿದೆ" ಎಂದು ಅಭಿಪ್ರಾಯಪಟ್ಟಿದ್ದಾರೆ.

**೨. ವಿವೇಕಾನಂದರು ಕೋಮುವಾದದ ಕಟ್ಟಾ ವಿರೋಧಿಯಾಗಿದ್ದರು, ಏಕೆ?**

**ಉತ್ತರ:** ಕೋಮುವಾದವು ಏಕಧರ್ಮ ಮತ್ತು ಏಕಸಂಸ್ಕೃತಿಯೇ ಶ್ರೇಷ್ಠವೆಂದೂ ಅದೇ ಅಂತಿಮವೆಂದೂ ನಂಬುತ್ತ ನಂಬಿಸುತ್ತ, ಪರಮಧರ್ಮ ದ್ವೇಷವನ್ನು ಬಿತ್ತಿ ಬೆಳೆಸುತ್ತದೆ. ಆದ್ದರಿಂದ ವಿವೇಕಾನಂದರು ಕೋಮುವಾದದ ಕಟ್ಟಾ ವಿರೋಧಿಯಾಗಿದ್ದರು.

**೩. ವಿವೇಕಾನಂದರು ಚಿಕಾಗೋ ಸರ್ವಧರ್ಮ ಸಮ್ಮೇಳನದಲ್ಲಿ ಹೇಳಿದ್ದೇನು?**

**ಉತ್ತರ:** ಚಿಕಾಗೊದ ಸರ್ವಧರ್ಮ ಸಮ್ಮೇಳನದಲ್ಲಿ ಮಾತನಾಡುತ್ತ ಅವರು "ಸ್ವಮತಾಭಿಮಾನ, ಅನ್ಯ ಮತದ್ವೇಷ ಮತ್ತು ಇವುಗಳಿಂದ ಉತ್ಪನ್ನವಾದ ಘೋರ ಧಾರ್ಮಿಕ ದುರಭಿಮಾನಗಳು ಈ ಸುಂದರ ಜಗತ್ತನ್ನು ಆವರಿಸಿಕೊಂಡಿವೆ. ಇಂತಹ ಉಗ್ರ ಧರ್ಮಾಂಧತೆಯ ದೈತ್ಯರಿಲ್ಲದೆ ಇದ್ದರೆ ಮಾನವ ಜನಾಂಗ ಇಂದಿಗಿಂತ ಎಷ್ಟೋ ಮುಂದುವರೆಯುತ್ತಿತ್ತು" ಎಂದು ಹೇಳಿದರು.

## ಪಠ್ಯಪೂರಕ ಅಧ್ಯಯನ-೨ ವಸಂತ ಮುಖ ತೋರಲಿಲ್ಲ

**೧. ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ?**

**ಉತ್ತರ:** ಪುಟ್ಟ ಪೋರಿ ಮುಸುರೆ ತಿಕ್ಕುತ್ತಿದ್ದಾಳೆ.

**೨. ಅಮ್ಮ ಎಲ್ಲಿ ಮಲಗಿದ್ದಾಳೆ?**

**ಉತ್ತರ:** ಅಮ್ಮ ಗುಡಿಸಲಿನಲ್ಲಿ ಮಲಗಿದ್ದಾಳೆ.

**೩. ಯಾರಿಗೆ ವಸಂತಮುಖ ತೋರಲಿಲ್ಲ?**

**ಉತ್ತರ:** ಕಮ್ಮಾರ, ನೇಕಾರ, ಕುಂಬಾರ, ಕೇರಿಯ ಮಾರ ಮತ್ತು ಪುಟ್ಟಿಗೆ ವಸಂತ ಮುಖ ತೋರಲಿಲ್ಲ.

**೪. ಪುಟ್ಟಿಯ ಪ್ರಶ್ನೆಗಳೇನು?**

**ಉತ್ತರ:** ಗುಡಿಸಲೊಳಗೆ ಬರಲು ವಸಂತ ಹೆದರಿದನೆ? ಹರಿದ ಚಿಂದಿ ಬಟ್ಟೆಗಳ ಕಂಡು ಅವನು ಮರುಗಿದನೆ? ಇವು ಪುಟ್ಟಿಯ ಪ್ರಶ್ನೆಗಳಾಗಿವೆ.

**೫. ಈ ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ?**

**ಉತ್ತರ:** ಮಾವಿನ ಮರಗಳು ಮೈತುಂಬಿ ನಿಂತಿವೆ. ಹಕ್ಕಿಗಳು ರೆಕ್ಕೆ ಬಿಚ್ಚಿ ಹಾರಾಡುತ್ತಿವೆ. ಕೋಗಿಲೆಗಳು ಮನದುಂಬಿ ಇಂಪಾಗಿ ಹಾಡುತ್ತಿವೆ. ಕಡಲು ಉಕ್ಕಿ ಹರಿಯುತ್ತಿದೆ. ಮಲ್ಲಿಗೆ ಹೂವು ಮುಗುಳುನಗೆ ಬೀರಿದೆ. ಹೊಳೆಯುವ ರಂಗೋಲಿಯಲ್ಲಿ ಬಾಲರವಿ ಥಳಥಳಿಸುತ್ತಿದ್ದಾನೆ. ಈ ರೀತಿ 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ವ್ಯಕ್ತವಾಗಿದೆ.

## ಪಠ್ಯಪೂರಕ ಅಧ್ಯಯನ-೩ ಭಗತ್‌ಸಿಂಗ್

**೧. ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಎಂದು ನಡೆಯಿತು?**

**ಉತ್ತರ:** ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಏಪ್ರಿಲ್ ೧೩, ೧೯೧೯ ರಂದು ನಡೆಯಿತು.

**೨. ಭಗತ್‌ಸಿಂಗ್ ತನ್ನ ಸಹೋದರಿಗೆ ಮಣ್ಣು ಯಾವುದರ ಪ್ರತೀಕ ಎಂದು ತೋರಿಸುತ್ತಾನೆ?**

**ಉತ್ತರ:** ಭಗತ್‌ಸಿಂಗ್ ತನ್ನ ಸಹೋದರಿಗೆ ಮಣ್ಣು **'ತ್ಯಾಗದ ಪ್ರತೀಕ'** ಎಂದು ತೋರಿಸುತ್ತಾನೆ.

**೩. ಜಲಿಯನ್ ವಾಲಾಬಾಗ್ ನಲ್ಲಿರುವ ಒಕ್ಕಣೆ ಏನು?**

**ಉತ್ತರ:** ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ ಹೀಗಿದೆ: "ಏಪ್ರಿಲ್- ೧೩- ೧೯೧೯ ರಂದು ಬ್ರಿಟೀಷರ ಗುಂಡುಗಳಿಗೆ ಆಹುತಿಯಾದ ಸುಮಾರು ೨೦೦೦ ಮುಗ್ಧ ಹಿಂದೂ, ಸಿಖ್ ಮತ್ತು ಮುಸಲ್ಮಾನರ ಸಮ್ಮಿಳಿತ ರಕ್ತದಿಂದ ಈ ಪ್ರದೇಶ ಪಾವನವಾಗಿದೆ."

**೪. ಭಗತ್‌ಸಿಂಗ್‌ನ ಸಹಚರರು ಯಾರು?**

**ಉತ್ತರ:** ಭಗತ್‌ಸಿಂಗ್‌ನ ಸಹಚರರು **ಸುಖ್‌ದೇವ್ , ರಾಜ್‌ಗುರು ಹಾಗು ಭಟುಕೇಶ್ವರ ದತ್ತ.**

**೫. ಭಗತ್‌ಸಿಂಗ್ ಹುತಾತ್ಮನಾದದ್ದು ಯಾವಾಗ?**

**ಉತ್ತರ:** ಭಗತ್‌ಸಿಂಗ್ ೨೩ ಮಾರ್ಚ್ ೧೯೩೧ ರಂದು ೨೩ನೆಯ ವಯಸ್ಸಿನಲ್ಲಿ ಹುತಾತ್ಮನಾದನು.

### <u>ಹೆಚ್ಚುವರಿ ಪ್ರಶ್ನೆಗಳು</u>

**೬. ಬಾಲಕ ಭಗತ್‌ಸಿಂಗ್ ಮನಸ್ಸಿನಲ್ಲಿ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಚ್ಚಿದ ಘಟನೆ ಯಾವುದು?**

**ಉತ್ತರ:** ಬಾಲಕ ಭಗತ್‌ಸಿಂಗ್ ಮನಸ್ಸಿನಲ್ಲಿ **ಜಲಿಯನ್ ವಾಲಾಬಾಗ್** ಘಟನೆ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಚ್ಚಿತು.

**೭. ಜಲಿಯನ್ ವಾಲಾಬಾಗ್‌ನಲ್ಲಿ ಸಾವಿರಾರು ಜನರ ಪ್ರಾಣ ಹಾನಿಗೆ ಕಾರಣನಾದ ಬ್ರಿಟಿಷ್ ಅಧಿಕಾರಿ ಯಾರು?**

**ಉತ್ತರ:** ಜಲಿಯನ್ ವಾಲಾಬಾಗ್‌ನಲ್ಲಿ ಸಾವಿರಾರು ಜನರ ಪ್ರಾಣಹಾನಿಗೆ ಕಾರಣನಾದ ಬ್ರಿಟಿಷ್ ಅಧಿಕಾರಿ ಜನರಲ್ ಡಯರ್

**೮. ಗುಂಡಿನ ಮಳೆಗರೆದು ಸಾವಿರಾರು ಜನರ ಪ್ರಾಣ ತೆಗೆದ ನಂತರ ಜನರಲ್ ಡಯರ್ ಏನೆಂದು ಹೇಳಿಕೊಂಡನು?**

**ಉತ್ತರ:** ಸಾವಿರಾರು ಜನರ ಪ್ರಾಣ ತೆಗೆದ ನಂತರ ಜನರಲ್ ಡಯರ್ "ಒಂದೇ ಒಂದು ಗುಂಡು ಸಹ ದಂಡವಾಗಲಿಲ್ಲ". ಎಂದು ಹೇಳಿಕೊಂಡನು.

**೯. ಬಾಲಕ ಭಗತ್‌ಸಿಂಗ್ ಊಟಮಾಡದೆ ಉಪವಾಸವಿದ್ದುದಕ್ಕೆ ಕಾರಣವೇನು?**

**ಉತ್ತರ:** ಏಪ್ರಿಲ್ ೧೩, ೧೯೧೯ ರಂದು ಜಲಿಯನ್ ವಾಲಾಬಾಗ್ ಹತ್ಯಾಕಾಂಡದಲ್ಲಿ ಪ್ರಾಣ ಕಳೆದುಕೊಂಡಿದ್ದವರಿಗೆ ನಮನ ಸಲ್ಲಿಸಲು ಬಾಲಕ ಭಗತ್‌ಸಿಂಗ್ ಹೋಗಿದ್ದನು. ಆಗ ಅಲ್ಲಿದ್ದ ಸ್ವಲ್ಪ ಮಣ್ಣನ್ನು ತೆಗೆದುಕೊಂಡು ಹಣೆಗಿಟ್ಟುಕೊಂಡ. ಇನ್ನಷ್ಟನ್ನು ತನ್ನಲ್ಲಿದ್ದ ಡಬ್ಬಿಯಲ್ಲಿ ಶೇಖರಿಸಿಕೊಂಡು ಹಿಂತಿರುಗಿದ. ಜಲಿಯನ್ ವಾಲಾಬಾಗ್ ಘಟನೆ ಆತನ ಮನಸ್ಸಿನ ಮೇಲೆ ತೀವ್ರವಾದ ಪರಿಣಾಮ ಬೀರಿತ್ತು. ಆದ್ದರಿಂದ ಅವನ ಸಹೋದರಿ ರಾತ್ರಿ ಎಂದಿನಂತೆ ಊಟಕ್ಕೆಬ್ಬಿಸಿದಾಗ ಅವನು ಒಲ್ಲೆನೆಂದು ಮುಖ ತಿರುಗಿಸಿದ.

**೧೦. ಭಗತ್‌ಸಿಂಗ್ ಮತ್ತು ಆತನ ಸಹಚರರಿಗೆ ಗಲ್ಲುಶಿಕ್ಷೆಯಾಗಲು ಕಾರಣವೇನು?**

**ಉತ್ತರ:** ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ಮರಣ ದಂಡನೆಗೆ ಈಡಾದನು.

## ಪಠ್ಯಪೂರಕ ಅಧ್ಯಯನ-೪ ಮೃಗ ಮತ್ತು ಸುಂದರಿ

**೧. ಬಡತನ ಸುಂದರಿ ಹಾಗೂ ಅವಳ ತಂದೆಗೆ ಕಷ್ಟವಾಗಲಿಲ್ಲ ಏಕೆ?**

**ಉತ್ತರ:** ಬಡತನ ಸುಂದರಿ ಹಾಗೂ ಅವಳ ತಂದೆಗೆ ಕಷ್ಟವಾಗಲಿಲ್ಲ. ಏಕೆಂದರೆ ಅವರ ಜೀವನ ಸರಳವಾಗಿತ್ತು.

**೨. ಮೃಗದ ಬಾಹ್ಯ ಆಕಾರ ಹೇಗಿತ್ತು?**

**ಉತ್ತರ:** ಮೃಗದ ಬಾಹ್ಯ ಆಕಾರ ಭೀಕರವಾಗಿತ್ತು. ಕೋರೆ ಹಲ್ಲು, ಹಂದಿಯ ದೇಹ, ತೋಳದ ಚಲನೆಯನ್ನು ಪಡೆದಿತ್ತು.

**೩. ಯಾರು ಶಾಪಗೊಂಡು ಮೃಗವಾಗಿದ್ದರು?**

**ಉತ್ತರ:** ರಾಜಕುಮಾರನು ಶಾಪಗೊಂಡು ಮೃಗವಾಗಿದ್ದನು.

**೪. ಕನ್ಯೆ ಕೊಟ್ಟ ಶಾಪವೇನು?**

**ಉತ್ತರ:** 'ನಿನ್ನನ್ನು ಕನ್ಯೆಯೊಬ್ಬಳು ಮನಸಾರೆ ಒಪ್ಪಿ ಪ್ರೀತಿಸುವವರೆಗೆ ಮೃಗವಾಗಿಯೇ ಇರು' ಎಂದು ಕನ್ಯೆ ಶಾಪ ಹಾಕಿದ್ದಳು.

**೫. ಶಾಪ ವಿಮೋಚನೆಯ ಫಲವೇನು?**

**ಉತ್ತರ:** ಶಾಪ ವಿಮೋಚನೆಯ ನಂತರ ಮೃಗದ ಆಕಾರವೇ ಬದಲಾಯಿತು. ಅದು ಸುಂದರ ರಾಜಕುಮಾರನಾಗಿ ಬದಲಾಯಿತು.

**೬. ಮೃಗದ ಬಗೆಗೆ ಸುಂದರಿಯ ಮನ ಕರಗುತ್ತಿತ್ತು ಏಕೆ?**

**ಉತ್ತರ:** ಮೃಗದ ಒರಟು ಮಾತು, ತಿಕ್ಕಲು ನಡವಳಿಕೆ ಮನಸ್ಸಿನಲ್ಲೇ ನಗು ತರುತ್ತಿದ್ದವು. ಹಾಗೂ ಆತನ ಕಾಳಜಿಯನ್ನು ನೆನೆದು ಮನ ಕರಗುತ್ತಿತ್ತು.

### <u>ಹೆಚ್ಚುವರಿ ಪ್ರಶ್ನೆಗಳು</u>

**೭. ವರ್ತಕನ ಮೂವರು ಹೆಣ್ಣು ಮಕ್ಕಳ ಸ್ವಭಾವ ಹೇಗಿತ್ತು?**

**ಉತ್ತರ:** ವರ್ತಕನ ಮೂವರು ಹೆಣ್ಣು ಮಕ್ಕಳಲ್ಲಿ ಹಿರಿಯರಾದ ಇಬ್ಬರು ಬಿಂಕ, ಬಡಿವಾರದ ಹುಡುಗಿಯರು. ಫ್ಯಾಷನ್, ಪಾರ್ಟಿ, ಗೆಳೆಯರೆಂದರೆ ಪಂಚಪ್ರಾಣ. ಆದರೆ ಮೂರನೆಯ ಹುಡುಗಿ ತಂದೆಯಷ್ಟೇ ಮೃದು ಸ್ವಭಾವದವಳಾಗಿದ್ದಳು. ಆಕೆಗೆ ತಂದೆಯ ನೆಮ್ಮದಿ ಮುಖ್ಯ. ರೂಪವತಿಯಾಗಿದ್ದ ಆಕೆಯನ್ನು ಎಲ್ಲರೂ ಸುಂದರಿ ಎಂದೇ ಕರೆಯುತ್ತಿದ್ದರು.

**೮. ವರ್ತಕನು ಬಡವನಾಗಲು ಕಾರಣವೇನು?**
**ವರ್ತಕನಿಗೆ ಹಣಕಾಸಿನ ತೊಂದರೆ ಉಂಟಾಗಲು ಕಾರಣವೇನು?**
**ವರ್ತಕನು ಹಳ್ಳಿಗೆ ವಲಸೆ ಹೋಗಲು ಕಾರಣವೇನು?**

**ಉತ್ತರ:** ವರ್ತಕನ ವ್ಯಾಪಾರ ಕುಸಿದು ಬಿತ್ತು. ಬರಬೇಕಾಗಿದ್ದ ಹಣ ಬರಲಿಲ್ಲ. ಸರಕುಗಳನ್ನು ತರಲು ದೂರದ ದೇಶಕ್ಕೆ ಪ್ರಯಾಣಿಸಿದ್ದ ಹಡಗುಗಳು ಹಿಂದಿರುಗಲಿಲ್ಲ. ಅವನ ಸಾಲಗಳು ಅವನನ್ನು ಬಾಧಿಸತೊಡಗಿದವು. ಇದ್ದಬದ್ದ ಸ್ಥಿರಾಸ್ತಿ, ಚರಾಸ್ತಿಯನ್ನೆಲ್ಲ ಮಾರಿ ಸಾಲತೀರಿಸಿದನು. ಆದ್ದರಿಂದ ಬಡವನಾದ ಅವನು ತನ್ನ ಹೆಣ್ಣು ಮಕ್ಕಳನ್ನು ಕರೆದುಕೊಂಡು ಹೋಗಿ ಹಳ್ಳಿಯಲ್ಲಿ ನೆಲೆಸಿದನು.

**೯. ವರ್ತಕನು ಹಡಗನ್ನು ಸ್ವಾಗತಿಸಲು ನಗರಕ್ಕೆ ಹೊರಟಾಗ ಮೂವರು ಹೆಣ್ಣು ಮಕ್ಕಳು ಏನೇನು ತರಲು ಹೇಳಿದರು?**

**ಉತ್ತರ:** ವರ್ತಕನು ಹಡಗನ್ನು ಸ್ವಾಗತಿಸಲು ನಗರಕ್ಕೆ ಹೊರಟಾಗ ಅವನ ಇಬ್ಬರು ಹಿರಿಯ ಹೆಣ್ಣು ಮಕ್ಕಳು ಬಟ್ಟೆ, ಒಡವೆ, ಅಲಂಕಾರದ ವಸ್ತುಗಳ ಪಟ್ಟಿ ನೀಡಿದರು. ಆದರೆ ಸುಂದರಿ ತನಗೊಂದು ಗುಲಾಬಿ ಹೂಗಳ ಗೊಂಚಲು ತರಬೇಕೆಂದು ಕೇಳಿಕೊಂಡಳು.

**೧೦. ವರ್ತಕನು ನಿರ್ಜನ ಪ್ರದೇಶದಲ್ಲಿ ನೋಡಿದ ಅರಮನೆಯಲ್ಲಿ ಏನು ಮಾಡಿದನು?**

**ಉತ್ತರ:** ವರ್ತಕನು ಅಂಜಿಕೆಯಿಂದ ಅರಮನೆ ಪ್ರವೇಶಿಸಿದನು. ಆ ಅರಮನೆಯ ಒಂದು ಕೋಣೆಯಲ್ಲಿ ಭಕ್ಷ್ಯ ಭೋಜ್ಯಗಳನ್ನು ಇಡಲಾಗಿತ್ತು. ಹಸಿವೆ ತಾಳಲಾರದೆ ಉಂಡ. ಭೋಜನ ಸವಿದು ಹೊರಬಂದ. ಪುಷ್ಪವನದ ಗುಲಾಬಿಗಳನ್ನು ನೋಡಿದ. ತನ್ನ ಮಗಳು ಸುಂದರಿಗಾಗಿ ಒಂದು ಗೊಂಚಲು ಕಿತ್ತುಕೊಂಡ.

**೧೧. ವರ್ತಕನು ಅರಮನೆಯಲ್ಲಿ ಊಟಮಾಡಿ, ಹೂಗಳನ್ನು ಕಿತ್ತಿದ್ದರಿಂದ ಮೃಗ ಅವನಿಗೆ ಏನೆಂದು ಎಚ್ಚರಿಕೆ ನೀಡಿತು?**

**ಉತ್ತರ:** ವರ್ತಕನು ಅರಮನೆಯಲ್ಲಿ ಊಟಮಾಡಿ, ಹೂಗಳನ್ನು ಕಿತ್ತಿದ್ದರಿಂದ ಮೃಗ ಸಿಟ್ಟಿನಿಂದ ಅಬ್ಬರಿಸಿ **"ಕೇಳು! ನಿನ್ನ** ಬದಲಾಗಿ ನಿನ್ನ ಮುದ್ದು ಮಗಳನ್ನು ತಂದು ಕೊಟ್ಟರೆ ನಿನ್ನನ್ನು ಕೊಲ್ಲುವುದಿಲ್ಲ. ನೀನು ತಪ್ಪಿಸಿಕೊಳ್ಳಲಾರೆ. ಈ ಬುಟ್ಟಿ ತೆಗೆದುಕೋ. ಇದರೊಂದಿಗೆ ಹೋಗು ನಾಳೆ ಸಂಜೆ ಒಳಗೆ ನಿನ್ನ ಮಗಳನ್ನು ಕರೆತರದಿದ್ದರೆ ನಿನ್ನನ್ನು ನಿನ್ನ ಮಗಳನ್ನು ಒಟ್ಟಿಗೇ ಮುಗಿಸುತ್ತೇನೆ!" ಅಂದಿತು.

**೧೨. ಮೃಗವು "ನನ್ನ ಹೃದಯ ಒಳ್ಳೆಯದಿರಬಹುದು, ಆದರೂ ನಾನು ಮೃಗ." ಎಂಬ ಮಾತಿಗೆ ಸುಂದರಿಯ ಪ್ರತಿಕ್ರಿಯೆ ಏನು?**

**ಉತ್ತರ:** ಮೃಗವು "ನನ್ನ ಹೃದಯ ಒಳ್ಳೆಯದಿರಬಹುದು, ಆದರೂ ನಾನು ಮೃಗ" ಎಂದು ಹೇಳಿದ ಮಾತಿಗೆ ಸುಂದರಿ "ಮೃಗ ಒಳ್ಳೆಯ ಹೃದಯ ಹೊಂದಿದ್ದರೂ ಮೃಗದ ಆಕಾರ ಹೊಂದಿರುವುದು ಸಹಜ. ಆದರೆ ಜಗತ್ತಿನ ಅನೇಕ ಮನುಷ್ಯರು ಸುಂದರ ಆಕಾರ ಪಡೆದು, ಮೃಗದ ಹೃದಯ ಹೊಂದಿರುತ್ತಾರೆ" ಎಂದು ಪ್ರತಿಕ್ರಿಯಿಸಿದಳು.

## ಪಠ್ಯಪೂರಕ ಅಧ್ಯಯನ–೫ ಜನಪದ ಒಗಟುಗಳು

**೧. 'ಅಂಗಿ' ಎಂಬ ಉತ್ತರ ಬರುವ ಬೆಡಗಿನ ಪ್ರಶ್ನೆಯನ್ನು ತಿಳಿಸಿ.**

**ಉತ್ತರ:** **"ಕೈಯುಂಟು ಕಾಲಿಲ್ಲ ಶಿರಹರಿದ ಮುಂಡ ಮೈಯೊಳಗೆ ನವಗಾಯ ಒಂಬತ್ತು ತುಂಡ ಒಯ್ಯನೊಯ್ಯನೇ ಬಂದು ಹೆಗಲೇರಿಕೊಂಡ ರಾಯ ರಾಯರಿಗೆಲ್ಲ ತಾನೇ ಪ್ರಚಂಡ"**

**೨. ಉಪ್ಪಿನ ವಿಶೇಷತೆ ಒಗಟಿನಲ್ಲಿ ಹೇಗೆ ವ್ಯಕ್ತವಾಗಿದೆ?**

**ಉತ್ತರ:** ಉಪ್ಪನ್ನು ನೀರಿನಲ್ಲೇ ಇರುವ ಅಂಶವಾಗಿದೆ. ಅದನ್ನು ನೀರಿನಿಂದಲೇ ತಯಾರಿಸಲಾಗುತ್ತದೆ. ಆದರೆ ಅದಕ್ಕೆ ನೀರು ತಾಕಿದರೆ ಕರಗಿ ಮಾಯವಾಗುತ್ತದೆ. ಎಂದು ನೀರಿನ ವಿಶಿಷ್ಟ ಗುಣವನ್ನು ಕುರಿತು ಒಗಟಿನಲ್ಲಿ ಹೇಳಲಾಗಿದೆ.

**೩. ಕೆಸರಿಗೂ ಕಮಲಕ್ಕೂ ಇರುವ ಸಂಬಂಧವನ್ನು ಒಗಟು ಹೇಗೆ ವಿವರಿಸುತ್ತದೆ?**

**ಉತ್ತರ:** ಕಮಲದ ಹೂವು ಬೆಳೆಯಲು ಕೆಸರು ಬೇಕು. ಆದ್ದರಿಂದ ಅದು ಕೆಸರಿನಲ್ಲೆ ಹುಟ್ಟಿ ಮತ್ತು ಕೆಸರಿನಲ್ಲೆ ಬೆಳೆಯುವ ಒಂದು ವಿಧವಾದ ಗಿಡವಾಗಿದೆ. ಎಂದು ವರ್ಣಿಸಿರುವುದು ಸೂಕ್ತವಾಗಿದೆ.

**೪. ಹೊಲದಲ್ಲಿ ಹುಟ್ಟಿದ ಉತ್ತರಾಣಿ ಹಾಗೂ ಗರಿಕೆ ಕೊಡುವ ತೊಂದರೆಯನ್ನು ಒಗಟುಗಳು ಹೇಗೆ ವಿವರಿಸುತ್ತವೆ?**

**ಉತ್ತರ:** ಹೊಲದ ಬದುವಿನಲ್ಲಿ ಹುಟ್ಟುವ ಉತ್ತರಾಣಿ ಗಿಡದಲ್ಲಿ ಬೆಳೆಯುವ ಬೀಜಗಳು ಮುಳ್ಳಿನಂತಿದ್ದು ಆ ಗಿಡವಿರುವ ಬದುವಿನಲ್ಲಿ ನಡೆದುಕೊಂಡು ಹೋಗುವವರ ಅದರಲ್ಲೂ ಗ್ರಾಮೀಣ ಮಹಿಳೆಯರ ಸೀರೆಯ ಸೆರಗನ್ನು ಹಿಡಿದುಕೊಳ್ಳುತ್ತವೆ.

ರೈತನಿಗೆ ಬಹಳ ತೊಂದರೆ ಕೊಡುವ ಗರಿಕೆಯನ್ನು ಎಷ್ಟೇ ಉತ್ತರೂ ಹೊಲದಲ್ಲಿ ನಾಶಪಡಿಸಲು ಸಾಧ್ಯವಿಲ್ಲ; ಅದು ಮತ್ತೆ ಚಿಗುರಿಕೊಳ್ಳುತ್ತದೆ. ರೈತನ ಪ್ರಯತ್ನವನ್ನು ಕಂಡು 'ನಿನ್ನದು ವ್ಯರ್ಥ ಪ್ರಯತ್ನ. ನನ್ನನ್ನು ನಾಶಪಡಿಸಲು ನಿನ್ನಿಂದ ಸಾಧ್ಯವಿಲ್ಲ' ವೆಂಬಂತೆ ನಗುತ್ತದೆ ಎಂದು ಒಗಟಿನಲ್ಲಿ ಸ್ವಾರಸ್ಯಕರವಾಗಿ ಹೇಳಲಾಗಿದೆ.

**೫. ಒಗಟುಗಳಿಂದ ಶೈಕ್ಷಣಿಕವಾಗಿ ಏನು ಲಾಭ?**

**ಉತ್ತರ:** ಜನಪದ ಒಗಟುಗಳು ಗ್ರಾಮೀಣ ಜನರ ಕಲ್ಪನಾ ಚಾತುರ್ಯಕ್ಕೆ ನಿದರ್ಶನವಾಗಿದ್ದು ಅವುಗಳ ಮೂಲಕ ವಿದ್ಯಾರ್ಥಿಗಳಲ್ಲಿ ಕಲ್ಪನಾಶೀಲತೆ, ಆಲೋಚನಾ ಶಕ್ತಿ ಹಾಗೂ ಸೃಜನಶೀಲತೆ ವೃದ್ಧಿಸುತ್ತದೆ. ಜನಪದ ಬೆಡಗಿನ ಒಗಟುಗಳಲ್ಲಿ ಪ್ರಶ್ನೆಗೆ ಉತ್ತರಿಸುವ ಮತ್ತು ಪದ್ಯದಲ್ಲಿಯೇ ಎದುರಾಳಿಗೆ ಮತ್ತೊಂದು ಒಗಟನ್ನು ಒಡ್ಡುವ ಕ್ರಮ ವೈಶಿಷ್ಟ್ಯಪೂರ್ಣವಾಗಿದ್ದು ಸ್ಪರ್ಧಾತ್ಮಕ ಮನೋಭಾವ ಬೆಳೆಸಲು ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಒಗಟುಗಳನ್ನು ಬಿಡಿಸುವುದರಿಂದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬುದ್ಧಿ ಕೌಶಲ ಬೆಳೆಯುತ್ತದೆ.

**೬. ಬೀಸುವ ಕಲ್ಲನ್ನು ಕುರಿತ ಒಗಟನ್ನು ವಿವರಿಸಿರಿ.**

**ಉತ್ತರ:** ಬೀಸುವ ಕಲ್ಲಿನ ಮೇಲೆ ಮಧ್ಯಭಾಗದಲ್ಲಿರುವ ಬಾಯಿಗೆ ಧಾನ್ಯವನ್ನು ಹಾಕಲಾಗುತ್ತದೆ. ಬೀಸುತ್ತಿದ್ದಂತೆ ಅದು ಕಲ್ಲಿನ ಒಳಗೆ ಹೋಗುತ್ತದೆ. ಅದನ್ನೆ ಒಗಟಿನಲ್ಲಿ 'ಬಾಯಲ್ಲಿ ತಿಂಬೋದು' ಎನ್ನಲಾಗಿದೆ. ಹಾಗೆಯೇ ಅದರಲ್ಲಿ ಬೀಸುವಾಗ ಅದರ ಸುತ್ತ ಹಿಟ್ಟು ಚೆಲ್ಲುತ್ತದೆ, ಇದನ್ನೆ ಕುಕ್ಕುವುದು(ಕಕ್ಕುವುದು) ಎಂದು ಹೇಳಲಾಗಿದೆ.

**********

೧. ಗೂಡಿನಲ್ಲಿನ ಪಕ್ಷಿ ನಾಡೆಲ್ಲ ನೋಡುತ್ತದೆ – **ಕಣ್ಣು**

೨. ಕಾಸಿನ ಕುದುರೆಗೆ ಬಾಲದ ಲಗಾಮು – **ಸೂಜಿ ದಾರ**

೩. ಎಲೆ ಇಲ್ಲ, ಸುಣ್ಣ ಇಲ್ಲ, ಬಣ್ಣವಿಲ್ಲ ತುಟಿ ಕೆಂಪಗಾಗಿದೆ, ಮಳೆಯಿಲ್ಲ , ಬೆಲೆಯಿಲ್ಲ , ಮೈ ಹಸಿರಾಗಿದೆ – **ಗಿಳಿ**

೪. ಮನೆ, ಮನೆಗೆರಡು ಬಾಗಿಲು, ಬಾಗಿಲ ಮುಂದೆ , ಮುಚ್ಚಿದರೆ ಹಾನಿ ಇದೇನು? – **ಮೂಗು, ಬಾಯಿ**

೫. ಸುತ್ತ ಮುತ್ತ ಸುಣ್ಣದ ಗೋಡೆ, ಎತ್ತ ನೋಡಿದರೂ ಬಾಗಿಲಿಲ್ಲ ಇದು ಏನು? – **ಮೊಟ್ಟೆ**

೬. ಅಂಗಳದಲ್ಲಿ ಹುಟ್ಟುವುದು, ಅಂಗಳದಲ್ಲಿ ಬೆಳೆಯುವುದು, ತನ್ನ ಮಕ್ಕಳ ಹಂಗಿಸಿ ಮಾತಾಡುವುದು ಇದು ಏನು? – **ಕೋಳಿ**

೭. ಇದ್ದಲು ನುಂಗುತ್ತ, ಗದ್ದಲ ಮಾಡುತ್ತಾ, ಉದ್ದಕ್ಕೂ ಓಡುತ್ತಾ ಮುಂದಕ್ಕೆ ಸಾಗುವ ನಾನ್ಯಾರು? – **ರೈಲು**

೮. ಊಟಕ್ಕೆ ಕುಳಿತವರು ಹನ್ನೆರಡು ಜನರು, ಬಡಿಸುವವರು ಇಬ್ಬರು, ಒಬ್ಬನು ಒಬ್ಬರಿಗೆ ಬಡಿಸುವಷ್ಟರಲ್ಲಿ ಇನ್ನೊಬ್ಬನು ಹನ್ನೆರಡು ಜನಕ್ಕೂ ಬಡಿಸಿರುತ್ತಾನೆ. – **ಗಡಿಯಾರ**

೯. ಹಸಿರು ಹಾವರಾಣಿ, ತುಂಬಿದ ತತ್ರಾಣಿ, ಹೇಳದಿದ್ದರೆ ನಿಮ್ಮ ದೇವರಾಣಿ – **ಕಲ್ಲಂಗಡಿ ಹಣ್ಣು**

೧೦. ಮೊಟ್ಟೆ ಒಡೆಯೋ ಹಾಗಿಲ್ಲ ಕೊಡ ಮುಳುಗಿಸೋ ಹಾಗಿಲ್ಲ ಬರಿ ಕೊಡೆ ತಗೊಂಡು ಬಾರೋ ಹಾಗಿಲ್ಲ. – **ತೆಂಗು**

೧೧. ಕಡಿದರೆ ಕಚ್ಚೋಕೆ ಆಗೋಲ್ಲ, ಹಿಡದ್ರೆ ಮುಟ್ಟೋಕೆ ಸಿಗೋಲ್ಲ – **ನೀರು**

೧೨. ಒಂದು ರುಮಾಲು. ನಮ್ಮಪ್ಪನೂ ಸುತ್ತಲಾರ, ನಿಮ್ಮಪ್ಪನೂ ಸುತ್ತಲಾರ. – **ದಾರಿ**

೧೩. ಅಬ್ಬಬ್ಬ ಹಬ್ಬ ಬಂತು, ಸಿಹಿಕಹಿ ಎರಡೂ ತಂತು. – **ಯುಗಾದಿ**

೧೪. ಹುಟ್ಟುತ್ತಲೇ ಹುಡುಗ ತಲೆಯಲ್ಲಿ ಟೋಪಿ ಹಾಕಿರುತ್ತೆ. – **ಬದನೆಕಾಯಿ.**

೧೫. ಸಾಗರ ಪುತ್ರ, ಸಾರಿನ ಮಿತ್ರ. – **ಉಪ್ಪು**